

ಸುದ್ದಿಗಳ ಹೊನಲು

# ಸಂಜೆ ಮುಗಿಲು

ನೇಱು ಸಾರಥ್ಯದಲ್ಲಿ...

ಸಂಪುಟ: 21, ಸಂಚಿಕೆ: 232, ಪುಟಗಳು: 8, ಶುಕ್ರವಾರ, 31 ಮೇ 2024 RNI NO. KARKAN/2002/08054

epaper: www.sanjemugilu.com

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

**ಸುಭಾಷಿತ**

ನೀವು ಒಬ್ಬರೇ ಇದ್ದಾಗ ಆಲೋಚನೆಗಳ ಮೇಲೆ ನಿಗಾ ಇರಲಿ.ಗುಂಪಿನಲ್ಲಿದ್ದಾಗ ಮಾತುಗಳ ಮೇಲೆ ನಿಗಾ ಇರಲಿ.

। ಅನಾಮಿಕ

**ಪಂಚಾಂಗ**

(ಶುಕ್ರವಾರ 31, ಮೇ-2024)

- ಶ್ರೀ ಕ್ರೋಧಿ ನಾಮ ಸಂವತ್ಸರ,
- ಉತ್ತರಾಯಣ, ವಸಂತ ಋತು,
- ವೈಶಾಖ ಮಾಸ, ಕೃಷ್ಣ ಪಕ್ಷ,
- ಅಷ್ಟಮಿ / ನವಮಿ, ಶುಕ್ರವಾರ,
- ಶತಭಿಷ ನಕ್ಷತ್ರ / ಉಪರಿ ಪೂರ್ವ ಭಾದ್ರಪದ ನಕ್ಷತ್ರ.
- ರಾಹುಕಾಲ 10:44 ರಿಂದ 12:20
- ಗುಳಿಕಕಾಲ 07:32 ರಿಂದ 09:08
- ಯಮಗಂಡ ಕಾಲ 03:32 ರಿಂದ 05:08

## ಸಂಕ್ಷಿಪ್ತ ಸುದ್ದಿ

### ಬಾಲಕಿ ಮೇಲೆ ಅತ್ಯಾಚಾರ
### ಗುತ್ತಿಗೆದಾರನ ವಿರುದ್ಧ ದೂರು ದಾಖಲು

ಬೆಂಗಳೂರು: 16 ವರ್ಷದ ನನ್ನ ಮಗಳ ಮೇಲೆ ಕಸ ವಿಂಗಡಣೆ ಗುತ್ತಿಗೆದಾರ ಅತ್ಯಾಚಾರ ನಡೆಸಿದ್ದಾನೆಂದು ಪಶ್ಚಿಮ ಬಂಗಾಳದ ವಲಸಿಗರೊಬ್ಬರು ಬೇಗೂರು ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ. ಪಶ್ಚಿಮ ಬಂಗಾಳದ ನೊಯ್ಡಾ ಜಿಲ್ಲೆಯ ನಿವಾಸಿಯಾದ ಬಾಲಕಿಯ ತಂದೆ ಶಹೀನ್ ಹಾಗೂ ಆತನ ಪತ್ನಿ ಮೀಮ್ ಅವರ ವಿರುದ್ಧ ದೂರು ದಾಖಲಿಸಿದ್ದಾರೆ.

ಪುಟ 2

### ದೂರು ಕೊಡುವ ಸಂತ್ರಸ್ತೆಯರಿಗೆ ರಕ್ಷಣೆ

**ಬೆಂಗಳೂರು:** ಪ್ರಜ್ವಲ್ ರೇವಣ್ಣ ವಿರುದ್ಧ ದಾಖಲಾಗಿರುವ ಲೈಂಗಿಕ ದೌರ್ಜನ್ಯ ಪ್ರಕರಣದ ವಿಚಾರವಾಗಿ ಸಂತ್ರಸ್ತೆಯರು ಪೊಲೀಸರು ಹಾಗೂ ಎಸ್ ಐಟಿ ಮುಂದೆ ಬಂದು ಧೈರ್ಯವಾಗಿ ಹೇಳಿಕೊಳ್ಳಬೇಕು. ಈ ಹಿಂದೆಯೇ ಅವರಿಗೆ ರಕ್ಷಣೆ ಕೊಡುವುದಾಗಿ ಹೇಳಿದ್ದೇವೆ ಎಂದು ಗೃಹಸಚಿವ ಜಿ.ಪರಮೇಶ್ವರ್ ಹೇಳಿದ್ದಾರೆ. ಬೆಂಗಳೂರಿನ ಸದಾಶಿವನಗರದ ನಿವಾಸದ ಬಳಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರಜ್ವಲ್ ರೇವಣ್ಣ ಅವರು ನಿನ್ನೆ ರಾತ್ರಿ ಸುಮಾರು 12:50ರ ಸುಮಾರಿಗೆ ಜರ್ಮನಿಯಿಂದ ಬೆಂಗಳೂರಿಗೆ ಬಂದಿದ್ದಾರೆ. ಅವರ ವಿರುದ್ಧ ಬಂಧನದ ವಾರಂಟ್ ಇತ್ತು. ಈಗ ಅವರ ಬಂಧನವಾಗಿದೆ ಎಂಬ ವಿಚಾರ ಗೊತ್ತಾಗಿದೆ. ಅಧಿಕಾರಿಗಳು ಅವರ ವಿರುದ್ಧ ಮುಂದಿನ ಕಾನೂನು ಕ್ರಮಗಳನ್ನು ಕೈಗೊಳ್ಳಲಿದ್ದಾರೆ. ಅಧಿಕಾರಿಗಳಿಗೆ ಅವರು ಸಹಕಾರ ಕೊಟ್ಟಿದ್ದಾರೋ ಇಲ್ಲವೋ ಗೊತ್ತಿಲ್ಲ. ಸಹಜವಾಗಿಯೇ ಅವರು ತನಿಖೆಗೆ ಸಹಕಾರ ಕೊಡಬೇಕು ಎಂದಿದ್ದಾರೆ. ಬಂಧನ ವಿಳಂಬವಾಯ್ತು ಎಂಬ ಪತ್ರಕರ್ತರ ಪ್ರಶ್ನೆಗೆ, ನಮ್ಮ ದೇಶದಲ್ಲೇ ಅಥವಾ ರಾಜ್ಯದಲ್ಲಿಯೇ ಇದ್ದಿದ್ದರೆ ಇಷ್ಟರಲ್ಲೇ ಬಂಧನ ಮಾಡಬಹುದಿತ್ತು. ಹೊರ ದೇಶದಲ್ಲಿ ಇದ್ದರು, ಅಲ್ಲಿಗೆ ನಮ್ಮ ಇನ್ಸ್‌ಪೆಕ್ಟರ್‌ಗಳನ್ನು ಕಳುಹಿಸಿ ಬಂಧಿಸಲು ಸಾಧ್ಯವಿರಲಿಲ್ಲ. ರಿಸಲ್ಟ್ ಬೇರೆ ರೀತಿ ಆದರೆ, ಅವರ ರಾಜತಾಂತ್ರಿಕ ಪಾಸ್‌ಪೋರ್ಟ್ ರದ್ದಾಗುತ್ತೆ. ಅದೆಲ್ಲಾ ತಿಳಿದುಕೊಂಡು ಅವರೇ ಮರಳಿ ಬಂದಿರಬಹುದು ಎಂದು ಅವರು ಹೇಳಿದ್ದಾರೆ.




# ಪ್ರಜ್ವಲ್‌ಗೆ ಎಸ್‌ಐಟಿ ಡ್ರಿಲ್
## ಮಧ್ಯರಾತ್ರಿ ಬಂಧನ, ಮುಂದೇನು? ವಾಯ್ಸ್‌ಸ್ಯಾಂಪಲ್ ಸಾಧ್ಯತೆ?

**ಬೆಂಗಳೂರು:** ಅಶ್ಲೀಲ ವಿಡಿಯೋ ಬಹಿರಂಗ ಬೆನ್ನಲ್ಲೇ ವಿದೇಶಕ್ಕೆ ಪರಾರಿಯಾಗಿದ್ದ ಹಾಸನ ಜೆಡಿಎಸ್ ಸಂಸದ ಪ್ರಜ್ವಲ್ ರೇವಣ್ಣ ಗುರುವಾರ ಮಧ್ಯರಾತ್ರಿ ಜರ್ಮನಿಯ ಮ್ಯೂನಿಕ್‌ನಿಂದ ಬೆಂಗಳೂರಿಗೆ ಆಗಮಿಸಿದ್ದು ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಎಸ್‌ಐಟಿ ಅಧಿಕಾರಿಗಳು ಅವರನ್ನು ಬಂಧಿಸಿದ್ದಾರೆ.

ಪ್ರಜ್ವಲ್ ರೇವಣ್ಣ 35 ದಿನಗಳ ಬಳಿಕ ದೇಶಕ್ಕೆ ಮರಳಿದ್ದಾರೆ. ಏರ್‌ಪೋರ್ಟ್‌ಗೆ ಬಂದಿಳಿಯುತ್ತಿದ್ದಂತೆ ಸಿಐಎಸ್‌ಎಫ್ ಅಧಿಕಾರಿಗಳು ಪ್ರಜ್ವಲ್ ರೇವಣ್ಣರನ್ನು ವಶಕ್ಕೆ ಪಡೆದರು.ಬಳಿಕ ಎಸ್‌ಐಟಿ ಅಧಿಕಾರಿಗಳಿಗೆ ಪ್ರಜ್ವಲ್ ರೇವಣ್ಣರನ್ನ ಹಸ್ತಾಂತರಿಸಿದರು. ಮಾಧ್ಯಮಗಳ ಕಣ್ತುತಪ್ಪಿಸಿ ಮಾರ್ಗ ಬದಲಾಯಿಸಿ ನಗರದ ಸಿಐಡಿ ಕಚೇರಿಗೆ ಅಧಿಕಾರಿಗಳು ಕರೆತಂದಿದ್ದಾರೆ.

**ಮುಂದೇನು?:** ಅಂತೂ ಪ್ರಜ್ವಲ್ ರೇವಣ್ಣ ಕೊನೆಗೂ ಪೊಲೀಸರಿಗೆ ಶರಣಾಗಿದ್ದಾನೆ. ಇದೀಗ ಮುಂದಿನ ತನಿಖೆ ಏನು ಎಂಬುದು ಪ್ರಶ್ನೆಯಾಗಿದೆ.ಎಸ್‌ಐಟಿ ಪೊಲೀಸರು ಏನೇನು ಮಾಹಿತಿ ಪಡೆಯಲಿದ್ದಾರೆ. ಮೊದಲನೆಯದಾಗಿ ಮದರ್ ಡಿವೈಸ್ ಎಲ್ಲಿದೆ?ಯಾರ ಬಳಿ ಇದೆ ಎಂಬ ಬಗ್ಗೆ ಮಾಹಿತಿ ಕೆದಕಲಿರುವ ಅಧಿಕಾರಿಗಳು, ಪ್ರಜ್ವಲ್ ರೇವಣ್ಣರ ಬಳಿ ಇದೆಯಾ?ಒಂದು ವೇಳೆ ವಿಡಿಯೋಗಳು ಸಿಕ್ಕಲ್ಲಿ ಎಫ್‌ಎಸ್‌ಎಲ್‌ಗೆ ಕಳುಹಿಸಿಕೊಡಲಾಗುತ್ತೆ.ಒಂದು ವೇಳೆ ಮದರ್ ಡಿವೈಸ್ ಸಿಗದೆ ಹೋದರೆ ಎಸ್ ಐಟಿ ಅಧಿಕಾರಿಗಳು ಪ್ರಜ್ವಲ್ ರೇವಣ್ಣರ ವಾಯ್ಸ್ ಸ್ಯಾಂಪಲ್ ಪಡೆಯುವ ಸಾಧ್ಯತೆಯಿದೆ.

ಪುಟ 2




### ವಿದೇಶದಲ್ಲಿಯೇ ಮೊಬೈಲ್ ನಾಶ ಮಾಡಿದರಾ ಪ್ರಜ್ವಲ್?

**ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಆರೆಸ್ಟ್ ಆಗಿರುವ ಹಾಸನ ಸಂಸದ ಪ್ರಜ್ವಲ್ ರೇವಣ್ಣ ಅವರಿಂದ ಪ್ರಕರಣದ ವಿಚಾರಣೆಗೆ ಅಗತ್ಯವಾಗಿರುವ ಸಾಕ್ಷ್ಯಗಳನ್ನು ವಶಪಡಿಸಿಕೊಳ್ಳಲು ಎಸ್‌ಐಟಿ ಮುಂದಾಗಿದೆ. ಅಶ್ಲೀಲ ವಿಡಿಯೋಗಳನ್ನು ಚಿತ್ರೀಕರಿಸಿಕೊಂಡಿರುವ ಮೊಬೈಲ್ ಈ ಪ್ರಕರಣದಲ್ಲಿ ಪ್ರಮುಖ ಸಾಕ್ಷಿ. ಅದು ಇನ್ನೂ ಎಸ್‌ಐಟಿಗೆ ದೊರೆತಿಲ್ಲ ಎನ್ನಲಾಗುತ್ತಿದೆ. ಏಪ್ರಿಲ್ 26ರಂದು ತರಾತುರಿಯಲ್ಲಿ ವಿದೇಶಕ್ಕೆ ಹಾರಿದ್ದ ಪ್ರಜ್ವಲ್, ಮೊಬೈಲ್ ಅನ್ನೂ ಜೊತೆಗೆ ಕೊಂಡೊಯ್ದಿದ್ದರು.**

ಪುಟ 2

### ಇಂದು ನಡೆಯಲಿದೆ ಪುರುಷತ್ವ ಪರೀಕ್ಷೆ

ಪ್ರಕರಣದ ತನಿಖೆ ಹಾಗೂ ವಿಚಾರಣೆಗೆ ಎಲ್ಲಾ ರೀತಿಯ ಸಿದ್ಧತೆಯನ್ನು ಎಸ್ ಐಟಿ ನಡೆಸಿದೆ.ಒಂದು ವೇಳೆ, ವಿಡಿಯೋದಲ್ಲಿ ಇರುವಂಥ ಕಾಮಕಾಂಡ ತಾನೇನೂ ಮಾಡಿಲ್ಲ ಎಂದು ಪ್ರಜ್ವಲ್ ಅಫಿಡವಿಟ್ ಸಲ್ಲಿಸಿದರೆ, ಪ್ರಜ್ವಲ್ ರೇವಣ್ಣಗೆ ಪುರುಷತ್ವ ಪರೀಕ್ಷೆ ನಡೆಸುವ ಸಾಧ್ಯತೆ ಇದೆ. ತಾನು ಅತ್ಯಾಚಾರ ಮಾಡಿಲ್ಲ ಎಂದು ಕೋರ್ಟ್‌ಗೆ ಅಫಿಡವಿಟ್ ಸಲ್ಲಿಸುವ ಸಾಧ್ಯತೆಯೂ ಇರುವುದರಿಂದ, ಮುಂದಿನ ಹಂತದಲ್ಲಿ ಪ್ರಜ್ವಲ್ ರೇವಣ್ಣರ ಪುರುಷತ್ವ ಪರೀಕ್ಷೆಯನ್ನು ಎಸ್‌ಐಟಿ ಮಾಡಿಸಲಿದೆ.



ಪುಟ 2

### ಪಾಸ್‌ಪೋರ್ಟ್ ರದ್ದತಿ 2ರ ಬಳಿಕ ಕ್ರಮ?

ಲೈಂಗಿಕ ದೌರ್ಜನ್ಯ ಪ್ರಕರಣದ ಆರೋಪಿಯಾಗಿರುವ ಹಾಸನ ಸಂಸದ ಪ್ರಜ್ವಲ್ ರೇವಣ್ಣ ಅವರ ಪಾಸ್‌ಪೋರ್ಟ್‌ಗೆ ಸಂಬಂಧಿಸಿದಂತೆ ಮುಂದಿನ ಕ್ರಮವನ್ನು ಜೂ.2ರ ಬಳಿಕ ಕೈಗೊಳ್ಳುವುದಾಗಿ ವಿದೇಶಾಂಗ ಸಚಿವಾಲಯ ಹೇಳಿದೆ. ಈ ಕುರಿತು ಪ್ರತಿಕ್ರಿಯೆ ನೀಡಿರುವ ವಿದೇಶಾಂಗ ಇಲಾಖೆ ವಕ್ತಾರ ರಣಧೀರ್ ಜೈಸ್ವಾಲ್, ಪಾಸ್ ಪೋರ್ಟ್ ರದ್ದತಿ ಕೋರಿ ಕರ್ನಾಟಕ ಸರ್ಕಾರ ಸಲ್ಲಿಸಿದ್ದ ಮನವಿ ಆಧರಿಸಿ, ನಿಮ್ಮ ರಾಜತಾಂತ್ರಿಕ ಪಾಸ್ಪೋರ್ಟ್ ಏಕೆ ರದ್ದು ಮಾಡಬಾರದು?ಎಂದು ಪ್ರಶ್ನಿಸಿ ಮೇ 23 ರಂದು ಶೋಕಾಸ್ ನೋಟಿಸ್ ನೀಡಲಾಗಿದೆ.ಅದಕ್ಕೆ ಸ್ಪಷ್ಟಿಕರಣ ನೀಡಲು ಪ್ರಜ್ವಲ್ ರೇವಣ್ಣಗೆ 10 ದಿನಗಳ ಕಾಲಾವಕಾಶ ನೀಡಲಾಗಿದೆ ಎಂದು ಜೈಸ್ವಾಲ್ ಹೇಳಿದ್ದಾರೆ. 10 ದಿನಗಳ ಒಳಗೆ ಪ್ರಜ್ವಲ್ ಸಮಂಜಸವಾಗಿ ಉತ್ತರಿಸದಿದ್ದಲ್ಲಿ ಮುಂದಿನ ಪ್ರಕ್ರಿಯೆಯನ್ನು ಜೂ.2ರ ಬಳಿಕ ಮುಂದುವರೆಸಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ.



### ಪ್ರಜ್ವಲ್‌ಗೆ ವೈದ್ಯಕೀಯ ಪರೀಕ್ಷೆ? ಆಸ್ಪತ್ರೆಯಲ್ಲಿ ಪರದಾಟ

**ಬೆಂಗಳೂರು:** ಲೈಂಗಿಕ ದೌರ್ಜನ್ಯ ಪ್ರಕರಣದ ಆರೋಪಿ ಪ್ರಜ್ವಲ್ ರೇವಣ್ಣ ಅವರನ್ನು ವೈದ್ಯಕೀಯ ಪರೀಕ್ಷೆಗೆ ಒಳಪಡಿಸಲಾಯಿತು. ಈ ವೇಳೆ ಆಸ್ಪತ್ರೆಗೆ ಬಂದಿದ್ದ ಇತರೆ ರೋಗಿಗಳು ಪರದಾಡುವಂತಾಯಿತು. ಎಸ್‌ಐಟಿ ಅಧಿಕಾರಿಗಳು ನಿನ್ನೆ ತಡರಾತ್ರಿ ಪ್ರಜ್ವಲ್ ರೇವಣ್ಣರನ್ನು ಬಂಧಿಸಿದರು.ಇಂದು ನ್ಯಾಯಾಧೀಶರ ಮುಂದೆ ಹಾಜರುಪಡಿಸಲಿದ್ದಾರೆ.

ಪುಟ 2



### ವಿಶ್ರಾಂತಿಗೆ ತೆರಳಿದ ಎಚ್‌ಡಿಕೆ ಕುಟುಂಬ

**ಬೆಂಗಳೂರು:** ಮಾಜಿ ಸಿಎಂ ಹೆಚ್.ಡಿ.ಕುಮಾರಸ್ವಾಮಿ ಅವರ ಕುಟುಂಬ ಸಮೇತರಾಗಿ ರೆಸಾರ್ಟ್‌ಗೆ ವಿಶ್ರಾಂತಿಗೆ ತೆರಳಿದೆ.

ಹೌದು, ಆರೆಂಜ್ ಕೌಂಟಿ ರೆಸಾರ್ಟ್ ಕಬಿನಿ ಹಿನ್ನೀರಿನಲ್ಲಿ ಹೆಚ್.ಡಿ.ಕುಮಾರಸ್ವಾಮಿ ಅವರು ಕುಟುಂಬ ಸಮೇತ ವಿಶ್ರಾಂತಿಗೆ ತೆರಳಿದ್ದಾರೆ.2 ದಿನಗಳ ಕಾಲ ವಿಶ್ರಾಂತಿಗೆ ಹೋಗಿದ್ದಾರೆ ಎನ್ನಲಾಗಿದೆ.

ಪುಟ 2



### ಮೂವರಿಗೂ ಇಂದು ಅಗ್ನಿಪರೀಕ್ಷೆ ಖಚಿತ

**ಬೆಂಗಳೂರು:** ಅಶ್ಲೀಲ ವಿಡಿಯೋ, ಅತ್ಯಾಚಾರ ಪ್ರಕರಣ ಎದುರಿಸುತ್ತಿರುವ ಜೆಡಿಎಸ್ ನಾಯಕರಾದ ಹೆಚ್‌ಡಿ ರೇವಣ್ಣ, ಅವರಪತ್ನಿಭವಾನಿ ರೇವಣ್ಣಹಾಗೂಪುತ್ರಪ್ರಜ್ವಲ್ ರೇವಣ್ಣಗೆಇಂದುಮಹತ್ವದದಿನ. ಮೂವರಿಗೆ ಸಂಬಂಧಿಸಿದ ಅರ್ಜಿಗಳ ವಿಚಾರಣೆ ಇಂದು ಜನಪ್ರತಿನಿಧಿಗಳ ವಿಶೇಷ ಕೋರ್ಟ್ ಹಾಗೂ ಹೈಕೋರ್ಟ್‌ನಲ್ಲಿನಡೆಯಲಿದೆ. ಒಂದೆಡೆ ಅತ್ಯಾಚಾರ ಕೇಸ್‌ನಲ್ಲಿ ಬಂಧಿತನಾಗಿರುವ ಪ್ರಜ್ವಲ್, ಮತ್ತೊಂದೆಡೆಬಂಧನದಭೀತಿಯಲ್ಲಿರೋಭವಾನಿ, ಮಗದೊಂದೆಡೆಸಿಕ್ಕಿರುವ ಜಾಮೀನು ರದ್ದುಗೊಳ್ಳುತ್ತದೆಯಾ ಎಂಬ ಆತಂಕದಲ್ಲಿರುವ ಹೆಚ್‌ಡಿ ರೇವಣ್ಣ. ಹೀಗೆ ರೇವಣ್ಣ ಕುಟುಂಬದಮೂವರುಪಾಲಿಗೆ ಇಂದು ತೀರಾ ಆತಂಕದದಿನ. ಇವತ್ತಿನ ಕೋರ್ಟ್‌ನೀಡಬಹುದಾದ ಆದೇಶ ಇವರಭವಿಷ್ಯನಿರ್ಧರಿಸಲಿರುವುದೇ ಇದಕ್ಕೆ ಕಾರಣ.

ಪುಟ 2



### ಭವಾನಿಗೆ ಬಂಧನ ಭೀತಿ

**ಕೆಆರ್ ನಗರದ ಮಹಿಳೆಯ ಅಪಹರಣ ಪ್ರಕರಣದಲ್ಲಿ ಭವಾನಿ ರೇವಣ್ಣ ಬಂಧನದ ಭೀತಿ ಎದುರಿಸುತ್ತಿದ್ದಾರೆ.**

ಪುಟ 2



### ಕಂದಕಕ್ಕೆ ಉರುಳಿದ ಬಸ್
### 22 ಮಂದಿ ಸಾವು

**ಶ್ರೀನಗರ:** ಯಾತ್ರಿಕರಿದ್ದ ಬಸ್‌ವೊಂದು ಕಂದಕಕ್ಕೆ ಉರುಳಿ ಬಿದ್ದಿದ್ದು ಮೃತರ ಸಂಖ್ಯೆ 22ಕ್ಕೆ ಏರಿಕೆಯಾಗಿದೆ.ಇನ್ನೂ ಘಟನೆಯಲ್ಲಿ 70ಕ್ಕೂ ಹೆಚ್ಚು ಜನ ಗಾಯಗೊಂಡಿದ್ದಾರೆ.ಘಟನೆ ಸಂಭವಿಸಿದ ಕೆಲವೇ ಸಮಯದಲ್ಲಿ ರಕ್ಷಣಾ ಕಾರ್ಯಾಚರಣೆ ಆರಂಭಿಸಿರುವುದಾಗಿ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

**ಮೃತರ ಕುಟುಂಬಕ್ಕೆ ತಲಾ 2 ಲಕ್ಷ ರೂಪಾಯಿ ಪರಿಹಾರ**

ಉತ್ತರ ಪ್ರದೇಶದ ಹತ್ರಾಸ್‌ನಿಂದ ಯಾತ್ರಿಕರನ್ನು ಹೊತ್ತೊಯ್ಯುತ್ತಿದ್ದ ಬಸ್ ಜಮ್ಮುವಿನ ಅಖ್ನೂರ್ ತಾಂಡಾ ಬಳಿ ಅಪಘಾತಕ್ಕೀಡಾಗಿದೆ. ಗಾಯಾಳುಗಳನ್ನು ಸ್ಥಳೀಯ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ಕೊಡಿಸಲಾಗುತ್ತಿದೆ ಎಂದು ಜಮ್ಮುವಿನ ಉಪಪೊಲೀಸ್ ಆಯುಕ್ತರು ತಿಳಿಸಿದ್ದಾರೆ. ಘಟನೆ ನೆನೆದು ಪ್ರಧಾನಿ ನರೇಂದ್ರ ಮೋದಿ ಅವರು ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ. ಅಖ್ನೂರ್ ಅಪಘಾತದಲ್ಲಿ ಜೀವಹಾನಿ ನೋವನ್ನುಂಟು ಮಾಡಿದೆ ಎಂದು ಎಕ್ಸ್ ಖಾತೆಯಲ್ಲಿ ಬರೆದುಕೊಂಡಿರುವ ಅವರು, ಮೃತರ ಕುಟುಂಬಕ್ಕೆ ತಲಾ 2 ಲಕ್ಷ ರೂ. ಹಾಗೂ ಗಾಯಾಳುಗಳಿಗೆ ತಲಾ 50 ಸಾವಿರ ರೂ. ಪರಿಹಾರ ಘೋಷಿಸಿದ್ದಾರೆ.

ಪುಟ 2

### ಆಸ್ತಿ ತೆರಿಗೆ ಬಾಕಿದಾರರಿಗೆ ಮತ್ತೆ ಬಿಸಿ ಮುಟ್ಟಿಸಲು ಪ್ಲ್ಯಾನ್



**ಬೆಂಗಳೂರು:** ಅದೆಷ್ಟೇ ನೋಟಿಸ್ ಕೊಟ್ಟರೂ, ಆಸ್ತಿ ಜಪ್ತಿ ಮಾಡಿದ್ರೂ, ಇನ್ನೂ ತೆರಿಗೆ ಕಟ್ಟದ ಸಿಟಿ ಮಂದಿಗೆ ಮತ್ತೆ ಶಾಕ್ ಕೊಡಲು ಬಿಬಿಎಂಪಿ ಸಜ್ಜಾಗಿದೆ.ಸದ್ಯ ಎಲೆಕ್ಷನ್, ರಿಸಲ್ಟ್ ಅಂತಾ ತಲೆಕೆಡಿಸಿಕೊಂಡಿರೋ ಪಾಲಿಕೆ, ಸರ್ಕಾರದ ನಿರ್ದೇಶನದಂತೆ ಜೂನ್ 7 ರ ಬಳಿಕ ಮತ್ತೆ ತೆರಿಗೆ ವಸೂಲಿ ತೀವ್ರಗೊಳಿಸೋಕೆ ಸದ್ದಿಲದೇ ತಯಾರಿ ನಡೆಸಿದೆ.ಸದ್ಯ ಪಾಲಿಕೆ ಚುನಾವಣೆ ಮುನ್ಸೂಚನೆ ಕೂಡ ಸಿಗ್ತಿರೋ ಬೆನ್ನಲ್ಲೆ, ಚುನಾವಣೆ ಘೋಷಣೆಗೂ ಮೊದಲೇ ಬಾಕಿ ತೆರಿಗೆ ವಸೂಲಿಗೆ ಪಾಲಿಕೆ ಪ್ಲಾನ್ ಮಾಡಿದೆ.

ಇನ್ನು ಲೋಕಸಭಾ ಚುನಾವಣೆ ಶುರುವಾದಾಗಿನಿಂದ ಪಾಲಿಕೆ ಅಧಿಕಾರಿಗಳು ಚುನಾವಣಾ ಕರ್ತವ್ಯದಲ್ಲಿ ಬ್ಯುಸಿಯಾಗಿದ್ರು.ಇದರಿಂದ ತೆರಿಗೆ ಬಾಕಿದಾರರು ಇನ್ನೂ ಟ್ಯಾಕ್ಸ್ ವಿಚಾರ ಚರ್ಚೆಗೆ ಬರಲ್ಲ ಅಂತಾ ಬಿಂದಾಸ್ ಆಗಿದ್ರು, ಆದ್ರೆ ಇದೀಗ ಬಾಕಿ ತೆರಿಗೆ ವಸೂಲಿಗೆ ತೆರೆಮರೆಯಲ್ಲೇ ಪ್ಲಾನ್ ರೆಡಿಮಾಡಿರೋ ಪಾಲಿಕೆ, ಜೂನ್ 7 ರ ನಂತರ ನೋಟಿಸ್ ನೀಡಿದ್ರೂ ಟ್ಯಾಕ್ಸ್ ಕಟ್ಟದವರಿಗೆ ಬಿಸಿ ಮುಟ್ಟಿಸೋಕೆ ತಯಾರಿ ನಡೆಸಿದೆ.

ಸದ್ಯ ಈ ಹಿಂದೆ ಪ್ರತಿ ವಲಯದಲ್ಲಿ ಅತಿಹೆಚ್ಚು ತೆರಿಗೆ ಬಾಕಿದಾರರ ಪಟ್ಟಿ ರಿಲೀಸ್ ಮಾಡಿದ್ದ ಪಾಲಿಕೆ, ಇದೀಗ ಆ ಪಟ್ಟಿಯಲ್ಲಿರೋ ಬಾಕಿದಾರರು ತೆರಿಗೆ ಪಾವತಿಸಿದ್ದಾರಾ, ಇಲ್ವಾ ಅನ್ನೋದನ್ನ ಪರಿಶೀಲಿಸಿ ಕ್ರಮ ಕೈಗೊಳ್ಳಲಿದೆ.ಪದೇ ಪದೇ ತೆರಿಗೆ ಬಾಕಿ ಉಳಿಸಿಕೊಂಡು ಲಾಕ್ ಆಗಿದ್ದ ಮಂತ್ರಿ ಮಾಲ್ ಸೇರಿದಂತೆ ಇತರೆ ಮಾಲ್, ಅಂಗಡಿ-ಮುಂಗಟ್ಟುಗಳ ತೆರಿಗೆ ಪಾವತಿಯನ್ನೂ ಪರಿಶೀಲಿಸಲಿದ್ದು, ತೆರಿಗೆ ಬಾಕಿದಾರರ ವಿರುದ್ಧ ಸಮರಕ್ಕೆ ವೇದಿಕೆ ರೆಡಿಯಾಗ್ತಿದೆ.

ಪುಟ 2

## ಸರ್ಕಾರಿ, ಅನುದಾನಿತ ಶಾಲೆಗಳಲ್ಲಿ ಇನ್ಮುಂದೆ ಸ್ಪೋಕನ್ ಇಂಗ್ಲಿಷ್ ತರಗತಿ



**ಬೆಂಗಳೂರು:** ಶಿಕ್ಷಣ ಕ್ಷೇತ್ರದಲ್ಲಿ ಬಹಳಷ್ಟು ಬದಲಾವಣೆಗಳು ನಡೆಯುತ್ತಿವೆ. ಇತ್ತೀಚೆಗಷ್ಟೇ ಸರ್ಕಾರಿ ಶಾಲೆಗಳಲ್ಲಿ ಎಲ್ ಕೆಜಿ, ಯುಕೆಜಿ ಆರಂಭಿಸಬೇಕು ಎಂದು ಸರ್ಕಾರ ಆದೇಶ ಹೊರಡಿಸಿತ್ತು.ಇದೀಗ ಮತ್ತೊಂದು ಮಹತ್ವದಹೆಜ್ಜೆ ಇಟ್ಟಿದೆ.ಪ್ರಸ್ತುತ 2024-25ನೇ ಶೈಕ್ಷಣಿಕ ಸಾಲಿನಿಂದ ರಾಜ್ಯದಸರ್ಕಾರಿ ಮತ್ತು ಅನುದಾನಿತಶಾಲೆಗಳಲ್ಲಿ 1ರಿಂದ 10ನೇ ತರಗತಿಯ ಮಕ್ಕಳಿಗೆ ಸ್ಪೋಕನ್ ಇಂಗ್ಲಿಷ್ ತರಗತಿಗಳನ್ನ ನಡೆಸಲು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಮುಂದಾಗಿದೆ.

ವಾರದಲ್ಲಿ ಒಂದು ದಿನ ಅಂದ್ರೆ ಪ್ರತಿ ಶನಿವಾರದಂದು ವಿದ್ಯಾರ್ಥಿಗಳಿಗೆ 40 ನಿಮಿಷದ ಸ್ಪೋಕನ್ ಇಂಗ್ಲಿಷ್ ತರಗತಿಗಳನ್ನ ನಡೆಸಲು ಶಿಕ್ಷಣ ಇಲಾಖೆ ಪ್ಲ್ಯಾನ್ ಮಾಡಿದೆ.ಈ ಮೂಲಕ ಸರ್ಕಾರಿ ಶಾಲೆಯ ಮಕ್ಕಳಿಗೆ ಇಂಗ್ಲಿಷ್ ಇನ್ಮುಂದೆ ಕಬ್ಬಿಣದ ಕಡಲೆಯಲ್ಲ. ಪಿಯುಸಿ ಮುಗಿದ ಬಳಿಕ ಸ್ಪರ್ಧಾತ್ಮಕ ಪರೀಕ್ಷೆ ಬರೆಯಲು ಭಯ ಪಡೋ ಅಗತ್ಯ ಇರಲ್ಲ. ಕನ್ನಡ ಮಾಧ್ಯಮ ಮಕ್ಕಳು ಬದುಕು ಕಟ್ಟಿಕೊಳ್ಳಲು ಇಂಗ್ಲಿಷ್‌ಬಾರದೇ ಪರದಾಡುತ್ತಿದ್ದರು ಸದ್ಯ ಈ ಮಹತ್ವದ ಹೆಜ್ಜೆ ವಿದ್ಯಾರ್ಥಿಗಳ ಮುಂದಿನ ಬದುಕಿಗೆ ಸಹಾಯವಾಗಲಿದೆ.

ಸಂಭಾಷಣೆ, ನಾಟಕ, ಪಾತ್ರಾಭಿನಯ, ಕಥೆ ಹೇಳುವುದು, ಪರಿಸ್ಥಿತಿ ವಿವರಣೆ, ಅನುಭವಗಳ ಹಂಚಿಕೆ ಈ ಎಲ್ಲಾ ಚಟುವಟಿಕೆಗಳು ಸ್ಪೋಕನ್ ಇಂಗ್ಲಿಷ್ ತರಗತಿಗಳಲ್ಲಿ ಇರಲಿವೆ. ಸ್ಪೋಕನ್ ಇಂಗ್ಲಿಷ್ ಪ್ರಸ್ತಾವನೆಯನ್ನ ಶಿಕ್ಷಣ ಇಲಾಖೆಯ 2024-25 ರ ಶೈಕ್ಷಣಿಕ ಮಾರ್ಗಸೂಚಿಯಲ್ಲಿ ಅಳವಡಿಸಲಾಗಿದೆ.

ಗ್ರಾಮೀಣ ಭಾಗದ ಮಕ್ಕಳಲ್ಲಿ ಇಂಗ್ಲಿಷ್ ಕಲಿಕೆಯೂ ಸವಾಲಿನ ಕೆಲಸವಾಗಿತ್ತು.ಎಸ್‌ಎಸ್‌ಎಲ್‌ಸಿ, ಪಿಯುಸಿಮುಗಿದಬಳಿಕಸ್ಪರ್ಧಾತ್ಮಕಪರೀಕ್ಷೆಗಳಾದ ಜೆಇಇ, ಎನ್ ಇಇಟಿ, ಸಾಮಾನ್ಯಪ್ರವೇಶಪರೀಕ್ಷೆಗಳನ್ನು ಎದುರಿಸಲು, ವೃತ್ತಿಪರಕೋರ್ಸ್‌ಗಳಾದವೈದ್ಯಕೀಯಮತ್ತು ಇಂಜಿನಿಯರಿಂಗ್ ಗೆ ಪ್ರವೇಶ ಪಡೆಯಲು ಇಂಗ್ಲಿಷ್‌ಭಾಷೆ ಅಗತ್ಯವಿದ್ದ ಕಾರಣ ವಿದ್ಯಾರ್ಥಿಗಳು ಹೆದರುತ್ತಿದ್ದರು.ಈ ಹಿನ್ನೆಲೆಯಲ್ಲಿ ಶಾಲೆಗಳ ಹಂತದಲ್ಲೇ ಸ್ಪೋಕನ್ ಇಂಗ್ಲಿಷ್‌ತರಬೇತಿಯನ್ನ ನೀಡಿದರೇ ವಿದ್ಯಾರ್ಥಿಗಳ ಭವಿಷ್ಯದ ಶಿಕ್ಷಣ ಮತ್ತು ಸ್ಪರ್ಧಾತ್ಮಕ ಪರೀಕ್ಷೆಗಳನ್ನ ಎದುರಿಸಲು ಸಹಕಾರಿಯಾಗುತ್ತದೆ ಎಂದು ಶಿಕ್ಷಣ ಇಲಾಖೆ ಮಹತ್ವದ ಹೆಜ್ಜೆ ಇಟ್ಟಿದೆ. ಸ್ಪೋಕನ್ ಇಂಗ್ಲಿಷ್ ಕೈಪಿಡಿಯನ್ನ ಪದವೀಧರ ಶಿಕ್ಷಕರು, ಆಂಗ್ಲಭಾಷೆಯ ಶಿಕ್ಷಕರ ತಂಡ ತಯಾರಿಸಲಿದ್ದು ಇದು ವಿದ್ಯಾರ್ಥಿಗಳು ನಿರರ್ಗಳವಾಗಿ ಆಂಗ್ಲಭಾಷೆಯನ್ನ ಮಾತನಾಡಲು ಅನುಕೂಲವಾಗಲಿದೆ.ಇನ್ನು ಪ್ರತಿ ಶನಿವಾರ ಎಲ್ಲಾ ವಿದ್ಯಾರ್ಥಿಗಳು ಬರೀ ಇಂಗ್ಲಿಷ್‌ನಲ್ಲೇ ಮಾತನಾಡಬೇಕೆಂಬುದನ್ನ ಮಾರ್ಗಸೂಚಿಯಲ್ಲಿ ಉಲ್ಲೇಖಿಸಲಾಗಿದೆ.

## ಪೆನ್‌ಡ್ರೈವ್; ಚೇತನ್, ಲಿಖಿತ್ ಗೌಡಗೆ ಜಾಮೀನು ಮಂಜೂರು

**ಹಾಸನ:** ಸಂಸದ ಪ್ರಜ್ವಲ್ ರೇವಣ್ಣ ಅವರದ್ದು ಎನ್ನಲಾದ ಅಶ್ಲೀಲ ವಿಡಿಯೋ, ಫೋಟೋಗಳಿರುವ ಪೆನ್‌ಡ್ರೈವ್ ಹಂಚಿಕೆ ಪ್ರಕರಣದ ಆರೋಪಿಗಳಾದ ಚೇತನ್ ಹಾಗೂ ಲಿಖಿತ್ ಗೌಡಗೆ ಮೂರನೇ ಅಧಿಕ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದಲ್ಲಿ ಜಾಮೀನು ಮಂಜೂರಾಗಿದೆ. ಪೆನ್‌ಡ್ರೈವ್ ಹಂಚಿಕೆ ಪ್ರಕರಣದಲ್ಲಿ ಆರು ಮತ್ತು ಏಳನೇ ಆರೋಪಿಗಳಾಗಿದ್ದ ಮಾಜಿ ಶಾಸಕ ಪ್ರೀತಂಗೌಡ ಅವರ ಆಪ್ತರಾದ ಯಲಗುಂದ ಚೇತನ್ ಹಾಗೂ ಲಿಖಿತ್‌ಗೌಡರನ್ನು ಮೇ 12 ರಂದು ಎಸ್ ಐಟಿ ತಂಡ ಬಂಧಿಸಿ ವಿಚಾರಣೆ ನಡೆಸಿದ ನಂತರ ನ್ಯಾಯಂಗ ಬಂಧನಕ್ಕೆ ಒಳಪಡಿಸಲಾಗಿತ್ತು. ಹದಿನೆಂಟು ದಿನಗಳ ಬಳಿಕ ಇಬ್ಬರು ಆರೋಪಿಗಳಿಗೂ ಜಾಮೀನು ಮಂಜೂರಾಗಿದೆ. ಇಬ್ಬರು ಆರೋಪಿಗಳ ಪರ ವಕೀಲ ಹರೀಶ್ ಬಾಬು ವಾದ ಮಂಡಿಸಿದ್ದರು.




### ಸಚಿವ ಸ್ಥಾನಕ್ಕೆ ನಾಗೇಂದ್ರ ರಾಜೀನಾಮೆಗೆ ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಆಗ್ರಹ

# ಡೆತ್ ನೋಟ್‌ನಲ್ಲಿ ಸಚಿವರ ಹೆಸರಿದೆ, ಎಫ್‌ಐಆರ್‌ನಲ್ಲಿ ಏಕಿಲ್ಲ?

**ಬೆಂಗಳೂರು:** ವಾಲ್ಮೀಕಿ ಅಭಿವೃದ್ಧಿ ನಿಗಮದ ಅಧೀಕ್ಷಕ ಚಂದ್ರಶೇಖರ್ ಆತ್ಮಹತ್ಯೆ ಕೇಸ್ ರಾಜಕೀಯ ತಿರುವು ಪಡೆದುಕೊಂಡಿದೆ.ಚಂದ್ರಶೇಖರ್ ಆತ್ಮಹತ್ಯೆ ಪ್ರಕರಣದ ತನಿಖೆಯನ್ನ ಸಿಬಿಐಗೆ ನೀಡಬೇಕು, ಸಚಿವ ಸ್ಥಾನಕ್ಕೆ ನಾಗೇಂದ್ರ ರಾಜೀನಾಮೆ ನೀಡಬೇಕು ಎಂದು ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಆಗ್ರಹಿಸಿದ್ದರು. ಇದೀಗ ಈ ಪ್ರಕರಣಕ್ಕೆ ಸಂಬಂಧಿಸಿ ವಿಪಕ್ಷ ನಾಯಕ ಆರ್.ಅಶೋಕ್ ಪ್ರತಿಕ್ರಿಯೆ ನೀಡಿದ್ದು ಡೆತ್ ನೋಟ್‌ನಲ್ಲಿಸಚಿವರಹೆಸರಿದೆ. ಆದರೆ ಎಫ್‌ಐಆರ್‌ನಲ್ಲಿ ಯಾಕೆಹೆಸರಿಲ್ಲ? ಅವರನ್ನು ಬಂಧಿಸಿದ್ರೆ ನಿಮ್ಮ ಬಂಡವಾಳ ಹೊರಬರುತ್ತಾ?ಎಂದು ಕಾಂಗ್ರೆಸ್‌ವಿರುದ್ಧ ಗಂಭೀರ ಆರೋಪಗಳನ್ನು ಮಾಡಿದ್ದಾರೆ.



ಬೆಂಗಳೂರಿನಲ್ಲಿ ಮಾತನಾಡಿದ ಆರ್.ಅಶೋಕ್, ಎಫ್‌ಐಆರ್‌ನಲ್ಲಿಮಂತ್ರಿಹೆಸರು ಯಾಕಿಲ್ಲ?ಹಣ ಗುಳುಂ ಮಾಡಿದ್ದ ಅಧಿಕಾರಿಗಳನ್ನು ಏಕೆಬಂಧಿಸಿಲ್ಲ? ನಾನುವರ್ಗಾವಣೆಯಲ್ಲಿ ದುಡ್ಡುಹೊಡೆದಿಲ್ಲ ಅಂದಿದ್ದರುಸಿಎಂ, ದುಡ್ಡುಹೊಡೆದ್ರೆ ರಾಜೀನಾಮೆ ಕೊಡ್ತೀನಿ ಅಂದಿದ್ರು.ಈಗ ಯಾವಾಗ ತಮ್ಮ ಸ್ಥಾನಕ್ಕೆ ರಾಜೀನಾಮೆ ಕೊಡ್ತೀರಾ? ಮೃತನ ಮನೆಯಲ್ಲಿದ್ದ ಆ ಪೆನ್‌ಡ್ರೈವ್ ಯಾಕೆ ಒಯ್ದರು? ಆ ಪೆನ್‌ಡ್ರೈವ್ ಸಾರ್ವಜನಿಕರ ಎದುರುಬಹಿರಂಗಪಡಿಸಿ.ಅಂದು ಈಶ್ವರಪ್ಪರನ್ನವಜಾಮಾಡಬೇಕು ಅಂದಿದ್ದರಲ್ಲ. ಈಗ ಯಾರಮೇಲೆ ಕೇಸ್‌ಹಾಕಿದ್ದೀಯಪ್ಪ ಎಂದು ಆರ್. ಅಶೋಕ್‌ವ್ಯಂಗ್ಯವಾಡಿದರು.

ಪರಿಶಿಷ್ಟ ವರ್ಗದ 187 ಕೋಟಿ ರೂ.ಹಣ ಗುಳುಂ ಆಗಿದೆ. ಇದೇ ಈ ಸರ್ಕಾರದ ಸಾಧನೆ ಎಂದು ಖ.ಅಶೋಕ್‌ವ್ಯಂಗ್ಯವಾಡಿದ್ದಾರೆ. ಕಾಂಗ್ರೆಸ್‌ಗೆ ಅಧಿಕಾರಸಿಕ್ಕಿದ್ಮೇಲೆ ದಲಿತರ ಉದ್ಧಾರ ಆಗಿಲ್ಲ. ಕಾಂಗ್ರೆಸ್‌ಗೆ ಶ್ರೀರಾಮನನ್ನ ಕಂಡರೆ ಆಗಲ್ಲವೆಂದು ಗೊತ್ತಿದೆ. ಆದ್ರೆ, ವಾಲ್ಮೀಕಿ ಕಂಡರೂ ಆಗಲ್ಲ ಎಂದು ಈಗ ಗೊತ್ತಾಯ್ತು.ಇದು ಕೊಲೆಗಡುಕರ ಸರ್ಕಾರ ಎಂದು ಸಾಬೀತಾಗಿದೆ.ರಾಜ್ಯದಲ್ಲಿ ಈವರೆಗೆ ಹೆಣ್ಣುಮಕ್ಕಳಿಗೆ ಗ್ಯಾರಂಟಿ ಇರಲಿಲ್ಲ. ಇದೀಗ ರಾಜ್ಯದಲ್ಲಿ ಅಧಿಕಾರಿಗಳಿಗೂ ಗ್ಯಾರಂಟಿ ಇಲ್ಲ. ಸಚಿವರ ಮೌಖಿಕ ಆದೇಶದಿಂದ ಹಣ ವರ್ಗಾವಣೆ ಬಗ್ಗೆ ಡೆತ್‌ನೋಟ್‌ನಲ್ಲಿ ಅವರುಬರೆದಿದ್ದಾರೆ.

ಇಷ್ಟು ಕ್ಲಿಯರ್ ಆಗಿ ಡೆತ್ ನೋಟ್ ಬರೆದಿರುವ ಅಧಿಕಾರಿಯನ್ನು ನಾನು ನನ್ನ ರಾಜಕೀಯ ಜೀವನದಲ್ಲೇ ನೋಡಿಲ್ಲ. ಅವರು ಕಂಪ್ಲೀಟ್ ಡೀಟೈಲ್ಸ್ ಬರೆದಿದ್ದಾರೆ. ಲೂಟಿ ಮಾಡಿರುವುದು ಕಂಡು ಬಂದಿದೆ, ಇದರಲ್ಲಿ ನನ್ನ ತಪ್ಪೇನು ಇಲ್ಲ. ಮತ್ತೊಮ್ಮೆ ನನ್ನ ಪರಿಸ್ಥಿತಿಗೆ ಇವರು ಎಲ್ಲರೂ ಕಾರಣ.ಈ ನಿಗಮಕ್ಕೆ ನಾನು ಏನು ವಂಚನೆ ಮಾಡಿರುವುದಿಲ್ಲ ಎಂದು ಬರೆದಿದ್ದಾರೆ ಎಂದು ಬೆಂಗಳೂರಿನಲ್ಲಿ ವಿಪಕ್ಷ ನಾಯಕ ಆರ್.ಅಶೋಕ್ ಹೇಳಿದರು.

## ನಾಗರಾಜ್ ಜತೆ ನಾಗೇಂದ್ರಗೆ ವ್ಯವಹಾರ ಇದೆ

**ಬೆಂಗಳೂರು:** ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧಿಕಾರಿ ಆತ್ಮಹತ್ಯೆ ವಿಚಾರದಲ್ಲಿ ಬಿಜೆಪಿಯಿಂದ ಎನ್.ನಾಗರಾಜ್ ಸಂಬಂಧದ ಅಸ್ತ್ರ ಪ್ರಯೋಗವಾಗಿದೆ. ಡೆತ್‌ನೋಟ್‌ನಲ್ಲಿರುವ ಎನ್.ನಾಗರಾಜ್ ಜಾಡು ಹಿಡಿದು ಹೊರಟ ಬಿಜೆಪಿ ಸಚಿವ ನಾಗೇಂದ್ರ ಜೊತೆ ನಾಗರಾಜುಗೆ ವ್ಯವಹಾರಿಕ ಸಂಬಂಧ ಎಂದು ಗಂಭೀರ ಆರೋಪ ಮಾಡಿದೆ.



ನಾಗೇಂದ್ರ ಜೊತೆ ನಾಗರಾಜ್ ಇರುವ ಫೋಟೋ ರಿಲೀಸ್ ಮಾಡಿ ಬಿಜೆಪಿ ನಾಯಕರು ಆರೋಪ ಮಾಡಿದ್ದಾರೆ. ಅಲ್ಲದೆ ಸಿಎಂ ಜೊತೆ, ಡಿಸಿಎಂ ಜೊತೆ, ರಾಮಲಿಂಗರೆಡ್ಡಿ ಜೊತೆ ಇರುವ ಫೋಟೋ ರಿಲೀಸ್ ಮಾಡಿ ಸಚಿವ ನಾಗೇಂದ್ರ ರಾಜೀನಾಮೆಗೆ ಪಟ್ಟು ಹಿಡಿದಿದ್ದಾರೆ.

ಸಿ.ಟಿ.ರವಿ ಮಾತನಾಡಿ, ಡೆತ್‌ನೋಟ್ ನಲ್ಲಿ ಎನ್.ನಾಗರಾಜ್ ಹೆಸರು ಇದೆ. ಆ ಎನ್ .ನಾಗರಾಜ್ ನಾಗೇಂದ್ರ ಪರಮಾಪ್ತನಾಗಿದ್ದು ಬ್ಯುಸಿನೆಸ್ ಪಾರ್ಟ್‌ನರ್ ಆಗಿದ್ದಾನೆ. ಎನ್.ನಾಗರಾಜು ಜೊತೆ ನಾಗೇಂದ್ರಗೆ ವ್ಯವಹಾರ ಇದೆ ಎಂಬ ಮಾಹಿತಿ ನಮಗೆ ಸಿಕ್ಕಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ, ಡಿಕೆ ಶಿವಕುಮಾರ್ ಜೊತೆ ಎನ್.ನಾಗರಾಜ್ ಇರುವ ಫೋಟೋಗಳು ಇವೆ. ಹೀಗಾಗಿ ಈ ಪ್ರಕರಣದಲ್ಲಿ ಎಲ್ಲರ ಪಾತ್ರವಿದೆ ಎಂದು ಆರೋಪಿಸಿದರು. ಅಂಗೈ ಹುಣ್ಣಿಗೆ ಸಾಕ್ಷಿ ಬೇಕಾ?ಸಚಿವರ ಮೌಖಿಕ ಆದೇಶ ಇಲ್ಲದೇ ಹಣ ವರ್ಗಾವಣೆ ಹೇಗೆ ಆಗುತ್ತೆ? ಎನ್ .ನಾಗರಾಜ್ ಗೂ ನಾಗೇಂದ್ರಗೂ ಏನ್ ಸಂಬಂಧ? ಎನ್.ನಾಗರಾಜ್‌ಗೂ ಸಿಎಂಗೂ, ಎನ್. ನಾಗರಾಜ್‌ಗೂ ಡಿಸಿಎಂಗೆ ಏನು ಸಂಬಂಧ ಎಂದು ಸಿ.ಟಿ.ರವಿ ಖಾರವಾಗಿ ಪ್ರಶ್ನಿಸಿದರು. ಹೈದರಾಬಾದ್‌ನ ಒಂದು ಬ್ಯಾಂಕ್ ಅಥವಾ ಕಂಪನಿಗೆ ಹಣ ಹೋಗಿದೆ ಎಂಬ ಮಾಹಿತಿ ಇದೆ.ಇದೆಲ್ಲದರ ಬಗ್ಗೆ ತನಿಖೆ ನಡೆಯಬೇಕು.ಅದಕ್ಕಾಗಿ ಹಾಲಿ ನ್ಯಾಯಾಧೀಶರರಿಂದ ತನಿಖೆ ನಡೆಸಬೇಕು. ಇದೊಂದು ಹಗಲು ದರೋಡೆಯಾಗಿದೆ. ವಿಶೇಷ ವಿಮಾನದಲ್ಲಿ ಸಿದ್ದರಾಮಯ್ಯ ಜೊತೆ ಹೋಗಿದ್ದಾರೆ.ಡೆತ್ ನೋಟ್‌ನಲ್ಲಿ ನಾಗರಾಜ್ ಹೆಸರು ಉಲ್ಲೇಖವಾಗಿದ್ದು ಯಾಕೆ ಎಂದು ಪ್ರಶ್ನಿಸಿದ್ರು. ಸಂತೋಷ್ ಪಾಟೀಲ್ ಆತ್ಮಹತ್ಯೆ ಮಾಡಿಕೊಂಡಾಗ ಇದೊಂದು ಕೊಲೆ ಅಂತಾ ಸುರ್ಜೇವಾಲಾ, ಸಿದ್ದರಾಮಯ್ಯ, ಡಿ.ಕೆ. ಶಿವಕುಮಾರ್ ಹೇಳಿದ್ದರು.ವರ್ಕ್ ಆರ್ಡರ್ ಮಾಡದೇ ಇದ್ದರೂ ಈಶ್ವರಪ್ಪ ರಾಜೀನಾಮೆ ನೀಡಿದರು.ಅವರ ರಾಜಕೀಯ ಭವಿಷ್ಯವನ್ನೇ ಮುಗಿಸುವ ಕೆಲಸ ಮಾಡಿದರು. ಈಗ ಬಿ.ನಾಗೇಂದ್ರ ರಾಜೀನಾಮೆ ಪಡೆಯುತ್ತಿಲ್ಲ ಯಾಕೆ? ಬಿ.ನಾಗೇಂದ್ರ ರಾಜೀನಾಮೆ ಕೊಡಲೇಬೇಕು. ಸರ್ಕಾರಕ್ಕೆ ಮಾನ ಮರ್ಯಾದೆ ಇದೆಯೇ ಎಂದು ಸಿಟಿ ರವಿ ಕಿಡಿಕಾರಿದರು.

## ಸಿಬಿಐ ಪೊಲೀಸರೆಂದು ಹಣ ವಸೂಲಿ ಮಾಡಿದ ನಾಲ್ವರ ಸೆರೆ

**ಬೆಂಗಳೂರು:** ಸಿಬಿಐ ಪೊಲೀಸರೆಂದು ವಿದ್ಯಾರ್ಥಿಗಳಿಂದ ಹಣ ವಸೂಲಿ ಮಾಡುತ್ತಿದ್ದ ಕೇರಳ ಮೂಲದ ನಾಲ್ವರು ಆರೋಪಿಗಳನ್ನು ಪೊಲೀಸರು ಬಂಧಿಸಿದ್ದಾರೆ.ಮೂವರು ವಿದ್ಯಾರ್ಥಿಗಳಿದ್ದ ಮನೆಗೆ ಸಿಬಿಐ ಅಧಿಕಾರಿಗಳೆಂದು ದಾಳಿ ಮಾಡಿದ್ದರು.ಈ ವೇಳೆ ತಾವೇ ತಂದಿದ್ದ ಗಾಂಜಾವನ್ನು ವಿದ್ಯಾರ್ಥಿಗಳ ಕೈಯಲ್ಲಿ ಇಟ್ಟು ವಿಡಿಯೊ ಮಾಡಿಕೊಂಡು ಬ್ಲ್ಯಾಕ್ ಮೇಲ್ ಮಾಡಿದ್ದರು. ಕೈಯಲ್ಲಿದ್ದ ಪಿಸ್ತೂಲ್, ಐಡಿ ಕಾರ್ಡ್, ಲಾಟಿಯಿಂದ ಹಲ್ಲೆ ಮಾಡಿದ್ದರು.






ಆರೋಪಿಗಳ ನಡವಳಿಕೆಯಿಂದ ಅನುಮಾನಗೊಂಡ ಯುವಕರು ಪೊಲೀಸ್ ಠಾಣೆಗೆ ದೂರು ನೀಡಿದ್ದರು.ದೂರಿನನ್ವಯ ತನಿಖೆ ನಡೆಸಿದ ಸೋಲದೇವನಹಳ್ಳಿ ಪೊಲೀಸರು ದೂರು ದಾಖಲಾಗಿ 12 ಗಂಟೆಯೊಳಗೆ ಕೇರಳ ಮೂಲದ ನಾಲ್ವರು ಆರೋಪಿಗಳನ್ನು ಬಂಧಿಸಿದ್ದಾರೆ. ಅನಂತಕೃಷ್ಣ(23), ಪ್ರಮೋದ (42), ಆದರ್ಶ್(22) ಮತ್ತು ದೀಪಕ್ ಆರ್ ಚಂದ್ರ (37) ಬಂಧಿತ ಆರೋಪಿಗಳಾಗಿದ್ದಾರೆ.

ಕೃತ್ಯಕ್ಕೆ ಬಳಸಿದ್ದ ಹಲವು ವಸ್ತುಗಳನ್ನು ಪೊಲೀಸರು ವಶಪಡಿಸಿಕೊಂಡಿದ್ದಾರೆ. 1- ಮಹೀಂದ್ರ ಎಕ್ಸ್ ಯು ವಿ, 1 ಹ್ಯೂಂಡೈ ಐ 20 ಕಾರು, 1 ಏರ್ ಪಿಸ್ತೂಲ್, ಕೈ ಕೋಳ, ಐಡಿ ಕಾರ್ಡ್, ಬ್ಯಾಟನ್ ಮತ್ತು 4 ಮೊಬೈಲ್ ಫೋನ್‌ಗಳನ್ನು ವಶಕ್ಕೆ ಪಡೆಯಲಾಗಿದೆ.

ಇನ್ನೂ ಆರೋಪಿ ಪ್ರಮೋದ್ ತಿರುವನಂತಪುರಂನಲ್ಲಿ ಹೋಟೆಲ್ ಬಿಸಿನೆಸ್ ನಡೆಸುತ್ತಿದ್ದ. ತನ್ನ ತಂಗಿಯನ್ನು ಬೆಂಗಳೂರಿನ ಯುವಕನಿಗೆ ಮದುವೆ ಮಾಡಿಕೊಟ್ಟಿದ್ದ. ಈ ಹಿನ್ನೆಲೆಯಲ್ಲಿ ಆಗಾಗ ಬೆಂಗಳೂರಿಗೆ ಬಂದು ಹೋಗುತ್ತಿದ್ದ.ಪ್ರಮೋದ್‌ನ ಪಕ್ಕದ ಊರಿನವರಾದ ಅನಂತಕೃ?ಣ ಮತ್ತು ಆದರ್ಶ್ ಬೆಂಗಳೂರಿನಲ್ಲಿ ಓದುತ್ತಿದ್ದರು. ಇವರನ್ನು ಪ್ರಮೋದ್ ಪರಿಚಯ ಮಾಡಿಕೊಂಡಿದ್ದ. ಜತೆಗೆ ಕೇರಳದಿಂದ ದೀಪಕ್ ಎಂಬಾತನನ್ನು ಕರೆಸಿಕೊಂಡು ಪ್ಲ್ಯಾನ್ ಮಾಡಿದ್ದ. ಸಿಬಿಐ ಅಧಿಕಾರಿಗಳೆಂದು ಹೇಳಿದರೆ ಸುಲಭವಾಗಿ ಹಣ ವಸೂಲಿ ಮಾಡಬಹುದೆಂದು ಈ ರೀತಿಯ ಕೃತ್ಯ ಮಾಡಿದ್ದರು. ಬ್ಲ್ಯಾಕ್ ಮೇಲ್ ವೇಳೆ 3 ಲಕ್ಷ ರೂ.ಬೇಡಿಕೆ ಇಟ್ಟಿದ್ದರು.ಹಣ ಕೊಡದಿದ್ದಲ್ಲಿ ಗಾಂಜಾ ಕೈಯಲ್ಲಿರುವ ವಿಡಿಯೋ ರಿಲೀಸ್ ಮಾಡುವುದಾಗಿ ಬೆದರಿಕೆ ಹಾಕಿದ್ದರು.ಆ ಸಮಯದಲ್ಲಿ ಯುಪಿಐ ಐಡಿಗೆ ವಿದ್ಯಾರ್ಥಿಗಳಿಂದ 90,000 ಹಣ ವರ್ಗಾವಣೆ ಮಾಡಿಕೊಂಡಿದ್ದರು.ಇನ್ನುಳಿದ ಹಣವನ್ನು ಮುಂದಿನ ದಿನ ನೀಡಬೇಕೆಂದು ಹೇಳಿ ಹೋಗಿದ್ದರು.ಸದ್ಯ ನಾಲ್ವರನ್ನು ಪೊಲೀಸರು ವಶಪಡಿಸಿಕೊಂಡು ತನಿಖೆ ನಡೆಸುತ್ತಿದ್ದಾರೆ.

# ಸರ್ಕಾರ ನಾಶ ಮಾಡಲು ನನ್ನ, ಸಿಎಂ ಮೇಲೆ ಶತ್ರು ಭೈರವಿ ಯಾಗ ಮಾಡಿಸ್ತಿದ್ದಾರೆ

**ಬೆಂಗಳೂರು:** ನನ್ನ ಮತ್ತು ಮುಖ್ಯಮಂತ್ರಿಗಳ ಮೇಲೆ ಹಾಗೂ ನಮ್ಮ ಸರ್ಕಾರದ ವಿರುದ್ಧ ಶತ್ರು ಭೈರವಿ ಯಾಗ ಮಾಡಿಸುತ್ತಿದ್ದಾರೆ.ಇದು ನಮ್ಮ ಸರ್ಕಾರವನ್ನು ನಾಶ ಮಾಡಬೇಕು ಅಂತಾ ರಾಜಕೀಯದಲ್ಲಿ ಇರುವವರೇ ಮಾಡಿಸುತ್ತಿರುವ ಯಾಗ ಅದಕ್ಕಾಗಿ ಅಘೋರಿಗಳ ಮೊರೆ ಹೋಗಿದ್ದಾರೆ ಎಂದು ಡಿಸಿಎಂ ಡಿಕೆ ಶಿವಕುಮಾರ್ ಹೊಸ ಬಾಂಬ್ ಸಿಡಿಸಿದ್ದಾರೆ.



ಬೆಂಗಳೂರಿನ ತಮ್ಮ ಕಚೇರಿಯಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ನನ್ನ ಮತ್ತು ಮುಖ್ಯಮಂತ್ರಿಗಳ ಮೇಲೆ, ನಮ್ಮ ಸರ್ಕಾರದ ವಿರುದ್ಧ ಯಾಗ ನಡೆಯುತ್ತಿದೆ.ದೊಡ್ಡ ಮಟ್ಟದ ಪೂಜೆ ನಡೆಯುತ್ತಿದೆ. ಯಾವ ಪೂಜೆ ಮಾಡ್ತಿದ್ದಾರೆ?ಯಾರು ಮಾಡ್ತಿದ್ದಾರೆ?ಎಲ್ಲಿ ಮಾಡ್ತಿದ್ದಾರೆ?ಅಂತ ಎಲ್ಲವನ್ನು ಬರೆದುಕೊಟ್ಟಿದ್ದಾರೆ ಎಂದು ಬಾಂಬ್ ಸಿಡಿಸಿದ್ದಾರೆ.

ಕೇರಳದ ರಾಜರಾಜೇಶ್ವರಿ ದೇವಸ್ಥಾನದ ಆಸುಪಾಸಿನಲ್ಲಿ ಶತ್ರು ನಾಶಕ್ಕಾಗಿ ಶತ್ರು ಭೈರವಿ ಯಾಗ ನಡೆಯುತ್ತಿದೆ.ನಮ್ಮ ಸರ್ಕಾರವನ್ನು ನಾಶ ಮಾಡಬೇಕು ಅಂತ ಅಘೋರಿಗಳ ಮೊರೆ ಹೋಗಿದ್ದಾರೆ.ಅದಕ್ಕಾಗಿ ಹಂದಿ, ಕುರಿ ಸೇರಿ ಎಲ್ಲಾ ಬಲಿ ಕೊಡ್ತಿದ್ದಾರೆ.ಇದೆಲ್ಲವನ್ನ ಯಾರು ಮಾಡಿಸುತ್ತಿದ್ದಾರೆ ಅಂತ ನಮಗೆ ಗೊತ್ತಿದೆ.ಅವರ ನಂಬಿಕೆ ಅವರು ಮಾಡಲಿ.ಆದ್ರೆ ನಾವು ನಂಬಿರುವ ದೇವರು ನಮ್ಮನ್ನ ಕಾಪಾಡುತ್ತದೆ ಎಂದು ಹೇಳಿದ್ದಾರೆ.

ಶತ್ರು ಸಂಹಾರ ಯಾಗ ಮಾಡಿಸುವುದಕ್ಕಾಗಿಯೇ 5 ಹಂದಿ, 3 ಎಮ್ಮೆ, 21 ಕಪ್ಪು ಬಣ್ಣದ ಕುರಿ, 21 ಮೇಕೆಗಳನ್ನ ಬಲಿ ಕೊಡ್ತಿದ್ದಾರೆ.ಈ ಶತ್ರು ಸಂಹಾರ ಯಾಗ ಯಾರು ಮಾಡ್ತಿದ್ದಾರೆ?ಯಾರು ಮಾಡಿಸುತ್ತಿದ್ದಾರೆ?ಎಲ್ಲವೂ ನನಗೆ ಗೊತ್ತಿದೆ.ಇದೆಲ್ಲವನ್ನು ರಾಜಕೀಯದಲ್ಲಿ ಇರುವವರೇ ಮಾಡೋದು.ಆದ್ರೆ, ಈ ಬಗ್ಗೆ ಸದ್ಯಕ್ಕೆ ನಾನು ಏನೂ ಮಾತಾಡೋದಿಲ್ಲ ಎಂದು ಆತಂಕಕಾರಿ ಸಂಗತಿಯನ್ನ ಬಿಚ್ಚಿಟ್ಟಿದ್ದಾರೆ. ಕೇರಳದ ರಾಜರಾಜೇಶ್ವರಿ ದೇವಾಲಯದ ಆಸುಪಾಸಿನಲ್ಲಿ ಕಿಡಿಗೇಡಿಗಳು ಶತ್ರು ಸಂಹಾರ ಯಾಗ ಮಾಡ್ತಿದ್ದಾರೆ.ಆದ್ರೆ, ನಮ್ಮ ದೇವರ ಕೃಪೆ ಬಹಳ ಜೋರಾಗಿದೆ.ನಾನು ಹೊರಗೆ ಹೋಗುವ ಪ್ರತಿದಿನ ದೇವರಿಗೆ ಕೈ ಮುಗಿದು ಹೋಗ್ತೀನಿ.ಅದಕ್ಕೆ ಇ?ಟ್ಟು ರಕ್ಷಣೆ ಎಲ್ಲಾ ಇದೆ ಎಂದ ಅವರು ಶತ್ರು ಸಂಹಾರ ಯಾಗದ ಬಗ್ಗೆ ಚೀಟಿಯಲ್ಲಿ ಬರೆದುಕೊಂಡಿದ್ದನ್ನ ಮಾಧ್ಯಮಗಳ ಮುಂದೆ ಪ್ರಸ್ತುತಪಡಿಸಿದ್ದಾರೆ.

### ಬಿಎಂಟಿಸಿ ಎಲೆಕ್ಟ್ರಿಕಲ್ ಬಸ್‌ಗೆ ಪರಭಾಷಿಕರ ನೇಮಕ

# ಡಿಸಿ ಕಚೇರಿಗೆ ನುಗ್ಗಿ ಕನ್ನಡಿಗರ ಆಕ್ರೋಶ

**ಬೆಂಗಳೂರು:** ಬಿಎಂಟಿಸಿ ಎಲೆಕ್ಟ್ರಿಕಲ್ ಬಸ್ ಗಳಲ್ಲಿ ಗುತ್ತಿಗೆ ಆಧಾರದಲ್ಲಿ ಕನ್ನಡ ಬಾರದ ಚಾಲಕರನ್ನು ನೇಮಕ ಮಾಡಿಕೊಳ್ಳಲಾಗುತ್ತಿದೆ ಎಂದು ಪರಭಾಷಿಕರ ನೇಮಕದ ವಿರುದ್ಧ ಕನ್ನಡ ಪರ ಸಂಘಟನೆ ಕಾರ್ಯಕರ್ತರು ಸಿಡಿದೆದ್ದಿದ್ದಾರೆ.ಕಡಿಮೆ ವೇತನಕ್ಕೆ ನೆರೆಯ ಕೇರಳ, ಮಹಾರಾಷ್ಟ್ರ ಚಾಲಕರನ್ನು ನೇಮಕ ಮಾಡಲಾಗುತ್ತಿದೆ.ಇದರಿಂದಾಗಿ ಕರ್ನಾಟಕ ಚಾಲಕರನ್ನು ಕರೆತರಲು ಎಲೆಕ್ಟ್ರಿಕ್ ಕಂಪನಿಗಳ ಹಿಂದೇಟು ಹಾಕುತ್ತಿವೆ ಎಂದು ಕಿಡಿಕಾರಿದ್ದಾರೆ. ವಿವಿಧ ಕಂಪನಿಗಳು ಕಡಿಮೆ ವೇತನಕ್ಕೆ ಪರಭಾಷಿಕರ ಕರೆತರುತ್ತಿರುವುದಕ್ಕೆ ಕನ್ನಡಿಗರು ವಿರೋಧ ವ್ಯಕ್ತಪಡಿಸಿದ್ದಾರೆ. ಕನ್ನಡ ಪರ ಸಂಘಟನೆ ಮುಖಂಡ ರೂಪೇಶ್ ರಾಜಣ್ಣ ನೇತೃತ್ವದಲ್ಲಿ ಬಿಎಂಟಿಸಿಗೆ ಮುತ್ತಿಗೆ ಹಾಕಲಾಯಿತು.ಬಿಎಂಟಿಸಿ ವ್ಯವಸ್ಥಾಪಕ ನಿರ್ದೇಶಕರ ಕಚೇರಿಗೆ ತೆರಳಿ ಆಕ್ರೋಶ ಹೊರಹಾಕಿದರು. ಕೇರಳದ ಬಹುತೇಕ ಚಾಲಕರಿಗೆ ಕನ್ನಡ ಬರಲ್ಲ. ಇದರಿಂದ ನಿರ್ವಾಹಕರು, ಚಾಲಕರ ಮಧ್ಯೆ ಸಂವಹನ ಸಮಸ್ಯೆ ಉಂಟಾಗುತ್ತದೆ.ನಗರದ ರೂಟ್ ಗೊತ್ತಿಲ್ಲ, ಭಾಷೆ ತಿಳಿಯದೆ, ಅರ್ಥವಾಗದೇ ತೊಂದರೆಯಾಗುತ್ತಿದೆ. ಹೊರ ರಾಜ್ಯದವರನ್ನು ನೇಮಕ ಮಾಡಿಕೊಳ್ಳದಂತೆ ಕನ್ನಡ ಪರ ಸಂಘಟನೆಗಳು ಒತ್ತಾಯ ಮಾಡಿವೆ. ಬಿಎಂಟಿಸಿಯಲ್ಲಿ ಮೂರು ಕಂಪನಿಯಗಳ 648 ಎಲೆಕ್ಟ್ರಿಕ್ ಬಸ್‌ಗಳಿವೆ. ಎಲೆಕ್ಟ್ರಿಕ್ ಬಸ್‌ಗಳಲ್ಲಿ ಚಾಲಕರನ್ನು ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಲಾಗುತ್ತಿದೆ.ನಿರ್ವಾಹಕ ಮಾತ್ರ ಬಿಎಂಟಿಸಿ ಸಿಬ್ಬಂದಿ ಆಗಿರುತ್ತಾರೆ.ಆದರೆ ಬಸ್ ಚಾಲಕರನ್ನು ಕಂಪನಿಯೇ ನೇಮಕ ಮಾಡಬೇಕು.ಹೀಗಾಗಿ ಕಂಪನಿಗಳು ಇಲ್ಲಿನವರನ್ನು ಬಿಟ್ಟು ಹೊರ ರಾಜ್ಯದ ಕೆಲ ಚಾಲಕರನ್ನು ನೇಮಕ ಮಾಡಿಕೊಂಡಿದೆ. ಇದು ಈಗ ವಿವಾದಕ್ಕೆ ಕಾರಣವಾಗಿದೆ. ಕೂಡಲೇ ಹೊರ ರಾಜ್ಯದ ಚಾಲಕರನ್ನು ಕರ್ತವ್ಯದಿಂದ ವಜಾ ಮಾಡಬೇಕೆಂದು ಆಗ್ರಹಿಸಿದ್ದಾರೆ.



## ವಿದೇಶದಲ್ಲಿಯೇ ಮೊಬೈಲ್ ನಾಶ ಮಾಡಿದರಾ ಪ್ರಜ್ವಲ್?

ಇದೀಗ ಪ್ರಜ್ವಲ್ ಜೇಬಿನಲ್ಲಿ ಎಸ್‌ಐಟಿ ಅಧಿಕಾರಿಗಳು ಮೊದಲಿಗೆ ತಡಕಾಡಿರುವುದೇ ಮೊಬೈಲ್‌ಗಾಗಿ.ವಿಡಿಯೋಗಳನ್ನು ಈಗಾಗಲೇ ನಾಶ ಮಾಡಿರಬಹುದಾದರೂ, ಮೊಬೈಲ್ ಸಿಕ್ಕಿದರೆ ಅವುಗಳನ್ನು ರಿಟ್ರೀವ್ ಮಾಡುವ ಅವಕಾಶ ಇದೆ.ಸಾಧನವೇ ಸಿಗದೇ ಹೋದರೆ ಏನೂ ಮಾಡಲು ಸಾಧ್ಯವಿಲ್ಲ. ಹೀಗಾಗಿ ಮೊಬೈಲ್ ಅಧಿಕಾರಿಗಳ ಕೈಗೆ ಸಿಗದಂತೆ ಪ್ರಜ್ವಲ್ ಎಚ್ಚರ ವಹಿಸಿರಬಹುದು ಎನ್ನಲಾಗಿದೆ. ಪ್ರಜ್ವಲ್ ರೇವಣ್ಣ ತಾವು ಬಳಸುತ್ತಿದ್ದ ಮೊಬೈಲ್ ಅನ್ನು ವಿದೇಶದಲ್ಲಿಯೇ ನಾಶ ಮಾಡಿರುವ ಸಾಧ್ಯತೆ ಇದೆ.ಪ್ರಕರಣ ದಾಖಲಾಗಿ ಎಸ್‌ಐಟಿ ರಚನೆಯಾಗುತ್ತಿದ್ದಂತೆಯೇ ಇದರ ತೀವ್ರತೆ ಅರಿತುಕೊಂಡ ಪ್ರಜ್ವಲ್, ಜರ್ಮನಿಯಲ್ಲಿಯೇ ಅಡಗಿಕೊಂಡಿದ್ದರು.ಅಲ್ಲಿಯೇ ಮೊಬೈಲ್ ಬಿಸಾಕಿರುವ ಸಾಧ್ಯತೆ ಇದೆ.ಮೊಬೈಲ್ ಬಚ್ಚಿಟ್ಟಿದ್ದರೆ ಅದನ್ನು ಆನ್ ಮಾಡಿದಾಗ ಲೊಕೇಶನ್ ಪತ್ತೆಯಾಗಲಿದೆ.ಹೀಗಾಗಿ ಮೊಬೈಲ್ ಅನ್ನು ನಾಶ ಮಾಡಿರುವ ಸಾಧ್ಯತೆಯೇ ಅಧಿಕವಾಗಿದೆ.ಈ ಎಲ್ಲದರ ಬಗ್ಗೆಯೂ ಎಸ್‌ಐಟಿ ತನಿಖೆ ನಡೆಸಲಿದೆ.

ಪ್ರಮುಖ ಆರೋಪಿ ತಲೆ ಮರೆಸಿಕೊಂಡಿದ್ದ ಹಿನ್ನೆಲೆಯಲ್ಲಿ ಪ್ರಕರಣದ ತನಿಖೆಯಲ್ಲಿ ಸಾಕ?ಟು ಹಿನ್ನಡೆ ಆಗಿತ್ತು.ಇಂದಿನಿಂದ ಪ್ರಜ್ವಲ್ ರೇವಣ್ಣ ಅಸಲಿ ತನಿಖೆ ಶುರುವಾಗಲಿದೆ.ಈಗಾಗಲೇ ಬಂಧಿತರಾಗಿರುವ ಪ್ರಜ್ವಲ್‌ರನ್ನು ನೇರವಾಗಿ ಎಸ್ ಐಟಿ ಕಚೇರಿಗೆ ಕರೆತಂದಿರುವ ಅಧಿಕಾರಿಗಳು, ಇಂದು ಬೆಳಗ್ಗೆ ಬೌರಿಂಗ್ ಆಸ್ಪತ್ರೆಗೆ ಕರೆದೊಯ್ದು, ಆರೋಪಿಯ ದೈಹಿಕ ಹಾಗೂ ಮಾನಸಿಕ ಆರೋಗ್ಯಗಳನ್ನು ದಾಖಲಿಸಿಕೊಳ್ಳಲಿದ್ದಾರೆ.ಆರೋಪಿ ತನಿಖಾಧಿಕಾರಿಗಳ ಮುಂದೆ ನೀಡುವ ಹೇಳಿಕೆಗಳನ್ನು ಪೂರ್ಣ ಮಾನಸಿಕ ಆರೋಗ್ಯದ ಸ್ಥಿತಿಯಲ್ಲಿ ನೀಡಿದ್ದಾನೆ ಎಂದು ಇವು ಖಚಿತಪಡಿಸಲಿವೆ.

ಈಗಾಗಲೇ ಪ್ರಜ್ವಲ್ ರೇವಣ್ಣ ಬಳಿ ಇರುವ ವಸ್ತುಗಳುನ್ನು, ವಿಮಾನದಲ್ಲಿ ಬಂದ ಲಗ್ಗೇಜ್ ಅನ್ನು ವಶಪಡಿಸಿಕೊಳ್ಳಲಾಗಿದೆ.ಪ್ರಜ್ವಲ್ ಬಳಸುತ್ತಿದ್ದ ಮೊಬೈಲ್ ಸೇರಿ ಆತನ ಬಳಿ ಇದ್ದ ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ.ಆದರೆ ಇದು ಯಾವ ಮೊಬೈಲ್ ಎಂದು ಗೊತ್ತಾಗಿಲ್ಲ. ನಿನ್ನೆ ರಾತ್ರಿ ಎಸ್‌ಐಟಿ ಕಚೇರಿಯಲ್ಲಿಯೇ ಕಳೆದಿರುವ ಪ್ರಜ್ವಲ್ ಅವರನ್ನು ಇಂದು ಆಸ್ಪತ್ರೆಗೆ ಕರೆದೊಯ್ಯಲಾಗುತ್ತಿದ್ದು, ವೈದ್ಯಕೀಯ ಪರೀಕ್ಷೆಯ ಬಳಿಕ ನ್ಯಾಯಾಲಯದ ಮುಂದೆ ಹಾಜರುಪಡಿಸಿ ಪೊಲೀಸ್ ಕಸ್ಟಡಿಗೆ ಪಡೆಯುವ ಸಾಧ್ಯತೆ ಇದೆ.ಪ್ರಜ್ವಲ್ ಪರ ವಕೀಲರು ಈಗಾಗಲೇ ಪೊಲೀಸ್ ಕಸ್ಟಡಿ ನಿರಾಕರಿಸುವ ವಾದಗಳನ್ನು ಸಿದ್ಧ ಮಾಡಿಕೊಂಡಿದ್ದಾರೆ.

## ಪ್ರಜ್ವಲ್‌ಗೆ ಎಸ್‌ಐಟಿ ಡ್ರಿಲ್

ಏಕೆಂದರೆ ವಿಡಿಯೋದಲ್ಲಿ ಓರ್ವ ವ್ಯಕ್ತಿ ಮಾತಾಡಿರುವ ವಾಯ್ಸ್ ಇದೆ. ವಿಡಿಯೋದಲ್ಲಿರುವ ವಾಯ್ಸ್‌ಗೂ ಪ್ರಜ್ವಲ್ ವಾಯ್ಸ್‌ಗೂ ಮ್ಯಾಚ್ ಮಾಡಿ ನೋಡಲು ತೀರ್ಮಾನಿಸಿರುವ ಎಸ್‌ಐಟಿ. ಒಂದು ವೇಳೆ ವಾಯ್ಸ್ ಮ್ಯಾಚ್ ಆದ್ರೆ ಪ್ರಜ್ವಲ್ ರೇವಣ್ಣಗೆ ಸಂಕಷ್ಟ ಕಟ್ಟಿಟ್ಟ ಬುತ್ತಿ.ಇನ್ನು ವಿಡಿಯೋದಲ್ಲಿ ವ್ಯಕ್ತಿಯ ಖಾಸಗಿ ಅಂಗ ಕಾಣಿಸಿರೋದ್ರಿಂದ ಮೆಡಿಕಲ್ ಚೆಕ್ ಅಪ್ ಸಹ ಮಾಡಬಹುದು. ಆರೋಪಿಯ ಮೆಡಿಕಲ್ ಚೆಕ್ ಅಪ್ ಮಾಡಿಸಿ ಡಾಕ್ಟರ್ ಗಳ ಬಳಿ ಸರ್ಟಿಫೈ ಮಾಡಿಸಬಹುದು. ವಿಡಿಯೋದಲ್ಲಿ ಕಾಣಿಸುತ್ತಿರುವ ರೂಮ್ ಸೀಲ್ ಮಾಡಿ ಫೋಟೋ ತೆಗೆದು ಎಫ್‌ಎಸ್‌ಎಲ್‌ಗೆ ಟ್ಯಾಲಿ ಮಾಡಲು ಕಳುಹಿಸಬಹುದು. ಏಕೆಂದರೆ ಫೋಟೋಗ್ರಫಿ ವಿಭಾಗದಲ್ಲಿ ಫೋಟೋಸ್‌ಗಳನ್ನ ಟ್ಯಾಲಿ ಮಾಡಲಾಗುತ್ತೆ.

ಪೆನ್‌ಡ್ರೈವ್ ಪ್ರಕರಣ ಬಯಲಾಗುತ್ತಿದ್ದಂತೆ ದೇಶ ತೊರೆದಿದ್ದ ಪ್ರಜ್ವಲ್ ರೇವಣ್ಣ ಒಟ್ಟು 34 ದಿನಗಳಿಂದ ವಿದೇಶದಲ್ಲಿ ತಲೆಮರೆಸಿಕೊಂಡಿದ್ದ ಪ್ರಜ್ವಲ್. ಪ್ರಜ್ವಲ್ ಹುಡುಕಾಟಕ್ಕಾಗಿ ಎಲ್ಲಾ ಪ್ರಯತ್ನ ಮಾಡಿದ್ದ ಎಸ್‌ಐಟಿ ಟೀಂ.ಆದರೂ

ಮೊದಲನೇ ಪುಟದಿಂದ...

ಸಿಕ್ಕಿರಲಿಲ್ಲ. ಈ ಮಧ್ಯೆ ಜಾಗ ಕೊಟ್ಟವರು, ಹಣಕಾಸಿನ ಸಹಾಯ ಮಾಡಿದವರ ಬಗ್ಗೆ ಮಾಹಿತಿ ಪಡೆಯಲಿದ್ದಾರೆ.ಇಷ್ಟು ದಿನ ಎಲ್ಲೆಲ್ಲಿ ತಲೆಮರೆಸಿಕೊಂಡಿದ್ದ ಎಂಬ ಬಗ್ಗೆ ಮಾಹಿತಿ ಪಡೆಯಲಿದ್ದಾರೆ.ಇಡೀ ಪ್ರಜ್ವಲ್‌ನ ಟ್ರಾವೆಲ್ ಹಿಸ್ಟರಿ ಪಡೆದು ಬಳಿಕ ಯಾರಾರು ಸಹಾಯ ಮಾಡಿದ್ದಾರೆ ಅವರೆಲ್ಲರಿಗೂ ಸಂಕಷ್ಟ ಶುರುವಾಗಬಹುದು. ಒಟ್ಟಿನಲ್ಲಿ ಇಷ್ಟು ದಿನ ನಡೆದಿದ್ದು ಕೇವಲ ಪ್ರಾಥಮಿಕ ತನಿಖೆ.

## ಇಂದು ನಡೆಯಲಿದೆ ಪುರುಷತ್ವ ಪರೀಕ್ಷೆ

ನಂತರ ಹಾಸನ ಸಂಸದರ ನಿವಾಸದಲ್ಲಿ ಸಂಗ್ರಹಿಸಲಾದ ಹಾಸಿಗೆ- ಹೊದಿಕೆ ಇತ್ಯಾದಿಗಳಲ್ಲಿ ಕಂಡುಬಂದಿರುವ ಡಿಎನ್‌ಎಗೂ, ಪ್ರಜ್ವಲ್ ಡಿಎನ್‌ಎಗೂ ಮ್ಯಾಚ್ ಮಾಡಲಾಗುತ್ತದೆ. ಒಟ್ಟು ಮೂರು ಹಂತದಲ್ಲಿ ಪ್ರಜ್ವಲ್ ರೇವಣ್ಣ ವೈದ್ಯಕೀಯ ಪರೀಕ್ಷೆ ನಡೆಯಲಿದೆ.ಈ ಹಿಂದೆಯೂ ಅನೇಕರಿಗೆ ಅತ್ಯಾಚಾರ ಪ್ರಕರಣದಲ್ಲಿ ಪುರುಷತ್ವ ಪರೀಕ್ಷೆ ನಡೆಸಲಾಗಿತ್ತು.ಸ್ವಾಮಿ ನಿತ್ಯಾನಂದ, ಮುರುಘಾ ಶ್ರೀ, ಅಸಾರಾಂ ಬಾಪು ಸೇರಿದಂತೆ ಹಲವರಿಗೆ ಪುರುಷತ್ವ ಪರೀಕ್ಷೆ ನಡೆಸಲಾಗಿತ್ತು.

## ಪ್ರಜ್ವಲ್‌ಗೆ ವೈದ್ಯಕೀಯ ಪರೀಕ್ಷೆ? ಆಸ್ಪತ್ರೆಯಲ್ಲಿ ಪರದಾಟ

ಅದಕ್ಕೂ ಮೊದಲು ವೈದ್ಯಕೀಯ ಪರೀಕ್ಷೆಗೆ ಬೌರಿಂಗ್ ಆಸ್ಪತ್ರೆಗೆ ಕರೆದೊಯ್ಯಲಾಗಿತ್ತು. ಆಸ್ಪತ್ರೆ ತುರ್ತು ನಿಗಾ ಘಟಕದ ಕಟ್ಟಡದಲ್ಲಿ ಬಿಪಿ, ಶುಗರ್, ಪಲ್ಸ್, ಹಾರ್ಟ್ ರೇಟ್, ಯೂರಿನ್, ರಕ್ತ ಪರೀಕ್ಷೆ ನಡೆಸಲಾಯಿತು. ಪ್ರಜ್ವಲ್ ವೈದ್ಯಕೀಯ ಪರೀಕ್ಷೆ ವೇಳೆ, ಬೌರಿಂಗ್ ಆಸ್ಪತ್ರೆ ಬಳಿ ಪೊಲೀಸರ ಬಿಗಿ ಭದ್ರತೆ ಕಲ್ಪಿಸಲಾಗಿತ್ತು. ಕೆಎಸ್ ಆರ್‌ಪಿಯ ಒಂದು ತುಕಡಿ ನಿಯೋಜನೆ ಮಾಡಲಾಗಿತ್ತು.ತುರ್ತು ನಿಗಾ ಘಟಕದ ಮುಂಭಾಗದಲ್ಲಿ ಬ್ಯಾರಿಕೇಡ್ ಅಳವಡಿಸಲಾಗಿತ್ತು. ಇದರಿಂದಾಗಿ ಇತರೆ ರೋಗಿಗಳು ಪರದಾಡುವಂತಾಯಿತು.

## ವಿಶ್ರಾಂತಿಗೆ ತೆರಳಿದ ಎಚ್‌ಡಿಕೆ ಕುಟುಂಬ

ಪತ್ನಿ, ಪುತ್ರ, ಸೊಸೆ, ಮೊಮ್ಮಗನ ಜೊತೆ ರೆಸ್ಟ್‌ಗೆ ಹೋಗಿದ್ದು, ನಾಳೆ ಅಥವಾ ನಾಡಿದ್ದು ವಾಪಸ್ ಆಗುವ ಸಾಧ್ಯತೆ ಇದೆ ಎಂದು ತಿಳಿದುಬಂದಿದೆ.

ಒಂದು ಕಡೆ ಪ್ರಜ್ವಲ್ ರೇವಣ್ಣ ಬಂಧನವಾಗಿದ್ದರೆ, ಮತ್ತೊಂದು ಕಡೆ ಬಸವನಗುಡಿ ಹೆಚ್.ಡಿ.ರೇವಣ್ಣ ನಿವಾಸ ಖಾಲಿ ಖಾಲಿಯಾಗಿದೆ.ಮಾಜಿ ಸಚಿವರ ನಿವಾಸದಲ್ಲಿ ಸದ್ಯ ಯಾರೂ ಇಲ್ಲ. ಇಂದು ಪುತ್ರ ಮತ್ತು ಪತ್ನಿಯ ನಿರೀಕ್ಷಣಾ ಜಾಮೀನು ಅರ್ಜಿ ವಿಚಾರಣೆ ಏನಾಗುತ್ತೋ ಎನ್ನುವ ಚಿಂತೆಯಲ್ಲಿ ರೇವಣ್ಣ ಇದ್ದಾರೆ ಎನ್ನಲಾಗಿದೆ.ಬಸವನಗುಡಿ ನಿವಾಸದಲ್ಲಿ ರೇವಣ್ಣ ಸದ್ಯಕ್ಕೆ ಇಲ್ಲ. ಎಲ್ಲಾ ಬೆಳವಣಿಗೆಗಳನ್ನು ಅಜ್ಞಾತ ಸ್ಥಳದಲ್ಲೇ ಗಮನಿಸುತ್ತಿದ್ದಾರೆ.

## ಬಸ್ ಕಂದಕಕ್ಕೆ ಉರುಳಿ 22 ಮಂದಿ ಸಾವು

ಇದೇ ವೇಳೆ ರಾ?ಟ್ರಪತಿ ದ್ರೌಪದಿ ಮುರ್ಮು ಅವರು ಸಹ ಸಂತಾಪ ಸೂಚಿಸಿದ್ದಾರೆ.

ಜೆಕೆ ರಾಜ್ಯಪಾಲರಿಂದ 5 ಲಕ್ಷ ರೂ. ಪರಿಹಾರ ಘೋಷಣೆ:ಪ್ರಧಾನಿ ನರೇಂದ್ರ ಮೋದಿ ಅವರು ಘೋಷಿಸಿದ ತಲಾ 2 ಲಕ್ಷ ರೂ. ಹೊರತುಪಡಿಸಿ ಜಮ್ಮು ಮತ್ತು ಕಾಶ್ಮೀರದ ಲೆಫ್ಟಿನೆಂಟ್ ಗವರ್ನರ್ ಸಹ ಮೃತರ ಕುಟುಂಬಕ್ಕೆ ತಲಾ 5 ಲಕ್ಷ ರೂ. ಹಾಗೂ ಗಾಯಾಳುಗಳಿಗೆ ತಲಾ 50,000 ಸಾವಿರ ರೂ. ಪರಿಹಾರ ಘೋಷಣೆ ಮಾಡಿದ್ದಾರೆ.

## ಮೂವರಿಗೂ ಇಂದು ಅಗ್ನಿಪರೀಕ್ಷೆ ಖಚಿತ

ರೇವಣ್ಣಗೆ ಜಾಮೀನು ರದ್ದಾಗುವ ಭಯ: ಮೈಸೂರಿನ ಕೆಆರ್ ನಗರದ ಮಹಿಳೆಯ ಅಪಹರಣ ಪ್ರಕರಣದಲ್ಲಿ ಹೆಚ್‌ಡಿ ರೇವಣ್ಣಗೆ ಜಾಮೀನುಸಿಕ್ಕಿದರೂ ಅದನ್ನುಪ್ರಶ್ನಿಸಿಎಸ್‌ಐಟಿ ಹೈಕೋರ್ಟ್‌ಗೆ ಅರ್ಜಿಸಲ್ಲಿಸಿದೆ.ಈ ತನಿಖೆಮುಗಿಯುವವರೆಗೆ ರೇವಣ್ಣಬಂಧನದಲ್ಲೇಮುಂದುವರಿಯಬೇಕು .ಹೀಗಾಗಿ ಜಾಮೀನು ರದ್ದುಪಡಿಸುವಂತೆ ಎಸ್‌ಐಟಿ ಹೈಕೋರ್ಟ್ ಮೊರೆ ಹೋಗಿದೆ.ಈ ಅರ್ಜಿ ವಿಚಾರಣೆ ನ್ಯಾಯಮೂರ್ತಿ ಕೃ?ಣ ಎಸ್ ದೀಕ್ಷಿತ್ ಅವರು ಇರುವ ಹೈಕೋರ್ಟ್ ಪೀಠದಲ್ಲಿ ನಡೆಯಲಿದೆ. ಹೈಕೋರ್ಟ್ ಹೆಚ್‌ಡಿ ರೇವಣ್ಣ ಜಾಮೀನು ರದ್ದುಪಡಿಸಿದರೆಮತ್ತೆ ಜೈಲುಪಾಲಾಗಬಹುದು. ಜಾಮೀನು ರದ್ದತಿಗೆ ನಿರಾಕರಿಸಿದರೆ ರಿಲೀಫ್ ಸಿಕ್ಕಂತೆ. ಇನ್ನು ಈ ಕೇಸನ್ನೇ ರದ್ದುಪಡಿಸಬೇಕೆಂದು ರೇವಣ್ಣ ಸಲ್ಲಿಸಿರುವ ಅರ್ಜಿ ವಿಚಾರಣೆಯೂ ಇಂದು ಹೈಕೋರ್ಟ್‌ನಲ್ಲಿನಡೆಯಲಿದೆ.

ಪ್ರಜ್ವಲ್ ರೇವಣ್ಣ ಕಸ್ಟಡಿ ಇಂದು ನಿರ್ಧಾರಳ: ಈಗಾಗಲೇ ಬಂಧಿತನಾಗಿರುವುದರಿಂದ ಪ್ರಜ್ವಲ್ ರೇವಣ್ಣ ನಿರೀಕ್ಷಣಾ ಜಾಮೀನು ಅರ್ಜಿ ಅನೂರ್ಜಿತಗೊಳ್ಳಲಿದೆ. ಹೀಗಾಗಿ ಪ್ರಜ್ವಲ್ ಪರ ವಕೀಲರು ನಿರೀಕ್ಷಣಾ ಜಾಮೀನು ಅರ್ಜಿ ಹಿಂಪಡೆಯಬಹುದು. ಹಾಗೆಯೇ ಬಂಧನದ 24 ಗಂಟೆಯೊಳಗೆ ಮ್ಯಾಜಿಸ್ಟ್ರೇಟ್ ಮುಂದೆ ಪ್ರಜ್ವಲ್ ಹಾಜರುಪಡಿಸಲಾಗುವುದು. ಪ್ರಜ್ವಲ್‌ರನ್ನ ಕಸ್ಟಡಿಗೆ ಒಪ್ಪಿಸುವಂತೆಎಸ್‌ಐಟಿ ನ್ಯಾಯಾಲಯಕ್ಕೆ ಕೋರಬಹುದು.ನ್ಯಾಯಾಂಗ ಬಂಧನ ವಹಿಸಿದರೆ ಜೈಲು ಸೇರಬೇಕಾಗಬಹುದು.ಹೀಗಾಗಿ ಇವತ್ತು ಎಸ್ ಐಟಿ ಕಸ್ಟಡಿಯೋ, ಜೈಲೋ ಎಂಬುದ?ೇ ಪ್ರಜ್ವಲ್ ಪ್ರಕರಣದಲ್ಲಿ ಇರುವ ಕುತೂಹಲವಾಗಿದೆ.

ಹೀಗೆ ಹೆಚ್‌ಡಿ ರೇವಣ್ಣ ಕುಟುಂಬದ ಮೂವರ ಭವಿ?ವನ್ನು ಇಂದು ಬೆಂಗಳೂರಿನ ಕೋರ್ಟ್‌ಗಳುನಿರ್ಧರಿಸಲಿವೆ. ರೇವಣ್ಣಹಾಗೂ ಕುಟುಂಬದವರಿಗೆಸಂಕ?ಟವೋ, ಪರಿಹಾರವೋ ಕೋರ್ಟ್‌ನಿರ್ಧರಿಸಲಿದೆ.

## ಭವಾನಿಗೆ ಬಂಧನ ಭೀತಿ

ಮೈಸೂರಿನ ಕೆಆರ್ ನಗರದ ಮಹಿಳೆಯ ಅಪಹರಣ ಪ್ರಕರಣದಲ್ಲಿ ಭವಾನಿ ರೇವಣ್ಣ ಬಂಧನದ ಭೀತಿ ಎದುರಿಸುತ್ತಿದ್ದಾರೆ.ಎಸ್‌ಐಟಿ ಭವಾನಿ ರೇವಣ್ಣರನ್ನ ಬಂಧಿಸಿಯೇ ವಿಚಾರಣೆಗೆ ಒಳಪಡಿಸಬೇಕೆಂದು ಹೇಳುತ್ತಿದೆ.ಭವಾನಿ ನಿರೀಕ್ಷಣಾ ಜಾಮೀನು ಅರ್ಜಿಯ ಆದೇಶ ಇಂದು ಹೊರಬೀಳಲಿದೆ.ಬೆಂಗಳೂರಿನ ಜನಪ್ರತಿನಿಧಿಗಳ ವಿಶೇ? ಕೋರ್ಟ್‌ನ ನ್ಯಾಯಾಧೀಶ ಸಂತೋಷ್ ಗಜಾನನಭಟ್ ಅವರುನೀಡುವ ಆದೇಶಭವಾನಿ ಭವಿಷ್ಯ ನಿರ್ಧರಿಸಲಿದೆ.ನಿರೀಕ್ಷಣಾ ಜಾಮೀನು ಅರ್ಜಿ ತಿರಸ್ಕಾರಗೊಂಡ್ರೆಎಸ್‌ಐಟಿಯಿಂದ ಭವಾನಿ ಬಂಧನಕ್ಕೊಳಗಾಗೋ ಸಾಧ್ಯತೆ ಹೆಚ್ಚು.ನಿರೀಕ್ಷಣಾ ಜಾಮೀನು ಸಿಕ್ಕರೆ ಬಂಧನದ ಭೀತಿಯಿಂದ ಭವಾನಿಗೆ ಮುಕ್ತಿ ಸಿಗಬಹುದು.

## ಆಸ್ತಿ ತೆರಿಗೆ ಬಾಕಿದಾರರಿಗೆ ಮತ್ತೆ ಬಿಸಿ ಮುಟ್ಟಿಸಲು ಪ್ಲ್ಯಾನ್

ಒಟ್ಟಿನಲ್ಲಿ ಲೋಕಸಭಾ ಚುನಾವಣೆ ಫಲಿತಾಂಶಕ್ಕಾಗಿ ಕಾದು ಕುಳಿತ ಸರ್ಕಾರ, ಸದ್ದಿಲ್ಲದೇ ಪಾಲಿಕೆ ಬೊಕ್ಕಸ ಏರಿಕೆಗೂ ಸೂಚನೆ ನೀಡಿದೆ.ಪಾಲಿಕೆ ಚುನಾವಣೆಗೆ ಮುಹೂರ್ತ ಫಿಕ್ಸ್ ಆಗೋ ಮೊದಲೇ ಬಾಕಿ ವಸೂಲಿಗೆ ತಯಾರಿ ನಡೆದಿದ್ದು, ಚುನಾವಣಾ ಫಲಿತಾಂಶದ ಬಳಿಕ ಯಾವ ಮಾಲ್, ಅಂಗಡಿ-ಮುಂಗಟ್ಟು ಮಾಲೀಕರಿಗೆ ಪಾಲಿಕೆ ಶಾಕ್ ಕೊಡುತ್ತೆ ಅನ್ನೋದನ್ನ ಕಾದುನೋಡಬೇಕಿದೆ.

## ಬಾಲಕಿ ಮೇಲೆ ಅತ್ಯಾಚಾರ

ಬಾಲಕಿಯ ಕುಟುಂಬ ಶಹೀನ್ ಅವರಿಗಾಗಿ ಕೆಲಸ ಮಾಡಲು ನಗರಕ್ಕೆ ಬದಿತ್ತು. ಬಾಲಕಿ ಉಳಿದಿದ್ದ ಶೆಡ್ ಪಕ್ಕದಲ್ಲಿಯೇ ಶಹೀನ್ ಕುಟುಂಬದ ಶೆಡ್ ಕೂಡ ಇತ್ತು. ಮೇ.17ರ ರಾತ್ರಿ ಶಹೀನ್ ಪತ್ನಿ ಮೀಮ್ ಮಧ್ಯರಾತ್ರಿ 12.30ರ ಸುಮಾರಿಗೆ ಬಾಲಕಿಗೆ ಟೀ ಮಾಡುವಂತೆ ತಿಳಿಸಿದ್ದಾಳೆ. ಈ ವೇಳೆ ಬಾಲಕಿ ಶೆಡ್ ಒಳಗೆ ಹೋದಾಗ ಮೀಮ್ ಹೊರಗಿಂದ ಬಾಗಿಲನ್ನು ಲಾಕ್ ಮಾಡಿದ್ದಾಳೆ. ಬಾಲಕಿಯ ಪ್ರತಿರೋಧದ ನಡುವೆಯೂ ಶಾಹೀನ್ ಆಕೆಯ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ್ದಾನೆಂದು ದೂರಿನಲ್ಲಿ ತಿಳಿಸಲಾಗಿದೆ.ನನ್ನ ಬೆಳಿಗ್ಗೆ ಇಂದು ಬೆಳಿಗ್ಗೆ ಘಟನೆ ಬಗ್ಗೆ ತಿಳಿಸಿದಳು. ಕೂಡಲೇ ನಾವು ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದವು. ಎಫ್‌ಐಆರ್ ದಾಖಲಾಗಿದ್ದರೂ ಪೊಲೀಸರು ಸ್ಥಳಕ್ಕೆ ಬರುವಷ್ಟರಲ್ಲಿ ಆರೋಪಿಗಳು ಸ್ಥಳದಿಂದ ಪರಾರಿಯಾಗಿದ್ದಾರೆ. ಮೀಮ್ ಮೇಲೆ ಪೊಲೀಸರು ಎಫ್‌ಐಆರ್ ದಾಖಲಿಸಬೇಕೆಂದು ನಾವು ಬಯಸಿದ್ದೆವು ಆದರೆ ಪೊಲೀಸರು ಒಪ್ಪಲಿಲ್ಲ. ಆರೋಪಿಯ ಸಹೋದರ ಹಸನ್ ನಮಗೆ ಹಣ ನೀಡುತ್ತೇನೆ, ದೂರು ಹಿಂಪಡೆಯಿರಿ ಎಂದು ಒತ್ತಡ ಹೇರುತ್ತಿದ್ದಾರೆ. ನಮಗೆ ನ್ಯಾಯ ಬೇಕು ಎಂದು ಸಂತ್ರಸ್ತೆ ಬಾಲಕಿ. ತಂದೆ ಹೇಳಿದ್ದಾರೆ.

ಘಟನೆಯ ಬಗ್ಗೆ ಪ್ರತಿಕ್ರಿಯೆ ನೀಡಿರುವ ಪೊಲೀಸರು ಆರೋಪಿಯ ವಿರುದ್ಧ ಪೋಕ್ಸೊ ಕಾಯ್ದೆಯಡಿ ಪ್ರಕರಣ ದಾಖಲಿಸಲಾಗಿದೆ, ಶೀಘ್ರದಲ್ಲೇ ಬಂಧಿಸಲಾಗುವುದು ಎಂದು ಹೇಳಿದ್ದಾರೆ.

ವಲಸೆ ಕಾರ್ಮಿಕರ ಕಲ್ಯಾಣಕ್ಕಾಗಿ ಕೆಲಸ ಮಾಡುವ ಸ್ವರಾಜ್ ಇಂಡಿಯಾದ ಆರ್ ಕಲೀಮುಲ್ಲಾ ಮಾತನಾಡಿ, ಪೊಲೀಸರು ವಲಸೆ ಕಾರ್ಮಿಕರ ಶೆಡ್ ಗಳ ಮೇಲೆ ನಿಗಾ ಇಡಬೇಕು ಮತ್ತು ಅವರ ಸುರಕ್ಷತೆಯನ್ನು ಖಚಿತಪಡಿಸಬೇಕು ಎಂದು ಆಗ್ರಹಿಸಿದ್ದಾರೆ.

## ಜಾತ್ರೆಯಲ್ಲಿ ಪ್ರಸಾದ ಸೇವಿಸಿ 50ಕ್ಕೂ ಹೆಚ್ಚು ಜನ ಅಸ್ವಸ್ಥ; ಆಸ್ಪತ್ರೆಗೆ ದಾಖಲು

**ಬೆಳಗಾವಿ:** ಜಾತ್ರೆಯಲ್ಲಿ ಪ್ರಸಾದ ಸೇವಿಸಿ 50ಕ್ಕೂ ಹೆಚ್ಚು ಜನ ಅಸ್ವಸ್ಥರಾದ ಘಟನೆ ಬೆಳಗಾವಿ ಜಿಲ್ಲೆಯ ಚಿಕ್ಕೋಡಿ ತಾಲೂಕಿನ ಕೆರೂರು ಗ್ರಾಮದಲ್ಲಿ ನಡೆದಿದೆ. 30 ಜನರಿಗೆ ಚಿಕ್ಕೋಡಿ ಸರ್ಕಾರಿ ಆಸ್ಪತ್ರೆಯಲ್ಲಿ, 10 ಜನರಿಗೆ ಕೆರೂರಿನ ಅಂಗವಾಡಿಯಲ್ಲಿ ಹಾಗೂ 10 ಜನರಿಗೆ ಯಕ್ಸಂಬಾ ಸರ್ಕಾರಿ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗಿದೆ. ಘಟನೆ ಹಿನ್ನಲೆ ವೈದ್ಯಕೀಯ ತಂಡ ಗ್ರಾಮದಲ್ಲೇ ಬಿಡು ಬಿಟ್ಟಿದೆ.

ಘಟನೆ ವಿವರ

ಕೆರೂರು ಗ್ರಾಮದ ಬಾಳುಮಾಮಾ ಜಾತ್ರೆಯಲ್ಲಿ ಸಾವಿರಾರು ಜನ ಬುಧವಾರ ಪ್ರಸಾದ ಸೇವಿಸಿದ್ದರು.ಸಂಜೆ ಊಟ ಮಾಡಿದ ಬಳಿಕ ವಾಂತಿ-ಭೇದಿ ಶುರುವಾಗಿದೆ. ಇದು ತಿಳಿಯದೇ ಮಧ್ಯಾಹ್ನ ಉಳಿದಿದ್ದ ಅಡುಗೆಯನ್ನು 200ಕ್ಕೂ ಹೆಚ್ಚು ಜನ ರಾತ್ರಿಯೂ ಸೇವಿಸಿದ್ದರು ಎನ್ನಲಾಗಿದೆ.ಇನ್ನು ಅಸ್ವಸ್ಥರಾದವರಿಗೆ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ.ಮುನ್ನೆಚ್ಚರಿಕಾ ಕ್ರಮವಾಗಿ ವೈದ್ಯಕೀಯ ತಂಡ ಗ್ರಾಮದಲ್ಲೇ ಬಿಡುಬಿಟ್ಟಿದೆ.

ಇದೇ ಮೇ.22 ರಂದು ಜಿಲ್ಲೆಯ ಸವದತ್ತಿ ತಾಲೂಕಿನ ಹೂಲಿಕಟ್ಟಿ ಗ್ರಾಮದಲ್ಲಿ ನಡೆದ ಬೀರೇಶ್ವರ, ಕರೆಮ್ಮ ಜಾತ್ರೆಯಲ್ಲಿ ಪ್ರಸಾದ ಸೇವಿಸಿದ್ದ 46 ಜನ ಭಕ್ತರು ಅಸ್ವಸ್ಥಗೊಂಡಿದ್ದು, ಐವರ ಸ್ಥಿತಿ ಗಂಭೀರವಾಗಿತ್ತು.ಪ್ರಸಾದ, ಮನೆಯಲ್ಲಿ ಮಾವಿನ ಹಣ್ಣಿನ ಶಿಖರಣೆ ಸೇವಿಸಿದ್ದವರಲ್ಲಿ ಏಕಾಏಕಿ ವಾಂತಿ-ಭೇದಿ ಕಾಣಿಸಿಕೊಂಡು ಅಸ್ವಸ್ಥಗೊಂಡಿದ್ದರು. ಬಳಿಕ ಅಸ್ವಸ್ಥಗೊಂಡವರನ್ನು ಸವದತ್ತಿ ಸಾರ್ವಜನಿಕ ಆಸ್ಪತ್ರೆ ಹಾಗೂ ಬೆಳಗಾವಿ ಜಿಲ್ಲಾಸ್ಪತ್ರೆಗಳಲ್ಲಿ ದಾಖಲಿಸಿ ಚಿಕಿತ್ಸೆ ಕೊಡಿಸಲಾಗಿತ್ತು.ತೀವ್ರ ಅಸ್ವಸ್ಥಗೊಂಡ ಐವರನ್ನ ಧಾರವಾಡ ಜಿಲ್ಲಾಸ್ಪತ್ರೆಗೆ ರವಾನಿಸಿ ಚಿಕಿತ್ಸೆ ಕೊಡಿಸಲಾಗುತ್ತಿದೆ. ತಾಲೂಕು ವೈದ್ಯರು ಅಹಿತಕರ ಘಟನೆ ಆಗದಂತೆ ಗ್ರಾಮದಲ್ಲಿ ಕ್ಯಾಂಪ್ ತೆರೆದು ಪ್ರತಿಯೊಬ್ಬರ ಆರೋಗ್ಯ ತಪಾಸಣೆ ಮಾಡಿದ್ದರು.

# ಸ್ಕಿಜೋಫ್ರೀನಿಯಾ ಜಾಗೃತಿ ಜಾಥಾಗೆ ಚಾಲನೆ

**ರಾಮನಗರ:** ವಿಶ್ವ ಆರೋಗ್ಯ ಸಂಸ್ಥೆಯ ಪ್ರಕಾರ ಸ್ಕಿಜೋಫ್ರೀನಿಯಾ ಖಾಯಿಲೆಯಿಂದ ಮೃತ್ಯು ಸಂಭವ ಮತ್ತು ದೌರ್ಜನ್ಯವು ಸಮಾಜದ ಇತರೆ ಖಾಯಿಲೆಗಳುಳ್ಳ ಜನರಲ್ಲಿ ಹೋಲಿಸಿದರೆ 2-3 ಪಟ್ಟು ಹೆಚ್ಚಿನ ಮಟ್ಟದಲ್ಲಿ ಕಂಡುಬಂದಿದೆ, ಆತ್ಮಹತ್ಯೆ ಪ್ರಕರಣವು ಸಹ ಸ್ಕಿಜೋಫ್ರೀನಿಯಾ ಖಾಯಿಲೆಯಿಂದ ಬಳಲುತ್ತಿರುವವರಲ್ಲಿ ಸುಮಾರು 12 ಪಟ್ಟು ಅಧಿಕವಾಗಿ ಕಂಡುಬಂದಿದೆ ಸ್ಕಿಜೋಫ್ರೀನಿಯಾ ಎಂಬ ಮಾನಸಿಕ ಖಾಯಿಲೆಯನ್ನು ಚಿತ್ತವಿಕಲತೆ, ಚಿತ್ತಚಂಚಲತೆ ಅಥವಾ ಮಾನಸಿಕ ಅಸ್ವಸ್ಥತೆ ಎಂದು ಗುರುತಿಸಲಾಗಿದೆ. ಇಂತಹ ಸಮಸ್ಯೆಗಳುಳ್ಳ ವ್ಯಕ್ತಿಗಳನ್ನು ಗುರುತಿಸಿ ಆಪ್ತ ಸಮಾಲೋಚನೆ ಮೂಲಕ ಆತ್ಮಸ್ಥೈರ್ಯ ತುಂಬಿ ಚಿಕಿತ್ಸೆ ನೀಡುವ ಮೂಲಕ ಗುಣ ಪಡಿಸಬಹುದು ಎಂದು ಜಿಲ್ಲಾ ಮಾನಸಿಕ ಆರೋಗ್ಯಾಧಿಕಾರಿ ಡಾ. ಸಿ. ಮಂಜುನಾಥ್ ಅವರು ತಿಳಿಸಿದರು.

ಅವರು ಇಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಮಾನಸಿಕ ಆರೋಗ್ಯ ಘಟಕ, ವಿವಿಧ ಅಭಿವೃದ್ಧಿ ಇಲಾಖೆಗಳು ಹಾಗೂ ಸ್ವಯಂ ಸೇವಾ ಸಂಸ್ಥೆಗಳ ಸಂಯುಕ್ತ ಆಶ್ರಯದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಚೇರಿ ಆವರಣದಲ್ಲಿ ವಿಶ್ವ ಸ್ಕಿಜೋಫ್ರೀನಿಯಾ ದಿನದ ಅಂಗವಾಗಿ ಆಯೋಜಿಸಲಾಗಿದ್ದ ಜಾಗೃತಿ ಜಾಥಾ ಕಾರ್ಯಕ್ರಮದಲ್ಲಿ ಮಾತನಾಡಿದರು.

ತಾವೆಲ್ಲರೂ ಜಾಗೃತರಾಗಿ ಸ್ಕಿಜೋಫ್ರೀನಿಯಾದಿಂದ



ಬಳಲುತ್ತಿರುವವರಿಗೆ ಕುಟುಂಬದ ಸಹಕಾರ ಮತ್ತು ಆರೈಕೆಯಿಂದಾಗಿ ವ್ಯಕ್ತಿಯೂ ಬೇಗ ಚೇತರಿಸಿಕೊಳ್ಳುವಂತೆ ಮಾಡುವ ಮೂಲಕ ಸ್ಕಿಜೋಫ್ರೀನಿಯಾ ಸಮಾಜದ ದಯಾಳುತನದ ಶಕ್ತಿಯ ಆಚರಣೆಯಾಗಬೇಕೆಂದು ತಿಳಿಸಿದರು. ಮನೋರೋಗ ತಜ್ಞರಾದ ಡಾ. ಆದರ್ಶ ಎ.ಎಂ ಅವರು ಮಾತನಾಡಿ, ಸ್ಕಿಜೋಫ್ರೀನಿಯಾ ರೋಗಿಗಳಲ್ಲಿ ಯಾರಿಗೂ ಕಾಣದ ವಸ್ತುಗಳು ಮತ್ತು ವ್ಯಕ್ತಿಗಳು ಖಾಯಿಲೆ ಇರುವ ವ್ಯಕ್ತಿಗಳಿಗೆ ಮಾತ್ರ ಕಾಣಿಸುವುದು. ಯಾರಿಗೂ ಕೇಳಿಸದ ಶಬ್ಧಗಳು ಮತ್ತು ಧ್ವನಿಗಳು, ಮಾತುಗಳು ಖಾಯಿಲೆ ಇರುವ ವ್ಯಕ್ತಿಗೆ ಮಾತ್ರ ಕಾಣಿಸುವುದು. ಅತಿ ಹೆಚ್ಚು ಅನಿಸುವಷ್ಟು ಅನುಮಾನ, ವೈಯಕ್ತಿಕ ಸ್ವಚ್ಛತೆಯ ಬಗ್ಗೆ ಗಮನ ಕಡಿಮೆಯಾಗುವುದು ಅಥವಾ ವೈಯಕ್ತಿಕ ಸ್ವಚ್ಛತೆಯ ಬಗ್ಗೆ ಅರಿವೇ ಇಲ್ಲದಿರುವ ಸ್ಥಿತಿ ಮಾನಸಿಕ ಅಸ್ವಸ್ಥತೆ ಸಾಮಾನ್ಯವಾಗಿ ಪ್ರೌಢಾವಸ್ಥೆಯಲ್ಲಿ ಹಾಗೂ ಪ್ರೌಢಾವಸ್ಥೆಯ ಆರಂಭದ ಸಮಯದಲ್ಲಿ ಕಂಡು ಬರುತ್ತದೆ, ಮಕ್ಕಳಲ್ಲಿ ಅತೀ ಕಡಿಮೆ ಪ್ರಮಾಣದಲ್ಲಿ ಕಂಡುಬರುತ್ತದೆ ಎಂದರು.

ರೋಗ ಲಕ್ಷಣವು ಸಾಮಾನ್ಯವಾಗಿ ವಾರಗಳ ಹಾಗೂ ತಿಂಗಳುಗಳು ಕಳೆದಂತೆ ನಿಧಾನವಾಗಿ ಹೆಚ್ಚಾಗುತ್ತದೆ. ದಿನಕಳೆದಂತೆ ಭ್ರಮೆ, ತಪ್ಪು ಗ್ರಹಿಕೆ, ಗೊಂದಲದ ಯೋಚನೆಗಳು, ತರ್ಕ ಸಮಸ್ಯೆ, ಅಸಹಜ ನಡವಳಿಕೆ ಕಾಣಿಸಿಕೊಳ್ಳುತ್ತವೆ. ಆದ್ದರಿಂದ ಸಾರ್ವಜನಿಕರು ಇಂತಹ ವ್ಯಕ್ತಿಗಳು ಕಂಡು ಬಂದ ತಕ್ಷಣ ಅವರ ಕುಟುಂಬಸ್ಥರಿಗೆ ಮಾಹಿತಿ ನೀಡಿ ಹತ್ತಿರದ ಸರ್ಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುವಂತೆ ತಿಳಿಸಿದರು.

## ವಿಧಾನ ಪರಿಷತ್ ಚುನಾವಣೆ- ಜೂ.3ಕ್ಕೆ ವಿಶೇಷ ಸಾಂದರ್ಭಿಕ ರಜೆ

**ಮಂಡ್ಯ:** ಕರ್ನಾಟಕ ವಿಧಾನ ಪರಿಷತ್ತಿಗೆ ದಕ್ಷಿಣ ಶಿಕ್ಷಕರ ಕ್ಷೇತ್ರ, ನೈರುತ್ಯ ಪದವೀಧರರ ಕ್ಷೇತ್ರ, ಬೆಂಗಳೂರು ಪದವೀದರ ಕ್ಷೇತ್ರ, ಈಶಾನ್ಯ ಪದವೀದರ ಕ್ಷೇತ್ರ, ಆಗ್ನೇಯ ಶಿಕ್ಷಕರ ಕ್ಷೇತ್ರ, ಹಾಗೂ ನೈರುತ್ಯ ಶಿಕ್ಷಕರ ಕ್ಷೇತ್ರಗಳಿಂದ ನಡೆಯುವ ದ್ವೈವಾರ್ಷಿಕ ಚುನಾವಣೆಯ ಮತದಾನವು ಜೂನ್ 3 ರಂದು ಬೆಳಿಗ್ಗೆ 8 ಗಂಟೆಯಿಂದ ಸಂಜೆ 4 ಗಂಟೆಯವರೆಗೆ ನಡೆಯಲಿದೆ, ಮತದಾರರ ಪಟ್ಟಿಯಲ್ಲಿ ಹೆಸರು ನೋಂದಾಯಿಸಿರುವ ಮತದಾರರು ಕಡ್ಡಾಯವಾಗಿ ಮತದಾನ ಮಾಡುವಂತೆ ಕೋರಿದೆ.

ಸರ್ಕಾರಿ ಹಾಗೂ ಖಾಸಗಿ ಶಾಲಾ ಕಾಲೇಜುಗಳು, ಅನುದಾನಿತ ಹಾಗೂ ಅನುದಾನ ರಹಿತ ವಿದ್ಯಾ ಸಂಸ್ಥೆಗಳು, ಎಲ್ಲಾ ಶೈಕ್ಷಣಿಕ



ಸಂಸ್ಥೆಗಳು, ರಾಜ್ಯ ಹಾಗೂ ಕೇಂದ್ರ ಸರ್ಕಾರದ ಕಛೇರಿಗಳು, ರಾಷ್ಟ್ರೀಕೃತ ಹಾಗೂ ಇತರ ಬ್ಯಾಂಕುಗಳು, ಕೇಂದ್ರ ಹಾಗೂ ರಾಜ್ಯ ಸರ್ಕಾರದ ಕಾರ್ಖಾನೆಗಳು, ಉಳಿದ ಕೈಗಾರಿಕೆ ಸಂಸ್ಥೆಗಳು ಹಾಗೂ ಸಹಕಾರ ರಂಗದ ಸಂಘ ಸಂಸ್ಥೆಗಳಲ್ಲಿ ಎಲ್ಲಾ ವ್ಯವಹಾರಿಕ ಸಂಸ್ಥೆಗಳಲ್ಲಿ ಔದ್ಯಮಿಕ ಸಂಸ್ಥೆಗಳಲ್ಲಿ ಮತ್ತು ಇತರ ಎಸ್ಟಾಬ್ಲಿಷ್‌ಮೆಂಟ್‌ಗಳಲ್ಲಿ ಖಾಯಂ ಆಗಿ ಅಥವಾ ದಿನಗೂಲಿ ಮೇಲೆ ಕೆಲಸ ನಿರ್ವಹಿಸುವ ಪದವೀಧರರು ಹಾಗೂ ಶಿಕ್ಷಕರು ಮತದಾನ ಮಾಡಲು ಅನುಕೂಲವಾಗುವಂತೆ ಮತದಾರರಿಗೆ ಜೂನ್ 03 ರಂದು ವಿಶೇಷ ಸಾಂದರ್ಭಿಕ ರಜೆಯನ್ನು ಮಂಜೂರು ಮಾಡುವಂತೆ ಸರ್ಕಾರದ ಆಧೀನ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರ್ಜಿ ಸಲ್ಲಿಸುವ ಅವಧಿ ವಿಸ್ತರಣೆ

**ಬೆಂಗಳೂರು:** ಕರ್ನಾಟಕ ಲೋಕಸೇವಾ ಆಯೋಗವು ಅಧಿಸೂಚಿಸಿದ್ದ ಆಯುಷ್ ಇಲಾಖೆಯಲ್ಲಿನ ಹೊಮಿಯೋಪತಿ ಸಹ ಪ್ರಾಧ್ಯಾಪಕರು-01 (ಅನಾಟಮಿ) (ಬ್ಯಾ.ಲಾ) ಹುದ್ದೆಗೆ ಅರ್ಜಿ ಸಲ್ಲಿಸುವ ಅವಧಿಯನ್ನು ಮೇ 31 ರವರೆಗೆ ವಿಸ್ತರಿಸಲಾಗಿದೆ. ದಿನಾಂಕ: 15-03-2024ರಂದು ಅಧಿಸೂಚಿಸಲಾಗಿದ್ದ ಆಯುಷ್ ಇಲಾಖೆಯಲ್ಲಿನ ಹೊಮಿಯೋಪತಿ ಸಹ ಪ್ರಾಧ್ಯಾಪಕರು-01 (ಅನಾಟಮಿ) (ಬ್ಯಾ.ಲಾ) ಹುದ್ದೆಗೆ ಅರ್ಜಿ ಸಲ್ಲಿಸಲು 21-05-2024 ಕೊನೆಯ ದಿನಾಂಕವಾಗಿತ್ತು. ಅಭ್ಯರ್ಥಿಗಳು ಆಯೋಗಕ್ಕೆ ಮನವಿಯನ್ನು ಸಲ್ಲಿಸಿ, ಲೋಕಸಭಾ ಚುನಾವಣೆ -2024ರ ಹಿನ್ನಲೆಯಲ್ಲಿ ಕೆಲವು ಇಲಾಖೆಗಳಲ್ಲಿನ ಅಧಿಕಾರಿಗಳ ಅಲಭ್ಯತೆಯಿಂದಾಗಿ ಅಗತ್ಯ ದಾಖಲೆಗಳನ್ನು ನಿಗದಿತ ಸಮಯದೊಳಗೆ ಪಡೆಯಲು ಸಾಧ್ಯವಾಗಿರುವುದಿಲ್ಲ. ಆದ್ದರಿಂದ ಕೊನೆಯ ದಿನಾಂಕವನ್ನು ವಿಸ್ತರಿಸುವಂತೆ ಕೋರಿದ್ದು, ಅಭ್ಯರ್ಥಿಗಳ ಹಿತದೃಷ್ಟಿಯಿಂದ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕವನ್ನು ವಿಸ್ತರಿಸಲಾಗಿದೆ. ಅಧಿಸೂಚನೆಯಲ್ಲಿನ ಇತರೆ ಷರತ್ತು/ಸೂಚನೆಗಳಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲವೆಂದು ಕರ್ನಾಟಕ ಲೋಕಸೇವಾ ಆಯೋಗದ ಕಾರ್ಯದರ್ಶಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪರೀಕ್ಷಾ ಅವಧಿಯಲ್ಲಿ ಉಚಿತವಾಗಿ ಪ್ರಯಾಣಿಸಲು ಅವಕಾಶ

**ಬೆಂಗಳೂರು:** ಪ್ರಸಕ್ತ ಶೈಕ್ಷಣಿಕ ವರ್ಷದಲ್ಲಿ ಜೂನ್ 7 ರಿಂದ 14 ರವರೆಗೆ ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳ ಪರೀಕ್ಷೆ-2 ನಡೆಯಲಿದ್ದು, ಪರೀಕ್ಷೆಯು ಬೇರೆ ಬೇರೆ ಪರೀಕ್ಷಾ ಕೇಂದ್ರಗಳಲ್ಲಿ ಇರುವುದರಿಂದ ಸಂಸ್ಥೆಯು ವಿದ್ಯಾರ್ಥಿಗಳ ಹಿತವನ್ನು ಗಮನದಲ್ಲಿಟ್ಟುಕೊಂಡು ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳಿಗೆ ದಿನಾಂಕ ಜೂನ್ 7 ರಿಂದ 14 ರವರೆಗೆ ಪರೀಕ್ಷೆಗಳು ನಡೆಯುವ ದಿನಾಂಕಗಳಂದು ಪರೀಕ್ಷೆಗೆ ಹಾಜರಾಗಲು ವಾಸಸ್ಥಳದಿಂದ



ನಿಯೋಜಿತ ಪರೀಕ್ಷಾ ಕೇಂದ್ರದವರೆಗೆ ಹೋಗುವಾಗ ಮತ್ತು ಹಿಂದಿರುಗುವಾಗ ಸಂಸ್ಥೆಯ ಸಾಮಾನ್ಯ ಸೇವೆಗಳಲ್ಲಿ ಎಸ್. ಎಸ್.ಎಲ್.ಸಿ ಪರೀಕ್ಷಾ ಪ್ರವೇಶ ಪತ್ರವನ್ನು ತೋರಿಸಿ, ಉಚಿತವಾಗಿ ಪ್ರಯಾಣಿಸಲು ಅವಕಾಶ ಕಲ್ಪಿಸಲಾಗಿದೆ.ಎಸ್.ಎಸ್.ಎಲ್.ಸಿ ಪರೀಕ್ಷೆ-02 ರ ದಿನಾಂಕಗಳಂದು ಪರೀಕ್ಷಾ ಕೇಂದ್ರಗಳ ಮಾರ್ಗಗಳಲ್ಲಿ ಕಡ್ಡಾಯವಾಗಿ ಎಲ್ಲಾ ಮಾರ್ಗಗಳನ್ನು, ಸುತ್ತುವಳಿಗಳನ್ನು ಕಾರ್ಯಾಚರಣೆಗೊಳಿಸಲಾಗುವುದು. ಹೆಚ್ಚುವರಿ ಸುತ್ತುವಳಿಗಳ ಕಾರ್ಯಾಚರಣೆಯ ಅಗತ್ಯತೆ ಕಂಡುಬಂದಲ್ಲಿ ಕಾರ್ಯಾಚರಣೆ ಮಾಡಲಾಗುವುದು. ಪರೀಕ್ಷಾ ಕೇಂದ್ರಗಳ ಬಳಿ ವಿದ್ಯಾರ್ಥಿಗಳು/ಪೊಷಕರು ಕೋರಿಕೆ ನಿಲುಗಡೆ ಕೋರಿದಲ್ಲಿ, ಕೋರಿಕೆ ನಿಲುಗಡೆ ನೀಡಲು ಕ್ರಮ ಕೈಗೊಳ್ಳಲಾಗಿದೆ. ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯು ವಿದ್ಯಾರ್ಥಿ ಸಮುದಾಯದ ಹಿತವನ್ನು ಗಮನದಲ್ಲಿಟ್ಟುಕೊಂಡು ರಿಯಾಯಿತಿ ದರದಲ್ಲಿ ವಿದ್ಯಾರ್ಥಿ ಪಾಸುಗಳನ್ನು ವಾಸಸ್ಥಳದಿಂದ ಶಾಲಾ/ಕಾಲೇಜಿಗೆ ಪ್ರಯಾಣಿಸಲು ಅವಕಾಶ ಕಲ್ಪಿಸಿ ವಿತರಣೆ ಮಾಡುತ್ತಿದೆ ಎಂದು ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯ ಸಾರ್ವಜನಿಕ ಸಂಪರ್ಕಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿದ್ಯಾರ್ಥಿಗಳಿಗೆ ಬಸ್ ಪಾಸ್ ವಿತರಣೆ

**ಬೆಂಗಳೂರು:** ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯು ಸರ್ಕಾರದ ನಿರ್ದೇಶನದಂತೆ ಉಚಿತ/ ರಿಯಾಯಿತಿ ದರದಲ್ಲಿ ವಿದ್ಯಾರ್ಥಿ ಪಾಸುಗಳನ್ನು ವಿತರಣೆ ಮಾಡುತ್ತಿದೆ. 2024-25 ನೇ ಸಾಲಿನ ವಿದ್ಯಾರ್ಥಿ ಪಾಸಿಗಾಗಿ ಮೇ 29 ರಿಂದ ಆನ್‌ಲೈನ್ ಮೂಲಕ ಅರ್ಜಿ ಸ್ವೀಕರಿಸಿ, ಜೂನ್ 1 ರಿಂದ ವಿದ್ಯಾರ್ಥಿ ಪಾಸುಗಳನ್ನು ಬೆಂಗಳೂರು ಒನ್ ಕೇಂದ್ರಗಳ ಮೂಲಕ ವಿತರಣೆ ಮಾಡಲಾಗುವುದು. 2024-25ನೇ ಸಾಲಿನ ವಿದ್ಯಾರ್ಥಿ ರಿಯಾಯಿತಿ ಪಾಸಿನ ಆನ್‌ಲೈನ್ ಅರ್ಜಿಯು ಸೇವಾಸಿಂಧು ಪೋರ್ಟಲ್ https://sevasindhu.karnataka.gov.inನಲ್ಲಿ ಲಭ್ಯವಿರುತ್ತದೆ. ವಿದ್ಯಾರ್ಥಿಗಳು ಬೆಂಗಳೂರು ಒನ್ ಕೇಂದ್ರಗಳ ಮೂಲಕ ವಿದ್ಯಾರ್ಥಿ ಪಾಸಿಗಾಗಿ ಅರ್ಜಿಯನ್ನು ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ. ವಿದ್ಯಾರ್ಥಿ ಪಾಸುಗಳನ್ನು ಬೆಳಿಗ್ಗೆ 08 ಗಂಟೆಯಿಂದ ಸಂಜೆ 06.30 ಗಂಟೆಯವರೆಗೆ ವಾರದ ಎಲ್ಲಾ ದಿನಗಳಲ್ಲಿ ಬೆಂಗಳೂರು ಒನ್ ಕೇಂದ್ರಗಳಲ್ಲಿ ಹಾಗೂ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯ ಕೆಂಪೇಗೌಡ ಬಸ್‌ನಿಲ್ದಾಣ, ಕೆಂಗೇರಿ ಟಿಟಿಎಂಸಿ, ಹೊಸಕೋಟೆ, ಎಲೆಕ್ಟ್ರಾನಿಕ್ ಸಿಟಿ ಘಟಕ -19, ಶಾಂತಿನಗರ ಟಿಟಿಎಂಸಿ ಹಾಗೂ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ಆನೇಕಲ್ ಬಸ್ ನಿಲ್ದಾಣದಲ್ಲಿ ವಿತರಿಸಲಾಗುವುದು.ಶಕ್ತಿ ಯೋಜನೆಯಡಿ ಕರ್ನಾಟಕ ರಾಜ್ಯದ ವಿದ್ಯಾರ್ಥಿನಿಯರಿಗೆ ಸಂಸ್ಥೆಯ ಸಾಮಾನ್ಯ ಸೇವೆಗಳಲ್ಲಿ ಉಚಿತ ಪ್ರಯಾಣ ಸೌಲಭ್ಯ ಕಲ್ಪಿಸಿದ್ದು, ಅದರಂತೆ ಕರ್ನಾಟಕ ರಾಜ್ಯದ ವಿದ್ಯಾರ್ಥಿನಿಯರು ಉಚಿತ ಪ್ರಯಾಣ ಸೌಲಭ್ಯ ಪಡೆಯಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಸಂಸ್ಥೆಯ ದೂರವಾಣಿ ಸಂಖ್ಯೆ 08022483777 ಗೆ ಸಂಪರ್ಕಿಸಬಹುದಾಗಿದೆ ಹಾಗೂ ಸಂಸ್ಥೆಯ ಜಾಲತಾಣದ ಮೂಲಕ ಮಾಹಿತಿ ಪಡೆಯಬಹುದಾಗಿದೆ ಎಂದು ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯ ಸಾರ್ವಜನಿಕ ಸಂಪರ್ಕಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬದುಕಿಗೆ ಬೆಳಕು ಕೊಡುವ ಶಕ್ತಿ ಧರ್ಮಕ್ಕೆ ಇದೆ

**ಶಿವಮೊಗ್ಗ:** ಮನುಷ್ಯನ ಉಜ್ವಲ ಭವಿಷ್ಯಕ್ಕೆ ಧರ್ಮಾಚರಣೆ ಅಗತ್ಯ ಇದೆ. ಆಡುವ ಮಾತು ಧರ್ಮವಲ್ಲ. ಆಡಿದಂತೆ ನಡೆಯುವುದೇ ನಿಜವಾದ ಧರ್ಮ. ಬದುಕಿಗೆ ಬೆಳಕು ಕೊಡುವ ಶಕ್ತಿ ಧರ್ಮಕ್ಕೆ ಇದೆ ಹೊರತು ಬೇರೆ ಯಾವುದಕ್ಕೂ ಇಲ್ಲವೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಗುರುವಾರ ತಾಲೂಕಿನ ಬಿ ಬೀರನಹಳ್ಳಿ ಗ್ರಾಮದಲ್ಲಿ ಜರುಗಿದ ಇಷ್ಟಲಿಂಗ ಪೂಜೆ ಹಾಗೂ ಧರ್ಮ ಜಾಗೃತಿ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು. ವೀರಶೈವ ಧರ್ಮ ಅತ್ಯಂತ ಪ್ರಾಚೀನ ಧರ್ಮವಾಗಿದ್ದು ಇದಕ್ಕೊಂದು ಭವ್ಯ ಪರಂಪರೆ ಇತಿಹಾಸ ಇದೆ. ಪರಶಿವನ ಆದೇಶದಂತೆ ಶ್ರೀ ಜಗದ್ಗುರು ರೇಣುಕಾದಿ ಪಂಚಾಚಾರ್ಯರು ಕೊಲ್ಲಿಪಾಕಿ ಸೋಮೇಶ್ವರಾದಿ ಪಂಚ ಶಿವಲಿಂಗಗಳಿಂದ ಅವತರಿಸಿ ಭೂಮಂಡಲದಲ್ಲಿ ವೀರಶೈವ ಧರ್ಮವನ್ನು ಸ್ಥಾಪಿಸಿದರು ಸಕಲ ಜೀವಾತ್ಮರಿಗೆ ಸದಾ ಒಳಿತನ್ನೆ ಬಯಸಿದ ವೀರಶೈವ ಧರ್ಮ ಆಯಾ ಕಾಲ ಘಟ್ಟಗಳಲ್ಲಿ ಬೆಳೆದುಕೊಂಡು ಬಂದಿದೆ. ಎಷ್ಟೋ ಜನರು ಧರ್ಮವನ್ನು ಜಾತಿಗೆ ಜೋಡಿಸಿ ಧರ್ಮದ ವಿಶಾಲ ತತ್ವಕ್ಕೆ ಅಪಚಾರ ಮಾಡುತ್ತಿದ್ದಾರೆ. ಜಾತಿ ಎಂದೂ ಧರ್ಮವಾಗಲಾರದು. ಧರ್ಮದಲ್ಲಿರುವ ದೂರ ದೃಷ್ಟಿ ಜಾತಿಯಲ್ಲಿ ಇಲ್ಲ. ಧರ್ಮ ಸಂಸ್ಕೃತಿ ಎತ್ತಿ ಹಿಡಿಯುವ ವಿಶಾಲ ಮನೋಭಾವ ಎಲ್ಲರಲ್ಲೂ ಬೆಳೆದು ಬರಬೇಕಾಗಿದೆ. ಈ ನಿಟ್ಟಿನಲ್ಲಿ ಶ್ರೀ ಜಗದ್ಗುರು ರಂಭಾಪುರಿ ಧರ್ಮಪೀಠ ನಿರಂತರವಾಗಿ ಶ್ರಮಿಸುತ್ತಿದೆ. ನಗರ ಮತ್ತು ಹಳ್ಳಿ ಪ್ರದೇಶಗಳಲ್ಲದೆ ಎಲ್ಲ ಕಡೆ ಸಂಚರಿಸಿ ಜನ ಜಾಗೃತಿಯನ್ನು ಉಂಟು ಮಾಡುತ್ತಿದೆ. ಬೀರನಹಳ್ಳಿ ಗ್ರಾಮದ ಮಠದ ನಾಗಯ್ಯನವರು ಮತ್ತು ಅವರ ಮಕ್ಕಳು ಇಷ್ಟಲಿಂಗ ಮಹಾಪೂಜೆ ಹಾಗೂ ಧರ್ಮ ಸಮಾರಂಭ ಏರ್ಪಡಿಸಿರುವುದು ಸಂತೋಷದ ಸಂಗತಿ ಎಂದರು.

ಈ ಪವಿತ್ರ ಸಮಾರಂಭದಲ್ಲಿ ಮಳಲಿಮಠದ ಡಾ ನಾಗಭೂಷಣ ಶಿವಾಚಾರ್ಯರು ಹಾಗೂ ಚನ್ನಗಿರಿ ಹಿರೇಮಠದ ಡಾ ಕೇದಾರ ಶಿವಶಾಂತವೀರ ಶಿವಾಚಾರ್ಯರು ಪಾಲ್ಗೊಂಡು ಧರ್ಮೋಪದೇಶವನ್ನು ಮಾಡಿದರು. ದಾವಣಗೆರೆ ದುಗ್ಗತ್ತಿ ಮಠದ ಪ್ರಶಾಂತ್ ನಿರೂಪಿಸಿದರು.



# ಸಕ್ಕರೆ ಕಾರ್ಖಾನೆಗಳು ಜಿಲ್ಲೆಯ ಕಬ್ಬನ್ನು ಮಾತ್ರ ಖರೀದಿಸಬೇಕು: ಜಿಲ್ಲಾಧಿಕಾರಿ

**ಮಂಡ್ಯ:** ಜಿಲ್ಲೆಯಲ್ಲಿರುವ 5 ಸಕ್ಕರೆ ಕಾರ್ಖಾನೆಗಳು ತಮಗೆ ನಿಗಧಿ ಮಾಡಿರುವ ವ್ಯಾಪ್ತಿಯಲ್ಲಿ ಮಾತ್ರ ರೈತರಿಂದ ಕಬ್ಬನ್ನು ಖರೀದಿಸಬೇಕು. ಅನಧಿಕೃತವಾಗಿ ಬೇರೆ ಸಕ್ಕರೆ ಕಾರ್ಖಾನೆ ವ್ಯಾಪ್ತಿಯ ರೈತರಿಂದ ಕಬ್ಬು ಖರೀದಿಸಿದರೆ ಅಂತಹ ಸಕ್ಕರೆ ಕಾರ್ಖಾನೆಯ ಪರವಾನಿಗೆ ರದ್ದುಪಡಿಸಲು ಜಿಲ್ಲಾಧಿಕಾರಿ ಡಾ. ಕುಮಾರ ಅವರು ಎಚ್ಚರಿಕೆ ನೀಡಿದರು. ಅವರು ಇಂದು ಜಿಲ್ಲಾಧಿಕಾರಿಗಳ ಕಛೇರಿಯ ಸಭಾಂಗಣದಲ್ಲಿ ಶುಗರ್ ಫ್ಯಾಕ್ಟರಿ ಸಂಬಂಧ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಈ ಬಾರಿ ಬರದ ಹಿನ್ನೆಲೆಯಲ್ಲಿ ಕಬ್ಬಿನ ಇಳುವರಿ ಸಹ ಕಡಿಮೆ ಇರುತ್ತದೆ. ಸಕ್ಕರೆ ಕಾರ್ಖಾನೆಗಳು ಕಬ್ಬು ಅರೆಯುವಿಕೆಗೆ ಸ್ಪರ್ಧೆ ಉಂಟಾಗುವ ಸಾಧ್ಯತೆಯಿದ್ದು, ಸಕ್ಕರೆ ಕಾರ್ಖಾನೆಗಳು ಲಾಭ/ ನಷ್ಟ ಯಾವುದೇ ಉಂಟಾದರು ತಮ್ಮ ವ್ಯಾಪ್ತಿಗೆ ನಿಗಧಿಪಡಿಸಿದ ಕಬ್ಬನ್ನು ಮಾತ್ರ ಅರೆಯಬೇಕು ಎಂದರು. ಏಕ ಕಾಲದಲ್ಲಿ ಕಬ್ಬು ಅರೆಯುವಿಕೆಗೆ ಪ್ರಸ್ತಾವನೆ 2024 - 25 ನೇ ಸಾಲಿನ ಹಂಗಾಮಿನ ಕಬ್ಬು ಅರೆಯುವಿಕೆಗೆ ಸಂಬಂಧಿಸಿದಂತೆ ಯಾವುದಾದರು ಒಂದು ಸಕ್ಕರೆ ಕಾರ್ಖಾನೆ ಬೇರೆ ಸಕ್ಕರೆ ಕಾರ್ಖಾನೆಗಿಂತ ಮೊದಲು ಅರೆಯುವಿಕೆ ಪ್ರಾರಂಭಿಸಿದರೆ



ಎಲ್ಲಾ ರೈತರು ತಮ್ಮ ಕಬ್ಬು ಖರೀದಿಸುವಂತೆ ಸಕ್ಕರೆ ಕಾರ್ಖಾನೆಗೆ ಮುಗಿ ಬೀಳುವ ಸಾಧ್ಯತೆ ಇದೆ. ಈ ಹಿನ್ನೆಲೆಯಲ್ಲಿ ಜಿಲ್ಲೆಯಲ್ಲಿರುವ 5 ಸಕ್ಕರೆ ಕಾರ್ಖಾನೆಗಳು ಏಕಕಾಲದಲ್ಲಿ ಕಬ್ಬು ಅರೆಯಲು ಜುಲೈ 15 ರಿಂದ 30 ರವರೆಗೆ ಯಾವುದಾದರು ಒಂದು ದಿನಾಂಕವನ್ನು ನಿಗಧಿಪಡಿಸಿಕೊಡುವಂತೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗುವುದು ಎಂದರು. ಸಕ್ಕರೆ ಕಾರ್ಖಾನೆಗಳು ರೈತರಿಗೆ ಕಬ್ಬು ಬೆಳೆಯುವ ಪ್ರಕ್ರಿಯೆಯಲ್ಲಿ ಅಭಿವೃದ್ಧಿ ಕಾರ್ಯಕ್ರಮಗಳನ್ನು ನಡೆಸಬೇಕು. ರೈತರ ಕುಂದು ಕೊರತೆ ಸಭೆಯಲ್ಲಿ ರೈತರು ಕಬ್ಬು ಬಿತ್ತನೆಗೆ ಸಕ್ಕರೆ ಕಾರ್ಖಾನೆಗಳು ಬಿತ್ತನರ ಕಬ್ಬು ಒದಗಿಸುವಂತೆ ಚರ್ಚಿಸಿದ್ದಾರೆ. ಸಕ್ಕರೆ ಕಾರ್ಖಾನೆಗಳು ರೈತರಿಗೆ ನಡೆಸುವ ಅಭಿವೃದ್ಧಿ ಕಾರ್ಯಕ್ರಮಗಳ ಕುರಿತಂತೆ ವರದಿ ನೀಡುವಂತೆ ತಿಳಿಸಿದರು. ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಡಾ. ಹೆಚ್. ಎಲ್. ನಾಗರಾಜು, ಜಂಟಿ ಕೃಷಿ ನಿರ್ದೇಶಕ ಅಶೋಕ್, ಆಹಾರ ಇಲಾಖೆಯ ಜಂಟಿ ನಿರ್ದೇಶಕರು ಎಂ ಪಿ ಕೃಷ್ಣಕುಮಾರ್ ಸೇರಿದಂತೆ ವಿವಿಧ ಸಕ್ಕರೆ ಕಾರ್ಖಾನೆಯ ವ್ಯವಸ್ಥಾಪಕರುಗಳು ಉಪಸ್ಥಿತರಿದ್ದರು.

## ಮತ ಎಣಿಕೆ ಕೇಂದ್ರಕ್ಕೆ ಭೇಟಿ

**ಮಂಡ್ಯ:** ಜಿಲ್ಲಾಧಿಕಾರಿ ಡಾ: ಕುಮಾರ ಅವರು ಜೂನ್ 4 ರಂದು ಮಂಡ್ಯ ವಿಶ್ವವಿದ್ಯಾಲಯದಲ್ಲಿ ನಡೆಯಲಿರುವ ಲೋಕಸಭಾ ಸಾರ್ವತ್ರಿಕ ಚುನಾವಣೆಯ ಎಣಿಕೆ ಕೇಂದ್ರಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.ಇದೇ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಡಾ: ಹೆಚ್ ಎಲ್ ನಾಗರಾಜು, ಚುನಾವಣಾ ತಹಶೀಲ್ದಾರ್ ವೆಂಕಟಾಚಲಪತಿ, ದೀಪಕ್ ಸೇರಿದಂತೆ ಇನ್ನಿತರೆ ಅಧಿಕಾರಿಗಳು ಉಪಸ್ಥಿತರಿದ್ದರು.



## ಅರಣ್ಯ ಇಲಾಖೆಯಿಂದ ಬಹಿರಂಗ ಹರಾಜು

**ಕೋಲಾರ:** ಬಂಗಾರಪೇಟೆ ಉಪವಿಭಾಗದ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಯವರು ಮಾಲೂರು ತಾಲ್ಲೂಕಿನ ಅಪ್ಪಯ್ಯನ ಅಗ್ರಹಾರದಲ್ಲಿ ರೈನ್ ಟ್ರಿ ಮರಗಳು 2 ರಿಂದ 5 ರೆಂಬೆಗಳು, ಸೊಣ್ಣೂರು ಗ್ರಾಮದಲ್ಲಿ ಸುಬಾಬುಲ್-01 ಪೆಲಟೋಫಾರಂ-08 ರೆಂಬೆಗಳು ರೈನ್ ಟ್ರಿ-03 ರೆಂಬೆಗಳು ಹಾಗೂ ಕುಡಿಯನೂರಲ್ಲಿ ಎರಡು ಸಿಲ್ವರ್ ಮರ, ಶಿಸು ಒಂದು ಮರ ಬಹಿರಂಗ ಹರಾಜು ಮಾಡಲಿದ್ದು, ಮಾಲೂರು ವಲಯ ಕಛೇರಿ ಆವರಣದಲ್ಲಿಯೇ ಹರಾಜು ಪ್ರಕ್ರಿಯೆ ಕೈಗೊಳ್ಳಲಾಗುವುದು. ಇಚ್ಛೆಯುಳ್ಳವರು ಜೂನ್ 05 ರಂದು ಬೆಳಿಗ್ಗೆ 11:30 ಗಂಟೆಗೆ ಹರಾಜಿನಲ್ಲಿ ಭಾಗವಹಿಸಬಹುದು.

ಹರಾಜಿಗೆ ಪ್ರಸ್ತಾಪಿಸಿರುವ ಪರಿಮಾಣವು ಅಂದಾಜು ಆಗಿದ್ದು ಬದಲಾವಣೆಗೆ ಒಳಪಟ್ಟಿರುತ್ತದೆ. ಹರಾಜು ಮಾಡುವ ಅರಣ್ಯೋತ್ಪನ್ನದ ವಿವರಗಳನ್ನು ಸಂಬಂಧಪಟ್ಟ ವಲಯ ಕಛೇರಿಯಿಂದ ಪಡೆದುಕೊಳ್ಳಬಹುದು. ಹರಾಜಿನಲ್ಲಿ ಭಾಗವಹಿಸುವ ಮೊದಲೇ ಬಿಡ್‌ದಾರರು ಅರಣ್ಯೋತ್ಪನ್ನವನ್ನು ಪರಿಶೀಲಿಸಿರಬೇಕು. ಹರಾಜಿನಲ್ಲಿ ಭಾಗವಹಿಸುವ ಮೊದಲು ಬಿಡ್ಡುದಾರರು ಮರಗಳಿಂದ ದೊರಕುವ ಟಿಂಬರ್, ಸೌದೆ, ಇತ್ಯಾದಿಗಳು ಹಾಗೂ ಹುಣಸೆ ಫಸಲಿನ ಪ್ರಮಾಣವನ್ನು ಹಾಗೂ ಗುಣ ಮಟ್ಟವನ್ನು ಖಚಿತಪಡಿಸಿಕೊಂಡು ನಂತರವೇ ಹರಾಜಿನಲ್ಲಿ ಭಾಗವಹಿಸಬೇಕು ಈ ಬಗ್ಗೆ ಯಾವುದೇ ದೂರುಗಳಿಗೆ ಅವಕಾಶವಿರುವುದಿಲ್ಲ. ಹರಾಜಿನಲ್ಲಿ ಭಾಗವಹಿಸುವ ಪ್ರತಿಯೊಬ್ಬರು ಕನಿಷ್ಟ ರೂ.5000/- ಮುಂಗಟ ಠೇವಣಿ ಹಣವನ್ನು ಹರಾಜಿನಲ್ಲಿ ಭಾಗಬಹಿಸುವ ಮೊದಲೇ ನಿಗದಿತ ಸಮಯದಲ್ಲಿ ಈ ಕಛೇರಿಯಲ್ಲಿ ಪಾವತಿಸಿ ನೊಂದಾಯಿಸಕೊಳ್ಳತಕ್ಕದ್ದು. ನಂತರ ಹರಾಜಿನಲ್ಲಿ ಭಾಗವಹಿಸುವುದು.

ಹರಾಜು ಮುಗಿದ ಕೂಡಲೇ ಮಾರಾಟ ಮೊತ್ತವನ್ನು ಮತ್ತು ಎಲ್ಲಾ ತೆರಿಗೆಗಳನ್ನು ಅದೇ ದಿನ ಮಾಲೂರು ವಲಯ ಕಛೇರಿಯಲ್ಲಿ ಪಾವತಿಸಿ ರಸೀದಿ ಪಡೆಯತಕ್ಕದ್ದು. ಹರಾಜು ಮೊತ್ತವನ್ನು ಆ ದಿನವೇ ಪಾವತಿಸದ ಪಕ್ಷದಲ್ಲಿ 2ನೇ ಬಿಡ್‌ದಾರರಿಗೆ ಅವಕಾಶವನ್ನು ನೀಡಲಾಗುವುದು. ನಿಗದಿತ ವೇಳೆಯಲ್ಲಿ ಹಣ ಪಾವತಿಸದಿದ್ದಲ್ಲಿ, ಮೊದಲು ಪಾವತಿಸಿರುವ ಹಣವನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಂಡು ಸವಾಲುದಾರರ, ಹರಾಜುದಾರರ ಜವಾಬ್ದಾರಿಯ ಮೇಲೆ ಮರು ಹರಾಜು ಮಾಡಲಾಗುವುದು. ಮರುಹರಾಜಿನಿಂದ ಸರ್ಕಾರಕ್ಕೆ ನಷ್ಟ ಸಂಭವಿಸಿದಲ್ಲಿ ಅದನ್ನು ಕಾನೂನು ರೀತ್ಯಾ ವಸೂಲಿ ಮಾಡಲಾಗುವುದು ಈ ಷರತ್ತುಗಳಿಗೆ ಒಳಪಟ್ಟು ಮರಗಳನ್ನು ಪಡೆದುಕೊಳ್ಳಬಹುದೆಂದು ಮಾಲೂರು ವಲಯದ ಅರಣ್ಯಾಧಿಕಾರಿ ಪ್ರಟಕಣೆಯಲ್ಲಿ ತಿಳಿಸಿದ್ದಾರೆ.

## ಮತದಾನಕ್ಕೆ ಪರ್ಯಾಯ ದಾಖಲೆಗಳು

**ಮಂಡ್ಯ:** ಕರ್ನಾಟಕ ವಿಧಾನ ಪರಿಷತ್ತಿಗೆ ದಕ್ಷಿಣ ಶಿಕ್ಷಕರ ಕ್ಷೇತ್ರ, ನೈರುತ್ಯ ಪದವೀಧರರ ಕ್ಷೇತ್ರ, ಹಾಗೂ ನೈರುತ್ಯ ಶಿಕ್ಷಕರ ಕ್ಷೇತ್ರಗಳಿಂದ ನಡೆಯುವ ದ್ವೈವಾರ್ಷಿಕ ಚುನಾವಣೆಯ ಮತದಾನವು ಜೂನ್ 3 ರಂದು ಬೆಳಿಗ್ಗೆ 8 ಗಂಟೆಯಿಂದ ಸಂಜೆ 4 ಗಂಟೆಯವರೆಗೆ ನಡೆಯಲಿದೆ.

ಜೂ.3 ರಂದು ಮತದಾರರನ್ನು ಗುರುತಿಸಲು ಮತದಾರರ ಭಾವಚಿತ್ರವುಳ್ಳ ಗುರುತಿನ ಚೀಟಿ (ಇಕಋಅ )ನ್ನು ಮುಖ್ಯ ದಾಖಲಾತಿಯಾಗಿ ಹಾಜರು ಪಡಿಸಬೇಕು. ಮತದಾರರ ಪಟ್ಟಿಯಲ್ಲಿ ಹೆಸರಿದ್ದವರುಇಕಋಅ ಹೊಂದಿಲ್ಲದಿದ್ದಲ್ಲಿ ಅಂತಹವರು ಭಾರತ ಚುನಾವಣಾ ಆಯೋಗವು ನಿರ್ಧರಿಸಿರುವ ಆಧಾರ್ ಕಾರ್ಡ್, ಚಾಲನಾ ಪರವಾನಿಗೆ, ಪ್ಯಾನ್ ಕಾರ್ಡ್, ಭಾರತೀಯ ಪಾಸ್ ಪೋರ್ಟ್, ಕೇಂದ್ರ ಸರ್ಕಾರ, ರಾಜ್ಯ ಸರ್ಕಾರ, ಸಾರ್ವಜನಿಕ ವಲಯದ ಸಂಸ್ಥೆಗಳು, ಸ್ಥಳೀಯ ಸಂಸ್ಥೆಗಳು ಅಥವಾ ಇತರ ಪ್ರಧಾನ ಕೈಗಾರಿಕಾ ಮನೆಗಳು ತನ್ನ ಉದ್ಯೋಗಿಗಳಿಗೆ ನೀಡಿದ ಸೇವಾ ಗುರುತಿನ ಚೀಟಿಗಳು, ಚುನಾಯಿತ ಸಂಸದರು, ಶಾಸಕರು, ಒಐಅ ಗಳಿಗೆ ನೀಡಿರುವ ಅಧಿಕೃತ ಗುರುತಿನ ಚೀಟಿ, ಶಿಕ್ಷಣ ಸಂಸ್ಥೆಗಳು ನೀಡಿದ ಸರ್ವಿಸ್ ಗುರುತಿನ ಚೀಟಿಗಳು, ವಿಶ್ವವಿದ್ಯಾಲಯದಿಂದ ನೀಡಲಾಗಿರುವ ಪದವಿ/ಡಿಪ್ಲೊಮಾ ಒರಿಜಿನಲ್ ಪ್ರಮಾಣಪತ್ರ, ಸಕ್ಷಮ ಪ್ರಾಧಿಕಾರವು ನೀಡಿದ ದೈಹಿಕ ಅಂಗವಿಕಲತೆಯ ಪ್ರಮಾಣಪತ್ರ, ಕೇಂದ್ರ ಸರ್ಕಾರ ನೀಡಿರುವ ವಿಶಿಷ್ಟ ಅಂಗವೈಕಲ್ಯ ಹೊಂದಿರುವವರಿಗೆಗಆಋಆ ಗುರುತಿನ ಕಾರ್ಡ್ ಅಥವಾ ಇತರೆ ಪೂರಕ ದಾಖಲಾತಿಗಳ ಪೈಕಿ ಒಂದನ್ನು ಹಾಜರುಪಡಿಸಿ ಮತದಾನ ಮಾಡಲು ಅವಕಾಶವಿರುತ್ತದೆ ಎಂದು ಕರ್ನಾಟಕ ನೈಋತ್ಯ ಪಧವೀದರರ ಕ್ಷೇತ್ರ, ನೈಋತ್ಯ ಶಿಕ್ಷಕರ ಕ್ಷೇತ್ರ ಮತ್ತು ದಕ್ಷಿಣ ಶಿಕ್ಷಕರ ಕ್ಷೇತ್ರದ ಚುನಾವಣಾಧಿಕಾರಿಗಳು ಹಾಗೂ ಮೈಸೂರು ವಿಭಾಗದ ಪ್ರಾದೇಶಿಕ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಹಣ ಬಿಡುಗಡೆ ಸಮಿತಿ ಸಭೆ

## ಎಲ್ಲ ಪ್ರಕರಣಗಳು ಇತ್ಯರ್ಥ

**ಮಂಡ್ಯ:** ಕರ್ನಾಟಕ ಲೋಕಸಭಾ ಚುನಾವಣೆ - 2024 ಮಾದರಿ ನೀತಿ ಸಂಹಿತೆ ಜಾರಿಯಲ್ಲಿದ್ದ ಸಂದರ್ಭದಲ್ಲಿ ಕ್ಷಿಪ್ರ ಸಂಚಾರಿದಳ 'ಿತ್ತು ಸ್ಥಾಯಿ ಕಣ್ಗಾವಲು ತಂಡ, ಪೊಲೀಸ್ ತಂಡದವರು ತಪಾಸಣೆ ನಡೆಸಿದ ಸಂದರ್ಭದಲ್ಲಿ ವಶಪಡಿಸಿಕೊಂಡಿರುವ ಹಣವನ್ನು ಆಯಾ ಕ್ಷೇತ್ರ ವ್ಯಾಪ್ತಿಯ ಜಿಲ್ಲಾ/ತಾಲ್ಲೂಕು ಉಪಖಜಾನೆಯ ವಶದಲ್ಲಿರಿಸಲಾಗಿರುತ್ತದೆ. ಸದರಿ ಹಣವು ರಾಜಕೀಯ ಉದ್ದೇಶಕ್ಕಾಗಿ ಬಳಕೆಯಾಗದೆ ಇರುವ ಬಗ್ಗೆ ಸಂಬಂಧಿಸಿದವರಿಂದ ದಾಖಲಾತಿಗಳನ್ನು ಪಡೆದು ಪರಿಶೀಲಿಸಿ ಖಾತ್ರಿಪಡಿಸಿಕೊಂಡ ನಂತರ ಸಂಬಂಧಿಸಿದ ವ್ಯಕ್ತಿಗಳಿಗೆ ಹಣವನ್ನು ಬಿಡುಗಡೆಗೊಳಿಸಲಾಗುವುದು. ಇಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶೇಖ್ ತನ್ವೀರ್ ಆಸಿಫ್ ಅವರ ಅಧ್ಯಕ್ಷತೆಯಲ್ಲಿ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಹಣ ಬಿಡುಗಡೆ ಸಮಿತಿ ಸಭೆ ನಡೆಸಲಾಯಿತು.

ಇಂದು ನಡೆದ ಸಭೆಯಲ್ಲಿ ಚುನಾವಣೆಯ ಸಂದರ್ಭದಲ್ಲಿ ಪ್ರಕರಣವೊಂದರಲ್ಲಿ ರೂ 70,000/- ಜಪ್ತಿ ಮಾಡಲಾಗಿತ್ತು, ಸದರಿ ಪ್ರಕರಣದಲ್ಲಿ ಸೂಕ್ತ ದಾಖಲಾತಿ ಹಾಜರುಪಡಿಸಿದ ಹಿನ್ನಲೆ ಹಣ ಬಿಡುಗಡೆಗೊಳಿಸಲು ಸಮಿತಿ ತೀರ್ಮಾನಿಸಿತು.

ಇದರೊಂದಿಗೆ ಹಣ ಬಿಡುಗಡೆ ಸಮಿತಿಯ ಮುಂದೆ ಇದ್ದ ಎಲ್ಲಾ ಪ್ರಕರಣಗಳನ್ನು ಇತ್ಯರ್ಥಪಡಿಸಲಾಗಿದೆ ಎಂದು ಸಿ.ಇ.ಓ ಅವರು ತಿಳಿಸಿದರು. ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಲೆಕ್ಕಾಧಿಕಾರಿ ಚಂದ್ರಶೇಖರ್, ಜಿಲ್ಲಾ ಖಜಾನೆ ಉಪನಿರ್ದೇಶಕ ಸಿದ್ದಲಿಂಗಸ್ವಾಮಿ ಹಾಗೂ ಇನ್ನಿತರರು ಉಪಸ್ಥಿತರಿದ್ದರು.



## ಕಗ್ಗದ ಅಧ್ಯಯನದಿಂದ ಆತ್ಮವಿಶ್ವಾಸ



**ಬೆಂಗಳೂರು:** ಡಿವಿಜಿ ಯವರ ಮಂಕುತಿಮ್ಮನ ಕಗ್ಗದ ಅಧ್ಯಯನದಿಂದ ಆತ್ಮವಿಶ್ವಾಸ ಹೆಚ್ಚಲಿದ್ದು, ಬದುಕಿನ ಎಲ್ಲಾ ಸವಾಲುಗಳನ್ನು ಧೈರ್ಯದಿಂದ ಎದುರಿಸಬಹುದು ಎಂದು ಯೂತ್ ಫಾರ್ ಬ್ಯಾಂಕ್ ಜಾಬ್ಸ್ ನ ಅಧ್ಯಕ್ಷ ಶ್ರೀ ಎಂ ವೆಂಕಟೇಶ ಶೇಷಾದ್ರಿಯವರು ತಿಳಿಸಿದರು. ಶ್ರೀಯುತರು ಬೆಂಗಳೂರಿನ ಜಯನಗರದಲ್ಲಿ ಸಂಗಾತಿ ಸಮಾಜದವರು ಏರ್ಪಡಿಸಿದ್ದ 'ಮಂಕುತಿಮ್ಮನ ಕಗ್ಗನ ಪ್ರಸ್ತುತತೆ ಮತ್ತು ಅವಶ್ಯಕತೆ'ಯ ಬಗ್ಗೆ ಮಾತನಾಡುತ್ತಿದ್ದರು.

ಡಿ ವಿ ಜಿಯವರು ತಮ್ಮ ಬದುಕಿನಲ್ಲಿ ಕಷ್ಟ-ನಷ್ಟಗಳ ನಡುವೆಯೂ ಎದೆಗುಂದದೆ ಸ್ವಾಭಿಮಾನದಿಂದ ಸಾಹಿತ್ಯ ರಚನೆ ಮಾಡಿ, ಎಲ್ಲರಿಗೂ ಆದರ್ಶಪ್ರಾಯವಾಗಿದ್ದಾರೆ ಎಂದು ತಿಳಿಸಿದರು.

ಸಂಗಾತಿ ಸಮಾಜದ ಅಧ್ಯಕ್ಷೆ ಶ್ರೀಮತಿ ಲಕ್ಷ್ಮೀ ವೆಂಕಟಪತಿಯವರು ಮಾತನಾಡಿ, ಕಳೆದ ಒಂದುವರುಷದಿಂದ ಸಂಘವು ಆಯೋಜಿಸಿದ್ದ ಸಾಂಸ್ಕೃತಿಕ ಮತ್ತು ಸಮಾಜಮುಖಿ ಕಾರ್ಯಕ್ರಮಗಳ ಬಗ್ಗೆ ಪೂರ್ಣಮಾಹಿತಿ ನೀಡಿದರು.

ಈ ಕಾರ್ಯಕ್ರಮದಲ್ಲಿ ಸಂಘದ ಪದಾಧಿಕಾರಿಗಳಾದ ಲಕ್ಷ್ಮಿಮೂರ್ತಿ, ರೇವತಿ ರಾಜಶೇಖರ್, ಇಂದುಮತಿ ಸುಬ್ರಮಣ್ಯ ಮತ್ತು ಚಂದ್ರಕಲಾ ರವರು ಉಪಸ್ಥಿತರಿದ್ದರು.

## ಐ.ಟಿ.ಐ ಪ್ರವೇಶಕ್ಕಾಗಿ ಅರ್ಜಿ ಆಹ್ವಾನ

**ರಾಮನಗರ:** ರಾಜ್ಯದ ಎಲ್ಲಾ ಸರ್ಕಾರಿ ಐ.ಟಿ.ಐ ಗಳಿಗೆ ಆಗಸ್ಟ್-2024ನೇ ಸಾಲಿಗೆ ಪ್ರವೇಶಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಗಳನ್ನು ರಾಜ್ಯದ ಯಾವುದೇ ಪ್ರದೇಶದಿಂದ ಸೈಬರ್ ಸೆಂಟರ್ ಮೂಲಕ ಅಥವಾ ಹತ್ತಿರದ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಅಗತ್ಯ ದಾಖಲೆಗಳೊಂದಿಗೆ ಜೂನ್ 3ರ ವರೆಗೆ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗೆ ಅಮರೇಶ, ತರಬೇತಿ ಅಧಿಕಾರಿ ಮೊ.ನಂ. 9449188993, ಗಿರೀಶ್ ಕುಮಾರ್ ಎಸ್., ಕಿರಿಯ ತರಬೇತಿ ಅಧಿಕಾರಿ ಮೊ.ನಂ. 7760023749 ಅಥವಾ ರೇಣುಕ ಈ, ಕಿರಿಯ ತರಬೇತಿ ಅಧಿಕಾರಿ ಮೊ.ನಂ. 9740065425 ಅನ್ನು ಸಂಪರ್ಕಿಸುವಂತೆ ಮಾಗಡಿಯ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**
**ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರವರ ಕಛೇರಿ, ಬೊಮ್ಮನಹಳ್ಳಿ ವಲಯ, ಬೆಂಗಳೂರು**

ಸಂಖ್ಯೆ: ಹಿಸತೋನಿ(ಬೊಮ್ಮನಹಳ್ಳಿ)/ಟೆಂಡರ್/01/2024-25 ದಿನಾಂಕ: 29.05.2024

**ಟೆಂಡರ್‌ಗಾಗಿ ಆಹ್ವಾನ (ಐಎಫ್‌ಟಿ)**

(ಅಲ್ಪಾವಧಿ) (ದ್ವಿಲಕೋಟೆ ಪದ್ಧತಿ)

(ಕರ್ನಾಟಕ ಸರ್ಕಾರದ ಕೆಪಿಪಿ ಪೋರ್ಟಲ್ https://kppp.karnataka.gov.in ಮೂಲಕ ಮಾತ್ರ)

ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು, ಬೊಮ್ಮನಹಳ್ಳಿ ವಲಯ, (ಈ ದಾಖಲಾತಿಗಳಲ್ಲಿ ಉದ್ಯೋಗಿ ಎಂದು ಉಲ್ಲೇಖಿಸಲಾಗಿದೆ) ಇವರು ಕರ್ನಾಟಕ ಪಾರದರ್ಶಕ ಅಧಿನಿಯಮ 2000 ಅಡಿಯಲ್ಲಿ ಅನುಷ್ಠಾನಗೊಳಿಸಲು ಕಾರ್ಮಿಕ ಇಲಾಖೆಯಲ್ಲಿ ನೋಂದಾಯಿತರಾದ ಅರ್ಹ ಮತ್ತು ಅನುಭವಿ ವ್ಯಕ್ತಿ/ಏಜೆನ್ಸಿಗಳು/ಸಂಸ್ಥೆಗಳಿಂದ (ಈ ದಾಖಲಾತಿಗಳಲ್ಲಿ ಟೆಂಡರ್‌ದಾರರು ಎಂದು ಉಲ್ಲೇಖಿಸಲಾಗಿದೆ) ಉದ್ಯಾನವನಗಳ ನಿರ್ವಹಣೆಗಾಗಿ ಸ್ಟಾಂಡರ್ಡ್ ಟೆಂಡರ್ ದಾಖಲಾತಿ ಕೆಡಬ್ಲ್ಯೂ-1, ಕೆಡಬ್ಲ್ಯೂ-2, ಕೆಡಬ್ಲ್ಯೂ-3 & ಕೆಡಬ್ಲ್ಯೂ-4 ರ ಪ್ರಕಾರ ಟೆಂಡರ್‌ಗಳನ್ನು ಆಹ್ವಾನಿಸಿದ್ದಾರೆ.

| ಕ್ರ.ಸ. | ಕೆಲಸದ ಹೆಸರು |
|---|---|
| 1 | ಬೊಮ್ಮನಹಳ್ಳಿ ವಲಯದ ವಾರ್ಡ್ ಸಂಖ್ಯೆ 221 ರ ಸೆಕ್ಟರ್-3 ಸ್ವಾಭಿಮಾನ ಉದ್ಯಾನವನದಲ್ಲಿ ಉದ್ಯಾನವನದ ನಿರ್ವಹಣೆ. **ಅಂದಾಜು ವೆಚ್ಚ:** ರೂ.18,66,667/-. **ಇಎಂಡಿ:** ರೂ.46667/- |
| 2 | ಬೊಮ್ಮನಹಳ್ಳಿ ವಲಯದ ವಾರ್ಡ್ ಸಂಖ್ಯೆ 224 ರ ಹೊಸರೋಡ್ ಉದ್ಯಾನವನದಲ್ಲಿ ಉದ್ಯಾನವನ ಹಾಗೂ ಮೀಡಿಯನ್‌ಗಳ ನಿರ್ವಹಣೆ (ಕರೆ-2). **ಅಂದಾಜು ವೆಚ್ಚ:** ರೂ.9,55,833/-. **ಇಎಂಡಿ:** ರೂ.23896/- |
| 3 | ಬೊಮ್ಮನಹಳ್ಳಿ ವಲಯದ ವಾರ್ಡ್ ಸಂಖ್ಯೆ 213 ರ ಜರಗನಹಳ್ಳಿ ಉದ್ಯಾನವನದಲ್ಲಿ ಉದ್ಯಾನವನ ಹಾಗೂ ಮೀಡಿಯನ್‌ಗಳ ನಿರ್ವಹಣೆ (ಕರೆ-2). **ಅಂದಾಜು ವೆಚ್ಚ:** ರೂ.10,86,667/- **ಇಎಂಡಿ:** ರೂ.27167/- |

**ವೇಳಾ ಪಟ್ಟಿ** : 1) ಪ್ರಕಟಣೆ ದಿನಂಕ: 29.05.2024. 2) ಡೌನ್‌ಲೋಡ್ ಮಾಡಿಕೊಳ್ಳುವುದು: 31.05.2024. 3) ಟೆಂಡರ್ ಮುಕ್ತಾಯದ ದಿನಾಂಕ: 07.06.2024 ರಂದು ಸಂಜೆ 4.30 ಗಂಟೆಗೆ. 4) ತಾಂತ್ರಿಕ ಬಿಡ್ ತೆರೆಯುವ ದಿನಾಂಕ: 10.06.2024 ರಂದು ಬೆಳಿಗ್ಗೆ 11.30 ಗಂಟೆಗೆ. 5) ಆರ್ಥಿಕ ಬಿಡ್ ತೆರೆಯುವ ದಿನಾಂಕ: ತಾಂತ್ರಿಕ ಬಿಡ್ ಅನುಮೋದನೆ ನಂತರ.

**ಸಹಿ/- ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು, ಬೊಮ್ಮನಹಳ್ಳಿ ವಲಯ**

## ಕೌದಳ್ಳಿ- ಮ.ಮ ಬೆಟ್ಟ ವಲಯದಲ್ಲಿ ತ್ಯಾಜ್ಯ ತೆರವು

**ಚಾಮರಾಜನಗರ:** ಚಾಮರಾಜನಗರ ಜಿಲ್ಲೆಯ ಮಲೆ ಮಹದೇಶ್ವರ ಬೆಟ್ಟಕ್ಕೆ ತೆರಳುವ ಮುಖ್ಯ ರಸ್ತೆಯ ಬದಿಯಲ್ಲಿರುವ ಹನೂರು ತಾಲ್ಲೂಕಿನ ಕೌದಳ್ಳಿ ಶಾಖೆಯ ಉಪವಲಯ ಅರಣ್ಯಾಧಿಕಾರಿಗಳು ಹಾಗೂ ಸಿಬ್ಬಂದಿಗಳು ಕೌದಳ್ಳಿ ಆರ್ಚ್ ನಿಂದ ಎಲಚಿಕೆರೆ ಕ್ರಾಸ್ ವರೆಗೂ ಮಲೆ ಮಹದೇಶ್ವರ ಬೆಟ್ಟ ಮುಖ್ಯ ರಸ್ತೆಯ ಎರಡು ಬದಿಗಳಲ್ಲಿ ಬಿದ್ದಿರುವ ಪ್ಲಾಸ್ಟಿಕ್ ತ್ಯಾಜ್ಯಗಳನ್ನು ಪಾದಯಾತ್ರಿಗಳ ಸಹಾಯದೊಂದಿಗೆ ಸ್ವಚ್ಛಗೊಳಿಸಲಾಯಿತು.

ಚಾಮರಾಜನಗರ ಜಿಲ್ಲೆಯ ಮಲೆ ಮಹದೇಶ್ವರ ಬೆಟ್ಟ ವನ್ಯಜೀವಿಧಾಮಕ್ಕೆ ಸೇರಿದ ಕೌದಳ್ಳಿ, ಮಹದೇಶ್ವರ ಬೆಟ್ಟ ವಲಯದ ಸಿಬ್ಬಂದಿಗಳು ಹಾಗು ಮಹದೇಶ್ವರ ಬೆಟ್ಟ ಗ್ರಾಮದ ವಿದ್ಯಾರ್ಥಿಗಳು ಸೇರಿ ಎರಡು ದಿನಗಳ ಕಾಲ ರಂಗಸ್ವಾಮಿವೊಡ್ಡುವಿನಿಂದ ಪೊನ್ನಾಚಿ ಕ್ರಾಸ್ ವರೆಗೆ ಮೆಟ್ಟಿಗಲ್ಲು ದಾರಿಯ ಅಕ್ಕಪಕ್ಕ ಬಿದ್ದ ಪ್ಲಾಸ್ಟಿಕ್ ಬಾಟಲ್ ಗಳು ಹಾಗೂ ಇತರೆ ಪ್ಲಾಸ್ಟಿಕ್ ತ್ಯಾಜ್ಯಗಳನ್ನು ಸ್ವಚ್ಛಗೊಳಿಸಿದರು.



## ಜಮೀನಿನಲ್ಲಿ ಜಿಂಕೆ ಮೇಲೆರಗಿದ ವ್ಯಾಘ್ರ : ಬೆಚ್ಚಿಬಿದ್ದ ಸ್ಥಳೀಯರು

**ಚಾಮರಾಜನಗರ:** ಚಾಮರಾಜನಗರ ಜಿಲ್ಲೆಯ ಗುಂಡ್ಲುಪೇಟೆ ತಾಲೂಕಿನ ಪಡಗೂರು ಗ್ರಾಮದ ಹೊರವಲಯದ ಜಮೀನಿನಲ್ಲಿ ಜಿಂಕೆಯನ್ನ ಬೇಟೆಯಾಡಲು ಬಂದ ಹುಲಿಯನ್ನ ಕಂಡ ಗ್ರಾಮದ ಜನತೆ ಭಯಭೀತರಾಗಿದ್ದಾರೆ.

ಚಾಮರಾಜನಗರ ಜಿಲ್ಲೆಯ ಗುಂಡ್ಲುಪೇಟೆ ತಾಲ್ಲೂಕಿನ ಪಡಗೂರು ಗ್ರಾಮದ ಜಮೀನಿಗೆ ಕೆಲಸಕ್ಕೆ ಹೋಗುತ್ತಿದ್ದ ವೇಳೆ ಜಮೀನಿನಲ್ಲಿ ಹಠಾತ್ ಜಿಂಕೆ ಮೇಲೆ ಎರಗಿದ ಹುಲಿ ಕಂಡು ಬೆಚ್ಚಿಬಿದ್ದಿದ್ದಾರೆ. ಚಾಮರಾಜನಗರ ಜಿಲ್ಲೆಯ ಗುಂಡ್ಲುಪೇಟೆ ತಾಲೂಕಿನ ಪಡಗೂರು ಗ್ರಾಮದಲ್ಲಿ ಈ ಘಟನೆ ನಡೆದಿದ್ದು ಹುಲಿಯನ್ನ ಕಂಡ ಸ್ಥಳೀಯರು ಕೂಗಿಕೊಂಡಾಗ ಜಿಂಕೆಯನ್ನ ಅಲ್ಲೇ ಬಿಟ್ಟು ಹುಲಿ ಪರಾರಿಯಾಗಿದೆ. ಹುಲಿ ದಾಳಿಗೆ ಸಿಲುಕಿ ಕೆಲಕಾಲ ನರಳಾಡಿದ ಜಿಂಕೆ ಸ್ಥಳದಲ್ಲೇ ಪ್ರಾಣ ಬಿಟ್ಟಿದೆ. ಹುಲಿ ದಾಳಿಗೆ ಸಿಲುಕಿದ್ದನ್ನ ಕಣ್ಣಾರೆ ಕಂಡ ಸ್ಥಳೀಯರು ಜಿಂಕೆಯ ದೃಶ್ಯವನ್ನ ಮೊಬೈಲ್ ನಲ್ಲಿ ಚಿತ್ರೀಕರಣ ಮಾಡಿದ್ದಾರೆ. ಅರಣ್ಯ ಇಲಾಖೆಗೆ ಮಾಹಿತಿ ನೀಡಿದ್ದಾರೆ. ಚಿರತೆ ಹುಲಿಗಳ ಕಾಟದಿಂದ ಬೇಸತ್ತಿರುವ ಗ್ರಾಮಸ್ಥರು ವನ್ಯ ಮೃಗಗಳನ್ನ ಸೆರೆಹಿಡಿಯುವಂತೆ ಅರಣ್ಯ ಇಲಾಖೆಗೆ ಮನವಿ ಮಾಡಿದ್ದಾರೆ.

## ಧಾರ್ಮಿಕ ಸಭೆ

**ತಿಪಟೂರು:** ತಾಲ್ಲೂಕಿನ ಹೊನ್ನವಳ್ಳಿಯ ಶ್ರೀ ಶಂಕರ ಜಗದ್ಗುರು ಸೇವಾಸಂಘದಿಂದ 03 ಜೂನ್ ಸೋಮವಾರದಂದು ಶಂಕರ ಜಗದ್ಗುರು ಶತಮಾನೋತ್ಸವ ಕಾರ್ಯಕ್ರಮದ ಅಂಗವಾಗಿ ಧಾರ್ಮಿಕ ಸಭೆಯನ್ನು ಆಯೋಜನೆ ಮಾಡಲಾಗಿದ್ದು ದಿವ್ಯ ಸಾನಿಧ್ಯವನ್ನು ಚಿಕ್ಕಮಗಳೂರು ಜಿಲ್ಲೆಯ ಆದಿಶಂಕರಾಚಾರ್ಯ ಶಾರದ ಲಕ್ಷ್ಮೀನರಸಿಂಹ ಪೀಠಾಧ್ಯಕ್ಷರಾದ ಸ್ವಯಂಪ್ರಕಾಶ ಸಚ್ಚಿದಾನಂದ ಸರಸ್ವತೀ ಮಹಾಸ್ವಾಮಿಗಳು ವಹಿಸಲಿದ್ದು, ಅತಿಥಿಗಳಾಗಿ ಹೈಕೋರ್ಟ್‌ನ ನಿವೃತ್ತ ನ್ಯಾಯಾಧೀಶ ಎನ್. ಕುಮಾರ್ ಭಾಗಹಿಸಲಿದ್ದಾರೆ ಎಂದು ಸಂಘದ ಅದ್ಯಕ್ಷ ಹೆಚ್. ಆರ್ ರಾಮಣ್ಣ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



**ದಲಿತ ಮುಖಂಡ ಮಾರ್ಜೇನಹಳ್ಳಿ ವಿಜಯ್ ಕುಮಾರ್ ಹುಟ್ಟುಹಬ್ಬವನ್ನು ಕೋಲಾರದ ನಚಿಕೇತ ನಿಲಯದ ಬಾಬಾ ಸಾಹೇಬ್ ಅಂಬೇಡ್ಕರ್ ಪುತ್ಥಳಿಯ ಮುಂದೆ ಆಚರಿಸಲಾಯಿತು. ಸಸಿ ನೆಡುವ ಮೂಲಕ ಹುಟ್ಟುಹಬ್ಬಕ್ಕೆ ಮೆರುಗು ನೀಡಲಾಯಿತು. ಮುಖಂಡರಾದ ದಲಿತ್ ನಾರಾಯಣಸ್ವಾಮಿ, ಚಿನ್ನಾಪುರ ಅನಿಲ್, ಚುಂಚದೇನಹಳ್ಳಿ ವೆಂಕಟೇಶ್, ಗಾಂಧಿನಗರ ರಾಜಕುಮಾರ್, ತೇರಳ್ಳಿ ರಾಜು, ಹಾಲೇರಿ ರಘು, ಮಾಲೂರು ಪ್ರಕಾಶ್, ಡಿಪಿಎಸ್ ಪ್ರಕಾಶ್, ರವಿಚಂದ್ರ, ಬಿಜೆಪಿ ಮಹೇಶ್ ಹಾಜರಿದ್ದರು.**

## ಸರ್ವೋದಯ ಮಂಡಲ ಜಿಲ್ಲಾ ಅಧ್ಯಕ್ಷರ ನಿಯೋಜನೆ

**ಬೆಂಗಳೂರು:** ಕರ್ನಾಟಕ ಸರ್ವೋದಯ ಮಂಡಲ ಪ್ರಸ್ತುತ ರಾಜ್ಯದ ಬೆಂಗಳೂರು ನಗರ ಹಾಗೂ ಗ್ರಾಮಾಂತರ, ರಾಮನಗರ, ಮಂಡ್ಯ, ಮೈಸೂರು, ಚಾಮರಾಜನಗರ ತುಮಕೂರು, ಹಾಸನ,ಚಿತ್ರದುರ್ಗ, ಕೋಲಾರ, ಮತ್ತು ಶಿವಮೊಗ್ಗ ಜಿಲ್ಲೆಗಳಲ್ಲಿ ಸಕ್ರಿಯವಾಗಿದ್ದು ಯುವಜನರಲ್ಲಿ ಸರ್ವೋದಯ – ಗಾಂಧೀ ಮೌಲ್ಯಗಳ ಪ್ರಚಾರ ಮಾಡುವ ಉದ್ದೇಶದಿಂದ ಮೂರು ಜಿಲ್ಲೆಗಳಲ್ಲಿ ಅಧ್ಯಕ್ಷರ ನಿಯೋಜನೆ ಮಾಡಿ ಆದೇಶ ಹೊರಡಿಸಿದೆ. ಕೊಪ್ಪಳ – ಹೊಸಪೇಟೆ ವಿಶ್ರಾಂತ ಪ್ರಾಂಶುಪಾಲ ಪಿ.ಎಸ್.ಗಿರಿರಾಜ್ ,ಹಾವೇರಿ – ರಾಜೇಂದ್ರ ಹೆಗಡೆ , ವಿಜಯನಗರ – ಗಂಗಾವತಿಯ ನಿವೃತ್ತ ಪ್ರಾಧ್ಯಾಪಕ ಡಾ.ಬಿ.ಸಿ ಐಗೋಳ್ , ಎಂದು ರಾಜ್ಯ ಸರ್ವೋದಯ ಮಂಡಲದ ಕಾರ್ಯದರ್ಶಿ ಡಾ. ಯ.ಚಿ. ದೊಡ್ಡಯ್ಯ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶಿಸ್ತು, ಸಮಯ ಪ್ರಜ್ಞೆ ಪಾಲಿಸಿ ಮುನ್ನಡೆಯಿರಿ

**ಚಾಮರಾಜನಗರ:** ವಿದ್ಯಾರ್ಥಿಗಳು ತಮ್ಮ ಶೈಕ್ಷಣಿಕ ಅವಧಿಯಲ್ಲಿ ಶಿಸ್ತು ಹಾಗೂ ಸಮಯ ಪ್ರಜ್ಞೆಯನ್ನು ಪಾಲಿಸಿ ಮುನ್ನಡೆಯುವಂತೆ ಮೈಸೂರು ಮಾನಸಗಂಗೋತ್ರಿಯ ಡಾ. ಬಿ.ಆರ್. ಅಂಬೇಡ್ಕರ್ ಸಂಶೋಧನಾ ಹಾಗೂ ವಿಸ್ತರಣಾ ಕೇಂದ್ರದ ನಿರ್ದೇಶಕರಾದ ಪ್ರೊ. ಜೆ. ಸೋಮಶೇಖರ್ ಅವರು ತಿಳಿಸಿದರು.



ಚಾಮರಾಜನಗರದ ಡಾ. ಬಿ.ಆರ್. ಅಂಬೇಡ್ಕರ್ ಭವನದಲ್ಲಿಂದು ಸರ್ಕಾರಿ ಪ್ರಥಮ ದರ್ಜೆ ಕಾಲೇಜು ವತಿಯಿಂದ ಹಮ್ಮಿಕೊಳ್ಳಲಾಗಿದ್ದ ಸಾಂಸ್ಕತಿಕ, ಕ್ರೀಡೆ, ಅಭಿವ್ಯಕ್ತಿ ಮತ್ತು ರಾಷ್ಟ್ರೀಯ ಸೇವಾ ಯೋಜನೆ ಚಟುವಟಿಕೆಗಳ ಸಮಾರೋಪ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಶಾಲಾ ಕಾಲೇಜು ವಿದ್ಯಾರ್ಥಿಗಳು ಕೇವಲ ಪಠ್ಯ ಪುಸ್ತಕಗಳ ಅಧ್ಯಯನದ ಜೊತೆಗೆ ಪಠ್ಯೇತರ ಚಟುವಟಿಕೆಗಳಾದ ಕಲೆ, ಸಂಸ್ಕೃತಿ, ಕ್ರೀಡೆಗಳು ಮತ್ತು ವಿದ್ಯಾರ್ಥಿಗಳಿಲ್ಲಿ ಶಿಸ್ತು, ಸಂಯಮವನ್ನು ರೂಢಿಸಿಕೊಳ್ಳಲು ನೆರವಾಗುವ ರಾಷ್ಟ್ರೀಯ ಸೇವಾ ಯೋಜನೆ ಚಟುವಟಿಕೆಗಳಲ್ಲಿ ಭಾಗವಹಿಸಿ ತಮ್ಮಲ್ಲಿರುವ ಪ್ರತಿಭೆಗಳನ್ನು ಅಭಿವ್ಯಕ್ತಿಗೊಳಿಸಬೇಕು ಎಂದರು.

ಕಾಲೇಜಿನಲ್ಲಿ ಆಗಿದ್ದಾಂಗ್ಗೆ ನಡೆಯುವ ವಿಚಾರ ಸಂಕಿರಣಗಳು, ಉಪನ್ಯಾಸ ಕಾರ್ಯಕ್ರಮಗಳಲ್ಲಿ ಪಾಲ್ಗೊಂಡು ಮಾಹಿತಿಗಳನ್ನೂ ಅರಿಯುವ ಅಭಿರುಚಿ ಗಳಿಸಿಕೊಂಡಾಗ ಮಾತ್ರ ಉತ್ತಮ ಜ್ಞಾನವುಳ್ಳ ವಿದ್ಯಾರ್ಥಿಯಾಗಿ ಹೊರಹೊಮ್ಮಲು ಸಾಧ್ಯವಾಗಲಿದೆ ಎಂದು ಪ್ರೊ. ಜೆ. ಸೋಮಶೇಖರ್ ಅವರು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲರಾದ ಪ್ರೊ. ಎಸ್. ಚಂದ್ರಮ್ಮ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು.

ಕಾಲೇಜಿನ ಉಪನ್ಯಾಸಕರಾದ ಡಾ. ಪಿ. ದೇವರಾಜು, ಎ.ಕ್ಯೂ.ಎ.ಸಿ ಸಮಿತಿ ಸಂಚಾಲಕರದ ಡಾ. ಚಿನ್ಮಯ್ ಭಟ್, ಸಾಂಸ್ಕೃತಿಕ ಸಮಿತಿ ಸಂಚಾಲಕರಾದ ಡಾ. ಪಿ.ಎಂ. ನಾಗೇಂದ್ರ ಕುಮಾರ್, ಕ್ರೀಡೆ ಮತ್ತು ಅಭಿವ್ಯಕ್ತಿ ಸಮಿತಿ ಸಂಚಾಲಕರಾಧ ಲೋಕೇಶ್, ರಾಷ್ಟ್ರೀಯ ಸೇವಾ ಯೋಜನೆ ಘಟಕ-1ರ ಸಂಚಾಲಕರಾದ ಡಾ. ಜಿ. ಮಲ್ಲೇಶ್, ಘಟಕ-2ರ ಸಂಚಾಲಕರಾದ ಎಂ.ಕೆ ಮಂಜುನಾಥ್ ಇದ್ದರು.

## ಜಗಜ್ಯೋತಿ ಬಸವೇಶ್ವರರ ಜಯಂತಿ

**ಕೋಲಾರ:** ಜನಜಾಗೃತಿ ಧರ್ಮ ಸಮಾರಂಭ ತೇಜೇಶಲಿಂಗ ಶಿವಾಚಾರ್ಯ ಮಹಾಸ್ವಾಮಿಗಳು ನಾಗಲಾಪುರ ಇವರ ಮೂವತ್ತಾರನೇ ಹುಟ್ಟುಹಬ್ಬ ಹಾಗೂ ಶ್ರೀಜಗದ್ಗುರು ರೇಣುಕಾಚಾರ್ಯರ ಜಯಂತಿ ಮತ್ತು ಶ್ರೀ ಜಗಜ್ಯೋತಿ ಬಸವೇಶ್ವರರ ಜಯಂತಿ ಹಾಗೂ ಜನಜಾಗೃತಿ ಧರ್ಮ ಸಮಾರಂಭವು ಶ್ರೀಮದ್ ನಾಗಲಾಪುರ ಬಸವಧರ್ಮ ಸಿಂಹಾಸನ ಸಂಸ್ಥಾನ ಮಠ ನಾಗಲಾಪುರ ಕೋಲಾರ ತಾಲ್ಲೂಕು ಮತ್ತು ಜಿಲ್ಲೆ ಇಲ್ಲಿ ಬುಧವಾರದಂದು ಸಾಂಪ್ರದಾಯಕವಾಗಿ ನೆರವೇರಿತು . ಈ ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ಶ್ರೀ ಷ ಬ್ರ ಮಲಯ ಶಾಂತಮುನಿ ದೇಶಿಕೇಂದ್ರ ಶಿವಾಚಾರ್ಯ ಸ್ವಾಮಿಗಳು ಶ್ರೀ ಮೇಲಣಗವಿಮಠ ಶಿವಗಂಗ ವಹಿಸಿದ್ದರು. ಈ ಕಾರ್ಯಕ್ರಮಕ್ಕೆ ಶ್ರೀ ವೀರಭದ್ರಸ್ವಾಮಿ ಸೇವಾ ಸಮಿತಿ ,ಬಸವೇಶ್ವರ ಭಕ್ತಮಂಡಳಿ ,ವೀರಶೈವ ಸಮಾಜ ಹೊಸಕೋಟೆ ,ಕರ್ನಾಟಕರಾಜ್ಯ ಶಿಕ್ಷಕರ ಕ್ಷೇಮಾಬಿವೃದ್ಧಿಸಂಘ ಮಾಲೂರು ಮತ್ತು ಕೋಲಾರ ಜಿಲ್ಲೆಯ ವೀರಶೈವ ಸಮಾಜ ಸಹಕಾರ ನೀಡಿದ್ದರು .



# ಮತ ಎಣಿಕೆಗೆ ಇರಲಿ ಎಚ್ಚರಿಕೆ

**ಚಾಮರಾಜನಗರ:** ಲೋಕಸಭಾ ಸಾರ್ವತ್ರಿಕ ಚುನಾವಣೆಯ ಮತ ಎಣಿಕೆಯು ಜೂನ್ 4ರಂದು ನಡೆಯಲಿದ್ದು, ಮತ ಎಣಿಕೆ ಕಾರ್ಯವನ್ನು ಜಾಗರೂಕತೆ ಹಾಗೂ ಜವಾಬ್ದಾರಿಯಿಂದ ನಿರ್ವಹಿಸುವಂತೆ 22-ಚಾಮರಾಜನಗರ (ಪ.ಜಾ) ಲೋಕಸಭಾ ಕ್ಷೇತ್ರದ ಸಹಾಯಕ ಚುನಾವಣಾಧಿಕಾರಿ ಹಾಗೂ ಹೆಚ್ಚುವರಿ ಜಿಲ್ಲಾಧಿಕಾರಿ ಗೀತಾ ಹುಡೇದ ಅವರು ಅಧಿಕಾರಿ ಹಾಗೂ ಸಿಬ್ಬಂದಿಗಳಿಗೆ ಸೂಚಿಸಿದರು.



ಚಾಮರಾಜನಗರದ ಜೆ.ಹೆಚ್. ಪಟೇಲ್ ಸಭಾಂಗಣದಲ್ಲಿ ಮತ ಎಣಿಕೆ ಹಿನ್ನೆಲೆಯಲ್ಲಿ ಸೂಕ್ಷ್ಮ ವೀಕ್ಷಕರು ಹಾಗೂ ಮತ ಎಣಿಕೆ ಅಧಿಕಾರಿಗಳಿಗೆ ಆಯೋಜಿಸಲಾಗಿದ್ದ ಚುನಾವಣಾ ಮತ ಎಣಿಕೆ ತರಬೇತಿ ಕಾರ್ಯಗಾರವನ್ನು ಉದ್ದೇಶಿಸಿ ಅವರು ಮಾತನಾಡಿದರು.

ಮತ ಎಣಿಕೆಯು ನಗರದ ನಂಜನಗೂಡು ರಸ್ತೆಯಲ್ಲಿರುವ ಬೇಡರಪುರದ ಸರ್ಕಾರಿ ಎಂಜಿನಿಯರಿಂಗ್ ಕಾಲೇಜಿನಲ್ಲಿ ನಡೆಯಲಿದ್ದು, ಮತ ಎಣಿಕೆ ಅಧಿಕಾರಿ ಹಾಗೂ ಸಿಬ್ಬಂದಿಗಳು ಕಡ್ಡಾಯವಾಗಿ ನಿಗದಿತ ಸಮಯಕ್ಕೆ ಸರಿಯಾಗಿ ಚುನಾವಣಾಧಿಕಾರಿಗಳ ಕಚೇರಿಯಿಂದ ನೀಡಿರುವ ಗುರುತಿನ ಚೀಟಿಯೊಂದಿಗೆ ಮತ ಎಣಿಕೆ ಕೇಂದ್ರಕ್ಕೆ ಹಾಜರಾಗಬೇಕು. ಎಲೆಕ್ಟ್ರಾನಿಕ್ ವಸ್ತುಗಳು, ಮೊಬೈಲ್ ಫೋನ್ ಹಾಗೂ ಸ್ಮಾರ್ಟ್ ವಾಚ್ ಗಳನ್ನು ಮತ ಎಣಿಕೆ ಕೇಂದ್ರಕ್ಕೆ ತರುವಂತಿಲ್ಲ ಎಂದು ತಿಳಿಸಿದರು.

ಮತ ಎಣಿಕೆ ಕೇಂದ್ರದ ಕಾರ್ಯನಿರ್ವಹಣೆಗೆ ನಿಯೋಜಿಸಲಾಗಿರುವ ಮಾಸ್ಟರ್ ಟ್ರೈನರ್ಗಳು, ಮತ ಎಣಿಕೆ ಅಧಿಕಾರಿ, ಸಿಬ್ಬಂದಿಗಳು ಎಣಿಕೆ ಕಾರ್ಯವನ್ನು ಅತ್ಯಂತ ಜವಾಬ್ದಾರಿಯಿಂದ ನಿರ್ವಹಿಸಬೇಕು. ಯಾವುದೇ ಗೊಂದಲಗಳಿಗೆ ಅವಕಾಶವಾಗದಂತೆ ಮತ ಎಣಿಕೆಯು ಸುಸೂತ್ರವಾಗಿ ನಡೆಯಲು ಕಾರ್ಯೋನ್ಮುಖರಾಗಬೇಕು ಎಂದು ಹೆಚ್ಚುವರಿ ಜಿಲ್ಲಾಧಿಕಾರಿ ಗೀತಾ ಹುಡೇದ ಅವರು ತಿಳಿಸಿದರು.

ತರಬೇತಿ ನೋಡಲ್ ಅಧಿಕಾರಿ ಲಿಂಗರಾಜೇ ಅರಸ್ ಅವರು ಪವರ್ ಪಾಯಿಂಟ್ ಮೂಲಕ ಮತ ಎಣಿಕೆಯ ಕಾರ್ಯ ಚಟುವಟಿಕೆಗಳನ್ನು ವಿವರಿಸಿ ಮಾತನಾಡಿ ವಿದ್ಯುನ್ಮಾನ ಮತ ಯಂತ್ರದ ಮತ ಎಣಿಕೆ ಕಾರ್ಯವು ಬೆಳಿಗ್ಗೆ 8 ಗಂಟೆಗೆ ಪ್ರಾರಂಭವಾಗಲಿದೆ. ಮತ ಎಣಿಕೆಯ ಎಲ್ಲಾ ಅಧಿಕಾರಿ ಹಾಗೂ ಸಿಬ್ಬಂದಿಗಳು ತರಬೇತಿಯಲ್ಲಿ ಸರಿಯಾದ ಸಲಹೆ ಹಾಗೂ ಮಾರ್ಗದರ್ಶನವನ್ನು ಪಡೆದು ಕರ್ತವ್ಯ ನಿರ್ವಹಿಸಬೇಕು. ಚುನಾವಣೆಯಲ್ಲಿ ಮತದಾನ ಮತ್ತು ಮತ ಎಣಿಕೆ ಕಾರ್ಯಗಳು ಒಂದೇ ನಾಣ್ಯದ ಎರಡು ಮುಖಗಳಿದ್ದಂತೆ. ಯಾವುದೇ ಲೋಪಗಳಿಗೆ ಆಸ್ಪದ ನೀಡದಂತೆ ಮತ ಎಣಿಕೆ ಕಾರ್ಯದಲ್ಲಿ ಪಾಲ್ಗೊಳ್ಳಬೇಕು ಎಂದರು. ನಗರದ ಸರ್ಕಾರಿ ಕಾಲೇಜಿನ ಉಪನ್ಯಾಸಕರು ಹಾಗೂ ಸಂಪನ್ಮೂಲ ವ್ಯಕ್ತಿ ಸವೀನ, ಮಾಸ್ಟರ್ ಟ್ರೈನರ್ ಗಳು, ಅಧಿಕಾರಿಗಳು, ಇತರರು ಕಾರ್ಯಾಗಾರದಲ್ಲಿ ಉಪಸ್ಥಿತರಿದ್ದರು.

## ಮತ ಎಣಿಕೆ ಪೂರ್ವ ಸಿದ್ಧತೆ ತರಬೇತಿ

**ಕೋಲಾರ:** ಮತ ಎಣಿಕೆಗೆ ನಿಗಧಿಪಡಿಸಿರುವ ಸೂಚನೆಗಳ ಕ್ರಮಬದ್ಧತೆಯಲ್ಲಿ ಯಾವುದೇ ರೀತಿಯ ವ್ಯತ್ಯಾಸವಾಗದಂತೆ ನಿಯಮಗಳನ್ನು ಪರಿಪಾಲಿಸಿ ಮತ ಎಣಿಕೆ ಕಾರ್ಯವನ್ನು ಯಶಸ್ವಿಗೊಳಿಸಲು ಜಿಲ್ಲಾಧಿಕಾರಿ ಅಕ್ರಂ ಪಾಷ ಸೂಚಿಸಿದರು.

ಇಂದು ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂನಲ್ಲಿ ಹಮ್ಮಿಕೊಳ್ಳಲಾಗಿದ್ದ ಲೋಕಸಭಾ ಚುನಾವಣೆ 2024ರ ಮತ ಎಣಿಕೆ ಪೂರ್ವ ಸಿದ್ಧತೆ ತರಬೇತಿಯ ಅಧ್ಯಕ್ಷತೆ ವಹಿಸಿದ್ದ ಜಿಲ್ಲಾಧಿಕಾರಿ ಮತ ಎಣಿಕೆಗೆ ನಿಯೋಜನೆಗೊಂಡ ಅಧಿಕಾರಿ ಮತ್ತು ಸಿಬ್ಬಂದಿಗೆ ಸಲಹೆ ಸೂಚನೆಗಳನ್ನು ನೀಡಿದರು.

ಮತ ಎಣಿಕೆ ಜೂನ್ 4ರಂದು ಸರ್ಕಾರಿ ಪ್ರಥಮ ದರ್ಜೆ ಕಾಲೇಜ್ ನಲ್ಲಿ ನಡೆಯಲಿದೆ. ಅಂದು ಬೆಳಗ್ಗೆ 8 ಗಂಟೆಯಿಂದ ಮತ ಎಣಿಕೆ ಪ್ರಕ್ರಿಯೆ ಪ್ರಾರಂಭವಾಗಲಿದ್ದು, ಮತ ಎಣಿಕೆಗೆ ನಿಯೋಜನೆಗೊಂಡಿರುವ ಅಧಿಕಾರಿ ಮತ್ತು ಸಿಬ್ಬಂದಿ ಉತ್ತಮ ರೀತಿಯಲ್ಲಿ ತರಬೇತಿಯನ್ನು ಪಡೆದುಕೊಂಡು ಮತ ಎಣಿಕೆ ಕಾರ್ಯದಲ್ಲಿ ಲೋಪದೋS 'ಗಳಾಗದಂತೆ ನೋಡಿಕೊಳ್ಳಬೇಕೆಂದರು.

ಅಂದು ಬೆಳಗ್ಗೆ 6ಗಂಟೆಗೆ ಮತ ಎಣಿಕೆ ಕೇಂದ್ರದಲ್ಲಿ ಹಾಜರಿದ್ದು, ಉಪಹಾರ ಮುಗಿಸಿ 7 ಗಂಟೆಯೊಳಗೆ ತಮಗೆ ನಿಗದಿ ಪಡಿಸಿದ ಮತ ಎಣಿಕೆ ಕೊಠಡಿಯಲ್ಲಿ ಹಾಜರಿರಬೇಕು ಹಾಗೂ ಮತ ಎಣಿಕೆ ಕೊಠಡಿಯೊಳಗಡೆ ಮೊಬೈಲ್ ನ್ನು ನಿ?ಧಿಸಲಾಗಿದೆ. ಮತ ಎಣಿಕೆ ಕೊಠಡಿಯೊಳಗಡೆ ಪೊಲೀಸ್, ಸೆಕ್ಯುರಿಟಿ ಸಿಬ್ಬಂದಿಗಳಿಗೆ ಅನಾವಶ್ಯಕವಾಗಿ ಪ್ರವೇಶವಿರುವುದಿಲ್ಲ, ಅಭ್ಯರ್ಥಿಗಳಲ್ಲದೆ ಸಚಿವರು, ರಾಜ್ಯ ಸಚಿವರು, ಕೇಂದ್ರ ಸಚಿವರಿಗೆ ಮತ ಎಣಿಕೆ ಕೊಠಡಿಯೊಳಗಡೆ ಪ್ರವೇಶ ಇರುವುದಿಲ್ಲ ಎಂಬ ಮಾಹಿತಿ ತಿಳಿದಿರಲಿ ಎಂದು ಹೇಳಿದರು.

ಮತ ಎಣಿಕೆ ಪ್ರಾರಂಭವಾಗುವ ಮೊದಲು ವಿವಿಪ್ಯಾಟ್ ಆನ್ ಮಾಡುವುದು, ರಿಸಲ್ಟ್ ಬಟನ್ ಪ್ರೆಸ್ ಮಾಡುವುದು ಹಾಗೂ ಅದನ್ನು ಕ್ಲೋಸ್ ಮಾಡುವಾಗ ಬಹು ಎಚ್ಚರಿಕೆಯಿಂದ ತಮಗೆ ವಹಿಸಿದ ಮಾರ್ಗಸೂಚಿಗಳಂತೆ ಕಾರ್ಯ ನಿರ್ವಹಿಸಬೇಕು. ಮತ ಎಣಿಕೆಗೆ ನಿಯೋಜನೆಗೊಂಡ ಏಜೆಂಟ್‌ರ ಬಳಿ ಶಾಂತವಾಗಿ ವರ್ತಿಸಿ, ಅವರಿಗೆ ಏನಾದರೂ ಸಂಶಯಗಳಿದ್ದರೆ ಅವುಗಳನ್ನು ಪರಿಹರಿಸಿರಿ. ಪ್ರತಿ ಇವಿಎಂ ಗಳಲ್ಲಿ ಎಣಿಕೆಯಾದ ತಕ್ಷಣ ನಿಖರವಾಗಿ ಅಂಕಿ ಅಂಶಗಳನ್ನು ಬರೆದುಕೊಳ್ಳಬೇಕು. ಇಂದಿನ ತರಬೇತಿ ಅವಧಿಯಲ್ಲಿ ಸ್ಪ?ವಾದ ಮಾಹಿತಿ ಹಾಗೂ ಮಾರ್ಗದರ್ಶನವನ್ನು ಪಡೆದುಕೊಳ್ಳಿ, ಏಕೆಂದರೆ ಮತ ಎಣಿಕೆ ಮೇಲ್ವಿಚಾರಕರ ಜವಾಬ್ದಾರಿ ಬಹು ಮುಖ್ಯವಾಗಿದೆ ಎಂದು ಹೇಳಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಎಂ.ನಾರಾಯಣ ಮಾತನಾಡಿ, ಅಂಚೆ ಮತಪತ್ರ ಎಣಿಕೆಗಾಗಿ ಪ್ರತ್ಯೇಕ ಕೊಠಡಿ ಹಾಗೂ 4 ಟೇಬಲ್ ವ್ಯವಸ್ಥೆ ಮಾಡಲಾಗಿದೆ. ಸರ್ವೀಸ್ ವೋಟ್‌ಗಳನ್ನು (ಇ.ಟಿ.ಪಿ.ಬಿ.ಎಸ್) ಚುನಾವಣಾಧಿಕಾರಿಗಳ ಸಮ್ಮುಖದಲ್ಲಿ ತಂತ್ರಾಂಶದಲ್ಲಿ ಮತ ಎಣಿಕೆ ಮಾಡಲಾಗುವುದು. ವಿಧಾನಸಭೆ ಕ್ಷೇತ್ರವಾರು ಐದು ಮತಗಟ್ಟೆಗಳ ವಿ.ವಿ. ಪ್ಯಾಟ್‌ಗಳನ್ನು ಲಾಟರಿ ಮುಖಾಂತರ ಆಯ್ಕೆ ಮಾಡಿ ಅಭ್ಯರ್ಥಿಗಳ, ಏಜೆಂಟರ ಸಮಕ್ಷಮದಲ್ಲಿ ವಿ.ವಿ.ಪ್ಯಾಟ್ ಸ್ಲಿಪ್ ಎಣಿಕೆ ಮಾಡಲಾಗುವುದು. ಮತ ಎಣಿಕೆ ಅಧಿಕಾರಿ ಮತ್ತು ಸಿಬ್ಬಂದಿಗಳ ವಾಹನಗಳನ್ನು ನಿಗಧಿತ ನಿಲುಗಡೆ ತಾಣಗಳಲ್ಲಿ ಮಾತ್ರ ನಿಲುಗಡೆ ಮಾಡಬೇಕು ಎಂದರು.

## ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಉಪ ಕಾರ್ಯದರ್ಶಿಗಳಾಗಿ ನೇಮಕ




**ಚಾಮರಾಜನಗರ:** ಚಾಮರಾಜನಗರ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ಎಂ. ಶ್ರೀಧರ ಅವರು ವರ್ಗಾವಣೆಗೊಂಡು ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಉಪ ಕಾರ್ಯದರ್ಶಿ ಹುದ್ದೆಗೆ ನೇಮಕಗೊಂಡಿದ್ದು, ಪ್ರಸ್ತುತ ಚಾಮರಾಜನಗರ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾಗಿ ಹಿರಿಯ ಸಿವಿಲ್ ನ್ಯಾಯಾಧೀಶರಾದ ಈಶ್ವರ್ ಅವರು ವರದಿ ಮಾಡಿಕೊಂಡಿದ್ದಾರೆ.

ಕಳೆದ ಮೂರು ವರ್ಷಗಳಿಂದ ಹಿರಿಯ ಸಿವಿಲ್ ನ್ಯಾಯಾಧೀಶರಾಗಿದ್ದ ಎಂ. ಶ್ರೀಧರ ಅವರು ಜಿಲ್ಲಾ, ತಾಲೂಕು ಹಾಗೂ ಗ್ರಾಮೀಣ ಭಾಗದಲ್ಲಿ ಸಾರ್ವಜನಿಕರಿಗೆ ಉಚಿತ ಮತ್ತು ತ್ವರಿತವಾಗಿ ಕಾನೂನು ನೆರವನ್ನು ತಲುಪಿಸುವ ನಿಟ್ಟಿನಲ್ಲಿ ಪ್ರಾಧಿಕಾರದ ಕಾರ್ಯಚಟುವಟಿಕೆಗಳ ಮೂಲಕ ಸಕ್ರಿಯರಾಗಿ ಕರ್ತವ್ಯ ನಿರ್ವಹಿಸಿದ್ದರು. ಪ್ರಸ್ತುತ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಉಪ ಕಾರ್ಯದರ್ಶಿ ಹುದ್ದೆಗೆ ಎಂ. ಶ್ರೀಧರ ಅವರು ನೇಮಕಗೊಂಡಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

## ಕಾಂಗ್ರೆಸ್ ಅಭ್ಯರ್ಥಿ ಪರ ಶಾಸಕ ಪುಟ್ಟರಂಗಶೆಟ್ಟಿ ಮತಯಾಚನೆ

**ಚಾಮರಾಜನಗರ:** ದಕ್ಷಿಣ ಶಿಕ್ಷಕರ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿಯಾಗಿರುವ ಮರಿತಿಬ್ಬೇಗೌಡರ ಪರ ಶಾಸಕ ಸಿ.ಪುಟ್ಟರಂಗಶೆಟ್ಟಿ ಚಾಮರಾಜನಗರ ತಾಲೂಕಿನ ಮಂಗಲ, ಮಾದಾಪುರ ಸೇರಿದಂತೆ ವಿವಿಧ ಶಾಲೆಗಳಿಗೆ ಭೇಟಿನೀಡಿ ಶಿಕ್ಷಕರಲ್ಲಿ ಮತಯಾಚಿಸಿದರು. ನಂತರ ಅವರು ಮಾತನಾಡಿ, ಹಿಂದಿನ ಯುಪಿಎ ಸರ್ಕಾರ ಮತ್ತು ಇಂದಿನ ರಾಜ್ಯ ಕಾಂಗ್ರೆಸ್ ಸರ್ಕಾರ ಶಿಕ್ಷಣಕ್ಕೆ ಹೆಚ್ಚು ಒತು ನೀಡುವ ಮೂಲಕ ಶಿಕ್ಷಕರ ಹಲವಾರು ಬೇಡಿಕೆ ಈಡೇರಿಸಿದೆ. ಮರಿತಿಬ್ಬೇಗೌಡರು ನಾಲ್ಕು ಬಾರಿ ಗೆಲುವು ಸಾಧಿಸಿ, ಶಿಕ್ಷಕರ ಸಮಸ್ಯೆಗಳಿಗೆ ಸ್ಪಂದಿಸಿದ್ದಾರೆ. ಅವರ ಗೆಲುವು ಈ ಬಾರಿ ನಿಶ್ಚಿತ ಎಂಬ ವಿಶ್ವಾಸವ್ಯಕ್ತಪಡಿಸಿದರು. ಜಿಲ್ಲಾಕಾಂಗ್ರೆಸ್ ಅಧ್ಯಕ್ಷ ಪಿ.ಮರಿಸ್ವಾಮಿ, ಉಪಾಧ್ಯಕ್ಷ ಬಿ.ಕೆ. ರವಿಕುಮಾರ್, ಪ್ರಧಾನ ಕಾರ್ಯದರ್ಶಿ ಚಿಕ್ಕಮಹದೇವು, ಕಾಗಲವಾಡಿಚಂದ್ರು, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಮಹಮದ್ ಅಸ್ಗರ್, ಮಾದಾಪುರ ಗ್ರಾಪಂ ಅಧ್ಯಕ್ಷ ರೂಪೇಶ್, ಮಂಗಲಗ್ರಾಪಂ ಅಧ್ಯಕ್ಷ ಅಣ್ಣಪ್ಪಸ್ವಾಮಿ, ಜಿಲ್ಲಾ ಅಸಂಘಟಿತ ಕಾರ್ಮಿಕ ಸಂಘದ ಅಧ್ಯಕ್ಷ ಸ್ವಾಮಿ, ಮಾಜಿ ಗ್ರಾ,ಪಂ ಅಧ್ಯಕ್ಷ ಶಿವಣ್ಣ,ಮುಖಂಡರಾದ ಮಂಗಲಶಿವಣ್ಣ, ಸೋಮಣ್ಣೆಗೌಡ, ಮಹದೇವ್ ಮುಸಗಾಪುರ,ವಿನೋದ್,ದೂಡ್ಡಸ್ವಾಮಿ, ಸೇರಿದಂತೆ ಇತರರು ಇದ್ದರು,



## ಡೊನೇಷನ್ ಪಡೆದರೆ ಶಾಲಾ ಮಾನ್ಯತೆ ರದ್ದು

**ಕೋಲಾರ:** ಜಿಲ್ಲೆಯ ಅನುದಾನ ರಹಿತ ಅಥವಾ ಅನುದಾನಿತ ಖಾಸಗಿ ಶಾಲೆಗಳಲ್ಲಿ ಮಕ್ಕಳ ಪ್ರವೇಶಾತಿಗಾಗಿ ಯಾವುದೇ ರೀತಿಯ ಡೊನೇಷನ್ ಪಡೆಯುವಂತಿಲ್ಲ ಒಂದು ವೇಳೆ ಕಾನೂನು ಬಾಹಿರವಾಗಿ ದೇಣಿಗೆ ಪಡೆದಿರುವುದು ಕಂಡುಬಂದಲ್ಲಿ ಅಂತಹ ಶಾಲೆಗಳ ನೋಂದಣಿ ರದ್ದು ಮಾಡಿ ಆಡಳಿತ ಮಂಡಳಿಯ ವಿರುದ್ಧ ಕಠಿಣ ಕ್ರಮ ತೆಗೆದುಕೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿ ಅಕ್ರಂ ಪಾಷ ಅವರು ಎಚ್ಚರಿಕೆ ನೀಡಿದ್ದಾರೆ.

ಪ್ರಸಕ್ತ ಶೈಕ್ಷಣಿಕ ಸಾಲಿಗೆ ಇಂದಿನಿಂದ ಪ್ರವೇಶ ಪ್ರಕ್ರಿಯೆ ಆರಂಭಗೊಂಡಿದೆ ಕೆಲವು ಶಾಲೆಗಳಲ್ಲಿ ಡೊನೇಷನ್ ಪಡೆಯಲಾಗುತ್ತದೆ ಎಂದು ಸಾರ್ವಜನಿಕ ವಲಯದಲ್ಲಿ ದೂರುಗಳು ಕೇಳಿಬಂದಿರುವ ಹಿನ್ನೆಲೆಯಲ್ಲಿ ಅವರು ಈ ಎಚ್ಚರಿಕೆ ನೀಡಿದ್ದಾರೆ. ನಿಯಮಾವಳಿಗಳನ್ವಯು ಸರ್ಕಾರವು ನಿಗಧಿಪಡಿಸಲಾದ ಶುಲ್ಕಗಳನ್ನು ಮಾತ್ರ ಪಡೆದುಕೊಂಡು ಪ್ರವೇಶಾತಿ ನೀಡಬೇಕು. ಒಂದು ವೇಳೆ ಕಾನೂನು ಬಾಹಿರವಾಗಿ ಡೊನೇಷನ್ ಪಡೆದರೆ ಆರ್.ಟಿ.ಇ ಕಾಯ್ದೆ ಪ್ರಕಾರ ಅಂತಹ ಶಾಲೆಗಳ ನೋಂದಣಿಯನ್ನು ರದ್ದು ಪಡಿಸಲು ಕ್ರಮಕೈಗೊಳ್ಳಲಾಗುವುದು ಎಂದು ಅವರು ತಿಳಿಸಿದರು. ಪಾಲಕರು ಹಾಗೂ ಸಾರ್ವಜನಿಕರ ಮಾಹಿತಿಗಾಗಿ ಪ್ರತಿಯೊಂದು ಶಾಲೆಯು ತನ್ನ ಸೂಚನಾ ಫಲಕದಲ್ಲಿ ಪ್ರವೇಶ ಶುಲ್ಕ ಕುರಿತು ಸ್ಪಷ್ಟ ಮಾಹಿತಿಯನ್ನು ಪ್ರದರ್ಶಿಸಬೇಕು. ಶಿಕ್ಷಣ ಹಕ್ಕು ಕಾಯ್ದೆ 2009ರ ಸೆಕ್ಷನ್ (2)ಬಿ ನಂತೆ ಎಲ್ಲಾ ಖಾಸಗಿ ಶಾಲೆಗಳು ತಾವು ಅಧಿಸೂಚಿಸಿರುವ ಶುಲ್ಕವನ್ನು ಶಾಲೆಯ ಅಧಿಕೃತ ಅಂತರ್ಜಾಲತಾಣ, ಶಾಲಾ ನೋಟಿಸ್ ಬೋರ್ಡ್ ಹಾಗೂ ಎಸ್.ಎ.ಟಿ.ಎಸ್. ಇಲಾಖಾ ಅಂತರ್ಜಾಲತಾಣಗಳಲ್ಲಿ ಪೋಷಕರು ಮತ್ತು ಸಾರ್ವಜನಿಕರಿಗೆ ಶುಲ್ಕದ ಬಗ್ಗೆ ಮಾಹಿತಿ ಲಭ್ಯವಾಗುವಂತೆ ಪ್ರಕಟಿಸಬೇಕು. ಇದರಿಂದ ಪಾಲಕರು ಮತ್ತು ಸಾರ್ವಜನಿಕರಿಗೆ ಪ್ರವೇಶ ಶುಲ್ಕದ ಬಗ್ಗೆ ಮಾಹಿತಿ ಲಭ್ಯವಾಗುತ್ತದೆ ಮತ್ತು ಪ್ರವೇಶ ಪ್ರಕ್ರಿಯೆ ಕುರಿತ ಗೊಂದಲ ನಿವಾರಣೆಯಾಗುತ್ತದೆ ಎಂದರು. ಜಿಲ್ಲೆಯಲ್ಲಿ ಯಾವುದೇ ಶಾಲೆಯು ಡೊನೇಷನ್ ಕೇಳಿದರೆ ಅಥವಾ ಡೊನೇಷನ್ ಪಡೆದುಕೊಂಡರೆ ಜಿಲ್ಲಾಧಿಕಾರಿಗಳ ಕಛೇರಿ ಅಥವಾ ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರ (ಡಿ.ಡಿ.ಪಿ.ಐ) ಕಚೇರಿಗೆ ಸಾರ್ವಜನಿಕರು ದೂರು ಸಲ್ಲಿಸಬಹುದೆಂದು ಜಿಲ್ಲಾಧಿಕಾರಿ ಅಕ್ರಂ ಪಾಷ ಅವರು ತಿಳಿಸಿದ್ದಾರೆ. ಸಾರ್ವಜನಿಕರ ದೂರು ಆಧರಿಸಿ ಅಂತಹ ಶಾಲೆಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಅವರು ತಿಳಿಸಿದರು.

# ಫ್ಲೋರೈಡ್ ಮುಕ್ತ ಜಿಲ್ಲೆಯಾಗಿ ಮಾಡಲು ಕೈ ಜೋಡಿಸಬೇಕು

**ತುಮಕೂರು:** ಇತ್ತೀಚಿನ ದಿನಗಳಲ್ಲಿ ಆಧುನಿಕ ವೈದ್ಯಕೀಯ ಕ್ಷೇತ್ರ ಪ್ರಬಲಗೊಂಡುತ್ತಿದಂತಹ ಸಾಂಕ್ರಾಮಿಕ ರೋಗಗಳಾದ ರಕ್ತಹೀನತೆ, ಸಕ್ಕರೆ ಕಾಯಿಲೆ ಇತ್ಯಾದಿ ಪ್ರಕರಣಗಳ ಕಂಡು ಬರುತ್ತಿವೆ. ತುಮಕೂರು ಜಿಲ್ಲೆಯಲ್ಲಿಯೇ ಕೊರಟಗೆರೆ, ಮಧುಗಿರಿ, ಪಾವಗಡ, ಶಿರಾಗಳಲ್ಲಿ ಅತಿ ಹೆಚ್ಚಾಗಿ ಫ್ಲೋರೋಸಿಸ್ ಪ್ರಕರಣಗಳು ಕಂಡು ಬರುತ್ತವೆ. ನೀರಿನಲ್ಲಿ ಫ್ಲೋರೈಡ್ ಸಾಂದ್ರತೆ ಹೆಚ್ಚಾಗಿದ್ದು, ಮೂಳೆ ಮತ್ತು ದಂತದ ಫ್ಲೋರೋಸಿಸ್ ಪ್ರಕರಣಗಳು ವರದಿಯಾಗಿದೆ. ಫ್ಲೋರೈಡ್ ಮುಕ್ತ ಜಿಲ್ಲೆಯಾಗಿ ಮಾಡಲು ನಾವು ಸರ್ಕಾರದ ಜೊತೆ ಕೈ ಜೋಡಿಸಬೇಕು. ಇದರ ಜೊತೆ ಸಾರ್ವಜನಿಕರು ಸಹ ಸಹಕರಿಸಬೇಕು ಎಂದು ಶ್ರೀದೇವಿ ಚಾರಿಟಬಲ್ ಟ್ರಸ್ಟ್‌ನ ಅಧ್ಯಕ್ಷರಾದ ಡಾ.ಎಂ.ಆರ್.ಹುಲಿನಾಯ್ಕರ್‌ರವರು ತಿಳಿಸಿದರು.

ನಗರದ ಶಿರಾರಸ್ತೆಯ ಶ್ರೀದೇವಿ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಆಸ್ಪತ್ರೆಯ ವತಿಯಿಂದ ಜೀವ ರಸಾಯನಶಾಸ್ತ್ರ ಮತ್ತು ಶ್ರೀದೇವಿ ಸಮುದಾಯ ಔಷಧ ಆರೋಗ್ಯ ವಿಭಾಗದ ಸಂಯುಕ್ತಾಶ್ರಯದಲ್ಲಿ ''ಮೈಕ್ರೋನ್ಯೂಟ್ರಿಯೆಂಟ್ಸ್ ಅಂಡ್ ಹೆಲ್ತ್'' ಎಂಬ ವಿಷಯದ ಬಗ್ಗೆ ಮೇ.29 ರಂದು ಬುಧವಾರ ಬೆಳಿಗ್ಗೆ 11 ಗಂಟೆಗೆ ನಿರಂತರ ವೈದ್ಯಕೀಯ ಶಿಕ್ಷಣ (ಸಿ.ಎಂ.ಇ) ಕಾರ್ಯಾಗಾರವನ್ನು ಶ್ರೀದೇವಿ ಆಸ್ಪತ್ರೆಯ ಸಭಾಂಗಣದಲ್ಲಿ ಆಯೋಜಿಸಲಾಗಿತ್ತು. ಉದ್ಘಾಟಿಸಿ ಮಾತನಾಡುತ್ತಾ ಅವರು ಫ್ಲೋರೋಸಿಸ್ ಒಂದು ತಡೆಗಟ್ಟಬಹುದಾದ ಕಾಯಿಲೆಯಾಗಿದ್ದು, ಅಯೋಡಿನ್ ಕೊರತೆಯನ್ನು ಹೆಚ್ಚಾಗಿದ್ದು ಅದನ್ನು ಗುರುತಿಸಿ ತಡೆಗಟ್ಟುವ ಕ್ರಮಗಳ ಬಗ್ಗೆ ಸ್ವವಿಸ್ತಾರವಾಗಿ ವಿವರಿಸಿದರು.




ಈ ಕಾರ್ಯಕ್ರಮದಲ್ಲಿ ಶ್ರೀದೇವಿ ಚಾರಿಟಬಲ್ ಟ್ರಸ್ಟ್‌ನ ಅಧ್ಯಕ್ಷರಾದ ಡಾ.ಎಂ.ಆರ್.ಹುಲಿನಾಯ್ಕರ್, ಮಾನವ ಸಂಪನ್ಮೂಲ ವಿಭಾಗದ ನಿರ್ದೇಶಕರಾದ ಎಂ.ಎಸ್ .ಪಾಟೀಲ್ ಹಾಗೂ ನೇತ್ರ ತಜ್ಞರಾದ ಡಾ.ಲಾವಣ್ಯರವರು ಕಾರ್ಯಕ್ರಮಕ್ಕೆ ಶುಭ ಹಾರೈಸಿದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಆರೋಗ್ಯ ಕುಟುಂಬ ಕಲ್ಯಾಣಾಧಿಕಾರಿಯಾದ ಡಾ.ಮಂಜುನಾಥ್‌ರವರು ಮಾತನಾಡುತ್ತಾ ಜಿಲ್ಲೆಯಲ್ಲಿ ರಕ್ತಹೀನತೆ ಮತ್ತು ಫ್ಲೋರೋಸಿಸ್ ತಡೆಗೆ ಜಿಲ್ಲಾ ಆರೋಗ್ಯ ಇಲಾಖೆ ಕ್ರಮ ಕೈ ಗೊಂಡಿರುವ ಬಗ್ಗೆ ಸಂಕ್ಷಿಪ್ತವಾಗಿ ವಿವರಿಸುತ್ತಾ ಮಹಿಳೆಯರಲ್ಲಿ ಹೆಚ್ಚು ರಕ್ತಹೀನತೆಯ ಪ್ರಕರಣಗಳು ವರದಿಯಾಗುತ್ತಿದ್ದು ಇದ್ದರಿಂದ ತಾಯಿಂದಿರ ಮರಣ ಮತ್ತು ಶಿಶುವಿನ ಮರಣ ಸಾಂದ್ರತೆ ಹೆಚ್ಚಾಗಿರುತ್ತದೆ. ನಮ್ಮ ಜಿಲ್ಲೆಯಲ್ಲಿ ಆರೋಗ್ಯ ಅಭಿಯಾನದ ಅಡಿಯಲ್ಲಿ ಹೆಣ್ಣು ಮಕ್ಕಳಲ್ಲಿ ರಕ್ತಹೀನತೆ ಗುರುತಿಸುವ ಕಾರ್ಯ ಮಾಡಲಾಗುತ್ತಿದ್ದು ಆದ್ದರಿಂದ ವೈದ್ಯಕೀಯ ಕಾಲೇಜಿನ ಈ ನಿಟ್ಟಿನಲ್ಲಿ ಸಹಕರಿಸಬೇಕು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಶ್ರೀದೇವಿ ವೈದ್ಯಕೀಯ ಪ್ರಾಂಶುಪಾಲರಾದ ಡಾ.ಎಂ.ಎಲ್.ಹರೇಂದ್ರಕುಮಾರ್ ರವರು ಮಾತನಾಡುತ್ತಾ ಇತಂಹ ವೈದ್ಯಕೀಯ ಕಾರ್ಯಾಗಾರಗಳು ಆಯೋಜಿಸುವುದು ಒಂದು ಉತ್ತಮ ಬೆಳವಣಿಗೆ ನಿರಂತರ ಕಲಿಕೆ ವೈದ್ಯಕೀಯ ಅವಿಷ್ಕಾರಗಳು ನಡೆಯುತ್ತಿರುವುದರಿಂದ ಇದು ವೈದ್ಯಕೀಯ ಶಿಕ್ಷಣದಲ್ಲಿ ನಿರಂತರ ಕಲಿಕೆ ಮಾಡುವುದರಿಂದ ವೈದ್ಯ ವಿದ್ಯಾರ್ಥಿಗಳಿಗೆ ಜ್ಞಾನವೃದ್ಧಿ ಯಾಗುತ್ತದೆ. ಇಂದಿನ ನಿರಂತರ ವೈದ್ಯಕೀಯ ಕಲಿಕಾ ಶಿಕ್ಷಣದ ಮೈಕ್ರೋನ್ಯೂಟ್ರಿಯೆಂಟ್ಸ್ ಅಂಡ್ ಹೆಲ್ತ್‌ದ ಅಗತ್ಯತೆಗಳು ಮತ್ತು ಉಪಯೋಗಗಳ ಬಗ್ಗೆ ಒಂದು ದಿನದ ಕಾರ್ಯಾಗಾರವನ್ನು ಹಮ್ಮಿಕೊಂಡಿದ್ದು ಸದರಿ ಪ್ರಯೋಜನಗಳನ್ನು ವೈದ್ಯ ವಿದ್ಯಾರ್ಥಿಗಳು, ಸಾರ್ವಜನಿಕರು ಈ ಪ್ರಯೋಜನಗಳನ್ನು ಪಡೆದುಕೊಂಡರು.

ಇದೇ ಸಂದರ್ಭದಲ್ಲಿ ಬೆಂಗಳೂರಿನ ರಾಜ್ಯ ಪೌಷ್ಟಿಕಾಂಶ ಸಲಹೆಗಾರರಾದ ಕೆ.ವಿಶ್ವನಾಥ್, ಬೆಂಗಳೂರಿನ ಆರೋಗ್ಯ ಸೌಧದ ಪೌಷ್ಟಿಕಾಂಶ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಯ ಉಪನಿರ್ದೇಶಕರಾದ ಡಾ.ಎಸ್.ಎಂ.ಶ್ರೀಧರ್, ತುಮಕೂರು ಸಮುದಾಯ ಔಷಧ ಆರೋಗ್ಯ ವಿಭಾಗದ ಮುಖ್ಯಸ್ಥರಾದ ಡಾ.ಭರತೇಶ್, ಕೋಲಾರದ ಎಸ್.ಡಿ.ಯು.ಎಂ.ಸಿ. ಜೀವ ರಸಾಯನಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಡಾ.ಕೆ.ಎನ್.ಶಶಿಧರ್, ತುಮಕೂರು ಜಿಲ್ಲಾ ಆರೋಗ್ಯ ಕುಟುಂಬ ಕಲ್ಯಾಣಾಧಿಕಾರಿಯಾದ ಡಾ.ಮಂಜುನಾಥ್‌ರವರು ಶ್ರೀದೇವಿ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಆಸ್ಪತ್ರೆಯ ವತಿಯಿಂದ ಸನ್ಮಾನಿಸಿ ಗೌರವಿಸಲಾಗಿತ್ತು.

ಇದೇ ಸಂದರ್ಭದಲ್ಲಿ ಶ್ರೀದೇವಿ ಆಸ್ಪತ್ರೆಯ ವೈದ್ಯಕೀಯ ಅಧೀಕ್ಷಕರಾದ ಡಾ.ಕೆ.ಮೋಹನ್‌ಕುಮಾರ್, ಶ್ರೀದೇವಿ ಸಮುದಾಯ ಔಷಧ ಆರೋಗ್ಯ ವಿಭಾಗದ ಮುಖ್ಯಸ್ಥರಾದ ಡಾ.ಪಿ.ಎಂ.ರವೀಶ್, ಡಾ.ರಂಗಸ್ವಾಮಿ, ಜೀವ ರಸಾಯನಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಡಾ.ಟಿ.ಜಿ.ಸತೀಶ್, ಡಾ.ಎಸ್.ಎಂ.ಶ್ರೀಧರ್, ತುಮಕೂರು ಜಿಲ್ಲಾ ಆರೋಗ್ಯ ಕುಟುಂಬ ಕಲ್ಯಾಣಾಧಿಕಾರಿಯಾದ ಡಾ.ಮಂಜುನಾಥ್‌ರವರು ಹಾಗೂ ವಿವಿಧ ವಿಭಾಗದ ಮುಖ್ಯಸ್ಥರು, ಪದವಿ ಮತ್ತು ಸ್ನಾತಕೋತ್ತರ ವೈದ್ಯ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

## ಅಪಾಯದಂಚಿನತ್ತ ಬ್ರಿಟೀಷರು ನಿರ್ಮಾಣ ಮಾಡಿರುವ ಮುಡಿಗುಂಡಂ ಸೇತುವೆ

**ಚಾಮರಾಜನನಗರ:** ಸ್ವಾತಂತ್ರ್ಯ ಪೂರ್ವದಲ್ಲಿ ನಿರ್ಮಾಣಗೊಂಡಿರುವ ಬ್ರಿಟೀಷ್ ರು ನಿರ್ಮಿಸಿರುವ ಹೊನ್ನಳೆ (ಸುವರ್ಣಾವತಿ) ಸೇತುವೆ ಅಪಾಯದಂಚಿನಲ್ಲಿದೆ.

ಚಾಮರಾಜನಗರ ಜಿಲ್ಲೆಯ ಕೊಳ್ಳೇಗಾಲ ಪಟ್ಟಣದ ಮುಡಿಗುಂಡಂ ಬಳಿ ಕೊಳ್ಳೇಗಾಲ-ಮೈಸೂರು-ಚಾಮರಾಜನಗರ ನಡುವೆ ಇರುವ ಹೊನ್ನೊಳೆ ಸೇತುವೆ ಇದೀಗ ಅಪಾಯದಂಚಿನತ್ತ ಸಾಗಿದೆ.

ಸ್ವಾತಂತ್ರ್ಯ ಪೂರ್ವದಲ್ಲಿ ಬೊಟ್ರೀಷರ ಆಳ್ವಿಕೆಯಲ್ಲಿ ನಿರ್ಮಾಣಗೊಂಡಿರುವ ಸೇತುವೆ ಶತಮಾನದತ್ತ ಸಾಗುತ್ತದೆ. ಪ್ರತಿನಿತ್ಯ ಇದೇ ಸೇತುವೆ ಮೇಲೆ ಸಾವಿರಾರು ವಾಹನಗಳು ಸಂಚಾರ ಮಾಡುತ್ತವೆ. ಅದರಲ್ಲೂ ಹೆಚ್ಚಾಗಿ ಪವಾಡ ಪುರುಷ ಮಲೆ ಮಹದೇಶ್ವರ ಬೆಟ್ಟಕ್ಕೆ ತೆರಳುವ ಭಕ್ತರು ಸಾಗುವ ಬಸ್, ಹಾಗೂ ಇನ್ನಿತರ ವಾಹನಗಳೇ ಅಧಿಕವಾಗಿರುತ್ತದೆ.

1934 ರಲ್ಲಿ ಬ್ರಿಟೀಷರ ಆಳ್ವಿಕೆಯಲ್ಲಿ ಅಂದಿನ ತಂತ್ರಜ್ಞಾನಕ್ಕೆ ತಂಕ್ಕಂತೆ ಹಾಗೂ ವಾಹನ ಸಂಚಾರಕ್ಕೆ ತಕ್ಕಂತೆ ಹೊನ್ನೊಳೆ ಸೇತುವೆ ನಿರ್ಮಾಣವಾಗಿತ್ತು. ಇದೀಗ ಜನ ಸಂಖ್ಯೆ ಹೆಚ್ಚಾಗಿದ್ದು, ಇದರ ಜೊತೆಗೆ ವಾಹನ ಸಂಚಾರವು ಬಿಡುವಿಲ್ಲದೆ ಸಂಚಾರಿಸುತ್ತಿರುತ್ತದೆ. ಅಧಿಕ ಭಾರ ಹೊತ್ತ ವಾಹನಗಳು ಸೇತುವೆ ಮೇಲೆ ಸಂಚಾರ ಮಾಡಿದರೆ ಸೇತುವೆಯು ತೀರಾ ಅಪಾರದಂಚಿಗೆ ಸಿಲುಕಲಿದೆ.

ಈಗಾಗಲೇ ಈ ಬಗ್ಗೆ ಲೋಕೋಪಯೋಗಿ ಇಲಾಖೆಗೆ ಮಾಹಿತಿ ಇದ್ದರೂ ಸಹ ಅಧಿಕಾರಿಗಳು ಕಾಟಾಚಾರಕ್ಕೆ ಎಂಬಂತೆ ಸ್ಥಳ ಪರಿಶೀಲನೆ ಮಾಡಿದ್ದಾರೆ ವಿನಃ ಹೊಸ ಸೇತುವೆ ನಿರ್ಮಾಣಕ್ಕೆ ಮುಂದಾಗಲಿಲ್ಲ ಎಂಬ ಆರೋಪ ಸಾರ್ವಜನಿಕರಿಂದ ಕೇಳಿ ಬರುತ್ತಿದೆ. ಈಗಾಗಲೇ ಈ ಸೇತುವೆಯ ಕೆಳಗೆ ಬಿರುಕು ಬಿಟ್ಟಿದ್ದು, ತಡೆಗೋಡೆಗಳು ಕುಸಿಯುತ್ತಿದೆ. ಸೇತುವೆ ನಿರ್ಮಾಣಕ್ಕೆ ಬಳಸಿರುವ ಕಬ್ಬಿಣಗಳು ತುಕ್ಕು ಹಿಡಿಯುತ್ತಿದ್ದು, ಕಬ್ಬಿಣದ ಶಕ್ತಿ ಕುಂದುತ್ತಿದೆ. ಏನಾದರೂ ಸೇತುವೆ ಕುಸಿದರೆ ಕೊಳ್ಳೇಗಾಲ, ಮೈಸೂರು ಮತ್ತು ಚಾಮರಾಜನಗರ ಸಂಚಾರ ಬಂದ್ ಆಗಲಿದೆ. ಈ ಬಗ್ಗೆ ರಾಜ್ಯ ಸರ್ಕಾರವು ಗಮನ ಹರಿಸಿ ಮುಡಿಗುಂಡಂ ಬಳಿ ಶಾಶ್ವತವಾದ ಬಲಿಷ್ಟ ಸೇತುವೆಯನ್ನು ನಿರ್ಮಾಣ ಮಾಡಬೇಕಾಗಿದೆ ಎನ್ನುವುದು ಈ ಭಾಗದ ಜನತೆಯ ಮನವಿಯಾಗಿದೆ.

# ಟೇಕಲ್‌ನ ಬ್ಯಾಂಕ್ ಆಫ್ ಬರೋಡ ಗ್ರಾಹಕರಿಗೆ ಕಿರಿಕಿರಿ




**ಗ್ರಾಹಕರಿಗೆ ಆಗುವ ತೊಂದರೆಗಳ ಬಗ್ಗೆ ಶಾಖಾ ವ್ಯವಸ್ಥಾಪಕರ ಬಳಿ ಮನವಿ ಮಾಡಲು ಸಾಧ್ಯವಾಗದ ಸ್ಥಿತಿ**

**ಟೇಕಲ್:** ಟೇಕಲ್‌ನ ಹೃದಯ ಭಾಗದಲ್ಲಿರುವ ಬ್ಯಾಂಕ್ ಆಫ್ ಬರೋಡವು ಗ್ರಾಹಕರಿಗೆ ಎಲ್ಲಾ ರೀತಿಯಿಂದ ಹಿಂಸೆ ನೀಡುತ್ತಿದ್ದು ಬ್ಯಾಂಕಿನಲ್ಲಿ ಯಾವುದೇ ವ್ಯವಹಾರ ಮಾಡಲು ಒಂದು ದಿನ ಬೇಕು. ಇದು ಈ ಬ್ಯಾಂಕಿನ ನರಕಯಾತನೆಯಾಗಿದೆ ಎಂಬುದು ಗ್ರಾಹಕರ ಅಳಲು.

ಈ ಬ್ಯಾಂಕಿಗೆ ಬರುವುದು ಬಹುತೇಕ ಗ್ರಾಮೀಣ ಭಾಗದವರು ಹಾಗೂ ರೈತರು ಯಾವುದೇ ವಹಿವಾಟು ಮಾಡಬೇಕಾದರೆ ಗಂಟೆ ಗಟ್ಟಲೆ ಕಾಯಕಬೇಕು ಮಾಹಿತಿ ಕೇಳಿದರೆ ಸರಿಯಾಗಿ ಸ್ಪಂದಿಸುವುದಿಲ್ಲ. ಬ್ಯಾಂಕಿನಿಂದ ಚೆಕ್ ಹಾಕಿ ಹಣ ಪಡೆಯಬೇಕಾದರೆ. ಇಲ್ಲವೇ ಹಾಕಬೇಕಾದರೆ ಸುಮಾರು 3 ಗಂಟೆಗೂ ಹೆಚ್ಚು ಕಾಲ ಕಾಯಬೇಕು. ಅತಿ ಹೆಚ್ಚು ಸಿಬ್ಬಂದಿ ವರ್ಗ ಕೆಲಸದ ವೇಳೆಯಲ್ಲಿ ಚರ್ಚೆಯಲ್ಲಿ ಕಾಲ ಕಳೆಯುತ್ತಾರೆ. ಬ್ಯಾಂಕಿನ ಬಹುತೇಕ ಯೋಜನೆಗಳು ಗ್ರಾಹಕರಿಗೆ ತಲುಪುವುದೇ ಇಲ್ಲ. ಯಾವುದೇ ಸಾಲ ಯೋಜನೆ ಇಲ್ಲವೆ, ಕ್ರೆಡಿಟ್ ಕಾರ್ಡ್, ಎಟಿಎಂ ಕಾಡ್‌ಗಳ ಬಗಗೆ ವಿವರವಾದ ಮಾಹಿತಿ ನೀಡುವುದಿಲ್ಲ.

ಈ ಬ್ಯಾಂಕಿನಲ್ಲಿ ಇನ್ನೊಂದು ವಿಶೇಷವೆಂದರೆ ಬ್ಯಾಂಕಿನ ಸೆಕ್ಯೂರಿಟಿ ಗಾರ್ಡ್‌ರವರೆ ಬ್ಯಾಂಕಿನ ಸಿಬ್ಬಂದಿಯಂತೆ ಬ್ಯಾಂಕಿನ ಚೆಕ್ ವಿತರಿಸುತ್ತಾರೆ. ಎಂತಹ ವಿಪರ್ಯಾಸ, ಬ್ಯಾಂಕ್ ಎಂದರೆ ಭದ್ರತೆ ಅಗತ್ಯ ಅದಕ್ಕೆಂದು ಒಬ್ಬ ಮನುಷ್ಯ ಕೂಡ ದೂರಲು ಆಗದೆ ಇವರು ಬ್ಯಾಂಕಿನ ಮುಂಬಾಗಿಲಿನ ಗ್ರಿಲ್ಸ್ ಡೋರ್ ತೆಗೆದಿರುತ್ತಾರೆ. ಸ್ವಲ್ಪ ದಪ್ಪ ಮನುಷ್ಯರು ಈ ಬಾಗಿಲಿನಿಂದ ಹೊರ ಹೋಗಲು, ಒಳ ಬರಲು ಸಾಧ್ಯವಾಗುವುದಿಲ್ಲ.

ಈ ಬಗ್ಗೆ ಗ್ರಾಹಕರಿಗೆ ಆಗುವ ಸಣ್ಣ ಪುಟ್ಟ ತೊಂದರೆಗಳ ಬಗ್ಗೆ ಶಾಖಾ ವ್ಯವಸ್ಥಾಪಕರ ಬಳಿ ಮನವಿ ಮಾಡಲು ಹೋದರೆ ಅವರು ಯಾರೆಂದು ಗ್ರಾಹಕರಿಗೆ ಗೊತ್ತಿಲ್ಲ. ಅವರು ಕೈಗೆ ಸಿಗುವುದಿಲ್ಲ. ಇನ್ನು ಉಪ ಶಾಖಾ ವ್ಯವಸ್ಥಾಪಕರು ಈ ಬಗ್ಗೆ ಕೇಳಿದರೆ ಅವರು ಹಾರಿಕೆಯ ಉತ್ತರ ನೀಡುತ್ತಾರೆ. ಇಲ್ಲಿ ರಾಜಕೀಯ ಧುರೀಣರಿಗೆ, ಗಣ್ಯರಿಗೆ ಹೆಚ್ಚು ಮಣೆ ಹಾಕುತ್ತಾರೆ ಎಂದು ಮಧ್ಯಮ ವರ್ಗದವರನ್ನು ಅಸಡ್ಡೆಯಿಂದ ನೋಡುತ್ತಾರೆ ಎಂದು ನೊಂದ ಬ್ಯಾಂಕ್ ಗ್ರಾಹಕರ ಅಳಲಾಗಿದೆ. ಕೆಲವು ಬ್ಯಾಂಕಿಗಳಲ್ಲಿ ಬ್ಯಾಂಕ್ ಮಿತ್ರರೆಂದು ಗ್ರಾಹಕರಿಗೆ ಅನುಕೂಲವಾಗಲೆಂದು ಇಟ್ಟಿರುತ್ತಾರೆ. ಈ ಬ್ಯಾಂಕಿನಲ್ಲಿಯು ಮೂರು ಮಂದಿ ಇದ್ದು ಇವರು ದಿನವಿಡಿ ಬ್ಯಾಂಕಿನ ಕೆಲಸಗಳಲ್ಲಿ ಹೆಚ್ಚು ತೊಡಗಿಸಿಕೊಂಡಿರುತ್ತಾರೆ. ಬ್ಯಾಂಕ್ ಮಿತ್ರರು ಗ್ರಾಹಕರಿಗೆ ಮಿತ್ರರಾಗಿಲ್ಲ ಇಲ್ಲಿ ಬ್ಯಾಂಕಿನ ಸಿಬ್ಬಂದಿ ಇರುವುದು ಗ್ರಾಹಕರಿಗೆ ಸೇವೆ ಮಾಡಲು ಅದನ್ನೆ ಮರೆತಂತೆ ಇದ್ದಾರೆ. ಈ ಬಗ್ಗೆ ಉನ್ನತ ಅಧಿಕಾರಿಗಳು ಈ ಬಗ್ಗೆ ಗಮನಹರಿಸಿ ಗ್ರಾಹಕರಿಗೆ ಆಗುತ್ತಿರುವ ಹಿಂಸೆ, ಕಿರಿಕಿರಿಯನ್ನು ಸರಿಪಡಿಸಬೇಕೆಂದು ನೊಂದ ಗ್ರಾಹಕರು ಅಳಲನ್ನು ವ್ಯಕ್ತಪಡಿಸಿದ್ದಾರೆ.

# ಧಾರ್ಮಿಕ ಕ್ಷೇತ್ರದಲ್ಲಿ ಸೇವೆ ಮಾಡುವ ಮನೋಭಾವ ಬೆಳೆಸಿಕೊಳ್ಳಬೇಕು

**ಹುಮನಾಬಾದ:** ಧಾರ್ಮಿಕ ಕ್ಷೇತ್ರದಲ್ಲಿ ಎಲ್ಲರೂ ಸೇವೆ ಸಲ್ಲಿಸುವ ಮನೋಭಾವ ಬೆಳೆಸಿಕೊಳ್ಳಬೇಕು.ಯುವ ಜನತೆಯು ಗುರುಗಳ ಬಗ್ಗೆ. ಪೂಜ್ಯ ಭಾವನೆ ಇರಬೇಕು. ಎಂದು ರಾಜಕೀಯ ಧುರೀಣ ಸಚಿವ ಎಚ ಕೆ ಪಾಟೀಲ ಅವರ ಪುತ್ರ ಯುವ ನಾಯಕ ಕೃಷ್ಣ ಪಾಟೀಲ ಮಾತನಾಡಿದರು.

ಅವರು ಇಂದು ಜಗದೇವಿ. ರಾಮರೆಡ್ಡಿ ದಂಪತಿಗಳಿಂದ ಆಯೋಜಿಸಿದ ಪೂಜ್ಯ ಎನ. ಬಿ. ರೆಡ್ಡಿಯವರ ಪೂಜಾ ಕಾರ್ಯಕ್ರದಲ್ಲಿ. ಮಾತನಾಡಿದರು.

ಕೃಷ್ಣ ಪಾಟೀಲ ಮಾತನಾಡುತ್ತ ಇಂದು ನಮ್ಮ ಹಿಂದೂ ಸನಾತನ ಧರ್ಮ ಉಳಿಸಿ ಬೆಳೆಸುವಲ್ಲಿ ಪೂಜ್ಯ ಎನ ಬಿ ರೆಡ್ಡಿ ಸದ್ಗುರುಜಿಯವರ ಪಾತ್ರ ಬಹುದೊಡ್ಡದು.. ಸದಾ ಪೂಜ್ಯರು ಪುರಾತನ ಕಾಲದ ದೇವಸ್ಥಾನಗಳನ್ನು ಅಭಿವೃದ್ಧಿ ಮಾಡಲು ಹಗಲಿರುಳು ಶ್ರಮಿಸುತ್ತಾರೆ. ಹೀಗಾಗಿ ಭಾರತದಾದ್ಯಂತ ದೇಶ ಸಂಚಾರ ಮಾಡಿ ಭಕ್ತರ ಏಳಿಗೆಗಾಗಿ ಪ್ರಾರ್ಥಿಸುವ ಗುಣ ಪೂಜ್ಯರಲ್ಲಿ ಮಾತ್ರ ಇಂದು ನಾವು ಕಾಣುತ್ತೇವೆ. ನಿಸ್ವಾರ್ಥ ಸೇವೆಯಿಂದ ಭಕ್ತರ ಪಾಲಿನ ಕಲ್ಪ ವೃಕ್ಷ ಆಗಿ ಇಂದು ಭಕ್ತ ಮನದಲ್ಲಿ ಗುರುವಿನ ಸ್ಥಾನ ಪಡೆದಿದ್ದಾರೆ ಎಂದರು.

ಅಭಿಷೇಕ ಪಾಟೀಲ ; ನಾನು ಸಮಾಜದಲ್ಲಿ ಹಾಗೂ ರಾಜಕೀಯದಲ್ಲಿ ಬೆಳೆಯಲು ಸದ್ಗುರುಜೀ ಅವರೇ ಮೂಲ ಕಾರಣ.. ಸದ್ಗುರು ಗಳ ಅಪಾರ ಶಕ್ತಿ ಹೊಂದಿದ್ದಾರೆ. ಅವರನ್ನು ಪಡೆದ ನಾವುಗಳು ಪುಣ್ಯವಂತರು. ಅವರ ಆಶೀರ್ವಾದ ಸದಾ ನಮ್ಮ ನಿಮ್ಮೆಲ್ಲರ ಮೇಲೆ ಇರಲಿ ಎಂದು ಅಭಿಮತ ವ್ಯಕ್ತ ಪಡಿಸಿದರು.

ಡಾ. ವಿಶ್ವನಾಥ ತೇಗಂಪುರೆ ಮಾತನಾಡಿ. ನಮ್ಮ ಭಾಗದಲ್ಲಿ ನಡೆದಾಡುವ ದೇವರೆಂದರೆ ರಾಷ್ಟ್ರ ಸಂತ ಡಾ ಸದ್ಗುರು ಜಿಯವರು ಮಾತ್ರ. ಧರೆಗೆ ನಮ್ಮ ನಿಮ್ಮ ಸಂಕಷ್ಟಗಳು ದೂರ ಮಾಡಲು ಬಂದಿರುವ ಅಪ್ಪಟ ಪರಂ ಪೂಜ್ಯರು. ಹೀಗಾಗಿ ತಾವುಗಳು ನಿತ್ಯ ಪರಂ ಪೂಜ್ಯರ ಪರಮಾತ್ಮನ ನಾಮಸ್ಮರಣೆ ಮಾಡುತ್ತ ಭಕ್ತಿ ಯಿಂದ ಭಜಿಸಬೇಕು ಅಂದಾಗ ಮಾತ್ರ ಗುರುಗಳ ಆಶೀರ್ವಾದ ದೊರೆಯುತ್ತದೆ ಎಂದರು.

# ವಿಧಾನಸಭೆ ಪರಾಜಿತ ಅಭ್ಯರ್ಥಿಗಳಿಗಿಲ್ಲ ಟಿಕೆಟ್

**ಬೆಂಗಳೂರು:** ವಿಧಾನಸಭೆ ಚುನಾವಣೆಯಲ್ಲಿ ಪರಾಜಿತಗೊಂಡ ಅಭ್ಯರ್ಥಿಗಳಿಗೆ ಮುಂಬರುವ ವಿಧಾನ ಪರಿಷತ್ ಚುನಾವಣೆಯಲ್ಲಿ ಟಿಕೆಟ್ ನೀಡದಿರಲು ಕಾಂಗ್ರೆಸ್ ನಿರ್ಧರಿಸಿದೆ. ಕಳೆದ ಬಾರಿಯ ಚುನಾವಣೆಯಲ್ಲಿ ಟಿಕೆಟ್ ವಂಚಿತ ಮತ್ತು ಸಂಘಟನೆಯಲ್ಲಿ ತೊಡಗಿಸಿಕೊಂಡ ನಾಯಕರಿಗೆ ಈ ಬಾರಿ ಅವಕಾಶ ನೀಡಲು ಸಿಎಂ, ಡಿಸಿಎಂ ನಿರ್ಧರಿಸಿದ್ದಾರೆ ಎಂದು ಉನ್ನತ ಮೂಲಗಳು ತಿಳಿಸಿವೆ.ಪ್ರಬಲ ಪೈಪೋಟಿ ನಡುವೆ ಹಿರಿಯ ನಾಯಕರಿಗೆ ಟಿಕೆಟ್ ನೀಡಲಾಗಿತ್ತು. ಆದರೆ ವಿಧಾನಸಭೆಯಲ್ಲಿ ಸೋಲನ್ನಪ್ಪಿದ್ದಾರೆ. ಈಗ ಮತ್ತೊಂದು ಅವಕಾಶ ನೀಡುವುದು ಕಷ್ಟ. ರಮನಾಥ್ ರೈ, ವಿನಯ್ ಕುಮಾರ್ ಸೊರಕೆ, ಪಿ.ಟಿ ಪರಮೇಶ್ವರ್ ನಾಯ್ಕ್, ರಮೇಶ್ ಕುಮಾರ್ ಸೇರಿದಂತೆ ಹಲವು ಪರಾರ್ಜಿತ ನಾಯಕರು ಪರಿಷತ್ ಟಿಕೆಟ್ ನಿರೀಕ್ಷೆಯಲ್ಲಿದ್ದಾರೆ. ಎಲ್ಲರಿಗೂ ಅವಕಾಶ ನೀಡಲು ಸಾಧ್ಯವಿಲ್ಲ ಎಂದು ಮೂಲಗಳು ಹೇಳಿವೆ. ಈ ಹಿನ್ನೆಲೆ ವಿಧಾನಸಭೆಯಲ್ಲಿ ಪರಾಜಿತ ಅಭ್ಯರ್ಥಿಗಳಿಗೆ ಎರಡು ವರ್ಷಗಳ ಕಾಲ ಯಾವುದೇ ಹೊಸ ಅವಕಾಶಗಳನ್ನು ನೀಡದಿರಲು ಸಿಎಂ ಸಿದ್ದರಾಮಯ್ಯ ಮತ್ತು ಡಿಸಿಎಂ ಡಿ.ಕೆ ಶಿವಕುಮಾರ್ ನಿರ್ಧರಿಸಿದ್ದಾರೆ ಎನ್ನಲಾಗಿದೆ. ಪ್ರಬಲ ಪೈಪೋಟಿ ನೀಡಿ ಕಡೆ ಹಂತದಲ್ಲಿ ಟಿಕೆಟ್‌ನಿಂದ ವಂಚಿತರಾದ ನಾಯಕರನ್ನು ಅಭ್ಯರ್ಥಿಗಳನ್ನಾಗಿ ಮಾಡಬಹುದು ಎನ್ನಲಾಗಿದೆ.

# ವಿಶ ಪರಿಸರ ದಿನದ ನಿಮಿತ್ತ ಜಾಗೃತಿ ಕಾರ್ಯಕ್ರಮ

**ಮಂಡ್ಯ:** ಜಿಲ್ಲಾಡಳಿತ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಪರಿಸರ ರೂರಲ್ ಡೆವಲಪ್‌ಮೆಂಟ್ ಸೊಸೈಟಿ ವತಿಯಿಂದ 'ನಮ್ಮ ಭೂಮಿ ನಮ್ಮ ಭವಿಷ್ಯ' ಎಂಬ ಘೋಷವಾಕ್ಯದಡಿ ವಿಶ್ವ ಪರಿಸರ ದಿನ–2024 ನಿಮಿತ್ತ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಮೇ 31 ಬೆಳಿಗ್ಗೆ ಶ್ರೀರಂಗಪಟ್ಟಣ ತಾಲ್ಲೂಕು ಪಶ್ಚಿಮವಾಹಿನಿಯ ಮಹಾತ್ಮಾಗಾಂಧಿ ಚಿತಾಭಸ್ಮ ಸ್ಮಾರಕದ ಬಳಿ ಕಾವೇರಿ ನದಿ ತಪ್ಪಲಿನ ಪ್ರದೇಶವನ್ನು ಶ್ರಮದಾನ ಹಮ್ಮಿಕೊಳ್ಳಲಾಗಿದೆ. ಜೂ.1ರಂದು ಬೆಳಿಗ್ಗೆ 9.30 ಗಂಟೆಗೆ ಮಂಡ್ಯ ನಗರದ ಜಿಲ್ಲಾಧಿಕಾರಿಗಳ ಕಛೇರಿಯ ಕಾವೇರಿ ಉದ್ಯಾನದಲ್ಲಿ ಮಾಧ್ಯಮಿಕ ಮತ್ತು ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಚಿತ್ರಕಲಾ ಸ್ಪರ್ಧೆಯನ್ನು ಹಮ್ಮಿಕೊಳ್ಳಲಾಗಿದೆ. ಜೂ.5ರಂದು ಮಂಡ್ಯ ಜಿಲ್ಲಾಧಿಕಾರಿ ಆವರಣದಿಂದ ಪರಿಸರ ಜಾಗೃತಿ ಕುರಿತು ಬೆಳಿಗ್ಗೆ 9.30 ಗಂಟೆಗೆ ಸೈಕಲ್ ಜಾಥಾ ಹಾಗೂ ಬೆಳಿಗ್ಗೆ 10.30 ಗಂಟೆಗೆ ಮಂಡ್ಯ ವಿಶ್ವವಿದ್ಯಾಲಯದ ಆವರಣದಲ್ಲಿ ಸಸ್ಯೋತ್ಸವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದ್ದು, ತರುವಾರ ಬೆಳಿಗ್ಗೆ 11.00 ಗಂಟೆಗೆ ಮಂಡ್ಯ ವಿಶ್ವವಿದ್ಯಾಲಯದ ಶಾರದಾ ಮಂದಿರದಲ್ಲಿ ಬಹುಮಾನ ವಿತರಣೆ ಮತ್ತು ಉಪನ್ಯಾಸ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ಪರಿಸರ ಸಂಸ್ಥೆಯ ಅಧ್ಯಕ್ಷ ಮಂಗಲ ಎಂ.ಯೋಗೀಶ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕುಸಿಯುವ ಹಂತದಲ್ಲಿರುವ ನೀರಿನ ಟ್ಯಾಂಕ್

**ಚಾಮರಾಜನಗರ:** ತಾಲ್ಲೂಕಿನ ದೊಡ್ಡರಾಯಪೇಟೆ ಗ್ರಾಮದಲ್ಲಿ ಕಳೆದ ಐವತ್ತು ವರ್ಷಗಳ ಹಿಂದೆ ನಿರ್ಮಾಣಗೊಂಡಿರುವ ಕುಡಿಯುವ ನೀರಿನ ಟ್ಯಾಂಕ್ ಕುಸಿಯುವ ಹಂತದಲ್ಲಿದೆ.ಚಾಮರಾಜನಗರ ತಾಲ್ಲೂಕಿನ ಕೂಡ್ಲೂರು ಗ್ರಾಮ ಪಂಚಾಯ್ತಿಯ ದೊಡ್ಡರಾಯಪೇಟೆ ಗ್ರಾಮದಲ್ಲಿ 1974 ರಲ್ಲಿ ನಿರ್ಮಾಣಗೊಂಡಿರುವ ನೀರಿನ ಟ್ಯಾಂಕ್ ಶಿಥಲಗೊಂಡಿದ್ದು, ಪಿಲ್ಲರ್ ನಲ್ಲಿ ಬಿರುಕು ಕಾಣಿಸಿಕೊಂಡಿದೆ. ಇದೇ ನೀರಿನ ಟ್ಯಾಂಕ್ ಪಕ್ಕದಲ್ಲಿ ಮತ್ತೊಂದು ನೀರಿನ ಟ್ಯಾಂಕ್ ನಿರ್ಮಾಣ ಮಾಡಲಾಗಿದ್ದು, ಜಲ ಜೀವನ್ ಯೋಜನೆಯಡಿ ನೀರು ಭರ್ತಿ ಮಾಡಲಾಗುತ್ತಿದೆ. ಅದೂ ಅಲ್ಲದೆ ಶಿಥಲಗೊಂಡಿರುವ ಟ್ಯಾಂಕ್ ನಲ್ಲೂ ನೀರು ಸಂಗ್ರಹ ಮಾಡಲಾಗುತ್ತಿದೆ. ಶಿಥಲಗೊಂಡಿರುವ ನೀರಿನ ಟ್ಯಾಂಕ್ ನಲ್ಲಿ ನೀರು ಭರ್ತಿಯಾಗುವ ವೇಳೆ ಏನಾದರೂ ಕುಸಿದು ಬಿದ್ದರೆ ಭಾರಿ ಅನಾಹುತವಾಗಲಿದೆ. ಈ ಬಗ್ಗೆ ಶಾಸಕರು ಮತ್ತು ಪಂಚಾಯತ್ ರಾಜ್ ಇಂಜನೀಯರಿಂಗ್ ಅಧಿಕಾರಿಗಳು ಕ್ರಮ ವಹಿಸಿ ಶಿಥಲವಾಗಿರುವ ನೀರಿನ ಟ್ಯಾಂಕ್ ನ್ನು ತೆರವುಗೊಳಿಸಬೇಕಾಗಿದೆ. ದೊಡ್ಡರಾಯಪೇಟೆ ಗ್ರಾಮವು ದೊಡ್ಡ ಗ್ರಾಮವಾಗಿ ಬೆಳೆಯುತ್ತಿದ್ದು, ಜನ ಸಂಖ್ಯೆಗೆ ಅನುಗುಣವಾಗಿ ಕುಡಿಯುವ ನೀರು ಸಂಗ್ರಹಕ್ಕಾಗಿ ಶಿಥಲಗೊಂಡ ಟ್ಯಾಂಕನ್ನು ಕೆಡವಿ ಹಾಕಿ ಮತ್ತೊಂದು ನೀರಿನ ಟ್ಯಾಂಕ್ ನಿರ್ಮಾಣ ಮಾಡಬೇಕಾಗಿದೆ. ಈ ಬಗ್ಗೆ ಶಾಸಕ ಸಿ.ಪುಟ್ಟರಂಗಶೆಟ್ಟಿರವರು ಹೊಸದಾಗಿ ನೀರಿನ ಟ್ಯಾಂಕ್ ನಿರ್ಮಾಣಕ್ಕೆ ಮುಂದಾಗಬೇಕಾಗಿದೆ.

# ರಂಗಶಿಕ್ಷಣ ಡಿಪ್ಲೊಮೊಕ್ಕೆ ಅರ್ಜಿ

**ಚಿಕ್ಕಬಳ್ಳಾಪುರ:** ರಾಜ್ಯ ಸರ್ಕಾರದಿಂದ ಮಾನ್ಯತೆ ಪಡೆದಿರುವ ಶ್ರೀ ಶಿವಕುಮಾರ ರಂಗ ಪ್ರಯೋಗ ಶಾಲೆಯು 2024–25ನೇ ಸಾಲಿನ ರಂಗ ಶಿಕ್ಷಣಕ್ಕೆ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಪ್ರವೇಶಕ್ಕೆ ಕನಿಷ್ಠ ವಿದ್ಯಾರ್ಹತೆ ಎಸ್.ಎಸ್.ಎಲ್.ಸಿ ಉತ್ತೀರ್ಣರಾಗಿರಬೇಕು. ಪದವೀಧರರಿಗೆ ಆದ್ಯತೆ ಇರುತ್ತದೆ. ರಂಗಭೂಮಿಯಲ್ಲಿ ಆಸಕ್ತಿ ಇದ್ದು, ಸ್ವಲ್ಪಮಟ್ಟಿನ ಅನುಭವ ಇರಬೇಕಾದ್ದು ಅಗತ್ಯ. ವಿದ್ಯಾರ್ಥಿ ವಿದ್ಯಾರ್ಥಿನಿಯರಿಗೆ ಊಟ ವಸತಿ ವ್ಯವಸ್ಥೆ ದೊರೆಯುತ್ತದೆ. ಕರ್ನಾಟಕ ಹಾಗೂ ದೃಶ್ಯ ಶ್ರವ್ಯ ಪರಿಕರಗಳ ಅನುಕೂಲತೆ ಇದೆ. ರಂಗಶಾಲೆಗಳಲ್ಲಿ ವಿದ್ಯಾರ್ಥಿಗಳಿಗೆ ಭಾರತೀಯ ರಂಗಭೂಮಿ, ಕನ್ನಡ ಮತ್ತು ನಾಟಕ ಸಾಹಿತ್ಯ ಪರಂಪರೆ, ಪಾಶ್ಚತ್ಯ ರಂಗಭೂಮಿ, ಅಭಿನಯ, ಆಹಾರ್ಯ, ಶಿಕ್ಷಣದಲ್ಲಿ ರಂಗಭೂಮಿ ಕುರಿತಾದ ಸೈದ್ಧಾಂತಿಕ ಮತ್ತು ಪ್ರಾಯೋಗಿಕ ತರಗತಿಗಳು ನಡೆಯುತ್ತವೆ. ಶ್ರೀ ಶಿವಕುಮಾರ ರಂಗ ಪ್ರಯೋಗ ಶಾಲೆಯ ವೆಬ್ ಸೈಟ್ www.theatreschoolsanehalli.org ನಲ್ಲಿ ಜೂನ್ 25ರ ಒಳಗಾಗಿ ಪ್ರವೇಶ ಅರ್ಜಿಗಳನ್ನು ರಂಗಶಾಲೆಗೆ ಸಲ್ಲಿಸಬಹುದು. ವಿಳಾಸ: ಸಾಣೇಹಳ್ಳಿ–577–515 ಹೊಸದುರ್ಗ ತಾಲ್ಲೂಕ್, ಚಿತ್ರದುರ್ಗ ಜಿಲ್ಲೆ. ಮಾಹಿತಿಗಾಗಿ ದೂರವಾಣಿ ಸಂಖ್ಯೆ 9448398144, 8861043553 ಸಂಪರ್ಕಿಸಬಹುದು.

# ಮಹದೇಶ್ವರ ಬೆಟ್ಟದಲ್ಲಿ ಹುಂಡಿ ಹಣ ಎಣಿಕೆ



**ಚಾಮರಾಜನಗರ:** ಪವಾಡ ಪುರುಷ ಮಹದೇಶ್ವರರು ನೆಲೆಸಿರುವ ಪ್ರಸಿದ್ಧ ಧಾರ್ಮಿಕ ಯಾತ್ರಾ ಸ್ಥಳವಾಗಿರುವ ಕರ್ನಾಟಕ ತಮಿಳುನಾಡು ಗಡಿ ಚಾಮರಾಜನಗರ ಜಿಲ್ಲೆಯ ಮಲೆ ಮಹದೇಶ್ವರ ಬೆಟ್ಟದಲ್ಲಿ ಹುಂಡಿ ಕಾಣಿಕೆ ಎಣಿಕೆ ಕಾರ್ಯ ನಡೆದು, 30 ದಿನಗಳಲ್ಲಿ ಎರಡು ಕೋಟಿ ಐವತ್ತೆಂಟು ಲಕ್ಷದ ನಲವತ್ತ ನಾಲ್ಕು ಸಾವಿರದ ತೊಂಭತ್ತೇಳು ರೂಪಾಯಿಗಳು ಸಂಗ್ರಹವಾಗಿದೆ.

ಚಾಮರಾಜನಗರ ಜಿಲ್ಲೆಯ ಹನೂರು ತಾಲ್ಲೂಕಿನ ಮಹದೇಶ್ವರ ಬೆಟ್ಟದಲ್ಲಿ ಶ್ರೀ ಮಲೈ ಮಹದೇಶ್ವರ ಸ್ವಾಮಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದಲ್ಲಿ ಶ್ರೀ ಸಾಲೂರು ಬೃಹನ್ಮಠಾಧ್ಯಕ್ಷರಾದ ಶ್ರೀ ಶಾಂತಮಲ್ಲಿಕಾರ್ಜುನಸ್ವಾಮಿಗಳ ದಿವ್ಯಸಾನಿಧ್ಯದಲ್ಲಿ ಶ್ರೀ ಮಲೆ ಮಹದೇಶ್ವರ ಸ್ವಾಮಿ ದೇವಸ್ಥಾನ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿ ರಘು ರವರ ನೇತೃತ್ವದಲ್ಲಿ ಹುಂಡಿ ಎಣಿಕೆ ಕಾರ್ಯ ನಡೆದಿದ್ದು, 30 ದಿನಗಳಲ್ಲಿ ಒಟ್ಟು ಮೊತ್ತ 2,58,44,097 (ಎರಡು ಕೋಟಿ ಐವತ್ತೆಂಟು ಲಕ್ಷದ ನಲವತ್ತ ನಾಲ್ಕು ಸಾವಿರದ ತೊಂಭತ್ತೇಳು ರೂಪಾಯಿಗಳು ) ಹಾಗೂ 93 ಗ್ರಾಂ , 3 ಕೆ.ಜಿ 350 ಗ್ರಾಂ ಬೆಳ್ಳಿ ಹುಂಡಿಯಲ್ಲಿ ದೊರೆತಿದೆ. ಹಾಗೂ ಸೌತ್ ಅರಿಬಿಯಾ, ಜಪಾನ್, ನೇಪಾಳ ಹಾಗೂ ಕಥರ್ ದೇಶದ ತಲಾ ಒಂದೊಂದು ನೋಟ್ ದೊರತ್ತಿದ್ದು, ಎರಡು ಸಾವಿರ ಮುಖ ಬೆಲೆಯ 25 ನೋಟ್ ಗಳು ಸಹ ಹುಂಡಿಯಲ್ಲಿ ದೊರೆತ್ತಿದೆ.

ಎಣಿಕೆ ಕಾರ್ಯದಲ್ಲಿ ಪ್ರಾಧಿಕಾರದ ಉಪ ಕಾರ್ಯದರ್ಶಿ ಚಂದ್ರಶೇಖರ, ಹಣಕಾಸು ಮತ್ತು ಲೆಕ್ಕ ಪತ್ರ ಸಲಹೆಗಾರರು ನಾಗೇಶ್, ಹಾಗೂ ಚಾಮರಾಜನಗರ ಜಿಲ್ಲಾಡಳಿತ ಕಛೇರಿ ಮುಜರಾಯಿ ಶಾಖೆಯ ಕುಮಾರಿ ಶ್ವೇತಾ ಹಾಗೂ ಪ್ರಾಧಿಕಾರದ ಸಿಬ್ಬಂದಿಗಳು, ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಹಾಗೂ ಬ್ಯಾಂಕ್ ಆಪ್ ಬರೋಡ ವ್ಯವಸ್ಥಾಪಕರು, ಸಿಬ್ಬಂದಿಗಳು ಹಾಜರಿದ್ದರು.

# ಮಕ್ಕಳಿಗೆ ಆರ್ಥಿಕ ನೆರವು

**ವಿಜಯಪುರ:** ಹೋಬಳಿಯ ವೆಂಕಟಗಿರಿಕೋಟೆ ಚನ್ನಕೇಶವಸ್ವಾಮಿ ಕಲ್ಯಾಣ ಮಂಟಪದಲ್ಲಿ ಕರ್ನಾಟಕ ಮಾದಿಗ ದಂಡೋರ ಸಂಘಟನೆಯ ನೇತೃತ್ವದಲ್ಲಿ ವಿವಿಧ ಸಂಘಟನೆಗಳ ಮುಖಂಡರಿಂದ ಹಾಸನದ ಬಳಿ ಅಪಘಾತದಲ್ಲಿ ಮೃತಪಟ್ಟಿರುವವರ ಮಕ್ಕಳಿಗೆ ಆರ್ಥಿಕ ನೆರವು ನೀಡುವ ಕಾರ್ಯಕ್ರಮ ನಡೆಸಿದರು.

ತಾಲ್ಲೂಕಿನ ವಿವಿಧ ಮಾದಿಗ ಸಂಘಟನೆಗಳ ಮುಖಂಡರು, ರಾಜಕೀಯ ಮುಖಂಡರುಗಳು ಈ ಸಭೆಯಲ್ಲಿ ಭಾಗವಹಿಸಿ, ಅಪಘಾತದಲ್ಲಿ ತಮ್ಮ ಪೋಷಕರನ್ನು ಕಳೆದುಕೊಂಡಿರುವ ಮಕ್ಕಳಿಗೆ ಧೈರ್ಯ ತುಂಬಿ, ಭವಿಷ್ಯದಲ್ಲಿ ಜೊತೆಯಾಗಿದ್ದು, ನಿಮ್ಮ ನೆರವಿಗೆ ನಾವು ಬರುತ್ತೇವೆ. ನೀವು ಅನಾಥರಲ್ಲ, ನಾವೆಲ್ಲರೂ ಇದ್ದೇವೆ. ಧೈರ್ಯವಾಗಿ ಶಿಕ್ಷಣ ಮುಂದುವರೆಸಿ ಎಂದು ಸಾಂತ್ವನ ಹೇಳಿದರು.

ಮಾಜಿ ಶಾಸಕ ಪಿಳ್ಳಮುನಿಶಾಮಪ್ಪ ಮಾತನಾಡಿ, ಅಪಘಾತದಂತಹ ಘಟನೆ ಸಂಭವಿಸಿರುವುದು ದುರಂತ, ಆದರೂ ಸಮುದಾಯದವರು ಮಾತ್ರವಲ್ಲದೆ ತಾಲ್ಲೂಕಿನಲ್ಲಿ ಯಾವುದೇ ಸಮುದಾಯಗಳು ಸಂಕಷ್ಟಕ್ಕೆ ಸಿಲುಕಿದಾಗ ಸಹಕಾರ ನೀಡುವ ಮೂಲಕ ಧೈರ್ಯ ತುಂಬಿಸಿದಾಗ, ಅಂತಹವರು ಚೈತನ್ಯ ಪಡೆದುಕೊಳ್ಳುತ್ತಾರೆ. ಪೋಷಕರನ್ನು ಕಳೆದುಕೊಂಡಿರುವ ಮಕ್ಕಳಿಗೆ ಅನುಕಂಪಗಳಿಗಿಂತ ಅವಕಾಶಗಳನ್ನು ಒದಗಿಸಿಕೊಡುವ ಕೆಲಸವಾಗಲಿ ಅದಕ್ಕೆ ಬೇಕಾಗಿರುವ ಎಲ್ಲಾ ಸಹಕಾರ ನೀಡುವುದಾಗಿ ಭರವಸೆ ನೀಡಿ, 50 ಸಾವಿರ ಚೆಕ್ಕನ್ನು ನೀಡಿದರು.

ದೇವನಹಳ್ಳಿ ಮಾಜಿ ಪುರಸಭೆ ಅಧ್ಯಕ್ಷ ಎಂ.ನಾರಾಯಣಸ್ವಾಮಿ ಮಾತನಾಡಿ, ಮಕ್ಕಳ ವಿದ್ಯಾಭ್ಯಾಸಕ್ಕೆ ತೊಡಕಾಗದಂತೆ ಸರ್ಕಾರದಿಂದ ಸಿಗುವಂತಹ ಎಲ್ಲಾ ಸವಲತ್ತುಗಳನ್ನು ಅವರಿಗೆ ತಲುಪಿಸುವುದರ ಜೊತೆಗೆ, ಅವರ ಬಗ್ಗೆ ನಿಗಾವಹಿಸಬೇಕು. ಸಚಿವರೊಂದಿಗೆ ಚರ್ಚೆ ನಡೆಸಿ, ಸರ್ಕಾರದಿಂದ ಹೆಚ್ಚಿನ ನೆರವು ಕೊಡಿಸಲು ಪ್ರಯತ್ನ ಮಾಡಲಾಗುತ್ತದೆ ಎಂದರು.

ಗೊಡ್ಲುಮುದ್ದೇನಹಳ್ಳಿ ಗ್ರಾಮ ಪಂಚಾಯಿತಿ ಅಧ್ಯಕ್ಷ ಎಂ.ಜಗದೀಶ್ ಮಾತನಾಡಿ, ಮೃತರ ಕುಟುಂಬಗಳಿಗೆ ಸಚಿವರು ಬಂದರೆ, ಜಿಲ್ಲಾಡಳಿತ ಬರುತ್ತದೆ. ಸ್ಥಳದಲ್ಲೆ ಸರ್ಕಾರದಿಂದ ಸಿಗುವಂತಹ ಸೌಲತ್ತುಗಳ ಬಗ್ಗೆ ತೀರ್ಮಾನ ಮಾಡಬಹುದು. ಮೃತರ ಕುಟುಂಬದವರಿಗೆ ತಲಾ 2 ಎಕರೆ ಭೂಮಿ ಮಂಜೂರು ಮಾಡಿಕೊಡುವಂತೆ ಸಚಿವರಲ್ಲಿ ಮನವಿ ಮಾಡಬೇಕು. ವೈಯಕ್ತಿಕವಾಗಿ 25 ಸಾವಿರ ಕೊಡುವುದಾಗಿ ಭರವಸೆ ನೀಡಿದರು.



ಸಭೆಯಲ್ಲಿದ್ದ ಮಕ್ಕಳ ಪೋಷಕರೊಬ್ಬರು, ತಾಲ್ಲೂಕಿನ ಕಾರಹಳ್ಳಿ ಮತ್ತು ಹಂದರಹಳ್ಳಿ ಗ್ರಾಮಗಳ ನಾಗರಿಕರು ಅಪಘಾತಕ್ಕೆ ತುತ್ತಾಗಿ ಮರಣಹೊಂದಿದ್ದಾರೆ. ಅವರ ಮಕ್ಕಳು ದಿಕ್ಕು ತೋಚದಂತಾಗಿದ್ದಾರೆ. ಚಿಕ್ಕಬಳ್ಳಾಪುರ ತಾಲ್ಲೂಕಿನ ಶಾಸಕ ಪ್ರದೀಪ್ ಈಶ್ವರ್ ಅವರು, ಮಕ್ಕಳನ್ನು ಭೇಟಿ ಮಾಡಿ, ಸಾಂತ್ವನ ಹೇಳಿ, ಶೈಕ್ಷಣಿಕ ಹೊಣೆ ಹೊತ್ತಿದ್ದಾರೆ. ಆದರೆ, ತಾಲ್ಲೂಕಿನ ಶಾಸಕ ಕೆ.ಎಚ್.ಮುನಿಯಪ್ಪ ಅವರು, ದೂರವಾಣಿಯ ಮೂಲಕವಾದರೂ ಸಾಂತ್ವನ ಹೇಳಲಿಲ್ಲ. ಮೃತರ ಕುಟುಂಬಗಳಿಗೆ ಬರಲಿಲ್ಲ. ಮೃತಪಟ್ಟಿರುವ ವ್ಯಕ್ತಿ ಗಾಲಿಕುರ್ಚಿಯಲ್ಲಿ ಹೋಗಿ ಅವರಿಗೆ ಮತ ಹಾಕಿ ಬಂದರು. ಏನು ಪ್ರಯೋಜನ? ಸಚಿವರು ಮಾದಿಗ ಸಮುದಾಯಕ್ಕೆ ಸೇರಿದವರಾಗಿದ್ದರೂ, ಸೌಜನ್ಯಕ್ಕಾದರೂ ಒಂದು ಸಂತಾಪ ವ್ಯಕ್ತಪಡಿಸಲಿಲ್ಲವೆಂದು ಆಕ್ರೋಶ ವ್ಯಕ್ತಪಡಿಸಿದರು.

ಕರ್ನಾಟಕ ಮಾದಿಗ ದಂಡೋರ ರಾಜ್ಯ ಘಟಕದ ಪ್ರಚಾರ ಸಮಿತಿ ಅಧ್ಯಕ್ಷ ಬುಳ್ಳಹಳ್ಳಿ ರಾಜಪ್ಪ ಮಾತನಾಡಿ, ಘಟನೆ ನಡೆದ ಕೂಡಲೇ ಸಚಿವರ ಆಪ್ತರಿಗೆ ಕರೆ ಮಾಡಿ ತಿಳಿಸಿದ್ದೇವೆ. ಆದರೂ ಅವರು ಪ್ರತಿಕ್ರಿಯೆ ನೀಡಲಿಲ್ಲ. ಅವರ ಸಹಾಯಕರು ಕರೆ ಸ್ವೀಕರಿಸುವುದಿಲ್ಲ. ತಾಲ್ಲೂಕಿನಲ್ಲಿ ಇಂತಹ ದುರ್ಘಟನೆ ನಡೆದರೂ ಸಚಿವರಿಗೆ ಅವರ ಪಕ್ಷದ ಕೆಲಸಗಳು, ಮುಖ್ಯವಾಗಿ ದೆಹಲಿ, ಮಧುರೈ ದೇವಾಲಯಗಳು ಸುತ್ತುತ್ತಿರುವುದು ಆಶ್ಚರ್ಯ ತಂದಿದೆ. ಎರಡು ಮೂರು ದಿನಗಳ ಒಳಗೆ ಮೃತರ ಕುಟುಂಬಗಳಿಗೆ ಭೇಟಿ ನೀಡಿ ಸಾಂತ್ವನ ಹೇಳಬೇಕು. ಸರ್ಕಾರದಿಂದ ಸಿಗುವಂತಹ ಸವಲತ್ತುಗಳನ್ನು ತ್ವರಿತವಾಗಿ ಒದಗಿಸಿಕೊಡಬೇಕು ಇಲ್ಲವಾದರೆ ಸಚಿವರ ಕಾರ್ಯಕ್ರಮಗಳಿಗೆ ಘೇರಾವ್ ಹಾಕಿ, ಅವರ ವಿರುದ್ಧ ಪ್ರತಿಭಟನೆ ಮಾಡಲಾಗುತ್ತದೆ ಎಂದರು. ಮುಖಂಡರಾದ ಚೊಕ್ಕನಹಳ್ಳಿ ಚಂದ್ರಪ್ಪ, ಮಾರಪ್ಪ, ಮುದುಗುರ್ಕಿ ಮೂರ್ತಿ, ವಕೀಲ ಎಂ.ಎಂ.ಶ್ರೀನಿವಾಸ್, ಕೃಷ್ಣಮೂರ್ತಿ, ವೆಂಕಟೇಶ್ ಪ್ರಭು, ರಾಘವ, ವೇಣುಗೋಪಾಲ್, ಚಂದ್ರಶೇಖರ್, ಪ್ರಕಾಶ್, ಮುನಿರಾಜು, ತಿರುಮಲೇಶ್, ಸೇರಿದಂತೆ ವಿವಿಧ ಸಂಘಟನೆಗಳ ಮುಖಂಡರು ಇದ್ದರು.

# ಸರ್ಕಾರಿ ಪ್ರೌಢಶಾಲೆಯ ಶೌಚಾಲಯಕ್ಕೆ ನೀರಿಲ್ಲ

**ಚಿತ್ರದುರ್ಗ:** ಎರಡು ಕೋಟಿ ಖರ್ಚು ಮಾಡಿ ಐದು ಶೌಚಾಲಯ ಕಟ್ಟಡಗಳನ್ನ ನಿರ್ಮಿಸಿದರು ಸಹ, ನೀರಿನ ಸಂಪರ್ಕವಿಲ್ಲದೆ ಸರ್ಕಾರಿ ಬಾಲಕರ ಪದವಿ ಪೂರ್ವ ಕಾಲೇಜು ವಿದ್ಯಾರ್ಥಿಗಳು ಬಯಲು ಶೌಚಾಲಯ ಮತ್ತು ಬಯಲು ಮೂತ್ರಾಲಯವನ್ನು ರೂಡಿಸಿಕೊಂಡಿದ್ದಾರೆ ಎಂದು ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿಯ ಜಿಲ್ಲಾಧ್ಯಕ್ಷರಾದ ಡಾ. ಎಚ್ .ಕೆ. ಎಸ್. ಸ್ವಾಮಿ ದೂರಿದ್ದಾರೆ.

ಚಿತ್ರದುರ್ಗ ನಗರದ ಹಳೆಯ ಮತ್ತು ಪ್ರತಿಷ್ಠಿತ ಸರ್ಕಾರಿ ಬಾಲಕರ ಪದವಿ ಪೂರ್ವ ಕಾಲೇಜು ಮತ್ತು ಪ್ರೌಢಶಾಲಾ ವಿಭಾಗ ಶೌಚಾಲಯದ ಕಟ್ಟಡಗಳಿಗೆ ನೀರಿನ ಸಂಪರ್ಕವನ್ನೇ ಕಲ್ಪಿಸಿದೇ, ವಿದ್ಯಾರ್ಥಿಗಳಿಗೆ ಶೌಚಾಲಯ ಮತ್ತು ಸ್ವಚ್ಚತೆಯ ಕಲ್ಪನೆ ಬರದ ಹಾಗೆ ಮಾಡಿರುವುದರ ಬಗ್ಗೆ ಇಂದು ಉಪನಿರ್ದೇಶಕರು, ಪೂರ್ವ ಮತ್ತು ವೃತ್ತಿ ಶಿಕ್ಷಣ ಇಲಾಖೆ, ಜಿಲ್ಲಾಧಿಕಾರಿಗಳಿಗೆ ಮತ್ತು ಕಾನೂನು ಸೇವಾ ಪ್ರಾಧಿಕಾರಗಳ ಅಧಿಕಾರಿಗಳ ಗಮನಕ್ಕೆ ತರಲಾಯಿತು. ಪ್ರೌಢಶಾಲೆಯಿಂದ ಪದವಿ ಪೂರ್ವ ಕಾಲೇಜಿಗೆ ಬರುವಂತ ವಿದ್ಯಾರ್ಥಿಗಳಿಗೆ ಇನ್ನೂ ಸಹ ಶೌಚಾಲಯದ ಬಳಕೆ ಬಗ್ಗೆ ಜ್ಞಾನ ತುಂಬಲು ನಮಗೆ ಸಾಧ್ಯವಾಗಿಲ್ಲ ಎಂಬುದು ಶೋಚನೀಯ ಎಂದರು. ಕಟ್ಟಡಗಳ ಕಟ್ಟುವುದರಲ್ಲಿ ತೋರಿದ ಆಸಕ್ತಿಯನ್ನು ಅವುಗಳ ಬಳಕೆಗೆ ನೀರಿನ ಸರಬರಾಜು ಕಲ್ಪಿಸಬೇಕೆಂಬ ಸಾಮಾನ್ಯ ತಿಳುವಳಿಕೆ ಸಹ ಇಲ್ಲದಿರುವುದು ಆಶ್ಚರ್ಯಕರವಾಗಿದೆ. ಎರಡು ಕೋಟಿಗೂ ಅಧಿಕವಾಗಿ ವೆಚ್ಚ ಮಾಡಿ ಕಟ್ಟಿರುವ 5 ಕಟ್ಟಡಗಳಿಗೂ ಸಹ ನೀರಿನ



ವ್ಯವಸ್ಥೆ ಕಲ್ಪಿಸಿಲ್ಲ. ಮೊನ್ನೆ ಬೋರ್‌ವೆಲ್‌ನಿಂದ ಕಾಲೇಜಿನ ಕಟ್ಟಡಕ್ಕೆ ನೀರಿನ ಸರಬರಾಜಿನ ಪೈಪನ್ನು ಹಾಕಿ, ಕಾಲೇಜಿನ ಪಕ್ಕದಲ್ಲೇ

ಇರುವ ಶೌಚಾಲಯಕ್ಕೆ ಇನ್ನೊಂದು ನೂರು ಅಡಿ ಪೈಪ್ ಲೈನ್ ಅಳವಡಿಸಿದ್ದರೆ, ಶೌಚಾಲಯಕ್ಕೆ ನೀರು ಒದಗಿಸಬಹುದಾಗಿತ್ತು.

ಆದರೆ ಶೌಚಾಲಯ ತನಕ ಪೈಪ್ ಅಳವಡಿಸಲು ಹಣದ ಅವಕಾಶವಿಲ್ಲ ಎಂದು ಕೆಲಸವನ್ನು ಅರ್ಧಕ್ಕೆ ನಿಲ್ಲಿಸಿ ಹೋಗಿದ್ದಾರೆ ಎಂದು ಕಾಲೇಜಿನ ಮಕ್ಕಳು ದೂರಿದ್ದಾರೆ. ಈ ಕಾಲೇಜಿಗೆ ಶೌಚಾಲಯ ಇಲ್ಲವೆಂದು ಸಾಕಷ್ಟು ಬಾರಿ ಪತ್ರಿಕೆಗಳಲ್ಲಿ ವರದಿಯಾದರೂ ಸಹ, ಇನ್ನು ಅಧಿಕಾರಿಗಳ ಗಮನಕ್ಕೆ ಬಂದಿಲ್ಲ, ಇದೇ ಕಟ್ಟಡದಲ್ಲಿ ಪದವಿಪೂರ್ವ ಕಾಲೇಜಿನ ನಿರ್ದೇಶಕರ ಕಚೇರಿ ಸಹ ಇದ್ದರೂ ವಿದ್ಯಾರ್ಥಿಗಳಿಗೆ ಶೌಚಾಲಯದ ಬಗ್ಗೆ ಪರಿಹಾರ ಒದಗಿಸಿಲ್ಲ. ಈಗ ಚುನಾವಣೆಯ ಮತಯಂತ್ರಗಳ ಸಂಗ್ರಹಕ್ಕಾಗಿ ಸರ್ಕಾರಿ ವಿಜ್ಞಾನ ಕಾಲೇಜಿನ ವಿದ್ಯಾರ್ಥಿಗಳು ಸಹ ಪದವಿ ಪೂರ್ವ ಕಾಲೇಜಿನ ಕಟ್ಟಡದಲ್ಲಿ ಕುಳಿತು ಪಾಠ ಪ್ರವಚನ ಕೇಳುತ್ತಿದ್ದು, ಬೆಳಗ್ಗೆಯಿಂದ ಸಂಜೆವರೆಗೂ ಕುಳಿತ 'ಯುವಕ ಯುವತಿಯರಿಗೆ ಶೌಚಾಲಯವಿಲ್ಲದೆ ತೊಂದರೆ ಅನುಭವಿಸುವಂತಾಗಿದೆ. ವಿದ್ಯಾರ್ಥಿಗಳು ಸಹ ಶೌಚಾಲಯಕ್ಕೆ ಗಿಡಗಂಟಿಗಳ ಸಂದಿಗೆ ಹೋಗುವುದು, ಕಟ್ಟಡದ ಹಿಂಭಾಗದಲ್ಲಿ ಮೂತ್ರಾಲಯ ಮಾಡಿಕೊಂಡಿರುವುದು ನೋಡುಗರಿಗೆ ಮುಜುಗರ ಉಂಟುಮಾಡುವಂತಾಗಿದೆ. ಚುನಾವಣೆ ನೆಪದಲಾದರೂ ಅಧಿಕಾರಿಗಳು ಈ ಕಟ್ಟಡಕ್ಕೆ ಒಂದೆರಡು ನೂರು ಅಡಿಯ ಪೈಪ್ ಲೈನ್ ಗಳನ್ನು ಅಳವಡಿಸಿ, ಶೌಚಾಲಯಕ್ಕೆ ನೀರಿನ್ನ ಒದಗಿಸುವುದನ್ನು ಮಾಡಿಕೊಡಬಹುದೆಂದು ಡಾ. ಸ್ವಾಮಿಯವರು ಮನವಿಯಲ್ಲಿ ವಿನಂತಿಸಿಕೊಂಡಿದ್ದಾರೆ.

ಇದೇ ಕಟ್ಟಡದಲ್ಲಿ ಅರ್ಧಂಬರ್ಧ ಕಟ್ಟಿಸಿ ನಿಲ್ಲಿಸಿರುವ ನೀರಿನ ತೊಟ್ಟಿ, ಮಕ್ಕಳ ಸುರಕ್ಷತೆಗಾಗಿ ಮುಚ್ಚಿ ಎಂದು ಪತ್ರಿಕೆಗಳಲ್ಲಿ ವಿನಂತಿಸಿ ಕೊಂಡಾಗ, ಅದರ ಮೇಲೆ ತಾತ್ಕಾಲಿಕವಾಗಿ ಮರದ ಪಟ್ಟಿಗಳಿಂದ, ಪ್ಲಾಸ್ಟಿಕ್ ಹೊದಿಸಿ ಗುಂಡಿ ಮುಚ್ಚಲಾಗಿದೆ. ಆದರೆ ವಿದ್ಯಾರ್ಥಿಗಳಿಗೆ ನೀರು ಸಂಗ್ರಹ ಮಾಡಲು ಆ ತೊಟ್ಟಿಯನ್ನು ಕಟ್ಟಲಾಗಿತ್ತು, ಅದನ್ನಾದರೂ ಸಂಪೂರ್ಣಗೊಳಿಸಿ ನೀರು ಸಂಗ್ರಹ ಮಾಡಲು ಅನುಕೂಲ ಮಾಡಿಕೊಡಬೇಕೆಂದು ತಿಳಿಸಿದ್ದಾರೆ. ಇನ್ನೊಂದಿಷ್ಟು ದಿನ ಹೋದರೆ, ಆ ತೊಟ್ಟಿಗೆ ಬಳಸಿರುವ ಇಟ್ಟಿಗೆಗಳೆಲ್ಲಾ ಕರಗಿ ಹೋಗಿ, ಮತ್ತೊಮ್ಮೆ ಬಂಡವಾಳ ಹಾಕಿ, ತೊಟ್ಟಿ ನಿರ್ಮಿಸಬೇಕಾಗುತ್ತದೆ. ಸರ್ಕಾರಿ ಕೆಲಸಗಳು ಈ ರೀತಿ ಅರ್ಧಂಬರ್ಧ ಆಗುವುದನ್ನು ಅವರು ವಿಷಾದಿಸಿದ್ದಾರೆ.




**ತಿಪಟೂರು ತಾಲ್ಲೂಕಿನ ಕೆರಗೋಡಿ ರಂಗಾಪುರದ ಗ್ರಾಮದೇವತೆ ದೇವಮ್ಮದೇವಿಯ ತಿಂಗಳ ಜಾತ್ರಾ ಮಹೋತ್ಸವದ ಅಂಗವಾಗಿ ಅಂದಾಜು 1 ಕೋಟಿ 20 ಲಕ್ಷದಲ್ಲಿ ನಿರ್ಮಿತವಾದ ರಥವನ್ನು ಶ್ರೀ ಗುರುಪರದೇಶಿಕೇಂದ್ರ ಮಹಾಸ್ವಾಮಿಜಿ ನೇತೃತ್ವದಲ್ಲಿ ಹಾಗೂ ದೇವಮ್ಮದೇವಿಯ ಸಮ್ಮುಖದಲ್ಲಿ ನೂತನ ರಥವನ್ನು ಲೋಕಾರ್ಪಣೆ ಮಾಡಲಾಯಿತು.**

# ವಿದ್ಯಾರ್ಥಿಗಳಿಂದ ಶಿಕ್ಷಕರಿಗೆ ಗೌರವ ವಂದನೆ

**ಚಿಕ್ಕಬಳ್ಳಾಪುರ:** ಐದು ದಶಕಗಳ ನಂತರ ಪ್ರಾಥಮಿಕ ಶಾಲೆಯ ವಿಧ್ಯಾಭ್ಯಾಸದ ದಿನಗಳಲ್ಲಿ ನಮ್ಮನ್ನುತಿದ್ದಿತೀಡಿಉತ್ತಮ ಬೋಧನೆ ಮಾಡಿದ ಶಿಕ್ಷಕರಿಗೆ ಗೌರವ ವಂದನೆಗಳನ್ನು ಸಲ್ಲಿಸಲು ಅವಕಾಶ ಸಿಕ್ಕಿರುವ ನಾವುಗಳೇ ಅದೃಷ್ಟವಂತರು ಎಂದು ನಿವೃತ್ತ ಶಿಕ್ಷಕ ಗೇರಹಳ್ಳಿ ಮೋಹನ್‌ಅಭಿಪ್ರಾಯ ಪಟ್ಟರು.

ಅವರುಇಂದು ನಿವೃತ್ತ ಶಿಕ್ಷಕಿ ರಾಜಮ್ಮರವರಿಗೆ ಅಂದಿನ ಪ್ರಾಥಮಿಕ ಶಾಲಾ ಸ್ನೇಹಿತರೊಂದಿಗೆ ಸೇರಿ 70ರ ದಶಕದಲ್ಲಿ ಬೋಧನೆ ಮಾಡಿದಂತಹ ಶಿಕ್ಷಕ ಶಿಕ್ಷಕಿಯರಿಗೆ ಗೌರವ ವಂದನೆಗಳನ್ನು ಸಲ್ಲಿಸಬೇಕೆಂಬ ಉದ್ದೇಶದೊಂದಿಗೆ ನಿವೃತ್ತ ಶಿಕ್ಷಕಿ 86 ವರ್ಷ ವಯಸ್ಸಿನ ರಾಜಮ್ಮನವರ ಮನೆಗೆ 20ಕ್ಕೂ ಹೆಚ್ಚುಮಂದಿ ಸ್ನೇಹಿತರು ತೆರಳಿ ಅವರ ಆಶೀರ್ವಾದಗಳನ್ನು ಪಡೆದು ಸನ್ಮಾನಿಸಿದ ಸಂಧರ್ಭದಲ್ಲಿಅಂದು ನಮ್ಮ ಶಿಕ್ಷಕರು ನಮಗೆ ಉತ್ತಮವಾದ ಶಿಕ್ಷಣದೊಂದಿಗೆ ನೀತಿ ಬೋಧನೆಗಳನ್ನು ಬೋಧಿಸಿದ ಹಿನ್ನೆಲೆಯಲ್ಲಿ ನಾವು ಉತ್ತಮ ಮಾರ್ಗದಲ್ಲಿ ನಡೆದು ಒಳ್ಳೆಯ ಕೆಲಸಗಳಲ್ಲಿ ನಮ್ಮನ್ನು ನಾವು ತೊಡಗಿಸಿಕೊಂಡು ಯಾವಕೆಟ್ಟ ಹೆಸರನ್ನು ತೆಗೆದುಕೊಳ್ಳದೆ ಬಹುತೇಕ ಸ್ನೇಹಿತರು ನಿವೃತ್ತರಾಗಲುಅನುವಾಗಿದೆಎಂದು ಮೋಹನ್ ಅಭಿಪ್ರಾಯ ಪಟ್ಟರು.

ಒಂದೇ ಬಾರಿಗೆ 20ಕ್ಕೂ ಹೆಚ್ಚು ಹಳೆ ಶಿಷ್ಯರನ್ನು ಕಂಡು ಭಾವುಕರಾದ ನಿವೃತ್ತ ಶಿಕ್ಷಕಿ ರಾಜಮ್ಮ ಇಷ್ಟು ವರ್ಷಗಳ ನಂತರವೂ ನಮ್ಮಂತಹ ಶಿಕ್ಷಕಿಯರನ್ನು



ಹುಡುಕಿಕೊಂಡು ಬಂದುಗೌರವ ಸಲ್ಲಿಸುತ್ತಿರುವುದು ಸಂತೋಷತಂದಿದೆಎಂದರು.

ಅಂದಿನ ಎಲ್ಲಾ ಸ್ನೇಹಿತರನ್ನು 1973–76 ಗರ್ಲ್ಸ್‌ಸ್ಕೂಲ್ ಫ್ರೆಂಡ್ಸ್ ಎಂಬ ಹೆಸರಿನೊಂದಿಗೆ ವಾಟ್ಸಪ್ ಗುಂಪನ್ನು ರಚಿಸಿ ಅದರಲ್ಲಿ ಅಂದಿನ ಬಹುತೇಕ ಸ್ನೇತರು ಮತ್ತೊಮ್ಮೆಒಂದೆಡೆ ಸೇರುವಂತೆ ಶ್ರಮವಹಿಸಿದ ಎನ್.ಎಸ್.ವಿಶ್ವೇಶ್ವರ,ಜಜೆ.ವಿ.ನಟರಾಜ್ ಮತ್ತುಎಸ್. ವಿನ್ಸ್ಟನ್ ಕೆನಡಿರವರುಗಳನ್ನು ಮಿಕ್ಕ ಸ್ನೇಹಿತರು ಸಂತೋಷ ವ್ಯಕ್ತಪಡಿಸಿ ಅಭಿನಂದಿಸಿದರು.

ಇದೇ ಸಂಧರ್ಭದಲ್ಲಿ ಎನ್.ಎಸ್.ವಿಶ್ವೇಶ್ವರ ಮಾತನಾಡಿ, ಅಂದು ನಮಗೆ ಬೆತ್ತದರುಚಿ ತೋರಿಸಿ ಒಳ್ಳೆಯ ಮಾರ್ಗದರ್ಶನ ನೀಡಿ ನಮ್ಮನ್ನುಉತ್ತಮ ಮಾರ್ಗದಲ್ಲಿ ನಡೆಸಿದ ಪ್ರತಿಯೊಬ್ಬ ಶಿಕ್ಷಕ ಶಿಕ್ಷಿಯರ ವಿಳಾಸಗಳನ್ನು ಪತ್ತೆ ಹಚ್ಚಿ ಪ್ರತಿಯೊಬ್ಬರಿಗೂಗೌರವ ಸಲ್ಲಿಸಬೇಕೆಂದುಎಲ್ಲಾ ಸ್ನೇಹಿತರು ತೀರ್ಮಾನಿಸಿದ್ದು ಅದರಂತೆಕಾರ್ಯ ಪ್ರವೃತ್ತರಾಗಿದ್ದೇವೆಎಂದರು. ಕಾರ್ಯಕ್ರಮದಲ್ಲಿ ದೇವದಾಸ್, ನಿರಂಜನ್ ,ಸುಧಾಕರ್, ಪ್ರಕಾಶ್, ಶ್ರೀನಿವಾಸ್, ಗಾಜುಲು ಶ್ರೀನಿವಾಸ್,ಎಂ.ಕೆ.ನಾಗರಾಜ್, ಲಕ್ಷ್ಮೀನಾರಾಯಣರಾವ್, ನಾಗರಾಜ್, ರಾಮಕ್ರಿಷ್ಣ, ವಿವೇಕಾನಂದ,ಚಂದ್ರಶೇಖರ್, ಶಶಿಕುಮಾರ್, ಮುಂತಾದವರು ಉಪಸ್ಥಿತರಿದ್ದರು.

# ಆಗ್ನೇಯ ಶಿಕ್ಷಕರ ಕ್ಷೇತ್ರದ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಡಿ.ಟಿ.ಶ್ರೀನಿವಾಸ್ ಬೆಂಬಲಿಸಿ

**ಟೇಕಲ್:** ಶಿಕ್ಷಣ ಕ್ಷೇತ್ರದ ಅಮೂಲಗ್ರಾ ಬದಲಾವಣೆ ಹೊಸಹೊಸ ಯೋಜನೆಗಳನ್ನು ತರಲು ವಿಧಾನಪರಿಷತ್ ಆಗ್ನೇಯ ಶಿಕ್ಷಕರ ಕ್ಷೇತ್ರದ ಕಾಂಗ್ರೆಸ್ ಪಕ್ಷದಿಂದ ಸ್ಪರ್ಧಿಸಿರುವ ಡಿ.ಟಿ.ಶ್ರೀನಿವಾಸ ಅವರಿಗೆ ಇದೇ ಜೂನ್ 3 ರಂದು ನಡೆಯಲಿರುವ ಚುನಾವಣೆಯಲ್ಲಿ ಪ್ರಥಮ ಪ್ರಾಶಸ್ತ್ಯ ಮತವನ್ನು ನೀಡುವುದರ ಮೂಲಕ ಬೆಂಬಲಿಸುವಂತೆ ಶಾಸಕ ಕೆ.ವೈ.ನಂಜೇಗೌಡರು ಮನವಿ ಮಾಡಿದರು. ಅವರು ಟೇಕಲ್ ಪ್ರೌಢಶಾಲೆ ಮತ್ತು ಕಾಲೇಜಿಗೆ ಬೇಟಿ ನೀಡಿ ಮತಯಾಚಿಸಿ ಮಾತನಾಡುತ್ತಿದ್ದರು.

ಶಿಕ್ಷಕರ ಬೇಡಿಕೆಗಳನ್ನು ಈಡೇರಿಸುವ ನಿಟ್ಟಿನಲ್ಲಿ ಶಿಕ್ಷಣ ಕ್ಷೇತ್ರದಲ್ಲಿ ಕೆಲಸ ಮಾಡಲಿದ್ದು ಅವರದೇ ಆದ ರೂಪುರೇಷೆಗಳನ್ನು ಕೈಗೊಂಡು ಹೊಸ ಹೊಸ ಯೋಜನೆಗಳನ್ನು ಶಿಕ್ಷಕರಿಗೆ ಸಹಕಾರಿಯಾಗುವಂತೆ ನಮ್ಮ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಡಿ.ಟಿ.ಶ್ರೀನಿವಾಸ ಮಾಡಲಿದ್ದು ಈ ಭಾರಿ ಅವರು ಗೆಲ್ಲುವ ಅಲೆ ಇದ್ದು ಅವರು ಜಯಗಳಿಸುವುದು ಶತಸಿದ್ಧವೆಂದರು.

ಮಾಲೂರು ತಾಲ್ಲೂಕಿನಲ್ಲಿ ಕಾರ್ಯನಿರ್ವಹಿಸುತ್ತಿರುವ 500ಕ್ಕೂ ಹೆಚ್ಚು



ಪ್ರೌಢಶಾಲಾ ಶಿಕ್ಷಕರ ಮತದಾರರು ಈ ಬಾರಿ ನಮಗೆ ಬೆಂಬಲ ಸೂಚಿಸುತ್ತಿದ್ದು ಅವರ ಪರ ತಾಲ್ಲೂಕಿನ ಪ್ರತಿ ಶಾಲಾ ಕಾಲೇಜುಗಳಿಗೆ ಬೇಟಿ ನೀಡಿ ಮತಯಾಚನೆ ಮಾಡಲಾಗುತ್ತಿದೆ. ಈ ಸಂದರ್ಭದಲ್ಲಿ ಉತ್ತಮವಾದ ಬೆಂಬಲ ವ್ಯಕ್ತವಾಗುತ್ತಿದೆ ಎಂದರು. ಸರ್ಕಾರದ ಪ್ರತಿನಿಧಿ ಕಾಂಗ್ರೆಸ್ ಪಕ್ಷದಿಂದ ಆಯ್ಕೆಯಾದರೆ ಶಿಕ್ಷಕರ ಎಲ್ಲಾ ಬೇಡಿಕೆಗಳು ಸಮಸ್ಯೆಗಳು ಬಗೆಹರಿಸುವ ನಿಟ್ಟಿನಲ್ಲಿ ಕಾರ್ಯಪ್ರವೃತ್ತರಾಗುತ್ತಾರೆ ಎಂದರು.

**ಹಲವಾರು ಪ್ರೌಢಶಾಲೆಗಳಿಗೆ ಬೇಟಿ:** ಈ ಸಂದರ್ಭದಲ್ಲಿ ಶಾಸಕ ಕೆ.ವೈ.ನಂಜೇಗೌಡರು ಟೇಕಲ್‌ನ ತೊರಲಕ್ಕಿ, ದೊಡ್ಡನಾಯಕನಹಳ್ಳಿ, ಹುಳದೇನಹಳ್ಳಿ ರಮಾಮಾಧವ ಪ್ರೌಢಶಾಲೆಗಳಿಗೆ ಬೇಟಿ ನೀಡಿ ಶಿಕ್ಷಕ ವೃಂದದಿಂದ ಮತಯಾಚನೆ ಮಾಡಿದರು. ಶಿಕ್ಷಣ ಇಲಾಖೆಯ ವೆಂಕಟರಾಮರೆಡಿ, ಕ.ಸಾ.ಪ.ಅಧ್ಯಕ್ಷ ಹನುಮಂತಪ್ಪ, ಕೆ.ಜಿ.ಹಳ್ಳಿ ಗ್ರಾ.ಪಂ.ಅಧ್ಯಕ್ಷ ಎಸ್.ಆರ್.ಯಲ್ಲಪ್ಪ, ಉಪಾಧ್ಯಕ್ಷೆ ಮಮತಾಶಶಿಧರ್, ಗ್ರಾ.ಪಂ.ಸದಸ್ಯ ಕೆ.ಎಸ್.ವೆಂಕಟೇಶ, ಎಸ್.ಡಿ.ಎಂ.ಸಿ ಅಧ್ಯಕ್ಷರಾದ ಹೆಚ್.ವಿ.ವಿನೋದ್ ಗೌಡ, ಕಾಲೇಜು ಪ್ರಾಂಶುಪಾಲರಾದ ಸಿದ್ಧರಾಜು, ಉಪಪ್ರಾಂಶುಪಾಲರಾದ ಭಾರತೀಬಾಯಿ, ಅಕ್ಷರಧಾಮ ಶಾಲೆ ಪ್ರಶಾಂತ್, ಸರ್. ಎಂ.ವಿಶ್ವೇಶ್ವರಯ್ಯ ಶಾಲೆ, ಬಾಬಾ ವಿದ್ಯಾಲಯದ ಎ.ಕೆ.ವೆಂಕಟೇಶ, ಹುಣಸಿಕೋಟೆ ವಿವಿಎಂ ಶಾಲೆಯ ರವಿಕುಮಾರ್, ಮುಖಂಡರಾದ ಅಶ್ವಥರೆಡ್ಡಿ, ಡಿ.ಕೆ.ಕೃಷ್ಣಮೂರ್ತಿ, ಗಂಗಾಧರ್, ಮುಖಂಡರುಗಳು ಉಪಸ್ಥಿತರಿದ್ದರು.

# ಸಂಜೆ ಟಿಪ್ಸ್

## ನಾವೀನ್ಯತೆಗೆ ಮುನ್ನುಡಿ ಬರೆಯುತ್ತಿರುವ ಕಾಯಿನ್ ಸ್ವಿಚ್

ಆಶಿಶ್ ಸಿಂಘಾಲ್, ವಿಮಲ್ ಸಾಗರ್ ತಿವಾರಿ ಮತ್ತು ಗೋವಿಂದ್ ಸೋನಿ ಅವರಿಂದ 2017 ರಲ್ಲಿ ಸ್ಥಾಪಿಸಲಾದ ಕಾಯಿನ್ ಸ್ವಿಚ್, ಕ್ರಿಪ್ಟೋ ವ್ಯಾಪಾರ ವೇದಿಕೆಯಲ್ಲಿ ನಾವೀನ್ಯತೆಯ ದಾರಿದೀಪವಾಗಿ ಹೊರಹೊಮ್ಮಿದೆ. ಬಹು ವಿನಿಮಯ ಕೇಂದ್ರಗಳಾದ್ಯಂತ ಹೆಚ್ಚು ವೆಚ್ಚ-ಪರಿಣಾಮಕಾರಿ ವಹಿವಾಟುಗಳನ್ನು ನೀಡಲು ಕ್ರಿಪ್ಟೋ ಬೆಲೆಗಳನ್ನು ಹೋಲಿಸುವ ಮಹತ್ವದ ಸವಾಲನ್ನು ಪರಿಹರಿಸುವ ಮೂಲಕ, ಕಾಯಿನ್ ಸ್ವಿಚ್ 2 ಕೋಟಿಗೂ ಹೆಚ್ಚು ನೋಂದಾಯಿತ ಬಳಕೆದಾರರೊಂದಿಗೆ ಭಾರತದ ಅತಿದೊಡ್ಡ ಕ್ರಿಪ್ಟೋ ವ್ಯಾಪಾರ ವೇದಿಕೆಯಾಗಿ ಬೆಳೆದಿದೆ. ಕಾಯಿನ್ ಸ್ವಿಚ್ ನವೆಂಬರ್ 2022 ರಲ್ಲಿ ತನ್ನ ಪ್ರೂಫ್ ಆಫ್ ರಿಸರ್ವ್ ಹಂಚಿಕೊಂಡ ಮೊದಲ ಭಾರತೀಯ ಕ್ರಿಪ್ಟೋ ಪ್ಲಾಟ್ಫಾರ್ಮ್ ಆಗಿದ್ದು, ಕ್ರಿಪ್ಟೋ ಉದ್ಯಮದ ಟ್ರಸ್ಟ್ ಮಾರ್ಕರ್ ಆಗಿ ಸ್ಥಾಪಿತವಾಗಿದೆ. ಪ್ರತಿಯೊಂದು ಯಶಸ್ವಿ ವ್ಯಾಪಾರದ ಅಡಿಪಾಯವು ನಂಬಿಕೆಯಾಗಿದೆ. ಕಾಯಿನ್ ಸ್ವಿಚ್ನಲ್ಲಿ, ನಮ್ಮ ಬಳಕೆದಾರರ ನಂಬಿಕೆಯನ್ನು ಗಳಿಸುವುದು ಮತ್ತು ಕಾಪಾಡಿಕೊಳ್ಳುವುದು ಅತಿಮುಖ್ಯ ಎಂದು ನಾವು ಅರ್ಥಮಾಡಿಕೊಂಡಿದ್ದೇವೆ. ನಮ್ಮ ಮೂರನೇ ಪ್ರೂಫ್ ಆಫ್ ರಿಸರ್ವ್ ಪಾರದರ್ಶಕತೆ ಮತ್ತು ಹೊಣೆಗಾರಿಕೆಗೆ ನಮ್ಮ ಬದ್ಧತೆಯನ್ನು ಪ್ರದರ್ಶಿಸುತ್ತದೆ – ನಮ್ಮ ಗ್ರಾಹಕರಿಗೆ ಅವರ ಸ್ವತ್ತುಗಳು ನಮ್ಮೊಂದಿಗೆ ಸುರಕ್ಷಿತವಾಗಿವೆ ಎಂಬ ಸಂಪೂರ್ಣ ವಿಶ್ವಾಸವನ್ನು ನೀಡುತ್ತದೆ ಎಂದು ಕಾಯಿನ್ಸ್ವಿಚ್ನ ವ್ಯಾಪಾರ ಮುಖ್ಯಸ್ಥ ಬಾಲಾಜಿ ಶ್ರೀಹರಿ ಹೇಳಿದರು. ಕಾಯಿನ್ ಸ್ವಿಚ್ನ ಇಂಡಿಯಾ ಪೋರ್ಟ್ಫೋಲಿಯೊ 2023 ವರದಿಯ ಪ್ರಕಾರ ಬೆಂಗಳೂರು, ದೆಹಲಿ ಮತ್ತು ಮುಂಬೈ ಜೊತೆಗೆ ಭಾರತದಲ್ಲಿ ಅತಿ ಹೆಚ್ಚು ಕ್ರಿಪ್ಟೋ ಅಳವಡಿಕೆ ಹೊಂದಿರುವ ಟಾಪ್ 10 ನಗರಗಳಲ್ಲಿ ಒಂದಾಗಿದೆ. ಸ್ಟಾರ್ಟ್‌ಅಪ್ ಕರ್ನಾಟಕದಂತಹ ಸರ್ಕಾರಿ ಉಪಕ್ರಮಗಳು, ಬ್ಲಾಕ್ಚೈನ್ ಆಧಾರಿತ ಪರಿಹಾರಗಳನ್ನು ಉತ್ತೇಜಿಸುವ ಕಾಯಿನ್ ಸ್ವಿಚ್ನ ಪ್ರಯತ್ನಗಳನ್ನು ಸಕ್ರಿಯವಾಗಿ ಬೆಂಬಲಿಸಿ, ಟೆಕ್ ಸ್ಟಾರ್ಟ್‌ಅಪ್ಗಳಿಗೆ ಅನುಕೂಲಕರ ವಾತಾವರಣವನ್ನು ಬೆಳೆಸುವ ಸರ್ಕಾರದ ಬದ್ಧತೆಯನ್ನು ಪ್ರದರ್ಶಿಸುತ್ತದೆ. ಕಾಯಿನ್ ಸ್ವಿಚ್ ಭಾರತದ ಜನಸಂಖ್ಯೆಯು ಎದುರಿಸುತ್ತಿರುವ ದೈನಂದಿನ ಸಮಸ್ಯೆಗಳಿಗೆ ಬ್ಲಾಕ್ಚೈನ್ ಆಧಾರಿತ ಪರಿಹಾರಗಳನ್ನು ಉತ್ತೇಜಿಸಲು ಸ್ಟಾರ್ಟ್‌ಅಪ್ ಕರ್ನಾಟಕದ ಸಹಯೋಗದೊಂದಿಗೆ ಬಿಲ್ಡಿಂಗ್ ಫ್ಯೂಚರ್ ಸಿಟೀಸ್ ನಂತಹ ಬ್ಲಾಕ್ಚೈನ್ ಹ್ಯಾಕಥಾನ್ಗಳನ್ನು ಆಯೋಜಿಸಿದ್ದು, ಇದು ನಾವೀನ್ಯತೆಯನ್ನು ಉತ್ತೇಜಿಸುವ ಮತ್ತು ಯುವ ನವೋದ್ಯಮಿಗಳಿಗೆ ಅಧಿಕಾರ ನೀಡುವ ಕಂಪನಿಯ ಬದ್ಧತೆಯನ್ನು ಪ್ರದರ್ಶಿಸುತ್ತದೆ.

## ಫಿಶ್ ಕರಿ

### ಪಾಕ ಶಾಲೆ



### ಬೇಕಾಗಿರುವ ಪದಾರ್ಥ

**6-7 ಮೀನಿನ ತುಂಡುಗಳು, 1 ಮೊಟ್ಟೆ, 2 ಟೀ ಸ್ಪೂನ್ ಜೋಳದ ರೊಟ್ಟಿ, ಒಂದೂವರೆ ಟೀ ಸ್ಪೂನ್ ರುಬ್ಬಿದ ಶುಂಠಿ, ಬೆಳ್ಳುಳ್ಳಿ, ಅರ್ಧ ಟೀ ಸ್ಪೂನ್ ಅಜಿನೊಮೊಟೊ ಹಾಗೂ ಅಗತ್ಯಕ್ಕೆ ತಕ್ಕಷ್ಟು ಎಣ್ಣೆ.**

**ಕರಿಗೆ ಬೇಕಾಗುವ ಸಾಮಗ್ರಿಗಳು:**

**2 ಈರುಳ್ಳಿ ಕತ್ತರಿಸಿದ್ದು, 3 ಟೀ ಸ್ಪೂನ್ ಎಣ್ಣೆ, 3 ಟೀ ಸ್ಪೂನ್ ರುಬ್ಬಿದ ಶುಂಠಿ, ಬೆಳ್ಳುಳ್ಳಿ, ತಲಾ ಒಂದೂವರೆ ಟೀ ಸ್ಪೂನ್ ನಷ್ಟು ಟೊಮ್ಯಾಟೊ ಸಾಸ್, ಸೋಯಾ ಸಾಸ್, ಕೆಂಪು ಮೆಣಸಿನ ಕಾಯಿ ಪುಡಿ, ಜೋಳದ ಹಿಟ್ಟು, ಚಿಲ್ಲಿ ಸಾಸ್, ಗರಮ್ ಮಸಾಲ, ತಲಾ ೪ ಟೀ ಸ್ಪೂನ್ ನಷ್ಟು ಅಜಿನೊಮೊಟೊ, ಸಕ್ಕರೆ, ಹಾಗೂ ಅರ್ಧ ಟೀ ಸ್ಪೂನ್ ನಷ್ಟು ಉಪ್ಪು.**

### ಮಾಡುವ ವಿಧಾನ

ಮೊದಲಿಗೆ 2 ಟೀ ಸ್ಪೂನ್ ನಷ್ಟು ಕಾರ್ನ್ ಫ್ಲೋರ್ ಮತ್ತು ಮೊಟ್ಟೆಯ ಬಿಳಿ ಭಾಗ, ಒಂದೂವರೆ ಟೀ ಸ್ಪೂನ್ ರುಬ್ಬಿದ ಶುಂಠಿ, ಬೆಳ್ಳುಳ್ಳಿ ಮತ್ತು ೪ ಟೀ ಸ್ಪೂನ್ ಅಜಿನೊಮೊಟೊವನ್ನು ಒಂದು ಪಾತ್ರೆಯಲ್ಲಿ ಹಾಕಿ ಚೆನ್ನಾಗಿ ಕಲೆಸಿಕೊಳ್ಳಿರಿ. ಈ ಮಿಶ್ರಣದಲ್ಲಿ ಮೀನಿನ ತುಂಡುಗಳನ್ನು ಹಾಕಿ, ಮಿಶ್ರಣ ತುಂಡುಗಳಿಗೆ ಮೆತ್ತಿಕೊಳ್ಳುವಂತೆ ಮಾಡಿ. ಬಳಿಕ ಎಣ್ಣೆಯಲ್ಲಿ ಹಾಕಿ ಕೆಂಪಗೆ ಕರಿಯಿರಿ.

ಕತ್ತರಿಸಿದ ಈರುಳ್ಳಿ, ಹಸಿ ಮೆಣಸಿನ ಕಾಯಿ ಮತ್ತು 3 ಟೀ ಸ್ಪೂನ್ ರುಬ್ಬಿದ ಶುಂಠಿ, ಬೆಳ್ಳುಳ್ಳಿಯನ್ನು ಎಣ್ಣೆಯಲ್ಲಿ ಕೆಂಪಗೆ ಹುರಿಯಿರಿ. ಅದಕ್ಕೆ ಉಪ್ಪು, ಮೆಣಸಿನ ಪುಡಿ, ಗರಮ್ ಮಸಾಲಾ ಪುಡಿ, ಸಕ್ಕರೆ ಬೆರೆಸಿ ಅರ್ಧ ಕಪ್ ನೀರು ಹಾಕಿ ಕೆಲವು ನಿಮಿಷಗಳ ಕಾಲ ಕುದಿಸಿರಿ. ಬಳಿಕ ಜೋಳದ ಹಿಟ್ಟನ್ನು ನೀರಿನಲ್ಲಿ ಕಲೆಸಿ ಸೇರಿಸಿರಿ. ಕರಿ ಚೆನ್ನಾಗಿ ಕುದಿಯುವಾಗ ಅದಕ್ಕೆ ಸಾಸ್, ಅಜಿನೊಮೊಟೊ ಬೆರೆಸಿರಿ. 2-3 ನಿಮಿಷಗಳ ಕಾಲ ಕುದಿಸಿ ಮೊದಲೇ ಕೆಂಪಗೆ ಕರಿದ ಮೀನಿನ ತುಂಡುಗಳನ್ನು ಹಾಕಿ 3 ನಿಮಿಷ ಬೇಯಿಸಿ ಕೆಳಗೆ ಇಳಿಸಿ. ಸ್ವಾದಿಷ್ಟವಾದ ಚೈನೀಸ್ ಫಿಶ್ ಕರಿಯನ್ನು ಸವಿಯಿರಿ.

## ನಟ ನಾಗ ಚೈತನ್ಯ ಹೊಸ ಪೋರ್ಷೆ 911 ಜಿಟಿ3 ವಿಶೇಷತೆ ಗೊತ್ತೆ



ನಾಯಕ ನಾಗ ಚೈತನ್ಯ ತಮ್ಮ ಸಿನಿಮಾ ಹಾಗೂ ವೈಯಕ್ತಿಕ ಜೀವನದ ಬಗ್ಗೆ ಸುದ್ದಿಯಲ್ಲಿದ್ದಾರೆ. ಇದರ ಜೊತೆಗೆ ನಾಗ ಚೈತನ್ಯ ಕಾರು ಕಲೆಕ್ಷನ್ ವಿಚಾರದಲ್ಲೂ ಭಾರೀ ಸಂಚಲನ ಮೂಡಿಸಿದ್ದಾರೆ. ಇದೀಗ ಅವರ ದುಬಾರಿ ಕಾರುಗಳ ಸಾಲಿಗೆ ಮತ್ತೊಂದು ಹೊಸ ಸೇರ್ಪಡೆ ಬಂದಿದೆ.

ನಾಗ ಚೈತನ್ಯ ಅವರು ದುಬಾರಿ ಪೋರ್ಷೆ 911 GT3 ಸೂಪರ್ ಕಾರನ್ನು ಖರೀದಿಸಿದ್ದಾರೆ.

ಇದರ ಬೆಲೆ ರೂ.3.51 ಕೋಟಿ. ಅತ್ಯಂತ ಆಕರ್ಷಕವಾದ ಈ ಕಾರು ಕೇವಲ 2 ಆಸನಗಳನ್ನು ಹೊಂದಿದೆ. ಇಬ್ಬರಿಗೆ ಮಾತ್ರ ಸರಿಹೊಂದುವ ದುಬಾರಿ ಪೋರ್ಷೆ ಕಾರಿನ ಬಗ್ಗೆ ನಾಗ ಚೈತನ್ಯ ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿದ್ದಾರೆ. ಈ ಹೊಸ ಕಾರು ಖರೀದಿಸಿದ್ದಕ್ಕೆ ಸಂತಸವನ್ನೂ ಹಂಚಿಕೊಂಡಿದ್ದಾರೆ.

ಚೈತು ಖರೀದಿಸಿರುವ ಪೋರ್ಷೆ 3996 ಸಿಸಿ, 6 ಸಿಲಿಂಡರ್ ಎಂಜಿನ್ ಹೊಂದಿದೆ. ಈ ಕಾರಿನ ಗರಿಷ್ಠ ವೇಗ ಗಂಟೆಗೆ 296 ಕಿ.ಮೀ. ಆದರೆ ಈ ಕಾರು ಪ್ರತಿ ಲೀಟರ್ ಪೆಟ್ರೋಲ್ ಗೆ ಕೇವಲ 7.4 ಕಿ.ಮೀ ಮೈಲೇಜ್ ನೀಡುತ್ತದೆ.

ಕಾರು 7 ಏರ್ಬ್ಯಾಗ್ಗಳನ್ನು ಒಳಗೊಂಡಂತೆ ಹೆಚ್ಚಿನ ಸುರಕ್ಷತಾ ವೈಶಿಷ್ಟ್ಯಗಳನ್ನು ಹೊಂದಿದೆ. ಈ ಕಾರು 518 bhpಪವರ್ ಮತ್ತು 465 Nm ಟಾರ್ಕ್ ಹೊಂದಿದೆ. ಆದ್ದರಿಂದ ಅದರ ಕಾರ್ಯಕ್ಷಮತೆ ಅದ್ಭುತವಾಗಿದೆ. 37ರ ಹರೆಯದ ನಾಯಕ ನಾಗ ಚೈತನ್ಯ ಅವರ ಒಟ್ಟು ಆಸ್ತಿ ಮೌಲ್ಯ 154 ಕೋಟಿ ರೂ. ಅವರು ಹೈದರಾಬಾದ್ನ ಜುಬಿಲಿ ಹಿಲ್ಸ್ನಲ್ಲಿ ಭವ್ಯವಾದ ಅರಮನೆಯನ್ನು ಸಹ ಹೊಂದಿದ್ದಾರೆ.

ನಾಗ ಚೈತನ್ಯ ಅವರು 1.75 ಕೋಟಿ ರೂಪಾಯಿ ಮೌಲ್ಯದ ಫೆರಾರಿ F430 ಮತ್ತು 3.43 ಕೋಟಿ ಮೌಲ್ಯದ ರೇಂಜ್ ರೋವರ್ ಹೊಂದಿದ್ದಾರೆ. 13 ಲಕ್ಷ ಬೆಲೆಯ BWM ಬೈಕ್, ಟ್ರಯಂಫ್ ಥ್ರಕ್ಸ್ಟನ್ ಆರ್ ಬೈಕ್ ಕೂಡ ಹಲವಾರು ಬಾರಿ ಕಾಣಿಸಿಕೊಂಡಿದೆ. ಇವುಗಳ ಹೊರತಾಗಿ ಕೆಲವು ದುಬಾರಿ ವಾಹನಗಳೂ ಇವೆ.

## ಧ್ಯಾನದ ಪ್ರಯೋಜನ ಅಪಾರ

### ಹೆಲ್ತ್ ಟಿಪ್ಸ್



ಮಾನಸಿಕ ಮತ್ತು ದೈಹಿಕ ಆರೋಗ್ಯಕ್ಕೆ ಧ್ಯಾನ ಬಹಳ ಮುಖ್ಯ ಎಂಬುದರಲ್ಲಿ ಸಂದೇಹವಿಲ್ಲ. ಇಂದಿನ ಬಿಡುವಿಲ್ಲದ ಜೀವನದಲ್ಲಿ ಮಾನಸಿಕ ಒತ್ತಡ ಸಾಮಾನ್ಯವಾಗಿದೆ. ಕೆಲಸದ ಹೊರೆ, ಸಂಬಂಧದ ತೊಡಕುಗಳು, ಭವಿಷ್ಯದ ಬಗ್ಗೆ ಚಿಂತೆ – ಇವೆಲ್ಲವೂ ನಮ್ಮ ಮಾನಸಿಕ ಸಮತೋಲನವನ್ನು ಹಾಳುಮಾಡುತ್ತವೆ. ಆದರೆ ಧ್ಯಾನದ ಪ್ರಯೋಜನಗಳು ಕೇವಲ ಒತ್ತಡವನ್ನು ಕಡಿಮೆ ಮಾಡುವುದಕ್ಕೆ ಸೀಮಿತವಾಗಿಲ್ಲ ಬದಲಾಗಿ ಧ್ಯಾನವು ಹೃದ್ರೋಗದಂತಹ ಮಾರಣಾಂತಿಕ ಕಾಯಿಲೆಗಳನ್ನು ಸಹ ತಡೆಯುತ್ತದೆ.

ಧ್ಯಾನದ ದೊಡ್ಡ ಪ್ರಯೋಜನವೆಂದರೆ ಮನಸ್ಸಿನ ಶಾಂತಿ. ನಾವು ಧ್ಯಾನ ಮಾಡುವಾಗ, ನಮ್ಮ ಆಲೋಚನೆಗಳನ್ನು ಹರಿಯುವಂತೆ ನಾವು ಅನುಮತಿಸುತ್ತೇವೆ ಹಾಗಾಗಿ ಅದು ಮನಸ್ಸನ್ನು ಶಾಂತಗೊಳಿಸುತ್ತದೆ ಮತ್ತು ಒತ್ತಡವನ್ನು ಕಡಿಮೆ ಮಾಡುತ್ತದೆ. ನಿಯಮಿತವಾಗಿ ಧ್ಯಾನ ಮಾಡುವುದರಿಂದ, ಆತಂಕ, ಚಡಪಡಿಕೆ ಮತ್ತು ಖಿನ್ನತೆಯಂತಹ ಸಮಸ್ಯೆಗಳನ್ನು ಸಹ ತಪ್ಪಿಸಬಹುದು.

ಇಂದಿನ ಡಿಜಿಟಲ್ ಯುಗದಲ್ಲಿ, ನಮ್ಮ ಗಮನವು ಎಲ್ಲಿಂದಲಾದರೂ ವಿಚಲಿತವಾಗುತ್ತಿದೆ. ಅಂತಹ ಪರಿಸ್ಥಿತಿಯಲ್ಲಿ, ಒಂದೇ ಸ್ಥಳದಲ್ಲಿ ಕೇಂದ್ರೀಕರಿಸಲು ಕಷ್ಟವಾಗುತ್ತದೆ. ಆದ್ದರಿಂದ, ಏಕಾಗ್ರತೆಯನ್ನು ಹೆಚ್ಚಿಸಲು ಧ್ಯಾನ ಮಾಡಲು ಸಲಹೆ ನೀಡಲಾಗುತ್ತದೆ.ನಮ್ಮ ದೈಹಿಕ ಮತ್ತು ಮಾನಸಿಕ ಆರೋಗ್ಯಕ್ಕೆ ಉತ್ತಮ ನಿದ್ರೆ ಬಹಳ ಮುಖ್ಯ. ಆದರೆ ಒತ್ತಡ ಮತ್ತು ಮಾನಸಿಕ ಕ್ಷೋಭೆಯಿಂದ ಅನೇಕ ಬಾರಿ ನಿದ್ರೆ ಪೂರ್ಣವಾಗುವುದಿಲ್ಲ. ಅಂತಹ ಪರಿಸ್ಥಿತಿಯಲ್ಲಿ, ಧ್ಯಾನವು ತುಂಬಾ ಪ್ರಯೋಜನಕಾರಿಯಾಗಿದೆ. ಇದು ಮನಸ್ಸನ್ನು ಶಾಂತಗೊಳಿಸುತ್ತದೆ ಮತ್ತು ಒತ್ತಡವನ್ನು ಕಡಿಮೆ ಮಾಡುತ್ತದೆ, ಇದು ನಿದ್ರೆಯ ಗುಣಮಟ್ಟವನ್ನು ಸುಧಾರಿಸುತ್ತದೆ ಮತ್ತು ರಾತ್ರಿಯಲ್ಲಿ ಉತ್ತಮ ನಿದ್ರೆ ನೀಡುತ್ತದೆ.

ಒತ್ತಡದಿಂದಾಗಿ ರಕ್ತದೊತ್ತಡ ಹೆಚ್ಚಾಗುವುದು ಸಾಮಾನ್ಯ ಸಮಸ್ಯೆಯಾಗಿದೆ. ಅಂತಹ ಪರಿಸ್ಥಿತಿಯಲ್ಲಿ, ಧ್ಯಾನವು ಒತ್ತಡವನ್ನು ಕಡಿಮೆ ಮಾಡುತ್ತದೆ, ಇದು ರಕ್ತದೊತ್ತಡವನ್ನು ನಿಯಂತ್ರಿಸಲು ಸಹಾಯ ಮಾಡುತ್ತದೆ. ಇದಲ್ಲದೆ, ಧ್ಯಾನ ಮಾಡುವುದರಿಂದ ಹೃದಯ ಬಡಿತ ಸಹ ಸಾಮಾನ್ಯವಾಗಿರುತ್ತದೆ.ಆತ್ಮವಿಶ್ವಾಸವನ್ನು ಹೆಚ್ಚಿಸುತ್ತವೆ

ಧ್ಯಾನವು ನಮ್ಮನ್ನು ನಾವು ಅರ್ಥಮಾಡಿಕೊಳ್ಳಲು ಸಹಾಯ ಮಾಡುತ್ತದೆ. ನಾವು ನಮ್ಮ ಆಲೋಚನೆಗಳು ಮತ್ತು ಭಾವನೆಗಳನ್ನು ಉತ್ತಮವಾಗಿ ಗುರುತಿಸಲು ಸಾಧ್ಯವಾಗುತ್ತದೆ. ಇದು ನಮ್ಮ ಆತ್ಮವಿಶ್ವಾಸವನ್ನು ಹೆಚ್ಚಿಸುತ್ತದೆ ಮತ್ತು ಜೀವನದ ಸವಾಲುಗಳನ್ನು ಎದುರಿಸಲು ನಮ್ಮನ್ನು ಹೆಚ್ಚು ಸಮರ್ಥರನ್ನಾಗಿ ಮಾಡುತ್ತದೆ.

## ಸಿನಿಮಾ ಲವರ್ಸ್ ಡೇ




ಪ್ರತಿ ವರ್ಷ ' ಮೇ 31ರಂದು ಸಿನಿಮಾ ಲವರ್ಸ್ ಡೇ' ಆಚರಣೆ ಮಾಡಲಾಗುತ್ತದೆ. ಭಾರತದ ಬಹುತೇಕ ಮಲ್ಟಿಪ್ಲೆಕ್ಸ್ಗಳಲ್ಲಿ ಮೇ 31ರಂದು ಯಾವುದೇ ಸಿನಿಮಾ ನೋಡಿದರೂ ಟಿಕೆಟ್ ಬೆಲೆ ಕೇವಲ 99 ರೂಪಾಯಿ ಆಗಿರಲಿದೆ. ಭಾರತದಮಲ್ಟಿಪ್ಲೆಕ್ಸ್ಒಕ್ಕೂಟವು ಈ ಬಗ್ಗೆ ಪ್ರಕಟಣೆ ನೀಡಿದೆ. ಪಿವಿಆರ್ ಐನಾಕ್ಸ್, ಸಿನಿಪೊಲಿಸ್ ಮುಂತಾದ ಮಲ್ಟಿಪ್ಲೆಕ್ಸ್‌ಗಳಲ್ಲಿ ಈ ಆಫರ್ ನೀಡಲಾಗುತ್ತಿದೆ. ಈ ವಾರ (ಮೇ 31) ಬಿಡುಗಡೆ ಆಗಲಿರುವ ಸಿನಿಮಾಗಳನ್ನು ನೋಡುವ ಪ್ರೇಕ್ಷಕರಿಗೆ ಈ ಆಫರ್ನಿಂದ ಸಖತ್ ಖುಷಿ ಆಗಲಿದೆ. ಇತ್ತೀಚಿನ ದಿನಗಳಲ್ಲಿ ಚಿತ್ರಮಂದಿರಕ್ಕೆ ಬಂದು ಸಿನಿಮಾ ನೋಡುವವರ ಸಂಖ್ಯೆ ಕಡಿಮೆ ಆಗಿದೆ. ಅದಕ್ಕೆ ಒಂದು ಮುಖ್ಯ ಕಾರಣ ಏನೆಂದರೆ ಟಿಕೆಟ್ಗಳ ದುಬಾರಿ ದರ. ಅದರಲ್ಲೂ ಮಲ್ಟಿಪ್ಲೆಕ್ಸ್‌ಗಳಲ್ಲಿ ಎಲ್ಲ ಸಿನಿಮಾಗಳ ಟಿಕೆಟ್ ಬೆಲೆ ಜಾಸ್ತಿ ಇರುತ್ತದೆ. ವಿಶೇಷ ದಿನಗಳಲ್ಲಿ ಬರೀ 99 ರೂಪಾಯಿಗೆ ಸಿನಿಮಾ ಟಿಕೆಟ್‌ಗಳನ್ನು ಮಾರಾಟ ಮಾಡಿದಾಗ ಹೆಚ್ಚಿನ ಸಂಖ್ಯೆಯ ಪ್ರೇಕ್ಷಕರು ಬಂದು ಸಿನಿಮಾ ನೋಡುತ್ತಾರೆ. ಅದಕ್ಕಾಗಿ 'ಸಿನಿಮಾ ಲವರ್ಸ್ ಡೇ' ಆಚರಿಸಲಾಗುತ್ತದೆ. ಕೊರೊನಾ ವೈರಸ್ ಹಾವಳಿ ಶುರುವಾದ ನಂತರ ಮಲ್ಟಿಪ್ಲೆಕ್ಸ್ ಮತ್ತು ಏಕಪರದೆ ಚಿತ್ರಮಂದಿರಗಳಲ್ಲಿ ಬಂದು ಸಿನಿಮಾ ನೋಡುವವರು ಸಂಖ್ಯೆ ಗಣನೀಯವಾಗಿ ಕುಸಿದಿತ್ತು. ಮತ್ತೆ ಪ್ರೇಕ್ಷಕರನ್ನು ಸೆಳೆಯಲು ಮಲ್ಟಿಪ್ಲೆಕ್ಸ್‌ಗಳ ಹೊಸ ತಂತ್ರ ರೂಪಿಸಿದವು. 'ಸಿನಿಮಾ ಲವರ್ಸ್ ಡೇ' ಹೆಸರಲ್ಲಿ ಆಫರ್ ಬೆಲೆಗೆ ಟಿಕೆಟ್‌ಗಳನ್ನು ನೀಡುವ ಮೂಲಕ ಜನರನ್ನು ಸೆಳೆಯಲಾಯಿತು. ಈ ವರ್ಷ ಮೇ 31ರಂದು 'ಸಿನಿಮಾ ಲವರ್ಸ್ ಡೇ' ಸೆಲೆಬ್ರೇಟ್ ಮಾಡಲಾಗುತ್ತಿದೆ. ಪಿವಿಆರ್ ಐನಾಕ್ಸ್, ಸಿನಿಪೊಲಿಸ್, ಮಿರಾಜ್, ಸಿಟಿ ಪ್ರೈಡ್, ಏಷ್ಯನ್ ಸಿನಿಮಾಸ್, ಮೂವೀ ಟೈಮ್, ಮೂವೀ ಮ್ಯಾಕ್ಸ್ ಮುಂತಾದ ಮಲ್ಟಿಪ್ಲೆಕ್ಸ್‌ಗಳು 'ಸಿನಿಮಾ ಲವರ್ಸ್ ಡೇ' ಆಚರಿಸುತ್ತಿವೆ.

## ಟೈಮ್ ನಿಯತಕಾಲಿಕ: ಜಾಗತಿಕ ಪ್ರಭಾವಿ 100 ಕಂಪನಿಗಳ ಪಟ್ಟಿಯಲ್ಲಿ ರಿಲಯನ್ಸ್

ಅಮೆರಿಕದ ಜನಪ್ರಿಯ ನಿಯತಕಾಲಿಕ ಟೈಮ್, ಬಿಡುಗಡೆ ಮಾಡಿರುವ ಜಗತ್ತಿನ ಪ್ರಮುಖ 100 ಪ್ರಭಾವಿ ಕಂಪನಿಗಳ ಪಟ್ಟಿಯಲ್ಲಿ ರಿಲಯನ್ಸ್ ಇಂಡಸ್ಟ್ರೀಸ್ ಸೇರಿದಂತೆ ಭಾರತದ ಮೂರು ಕಂಪನಿಗಳು ಸ್ಥಾನ ಪಡೆದುಕೊಂಡಿವೆ.

ರಿಲಯನ್ಸ್ ಇಂಡಸ್ಟ್ರೀಸ್, ಸೀರಂ ಇನ್ಸ್ಟಿಟ್ಯೂಟ್ ಆಫ್ ಇಂಡಿಯಾ ಮತ್ತು ಟಾಟಾ ಸಮೂಹವು ಟೈಮ್ ಬಿಡುಗಡೆ ಮಾಡಿರುವ 100 ಕಂಪನಿಗಳಲ್ಲಿ ಸ್ಥಾನ ಪಡೆದುಕೊಂಡಿವೆ.

ಈ ಪಟ್ಟಿಯನ್ನು 5 ವಿಭಾಗಗಳಾಗಿ ವರ್ಗೀಕರಿಸಲಾಗಿದೆ. ನಾಯಕ, ಆವಿಷ್ಕಾರ, ನಾವೀನ್ಯ, ಟೈಟಾನ್ (ಶಕ್ತಿಶಾಲಿ) ಮತ್ತು ಪ್ರವರ್ತಕ ಎಂದು ವರ್ಗೀಕರಿಸಲಾಗಿದೆ. ರಿಲಯನ್ಸ್ ಇಂಡಸ್ಟ್ರೀಸ್ ಮತ್ತು ಟಾಟಾ ಸಮೂಹವು ಟೈಟಾನ್ (ಶಕ್ತಿಶಾಲಿ) ವಿಭಾಗದಲ್ಲಿ ಸ್ಥಾನ ಪಡೆದುಕೊಂಡಿವೆ. ಸೀರಂ ಇನ್ಸ್ಟಿಟ್ಯೂಟ್ ಆಫ್ ಇಂಡಿಯಾ ಪ್ರವರ್ತಕರ ವಿಭಾಗದಲ್ಲಿ ಸ್ಥಾನ ಪಡೆದುಕೊಂಡಿದೆ.

ಟೈಮ್ ನಿಯತಕಾಲಿಕವು ರಿಲಯನ್ಸ್ ಇಂಡಸ್ಟ್ರೀಸ್‌ಗೆ ಭಾರತದ ಶಕ್ತಿ ಎನ್ನುವ ಉಪನಾಮವನ್ನು ನೀಡಿದೆ. ಜವಳಿ ಮತ್ತು ಪಾಲಿಸ್ಟರ್ ಉದ್ದಿಮೆಯಾಗಿ ಆರಂಭವಾದ ರಿಲಯನ್ಸ್ ಕಂಪನಿಯು ಇಂದು ಅತಿದೊಡ್ಡ ಮತ್ತು ಶಕ್ತಿಶಾಲಿ ಉದ್ಯಮ ಸಮೂಹವಾಗಿ ಹೊರಹೊಮ್ಮಿದೆ. ಮಾತ್ರವಲ್ಲ ದೇಶದ ಅತ್ಯಂತ ಮೌಲ್ಯಯುತ ಕಂಪನಿ ಕೂಡಾ ಆಗಿದೆ ಎಂದು ಟೈಮ್ ನಿಯತಕಾಲಿಕವು ರಿಲಯನ್ಸ್ ಇಂಡಸ್ಟ್ರೀಸ್ ಬಗ್ಗೆ ಬರೆದಿದೆ. ಮುಕೇಶ್ ಅಂಬಾನಿ ಅವರ ನಾಯಕತ್ವದಲ್ಲಿ ಕಂಪನಿಯು ಇಂಧನ, ರಿಟೇಲ್ ಮತ್ತು ದೂರಸಂಪರ್ಕ ಸೇರಿದಂತೆ ಹಲವು ಕ್ಷೇತ್ರಗಳಲ್ಲಿ ತನ್ನ ವಹಿವಾಟನ್ನು ವಿಸ್ತರಿಸಿಕೊಂಡಿದೆ. ಭಾರತದ ಅತಿದೊಡ್ಡ ಡಿಜಿಟಲ್ ಸೇವಾ ಪೂರೈಕೆದಾರ ಮತ್ತು ದೂರಸಂಪರ್ಕ ಕಂಪನಿ ಜಿಯೊ ಪ್ಲಾಟ್ಫಾರಂ 2021ರಲ್ಲಿ ಈ ಪಟ್ಟಿಗೆ ಸೇರಿಕೊಂಡಿತು. ರಿಲಯನ್ಸ್ ಮತ್ತು ಡಿಸ್ನಿ ನಡುವಿನ 8.5 ಬಿಲಿಯನ್ ಡಾಲರ್ ಒಪ್ಪಂದದ ಬಗ್ಗೆಯೂ ಟೈಮ್ ನಿಯತಕಾಲಿಕ ತನ್ನ ವರದಿಯಲ್ಲಿ ಉಲ್ಲೇಖಿಸಿದೆ.



## ನೈಸರ್ಗಿಕ ಸನ್ ಸ್ಕ್ರೀನ್

### ಬ್ಯೂಟಿ ಟಿಪ್ಸ್



ನಿಮ್ಮ ಚರ್ಮವನ್ನು ಸೂರ್ಯನ ಕಿರಣಗಳಿಂದ ರಕ್ಷಿಸಿಕೊಳ್ಳುವುದು ಅತಿ ಅವಶ್ಯಕ. ಮಾರುಕಟ್ಟೆಯಲ್ಲಿ ಸಿಗುವ ಕೆಮಿಕಲ್ ಯುಕ್ತ ಕ್ರೀಂಗಳನ್ನು ಹಚ್ಚುವುದರಿಂದ ಇನ್ನಷ್ಟು ಹಾನಿಯಾಗುತ್ತದೆ. ಆದ ಕಾರಣ ಸೂರ್ಯ ಕಿರಣಗಳಿಂದ ನಿಮ್ಮ ಚರ್ಮವನ್ನು ರಕ್ಷಿಸಲು ನೈಸರ್ಗಿಕವಾದ ಈ ವಸ್ತುಗಳನ್ನು ಹಚ್ಚಿ. 1 ಕಪ್ ತೆಂಗಿನೆಣ್ಣೆ, 1 ಕಪ್ ಶಿಯಾ ಬಟರ್, 2 ಚಮಚ ಎಳ್ಳೆಣ್ಣೆ, 2 ಚಮಚ ಜೇನಿನ ಮೇಣ ವನ್ನು ತೆಗೆದುಕೊಂಡು ಇವಿಷ್ಟನ್ನು ಡಬಲ್ ಬಾಯ್ಲರ್ ನಲ್ಲಿ ಕರಗಿಸಿ. ಬಳಿಕ ಅದನ್ನು ತಣ್ಣಗಾಗಿಸಿ 15 ನಿಮಿಷ ಫ್ರಿಜರ್ ನಲ್ಲಿ ಇಡಿ. ಆನಂತರ ಇದಕ್ಕೆ 1 ಚಮಚ ರೆಡ್ ರಾಸ್ಬೆರ್ರಿ ಬೀಜದ ಎಣ್ಣೆ, 1 ಚಮಚ ಕ್ಯಾರೆಟ್ ಬೀಜದ ಎಣ್ಣೆ, 1 ಚಮಚ ಲ್ಯಾವೆಂಡರ್ ಆಯಿಲ್ ನ್ನು ಸೇರಿಸಿ ಚೆನ್ನಾಗಿ ಮಿಕ್ಸ್ ಮಾಡಿ. ಇದನ್ನು ಹೊರಗೆ ಹೋಗುವಾಗ ಚರ್ಮಕ್ಕೆ ಹಚ್ಚಿದರೆ ಸೂರ್ಯ ಬಿಸಿಲಿನ ಪ್ರಭಾವ ನಿಮ್ಮ ಚರ್ಮದ ಮೇಲಾಗುವುದಿಲ್ಲ.

## ರಾಶಿ ಭವಿಷ್ಯ



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ–9964739507
www.jyotishyavaastu.com

**ಮೇಷ:** ಆರ್ಥಿಕ ಹಿನ್ನಡೆ, ವೃದ್ಧರಿಗೆ ಖರ್ಚು, ತಂದೆಯ ಆರೋಗ್ಯದಲ್ಲಿ ವ್ಯತ್ಯಾಸ, ಸಂಗಾತಿಯಿಂದ ಅನುಕೂಲ.

**ವೃಷಭ:** ವಯೋವೃದ್ಧರಿಂದ ಲಾಭ, ಸಹೋದರರೊಂದಿಗೆ ಮನಸ್ತಾಪ, ನೆರೆಹೊರೆಯವರಿಂದ ಲಾಭ, ತಾಯಿ ಆರೋಗ್ಯದಲ್ಲಿ ವ್ಯತ್ಯಾಸ.

**ಮಿಥುನ:** ಉದ್ಯೋಗದಲ್ಲಿ ಒತ್ತಡ, ಕೋರ್ಟ್ ಕೇಸ್‌ಗಳಿಗೆ ಅಲೆದಾಟ, ಸಂಗಾತಿಯ ಆರೋಗ್ಯದಲ್ಲಿ ವ್ಯತ್ಯಾಸ, ಸಂಗಾತಿಯೊಂದಿಗೆ ಮನಸ್ತಾಪ.

**ಕಟಕ:** ಉದ್ಯೋಗದಲ್ಲಿ ಗೊಂದಲ, ಆರೋಗ್ಯದಲ್ಲಿ ಏರುಪೇರು, ಮಂದತ್ವ, ಆಹಾರದಲ್ಲಿ ವ್ಯತ್ಯಾಸ.

**ಸಿಂಹ:** ಅಧಿಕ ಒತ್ತಡಗಳು, ಅವಮಾನ, ದೂರ ಪ್ರಯಾಣದಲ್ಲಿ ಹಿನ್ನಡೆ, ಅನಿರೀಕ್ಷಿತವಾಗಿ ಉದ್ಯೋಗ ಅವಕಾಶ, ನೆರೆಹೊರೆಯವರೊಂದಿಗೆ ಮನಸ್ತಾಪ.

**ಕನ್ಯಾ:** ಸಂಗಾತಿಯ ಆರೋಗ್ಯದಲ್ಲಿ ವ್ಯತ್ಯಾಸ, ಮಕ್ಕಳ ನಡವಳಿಕೆಯಿಂದ ಬೇಸರ, ಸ್ನೇಹಿತರೊಂದಿಗೆ ಮನಸ್ತಾಪ, ಭಾವನಾತ್ಮಕ ತೊಳಲಾಟ.

**ತುಲಾ:** ಆರೋಗ್ಯದಲ್ಲಿ ಏರುಪೇರು, ಹಳೆ ವಸ್ತುಗಳಿಂದ ಪೆಟ್ಟು, ಸಂಗಾತಿಯೊಂದಿಗೆ ಅಂತರ, ಸಾಲದ ಚಿಂತೆ.

**ವೃಶ್ಚಿಕ:** ಬಾಲಗ್ರಹ ದೋಷ, ಮಕ್ಕಳ ಆರೋಗ್ಯದಲ್ಲಿ ವ್ಯತ್ಯಾಸ, ವಿದ್ಯಾಭ್ಯಾಸದಲ್ಲಿ ಹಿನ್ನಡೆ, ಆರೋಗ್ಯದಲ್ಲಿ ಚೇತರಿಕೆ.

**ಧನಸ್ಸು:** ಸ್ವಯಂಕೃತ ಅಪರಾಧ, ಸೋಮಾರಿತನ, ಮಕ್ಕಳಿಂದ ಆರ್ಥಿಕವಾಗಿ ಸಹಾಯ, ಯಂತ್ರೋಪಕರಣಗಳಿಂದ ಅನುಕೂಲ, ಪತ್ರ ವ್ಯವಹಾರಗಳಲ್ಲಿ ಹಿನ್ನಡೆ.

**ಮಕರ:** ವ್ಯವಹಾರಗಳಿಗೆ ಖರ್ಚು, ಆರ್ಥಿಕವಾಗಿ ಅನಾನುಕೂಲ, ಕೌಟುಂಬಿಕ ಹಿನ್ನಡೆ, ಮಕ್ಕಳ ಆರೋಗ್ಯದಲ್ಲಿ ವ್ಯತ್ಯಾಸ.

ಕುಂಭ: ತಾಯಿ ಆರೋಗ್ಯಕ್ಕಾಗಿ ಖರ್ಚು, ವಾಹನದಿಂದ ತೊಂದರೆ, ಮಾತಿನಿಂದ ಸಮಸ್ಯೆ, ಆರೋಗ್ಯದಲ್ಲಿ ವ್ಯತ್ಯಾಸ.

**ಮೀನ:** ಲಾಭದ ನಿರೀಕ್ಷೆ, ಅಧಿಕ ಒತ್ತಡ, ಉತ್ತಮ ಕೆಲಸಗಳಿಂದ ಅನುಕೂಲ, ಮನೆಯ ವಾತಾವರಣ ಕಲುಷಿತ.

## ಸುಧಾಕರ್‌ಗೆ ಒಂದು ವೋಟು ಜಾಸ್ತಿ ಬಂದ್ರೆ ಶಾಸಕ ಸ್ಥಾನಕ್ಕೆ ರಾಜೀನಾಮೆ



**ಬೆಂಗಳೂರು:** ಚಿಕ್ಕಬಳ್ಳಾಪುರ ವಿಧಾನಸಭಾ ಕ್ಷೇತ್ರದಲ್ಲಿ ಸುಧಾಕರ್ ಅವರು ಒಂದೇ ಒಂದು ವೋಟು ಜಾಸ್ತಿ ಪಡೆದರೆ ನಾನು ನನ್ನ ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡುತ್ತೇನೆ ಎಂದು ಪ್ರದೀಪ್ ಈಶ್ವರ್ ಸವಾಲೆಸೆದಿದ್ದಾರೆ.

ಕೆಪಿಸಿಸಿ ಕಚೇರಿಯಲ್ಲಿ ಮಾತನಾಡಿದ ಅವರು, ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದಲ್ಲಿ ನಾವು ಗೆಲ್ಲುತ್ತೇವೆ. ಅವರು ಒಂದು ಮತ ಜಾಸ್ತಿ ಪಡೆಯಲಿ. ನಾನು ನನ್ನ ಸ್ಥಾನಕ್ಕೆ ರಾಜೀನಾಮೆ ನೀಡುತ್ತೇವೆ. ನಾನು ನನ್ನ ಮಾತಿಗೆ ಬದ್ಧನಾಗಿರುತ್ತೇನೆ ಎಂದು ಹೇಳಿದರು. ಇದೇ ವೇಳೆ ಎಸ್‌ಎಸ್‌ಎಲ್‌ಸಿ ಫಲಿತಾಂಶದ ಕುರಿತು ಪ್ರತಿಕ್ರಿಯಿಸಿದ ಅವರು, ಈ ಬಾರಿ ಹತ್ತನೇ ತರಗತಿಯ ಪರೀಕ್ಷೆಯ ಸಂದರ್ಭದಲ್ಲಿ ಭಾರೀ ಸ್ಟ್ರಿಕ್ಟ್ ಮಾಡಿಸಿದ್ದಾರೆ. ಸಿಸಿ ಕ್ಯಾಮೆರಾ ಹಾಕಿ ಪರೀಕ್ಷೆ ನಡೆಸಿದ್ದಾರೆ. ಮಾಸ್ ಕಾಪಿ ಹೊಡೆಯೋಕೆ ಕಡಿವಾಣ ಹಾಕಿದ್ದಾರೆ. ಹಿಂದೆಲ್ಲಾ ಮಾಸ್ ಕಾಪಿ ನಡೆಯುತ್ತಿತ್ತು. ಆದರೆ ಈ ಭಾರಿ ಮಾಸ್ ಕಾಪಿ ನಡೆದಿಲ್ಲ ಎಂದರು. ಫಲಿತಾಂಶ ಕುಸಿದಿದೆ ಅಂತ ಹೇಳಬೇಡಿ. ಕಳೆದ ಬಾರಿ ಚಿಕ್ಕಬಳ್ಳಾಪುರ 5ನೇ ಸ್ಥಾನದಲ್ಲಿ ಇತ್ತು. ಈ ಬಾರಿ ಅದನ್ನು ನಾನು ಎರಡನೇ ಸ್ಥಾನಕ್ಕೆ ತಂದಿದ್ದೇನೆ. ಚಿಕ್ಕಬಳ್ಳಾಪುರದಲ್ಲಿ ಒಟ್ಟು 6 ತಾಲೂಕು ಬರುತ್ತದೆ. ಬೇರೆಡೆ ಡೌನ್ ಆದ್ರೆ ಅದಕ್ಕೆ ನಾನು ಕಾರಣನಾ ಎಂದು ಪ್ರದೀಪ್ ಈಶ್ವರ್ ಪ್ರಶ್ನಿಸಿದರು. ಈಶ್ವರಪ್ಪನವರು ಬ್ಯಾಕ್ವರ್ಡ್ ಕ್ಲಾಸ್ ನವರು. ಅಂತವರನ್ನೂ ನೀವು ಮೂಲೆ ಗುಂಪು ಮಾಡಿದ್ರಿ. ಇದರ ಬಗ್ಗೆ ನೀವು ಮಾತನಾಡಿ. ವಿಜಯೇಂದ್ರ ತಲೆಯಲ್ಲಿ ಕಂಟೆಂಟ್ ಇಲ್ಲ. ವಿಚಾರಗಳ ಮೇಲೆ ಮಾತನಾಡೋಕೆ ಆಗಲ್ಲ. ಅವರ ತಲೆಯಲ್ಲಿರೋದೆಲ್ಲ ಮುಗಿದು ಹೋಗಿದೆ. ಅದಕ್ಕೆ ಇಂತಹ ವೈಯುಕ್ತಿಕ ವಿಷಯ ಮಾತನಾಡ್ತಿದ್ದಾರೆ ಎಂದು ವಿಪಕ್ಷ ನಾಯಕರ ವಿರುದ್ಧ ವಾಗ್ದಾಳಿ ನಡೆಸಿದರು.



# ಅನಂತ್ ಅಂಬಾನಿ-ರಾಧಿಕಾ ಮದುವೆಗೆ ಮುಹೂರ್ತ್ ಫಿಕ್ಸ್

**ನವದೆಹಲಿ:** ರಿಲಯನ್ಸ್ ಇಂಡಸ್ಟ್ರೀಸ್ ಲಿಮಿಟೆಡ್ ಅಧ್ಯಕ್ಷ ಮುಕೇಶ್ ಅಂಬಾನಿ ಅವರ ಕಿರಿಯ ಪುತ್ರ ಅನಂತ್ ಅಂಬಾನಿ ಮತ್ತು ಕೈಗಾರಿಕೋದ್ಯಮಿ ವೀರೇನ್ ಮರ್ಚೆಂಟ್ ಅವರ ಪುತ್ರಿ ರಾಧಿಕಾ ಮರ್ಚೆಂಟ್ ಅವರ ಅದ್ದೂರಿ ವಿವಾಹಕ್ಕೆ) ಮುಹೂರ್ತ ಫಿಕ್ಸ್ ಆಗಿದೆ. ಇದೇ ಜುಲೈ ತಿಂಗಳ 12 ರಂದು ಮುಂಬೈನ ಜಿಯೋ ವರ್ಲ್ಡ್ ಕನ್ವೆನ್ಷನ್ ಸೆಂಟರ್‌ನಲ್ಲಿ ಇಡೀ ಜಗತ್ತೇ ತಿರುಗಿ ನೋಡುವಂತೆ ಅನಂತ್ ಅಂಬಾನಿ ಮತ್ತು ರಾಧಿಕಾ ಮರ್ಚೆಂಟ್ ಅವರ ವಿವಾಹ ನೆರವೇರಲಿದೆ. ಮದುವೆಗೆ ಆಗಮಿಸುವ ಅತಿಥಿಗಳು ಮೂರು ದಿನಗಳ ಕಾಲ ನಡೆಯುವ ಅದ್ದೂರಿ ವಿವಾಹ ಸಮಾರಂಭದ ಕೆಲವು ವಿವರಗಳನ್ನು ಬಹಿರಂಗಪಡಿಸುವ ಸಾಂಪ್ರದಾಯಿಕ ಕೆಂಪು ಮತ್ತು ಚಿನ್ನದ ಕಾರ್ಡ್ ಆಗಿರುವ 'ಸೇವ್ ದಿ ಡೇಟ್' ಆಹ್ವಾನವನ್ನು ಸ್ವೀಕರಿಸಲು ಪ್ರಾರಂಭಿಸಿದ್ದಾರೆ. ಮುಖ್ಯ ವಿವಾಹ ಸಮಾರಂಭವು ಜುಲೈ 12 ರಂದು ಶುಭ ವಿವಾಹ ಅಥವಾ ವಿವಾಹ ಕಾರ್ಯದೊಂದಿಗೆ ಪ್ರಾರಂಭವಾಗುತ್ತವೆ. ಡ್ರೆಸ್ ಕೋಡ್ ಭಾರತೀಯ ಸಾಂಪ್ರದಾಯಿಕವಾಗಿರಬೇಕು ಎಂದು ಅತಿಥಿಗಳಿಗೆ ಸಲಹೆ ನೀಡಲಾಗಿದೆ. ಜುಲೈ 13 ಶುಭ ಆಶೀರ್ವಾದದ ದಿನವಾಗಿರುತ್ತದೆ. ಅಂದು ಕೂಡ ಡ್ರೆಸ್ ಕೋಡ್ ಅನ್ನು ಭಾರತೀಯ ಶೈಲಿಯಲ್ಲಿಯೇ ಔಪಚಾರಿಕವಾಗಿ ಸೂಚಿಸಲಾಗಿದೆ. ಜುಲೈ 14 ರಂದು ಮಂಗಲ್ ಉತ್ಸವ ಅಥವಾ ಮದುವೆಯ ಆರತಕ್ಷತೆ ಇರುತ್ತದೆ. ಅಂದು ಡ್ರೆಸ್ ಕೋಡ್ ಅನ್ನು 'ಭಾರತೀಯ ಚಿಕ್' ರೀತಿಯಲ್ಲಿ ಇರುವಂತೆ ಸಲಹೆ ನೀಡಲಾಗಿದೆ. ಈ ಎಲ್ಲಾ ಸಮಾರಂಭಗಳು ಬಿಕೆಸಿಯಲ್ಲಿರುವ ಜಿಯೋ ವರ್ಲ್ಡ್ ಸೆಂಟರ್‌ನಲ್ಲಿ ನಡೆಯಲಿದೆ. ಸಾಂಪ್ರದಾಯಿಕ ವೈದಿಕ ಹಿಂದೂ ಪದ್ಧತಿಯ ಪ್ರಕಾರ ಮುಖ್ಯ ವಿವಾಹ ಕಾರ್ಯಗಳು ಮತ್ತು ಸಮಾರಂಭಗಳನ್ನು ನಡೆಸಲಾಗುತ್ತದೆ.



## ನಕಲಿ ದಾಖಲೆಪತ್ರ ಪ್ರಕರಣ, ಬ್ರಜೇಶ್ ಮಿಶ್ರಾಗೆ 3 ವರ್ಷ ಜೈಲು



**ಟೊರಂಟೊ:** ಕೆನಡಾದಲ್ಲಿ ಶಿಕ್ಷಣ ಪಡೆಯಲು ಅಂತರಾಷ್ಟ್ರೀಯ ವಿದ್ಯಾರ್ಥಿಗಳಿಗೆ ನಕಲಿ ದಾಖಲೆ ಪತ್ರ ತಯಾರಿಸಿ ಕೊಡುತ್ತಿದ್ದ ಪ್ರಕರಣದಲ್ಲಿ ಭಾರತೀಯ ಮೂಲದ ವಲಸೆ ಏಜೆಂಟ್ ಬ್ರಿಜೇಶ್ ಮಿಶ್ರ, ದೋಷಿಯೆಂದು ಸಾಬೀತಾಗಿದ್ದು ಮೂರು ವರ್ಷ ಜೈಲುಶಿಕ್ಷೆ ವಿಧಿಸಿರುವುದಾಗಿ ವರದಿಯಾಗಿದೆ.ಮಿಶ್ರಾ, ವಿರುದ್ಧ ದಾಖಲಾಗಿರುವ ಐದು ಪ್ರಕರಣಗಳ ವಿಚಾರಣೆ ಬುಧವಾರ ವ್ಯಾಂಕೋವರ್ನ ಬ್ರಿಟಿಷ್ ಕೊಲಂಬಿಯಾ ಪ್ರಾಂತೀಯ ನ್ಯಾಯಾಲಯದಲ್ಲಿ ನಡೆದಿದ್ದು ಮೂರರಲ್ಲಿ ಮಿಶ್ರಾ, ಅಪರಾಧ ಸಾಬೀತಾಗಿದೆ. ಇತರ ಎರಡು ಪ್ರಕರಣಗಳ ವಿಚಾರಣೆಗೆ ತಡೆನೀಡಲಾಗಿದೆ. ಕೆಲವು ಸಂತ್ರಸ್ತ ವಿದ್ಯಾರ್ಥಿಗಳು ನ್ಯಾಯಾಲಯದಲ್ಲಿ ಸಾಕ್ಷಿಗಳಾಗಿ ಹಾಜರಿದ್ದರು. ಮಿಶ್ರ, ಶಿಕ್ಷೆಯನ್ನು ಪೂರೈಸಿದ ಬಳಿಕ ಗಡೀಪಾರು ಪ್ರಕ್ರಿಯೆಗಳನ್ನು ಎದುರಿಸಬೇಕಾಗುತ್ತದೆ. ಕೆನಡಾದಲ್ಲಿ ಶಿಕ್ಷಣ ಪಡೆದಿದ್ದ ಭಾರತದ ಸುಮಾರು 150 ವಿದ್ಯಾರ್ಥಿಗಳು, ಇವರಲ್ಲಿ ಹೆಚ್ಚಿನವರು ಪಂಜಾಬ್ ಮೂಲದವರು, ನಕಲಿ ದಾಖಲೆಪತ್ರದ ಮೂಲಕ ಕೆನಡಾ ಪ್ರವೇಶಿಸಿರುವುದು ಕಳೆದ ವರ್ಷ ಬೆಳಕಿಗೆ ಬಂದಿತ್ತು. ಈ ವಿದ್ಯಾರ್ಥಿಗಳು 2017 ಮತ್ತು 2019ರ ನಡುವೆ ಕೆನಡಾಕ್ಕೆ ಆಗಮಿಸಿದ್ದರು. ಭಾರತದ ವಲಸೆ ಏಜೆಂಟರು ನಕಲಿ ದಾಖಲೆ ಪತ್ರದ ಮೂಲಕ ಇವರನ್ನು ಕೆನಡಾಕ್ಕೆ ಕಳುಹಿಸಿದ್ದರು ಮತ್ತು ಇವರಲ್ಲಿ ಹೆಚ್ಚಿನವರು ಬ್ರಿಜೇಶ್ ಮಿಶ್ರಾನ ಸಂಸ್ಥೆಯ ಪ್ರತಿನಿಧಿಗಳು ಎಂದು ಕೆನಡಾ ಅಧಿಕಾರಿಗಳು ಪ್ರಕರಣದಲ್ಲಿ ಉಲ್ಲೇಖಿಸಿದ್ದಾರೆ.

## ಗಡಿದಾಟಿದ್ದ ಪಾಕ್ ಪ್ರಜೆಗಳನ್ನು ವಾಪಾಸ್ ಕಳುಹಿಸಿದ ಬಿಎಸ್‌ಎಫ್

**ನವದೆಹಲಿ:** ಗಡಿ ದಾಟಿ ಭಾರತಕ್ಕೆ ಬಂದಿದ್ದ ಮೂವರು ಪಾಕ್ ಪ್ರಜೆಗಳನ್ನು ಮರಳಿ ಅವರ ದೇಶಕ್ಕೆ ಒಪ್ಪಿಸಲಾಯಿತು.

ಮೇ.29 ರಂದು ಪಾಕಿಸ್ತಾನ ಮೂಲದ ಮೂವರು ಪ್ರಜೆಗಳು ಅಚಾನಕ್ ಆಗಿ ಭಾರತದ ಗಡಿ ದಾಟಿ ಬಂದಿದ್ದರು. ಅವರನ್ನು ಪಂಜಾಬ್ನ ತರ್ನ್ ತರನ್ ಜಿಲ್ಲೆಯ ಗಡಿಯಲ್ಲಿ ಭಾರತೀಯ ಗಡಿ ಭದ್ರತಾ ಪಡೆಯವರು ವಶಕ್ಕೆ ಪಡೆದಿದ್ದರು.

ವಿಚಾರಣೆ ವೇಳೆ ಅವರು ಪಾಕ್ನಿಂದ ಬಂದಿರುವುದಾಗಿ, ಹಾಗೂ ತಿಳಿಯದೇ ಗಡಿ ದಾಟಿರುವುದಾಗಿ ಹೇಳಿಕೊಂಡಿದ್ದರು.

ಇಂದು ಮುಂಜಾನೆ 11.35ಕ್ಕೆ ಈ ಮೂವರನ್ನು ಮಾನವೀಯ ಹಾಗೂ ಸೌಹಾರ್ದ ಸೂಚಕವಾಗಿ ಪಾಕಿಸ್ತಾನದ ರೇಂಜರ್ಗಳಿಗೆ ಹಸ್ತಾಂತರಿಸಿದರು.



## ಪ್ರಧಾನಿ ಹುದ್ದೆಯ ಗೌರವಕ್ಕೆ ಚ್ಯುತಿ ತಂದ ಮೊದಲ ಪ್ರಧಾನಿ ಮೋದಿ: ಮನಮೋಹನ್ ಸಿಂಗ್



**ನವದೆಹಲಿ:** ಲೋಕಸಭೆ ಚುನಾವಣೆ ಫಲಿತಾಂಶಕ್ಕೆ ಇನ್ನೇನು ಕ್ಷಣಗಣನೆ ಶುರುವಾಗಿರುವಾಗ ಮಾಜಿ ಪ್ರಧಾನಿ ಮನಮೋಹನ್ ಸಿಂಗ್ ಹಾಲಿ ಪ್ರಧಾನಿ ಮೋದಿ ಬಗ್ಗೆ ಟೀಕೆ ಮಾಡಿದ್ದಾರೆ. ಪ್ರಧಾನಿ ಹುದ್ದೆಯ ಗೌರವಕ್ಕೆ ಚ್ಯುತಿ ತಂದ ಮೊದಲ ಪ್ರಧಾನಿ ಮೋದಿ ಎಂದು ಟೀಕಿಸಿದ್ದಾರೆ.

ಕಳೆದ ತಿಂಗಳು ರಾಜಸ್ಥಾನದಲ್ಲಿ ಚುನಾವಣಾ ಸಮಾವೇಶದಲ್ಲಿ ಕಾಂಗ್ರೆಸ್ ವಿರುದ್ಧ ವಾಗ್ದಾಳಿ ನಡೆಸಿದ್ದ ಪ್ರಧಾನಿ ಮೋದಿ, 'ಕಾಂಗ್ರೆಸ್ ಪ್ರಣಾಳಿಕೆಯಲ್ಲಿ ನಿಮ್ಮ ಆಸ್ತಿಯನ್ನು ಕಸಿದುಕೊಂಡು ಹೆಚ್ಚು ಮಕ್ಕಳಿರುವವರಿಗೆ ಹಂಚುವುದಾಗಿ ಹೇಳಿದೆ. ಈ ದೇಶದ ಪ್ರಧಾನಿಯಾಗಿದ್ದವು ಹಿಂದೊಮ್ಮೆ ದೇಶದ ಸಂಪತ್ತಿನ ಮೊದಲ ಹಕ್ಕು ಅಲ್ಪಸಂಖ್ಯಾತರದ್ದು ಎಂದಿದ್ದರು' ಎಂದು ಟೀಕಾ ಪ್ರಹಾರ ನಡೆಸಿದ್ದರು. ಈ ಮೂಲಕ ಮನಮೋಹನ್ ಸಿಂಗ್ ಅವರಿಗೂ ಟಾಂಗ್ ಕೊಟ್ಟಿದ್ದರು.

ಈಗ ಅದೇ ವಿಚಾರವಾಗಿ ಮನಮೋಹನ್ ಸಿಂಗ್ ಪ್ರತಿಕ್ರಿಯಿಸಿದ್ದಾರೆ. 'ಚುನಾವಣೆ ಸಂದರ್ಭದಲ್ಲಿ ಬಂದತಂಹ ಹೇಳಿಕೆಗಳನ್ನು ನಾನು ಎಚ್ಚರಿಕೆಯಿಂದ ಗಮನಿಸುತ್ತಿದ್ದೆ. ಮೋದಿಜಿ ಸದಾ ದ್ವೇಷದ ಬೀಜ ಬಿತ್ತುವ ಭಾಷಣಗಳನ್ನು ಮಾಡುತ್ತಿದ್ದಾರೆ. ಪ್ರಧಾನ ಮಂತ್ರಿ ಹುದ್ದೆಗೆ ಅದರದ್ದೇ ಆದ ಗಾಂಭೀರ್ಯತೆಯಿದೆ. ಆದರೆ ಮೋದಿ ಆ ಹುದ್ದೆಯ ಗೌರವಕ್ಕೆ ಚ್ಯುತಿ ತಂದ ಮೊದಲ ವ್ಯಕ್ತಿ. ಒಬ್ಬ ಪ್ರಧಾನಿ ಎಂಬುದನ್ನೂ ಮರೆತು ಅವರು ವಿಪಕ್ಷಗಳ ವಿರುದ್ಧ ಅತ್ಯಂತ ಕೀಳುಮಟ್ಟದ ಟೀಕೆ ಮಾಡುತ್ತಾ ಬಂದಿದ್ದಾರೆ. ನಾನು ಪ್ರಧಾನಿಯಾಗಿದ್ದಾಗ ಯಾವತ್ತೂ ಒಂದು ಸಮುದಾಯವನ್ನು ಕಡೆಗಣಿಸಿ ಮತ್ತೊಂದು ಸಮುದಾಯಕ್ಕೆ ಅನುಕೂಲ ಮಾಡಿಕೊಟ್ಟಿಲ್ಲ' ಎಂದಿದ್ದಾರೆ.

ಈ ದೇಶದಲ್ಲಿ ಅಭಿವೃದ್ಧಿ ಮತ್ತು ಸಾಮಾಜಿಕ ನ್ಯಾಯ ಒದಗಿಸಿಕೊಡಲು ಸಾಧ್ಯವಾಗುತ್ತದೆ ಎಂದರೆ ಅದು ಕಾಂಗ್ರೆಸ್ ಪಕ್ಷದಿಂದ ಮಾತ್ರ ಎಂದ ಮನಮೋಹನ್ ಸಿಂಗ್ ಪಂಜಾಬ್ ಮತದಾರರಿಗೆ ಅಭಿವೃದ್ಧಿ ಮತ್ತು ಸೌಹಾರ್ದತೆ ಕಾಪಾಡುವ ನಿಟ್ಟಿನಿಂದ ಮತ ಹಾಕಿ ಎಂದು ಕರೆ ನೀಡಿದ್ದಾರೆ.

## ಸ್ವತಂತ್ರ ಫೆಲೆಸ್ತೀನ್ ರಾಷ್ಟ್ರ ಸ್ಥಾಪನೆಗೆ ಕ್ಸಿಜಿಂಪಿಂಗ್ ಒತ್ತಾಯ

**ಬೀಜಿಂಗ್:** ಸ್ವತಂತ್ರ ಫೆಲೆಸ್ತೀನ್ ರಾಷ್ಟ್ರವನ್ನು ಸ್ಥಾಪಿಸುವ ಒತ್ತಾಯವನ್ನು ಪುನರುಚ್ಚರಿಸಿರುವ ಚೀನಾ ಅಧ್ಯಕ್ಷ ಕ್ಸಿಜಿಂಪಿಂಗ್, ಗಾಝಾದ ಜನತೆಗೆ ಇನ್ನಷ್ಟು ಮಾನವೀಯ ನೆರವು ಒದಗಿಸಲು ಚೀನಾ ಬದ್ಧ ಎಂದು ಘೋಷಿಸಿದ್ದಾರೆ.



ಬೀಜಿಂಗ್ನಲ್ಲಿ ಗುರುವಾರ ಚೀನಾ-ಅರಬ್ ದೇಶಗಳ ಶೃಂಗಸಭೆಗೆ ಚಾಲನೆ ನೀಡಿ ಮಾತನಾಡಿದ ಜಿಂಪಿಂಗ್ ' ಕಳೆದ ಅಕ್ಟೋಬರ್ನಿಂದ ಫೆಲೆಸ್ತೀನ್-ಇಸ್ರೇಲ್ ಸಂಘರ್ಷವು ತೀವ್ರವಾಗಿ ಉಲ್ಬಣಗೊಂಡಿದ್ದು ಜನರಿಗೆ ಅಪಾರ ಸಂಕಷ್ಟ ತಂದಿದೆ. ಯುದ್ಧವು ಅನಿರ್ಧಿಷ್ಟವಾಗಿ ಮುಂದುವರಿಯಬಾರದು' ಎಂದರು. ಎರಡು ರಾಷ್ಟ್ರಗಳ ಪರಿಹಾರ ಸೂತ್ರವನ್ನು ಚೀನಾ ಬೆಂಬಲಿಸುತ್ತದೆ ಎಂದ ಅವರು, ಗಾಝಾಕ್ಕೆ ಮಾನವೀಯ ನೆರವಿನ ರೂಪದಲ್ಲಿ 69 ದಶಲಕ್ಷ ಡಾಲರ್ ನೆರವು ಹಾಗೂ ಇಸ್ರೇಲ್-ಹಮಾಸ್ ಯುದ್ಧದಲ್ಲಿ ನಿರಾಶ್ರಿತರಿಗೆ ನೆರವು ಒದಗಿಸುವ ವಿಶ್ವಸಂಸ್ಥೆಯ ಏಜೆನ್ಸಿಗೆ 3 ದಶಲಕ್ಷ ಡಾಲರ್ ನೆರವು ಒದಗಿಸುವುದಾಗಿ ಘೋಷಿಸಿದರು. ಈ ಹಿಂದಿನಿಂದಲೂ ಫೆಲೆಸ್ತೀನ್ ಅನ್ನು ಬೆಂಬಲಿಸುತ್ತಾ ಬಂದಿರುವ ಚೀನಾವು ಆಕ್ರಮಿತ ಪ್ರದೇಶದಲ್ಲಿ ಇಸ್ರೇಲ್ ವಸಾಹತು ನಿರ್ಮಿಸುವುದನ್ನು ಖಂಡಿಸಿದೆ. ಆದರೆ, ಚೀನಾವು ಇಸ್ರೇಲ್ನೊಂದಿಗೆ ಆರ್ಥಿಕ ಸಂಬಂಧಗಳನ್ನು ಬೆಳೆಸುತ್ತಿದೆ. ಚೀನಾದ ಜತೆಗೆ ವ್ಯಾಪಾರ, ಶುದ್ಧ ಇಂಧನ, ಬಾಹ್ಯಾಕಾಶ ಕಾರ್ಯಕ್ರಮ ಮತ್ತು ಆರೋಗ್ಯ ರಕ್ಷಣೆ ಕ್ಷೇತ್ರಗಳಲ್ಲಿ ಇನ್ನಷ್ಟು ಆಳವಾದ ಸಹಕಾರ ಸಂಬಂಧಕ್ಕೆ ಕ್ಸಿಜಿಂಪಿಂಗ್ ಕರೆ ನೀಡಿದರು.

## ವಿದ್ಯಾರ್ಥಿಗಳನ್ನು ಜಿಜ್ಞಾಸೆಗೆ ದೂಡಿದ ಅಸ್ಸಾಂನ ಪ್ರಪ್ರಥಮ ಕೃತಕ ಬುದ್ಧಿಮತ್ತೆ ಶಿಕ್ಷಕಿ

**ಗುವಾಹಟಿ:** ಅಸ್ಸಾಂನ ಖಾಸಗಿ ಶಾಲೆಯೊಂದರಲ್ಲಿ ಪ್ರಪ್ರಥಮ ಬಾರಿಗೆ ಪರಿಚಯಿಸಲಾಗಿರುವ ಐರಿಸ್ ಎಂಬ ಕೃತಕ ಬುದ್ಧಿಮತ್ತೆಯ ಶಿಕ್ಷಕಿಯು ವಿದ್ಯಾರ್ಥಿಗಳನ್ನು ತನ್ನ ಉತ್ತರದ ಮೂಲಕ ಜಿಜ್ಞಾಸೆಗೆ ದೂಡಿದ್ದು, ವಿದ್ಯಾರ್ಥಿಗಳೆಲ್ಲ ತನ್ನ ಉತ್ತರಕ್ಕೆ ಕಾತುರದಿಂದ ಕಾಯುವಂತೆ ಮಾಡಿದ್ದಾಳೆ.

ಮನುಷ್ಯನ ದೇಹಾಕೃತಿ ಹೊಂದಿರುವ ಈ ಯಂತ್ರಚಾಲಿತ ಕೃತಕ ಬುದ್ಧಿಮತ್ತೆ ಶಿಕ್ಷಕಿಯು ಹಿಮೋಗ್ಲೋಬಿನ್ ಎಂದರೇನು ಎಂಬ ಪ್ರಶ್ನೆಗೆ ಎಲ್ಲ ಬಗೆಯ ವಿವರಗಳನ್ನು ವಿದ್ಯಾರ್ಥಿಗಳಿಗೆ ನೀಡಿದಳು ಎಂದು ಶಾಲಾ ಶಿಕ್ಷಕರೊಬ್ಬರು ತಿಳಿಸಿದ್ದಾರೆ.

ಈ ಕುರಿತು ಪ್ರತಿಕ್ರಿಯಿಸಿರುವ ರಾಯಲ್ ಗ್ಲೋಬಲ್ ಶಾಲೆಯ ವಕ್ತಾರರು, ಪ್ರಶ್ನೆಗಳು ಪಠ್ಯಕ್ರಮದ ಕುರಿತಾಗಿರಲಿ ಅಥವಾ ಇನ್ನಾವುದೇ ಪ್ರಶ್ನೆಸಯಾಗಿರಲಿ ಐರಿಸ್ ಕ್ಷಣಾರ್ಧದಲ್ಲಿ ಉದಾಹರಣೆ ಹಾಗೂ ಉಲ್ಲೇಖಗಳ ಸಹಿತ ಉತ್ತರ ನೀಡಿದಳು ಎಂದು ಮಾಹಿತಿ ನೀಡಿದ್ದಾರೆ.

ಈ ಯಂತ್ರಚಾಲಿತ ಶಿಕ್ಷಕಿಯ ಕೈಕುಲುಕುವ ಸಾಮರ್ಥ್ಯದಂಥ ನಡವಳಿಕೆಯನ್ನು ಕಂಡು ವಿದ್ಯಾರ್ಥಿಗಳು ಕಲಿಕೆಯ ಹಂತದಲ್ಲಿ ತಮಾಷೆ ಹಾಗೂ ತಲ್ಲೀನತೆಯನ್ನು ಅನುಭವಿಸಿದರು ಎಂದು ಹೇಳಲಾಗಿದೆ.

ಈ ಖಾಸಗಿ ಶಾಲೆಯು ಈಶಾನ್ಯ ಪ್ರಾಂತ್ಯದಲ್ಲಿ ಯಂತ್ರಚಾಲಿತ ಶಿಕ್ಷಕಿಯ ಸಾಮರ್ಥ್ಯವನ್ನು ಕಲಿಕೆಯನ್ನು ವೈಯಕ್ತೀಕರಣಗೊಳಿಸಲು ಹಾಗೂ ವಿದ್ಯಾರ್ಥಿಗಳನ್ನು ಶಿಕ್ಷಣದಲ್ಲಿ ಹೆಚ್ಚು ತಲ್ಲೀನವಾಗಿಸಲು ಬಳಸಿಕೊಳ್ಳುವ ಉದ್ದೇಶ ಹೊಂದಿದೆ ಎಂದೂ ಶಾಲಾ ವಕ್ತಾರರು ಹೇಳಿದ್ದಾರೆ.

## ಪಪುವಾ ನ್ಯೂಗಿಯಾಕ್ಕೆ ಸಹಾಯದ ಹಸ್ತ ಚಾಚಿದ ಭಾರತ

**ಪಪುವಾ:** ಪಪುವಾ ನ್ಯೂಗಿನಿಯಾದಲ್ಲಿ ಸಂಭವಿಸಿದ ಭಾರೀ ಭೂಕುಸಿತದಲ್ಲಿ 2000 ಕ್ಕೂ ಹೆಚ್ಚು ಜನರು ಸಾವನ್ನಪ್ಪಿದ್ದಾರೆ ಎಂದು ಅಂದಾಜಿಸಲಾಗಿದೆ., ಹಲವಾರು ಮನೆಗಳು ಮತ್ತು ಅವುಗಳಲ್ಲಿ ಮಲಗಿದ್ದ ಜನರು ಮಣ್ಣಿನಡಿ ಜೀವಂತ ಸಮಾಧಿಯಾಗಿದ್ದಾರೆ. ಸಂಕಷ್ಟದಲ್ಲಿರುವ ಪಪುವಾ ನ್ಯೂಗಿಯಾಕ್ಕೆ ಭಾರತ ಸಹಾಯದ ಹಸ್ತ ಚಾಚಿದೆ. ಸಂತ್ರಸ್ತರಿಗೆ ಭಾರತ ಸರ್ಕಾರ ಒಂದು ಮಿಲಿಯನ್ ಅಮೆರಿಕನ್ ಡಾಲರ್ (8.3 ಕೋಟಿ ರೂ) ತುರ್ತು ಆರ್ಥಿಕ ನೆರವನ್ನು ಘೋಷಿಸಿತ್ತು. ಇಂದು ವಿಶೇಷ ವಿಮಾನದ ಮೂಲಕ ವಿದೇಶಾಂಗ ಇಲಾಖೆ ಅಗತ್ಯ ಸಾಮಗ್ರಿಗಳನ್ನು ಪಾಪುವ ನ್ಯೂಗಿನಿಯಾಗೆ ಕಳುಹಿಸಿ ಕೊಟ್ಟಿದೆ. ಪಪುವಾ ನ್ಯೂಗಿನಿಯಾದಲ್ಲಿ ಭೂಮಿ ಇನ್ನೂ ಜಾರುತ್ತಿದೆ, ಬಂಡೆಗಳು ಬೀಳುತ್ತಿವೆ, ನಿರಂತರ ಹೆಚ್ಚಿದ ಒತ್ತಡದಿಂದಾಗಿ ನೆಲದ ಮಣ್ಣು ಬಿರುಕು ಬಿಡುತ್ತಿದೆ ಮತ್ತು ಅಂತರ್ಜಲ ಹರಿಯುತ್ತಿದೆ, ಜನ ಸಹಾಯಹಸ್ತಕ್ಕಾಗಿ ಕೈ ಚಾಚುತ್ತಿದ್ದಾರೆ.





## ಇಸ್ರೇಲ್ ವಾಯುದಾಳಿಯಲ್ಲಿ 12 ಫೆಲೆಸ್ತೀನೀಯರ ಬಲಿ

**ಗಾಝಾ:** ದಕ್ಷಿಣ ಗಾಝಾದ ರಫಾ ನಗರದ ಮೇಲೆ ಗುರುವಾರ ಬೆಳಿಗ್ಗೆ ಇಸ್ರೇಲ್ ಪಡೆ ನಡೆಸಿದ ವೈಮಾನಿಕ ದಾಳಿಯಲ್ಲಿ ಕನಿಷ್ಟ 12 ಫೆಲೆಸ್ತೀನೀಯರು ಮೃತಪಟ್ಟಿದ್ದು ಹಲವರು ಗಾಯಗೊಂಡಿರುವುದಾಗಿ ಗಾಝಾದ ವೈದ್ಯಕೀಯ ಇಲಾಖೆ ಹೇಳಿದೆ.

ಗಾಝಾ ಪಟ್ಟಿ ಮತ್ತು ಈಜಿಪ್ಟ್ ನಡುವಿನ ಗಡಿಯ ಸನಿಹದ ಬಫರ್ ವಲಯ(ತಟಸ್ಥ ವಲಯ) ತನ್ನ ಪಡೆಗಳ ನಿಯಂತ್ರಣಕ್ಕೆ ಬಂದಿರುವುದರಿಂದ ಗಾಝಾದ ಸಂಪೂರ್ಣ ಭೂ ಗಡಿಯ ಮೇಲೆ ಪರಿಣಾಮಕಾರಿ ಅಧಿಕಾರವನ್ನು ಪಡೆದಿದೆ.

ತಟಸ್ಥ ವಲಯದ ಮಾರ್ಗದ ಮೂಲಕ ಹಮಾಸ್ ಕಳೆದ 7 ತಿಂಗಳಲ್ಲಿ ಗಾಝಾಕ್ಕೆ ಶಸ್ತ್ರಾಸ್ತ್ರಗಳನ್ನು ಕಳ್ಳಸಾಗಣೆ ಮಾಡುತ್ತಿತ್ತು. ಇದೀಗ ಈ ಮಾರ್ಗವನ್ನು ತಡೆಹಿಡಿಯಲಾಗಿದೆ ಎಂದು ಇಸ್ರೇಲ್ ಹೇಳಿದೆ.



## ಪತನಗೊಂಡ ಫೈಟರ್ ಜೆಟ್

**ನ್ಯೂ ಮೆಕ್ಸಿಕೋ:** ನ್ಯೂ ಮೆಕ್ಸಿಕೋದ ಅಲ್ಬುಕರ್ಕ್‌ನಲ್ಲಿ ಎಫ್ -35 ಫೈಟರ್ ಜೆಟ್ ಪತನಗೊಂಡಿದೆ. ಫೈಟರ್ ಜೆಟ್ ನಲ್ಲಿದ್ದ ಪೈಲಟ್ಗೆ ಗಂಭೀರ ಗಾಯಗಳಾಗಿವೆ. ಅಮೆರಿಕದ ಡಿಪಾರ್ಟ್ಮೆಂಟ್ ಆಫ್ ಡಿಫೆನ್ಸ್ ಅಧಿಕಾರಿಗಳ ಪ್ರಕಾರ ಪತನವಾದ ಯುದ್ಧ ವಿಮಾನವು 135 ಮಿಲಿಯನ್ ಮೌಲ್ಯ ದ್ದಾಗಿದೆ.

ವಿಮಾನ ಅಲ್ಬುಕರ್ಕ್‌ನಿಂದ 1,100 ಕಿಲೋಮೀಟರ್ ದೂರದಲ್ಲಿರುವ ದಕ್ಷಿಣ ಕ್ಯಾಲಿಫೋರ್ನಿಯಾದ ಎಡ್ವರ್ಡ್ಸ್ ಏರ್ ಫೋರ್ಸ್ ಬೇಸ್ಗೆ ತೆರಳುತ್ತಿತ್ತು.

ಸ್ಥಳೀಯ ಮಾಧ್ಯಮಗಳ ವರದಿ ಪ್ರಕಾರ ಕಿಟ್ಲ್ಯಾಂಡ್ ಏರ್ ಫೋರ್ಸ್ ಬೇಸ್ ನಲ್ಲಿ ಇಂಧನ ತುಂಬಿದ ನಂತರ ಸ್ಥಳೀಯ ಸಮಯ ಮಧ್ಯಾಹ್ನ 1:50 ರ ಸುಮಾರಿಗೆ ಅಪಘಾತ ಸಂಭವಿಸಿದೆ.

ಅಲ್ಬುಕರ್ಕ್ ಫೈರ್ ಪಾರುಗಾಣಿಕಾ ವಕ್ತಾರರಾದ ಲೆಫ್ಟಿನೆಂಟ್ ಜೇಸನ್ ಫೆಜರ್ ಅವರು ಸಾಮಾಜಿಕ ಮಾಧ್ಯಮದಲ್ಲಿ ಪ್ರತಿಕ್ರಿಯಿಸಿದ್ದು, ಅನೇಕ ಏಜೆನ್ಸಿಗಳು ಅಪಘಾತಕ್ಕೆ ತ್ವರಿತವಾಗಿ ಪ್ರತಿಕ್ರಿಯಿಸಿವೆ ಎಂದು ಉಲ್ಲೇಖಿಸಿದ್ದಾರೆ.

ಸಾಮಾಜಿಕ ಮಾಧ್ಯಮಗಳಲ್ಲಿ ಕಾಣಿಸಿಕೊಂಡಿರುವ ವೀಡಿಯೊದಲ್ಲಿ ರಸ್ತೆಯ ಪಕ್ಕದ ಮೈದಾನದಲ್ಲಿ ವಿಮಾನವು ಹೊತ್ತಿ ಉರಿಯುತ್ತಿದೆ. ಅಗ್ನಿಶಾಮಕ ದಳದವರು ಬೆಂಕಿಯನ್ನು ಯಶಸ್ವಿಯಾಗಿ ನಿಯಂತ್ರಿಸಲು ಸಾಧ್ಯವಾಗಿದೆ.

ಸಿಬಿಎಸ್ ನ್ಯೂಸ್ ಪ್ರಕಾರ, ಫೈಟರ್ ಜೆಟ್ ಅಲ್ಬುಕರ್ಕ್ನ ಇಂಟರ್ನ್ಯಾಷನಲ್ ಸನ್ಪೋರ್ಟ್ ಬಳಿ ಅಪಘಾತಕ್ಕೀಡಾಯಿತು. ಪೈಲಟ್ ಪ್ರಜ್ಞೆ ಕಳೆದುಕೊಂಡಿದ್ದು ಅವರನ್ನು ತ್ವರಿತವಾಗಿ ನ್ಯೂ ಮೆಕ್ಸಿಕೋ ವಿಶ್ವವಿದ್ಯಾಲಯ ಆಸ್ಪತ್ರೆಗೆ ಸಾಗಿಸಲಾಯಿತು.

## ಚುನಾವಣೆಗೆ ಪೂರ್ವಭಾವಿಯಾಗಿ ಬ್ರಿಟನ್ ಸಂಸತ್ತು ವಿಸರ್ಜನೆ

**ಲಂಡನ್:** ಬ್ರಿಟನ್ ಸಂಸತ್ತಿಗೆ ಜುಲೈ 4ರಂದು ಚುನಾವಣೆ ನಡೆಯುವ ಹಿನ್ನೆಲೆಯಲ್ಲಿ ಐದು ವಾರಗಳ ಪ್ರಚಾರ ಅವಧಿ ಆರಂಭವಾದ ಬೆನ್ನಲ್ಲೇ ಗುರುವಾರ ಬ್ರಿಟನ್ ಸಂಸತ್ತನ್ನು ವಿಸರ್ಜಿಸಲಾಗಿದೆ. 14 ವರ್ಷಗಳ ಕನ್ಸರ್ವೇಟಿವ್ ಆಡಳಿತದ ಬಳಿಕ ಲೇಬರ್ ಪಕ್ಷವನ್ನು ಈ ಚುನಾವಣೆಯಲ್ಲಿ ಮತ್ತೆ ಅಧಿಕಾರಕ್ಕೆ ತರುವ ಸೂಚನೆಗಳು ಕಾಣುತ್ತಿವೆ. ಗುರುವಾರ ಮಧ್ಯರಾತ್ರಿ 12 ಗಂಟೆ ಕಳೆದು ಒಂದು ನಿಮಿಷವಾಗುತ್ತಿದ್ದಂತೆ ಸಂಸತ್ತಿನ ಎಲ್ಲ 650 ಸ್ಥಾನಗಳು ತೆರವಾಗಿವೆ. ಈ ಮೂಲಕ ಚುನಾವಣಾ ಪ್ರಕ್ರಿಯೆ ಅಧಿಕೃತವಾಗಿ ಆರಂಭವಾಗಿದೆ. ಭಾರಿ ಮಳೆಯ ನಡುವೆಯೇ ಪ್ರಧಾನಿ ರಿಷಿ ಸುನಾಕ್ ಅವರು ಚುನಾವಣಾ ಘೋಷಣೆ ಮಾಡಿರುವುದನ್ನು ಹಲವು ಮಂದಿ ಪ್ರಚಾರ ಕಾರ್ಯದ ನಡುಕದ ಆರಂಭ ಎಂದು ವಿಶ್ಲೇಷಿಸಿದ್ದು, ಮತ್ತೆ ಕೆಲವರು ಮಳೆಯನ್ನು ದುರಾದೃಷ್ಟದ ಸಂಕೇತ ಎಂದೂ ಪರಿಗಣಿಸಿದ್ದಾರೆ. ನಿರೀಕ್ಷೆಗಿಂತ ಮೊದಲೇ ಅಂದರೆ ಜುಲೈ 4ರಂದೇ ಚುನಾವಣೆ ನಡೆಸುವ ಸುನಾಕ್ ನಿರ್ಧಾರಕ್ಕೆ, ಚುನಾವಣಾ ಪೂರ್ವ ಸಮೀಕ್ಷೆಗಳಲ್ಲಿ ಅವರ ಪಕ್ಷದ ಜನಪ್ರಿಯತೆ ಕಡಿಮೆಯಾಗುತ್ತಿದೆ ಎಂದು ಕಂಡುಬಂದಿರುವುದೇ ಕಾರಣ ಎಂದು ಹೇಳಲಾಗುತ್ತಿದೆ. ಈ ಮಧ್ಯೆ, ಮಾನವ ಹಕ್ಕುಗಳ ಮಾಜಿ ವಕೀಲ ಕೀರ್ ಸ್ಟಾರ್ಮರ್ ನೇತೃತ್ವದ ಲೇಬರ್ ಪಾರ್ಟಿ, ಈ ಅವಕಾಶವನ್ನು ಬಳಸಿಕೊಂಡು 14 ವರ್ಷಗಳ ಬಳಿಕ ಅಧಿಕಾರದ ಕನಸು ಕಾಣುತ್ತಿದೆ.

## ಸಿಂಗಾಪುರ ಏರ್ ಲೈನ್ಸ್ ಹಠಾತ್ ಕುಸಿತ

**ಸಿಂಗಾಪುರ:** ಕಳೆದ ವಾರ ಸಿಂಗಾಪುರ ಏರ್ಲೈನ್ಸ್ ವಿಮಾನವು ಕೇವಲ 4.6 ಸೆಕೆಂಡ್‌ಗಳಲ್ಲಿ 178 ಅಡಿ ಕುಸಿತ ಕಂಡಿದ್ದಕ್ಕೆ ಗುರುತ್ವಾಕರ್ಷಣಾ ಶಕ್ತಿಯಲ್ಲಿನ ತ್ವರಿತ ಬದಲಾವಣೆಯೇ ಇದಕ್ಕೆ ಕಾರಣ ಎಂದು ಪ್ರಾಥಮಿಕ ತನಿಖಾ ವರದಿ ತಿಳಿಸಿದೆ ಸಾರಿಗೆ ಸುರಕ್ಷತಾ ತನಿಖಾ ಸಂಸ್ಥೆಯು (ಟಿಎಸ್‌ಐಬಿ) ಈ ಕುರಿತ ವರದಿಯನ್ನು ಬಿಡುಗಡೆ ಮಾಡಿದೆ. ಮೇ 21ರಂದು, ಲಂಡನ್‌ನಿಂದ ಸಿಂಗಾಪುರಕ್ಕೆ ತೆರಳುತ್ತಿದ್ದ ಎಸ್ಕ್ಯೂ321 ವಿಮಾನವು ಮ್ಯಾನ್ಮಾರ್ನ ಐರಾವಡ್ಡಿ ಜಲಾನಯನ ಪ್ರದೇಶದಲ್ಲಿ ಟರ್ಬ್ಯುಲೆನ್ಸ್‌ನಿಂದಾಗಿ (ಗಾಳಿಯ ವೇಗದಲ್ಲಿ ಆಗುವ ಬದಲಾವಣೆಯಿಂದ ಉಂಟಾಗುವ ಕ್ಷೋಭೆ) ಹಠಾತ್ ಕುಸಿತ ಕಂಡಿತ್ತು. ಈ ವಿಮಾನದಲ್ಲಿ 211 ಪ್ರಯಾಣಿಕರು ಮತ್ತು 18 ಸಿಬ್ಬಂದಿ ಇದ್ದರು. ಘಟನೆಯ ನಂತರ ವಿಮಾನವನ್ನು ಬ್ಯಾಂಕಾಕ್ನ ಸುವರ್ಣಭೂಮಿ ವಿಮಾನ ನಿಲ್ದಾಣದಲ್ಲಿ ತುರ್ತು ಭೂಸ್ಪರ್ಶ ಮಾಡಲಾಯಿತು. ಎಸ್ಕ್ಯೂ321 ವಿಮಾನದಲ್ಲಿದ್ದ ಪ್ರಯಾಣಿಕರು ಮತ್ತು ಸಿಬ್ಬಂದಿಯ ವೈದ್ಯಕೀಯ ವೆಚ್ಚ ಮತ್ತು ಅವರಿಗೆ ಅಗತ್ಯವಿರುವ ಯಾವುದೇ ಹೆಚ್ಚುವರಿ ಸಹಾಯವನ್ನು ಮಾಡುವುದಾಗಿ ಏರ್ಲೈನ್ ಸಂಸ್ಥೆಯು ತಿಳಿಸಿದೆ. ಈ ವಿಮಾನದಲ್ಲಿ ಮೂವರು ಭಾರತೀಯ ಪ್ರಜೆಗಳು ಪ್ರಯಾಣಿಸುತ್ತಿದ್ದರು.




### ಟರ್ಬೈನ್ ಬ್ಲೇಡ್‌ಗೆ ಸಿಲುಕಿ ಮೃತ್ಯು

**ಸ್ಚಿಫೋಲ್:** ವಿಮಾನದ ಸ್ಪಿನ್ನಿಂಗ್ ಟರ್ಬೈನ್ ಬ್ಲೇಡ್ಗೆ ಸಿಲುಕಿ ವ್ಯಕ್ತಿಯೊಬ್ಬ ಮೃತಪಟ್ಟ ಘಟನೆ ಆಂಸ್ಟರ್ಡ್ಯಾಮ್ನ ಸ್ಚಿಫೋಲ್‌ನಲ್ಲಿ ನಡೆದಿದೆ. ಡಚ್ ಏರ್ಲೈನ್ ಕೆಎಲ್ಎಂ ಈ ಪ್ರಕರಣದ ಬಗ್ಗೆ ಮಾಹಿತಿ ತಿಳಿಸಿದೆ. ಆಂಸ್ಟರ್ಡ್ಯಾಮ್ನ ಶಿಫೋಲ್ ವಿಮಾನ ನಿಲ್ದಾಣದಿಂದ ಡೆನ್ಮಾರ್ಕ್ನ ಬಿಲ್ಲುಂಡೆಗೆ ಹೊರಟಿದ್ದ ವಿಮಾನದ ಟರ್ಬೈನ್ ಬ್ಲೇಡ್‌ಗೆ ವ್ಯಕ್ತಿ ಸಿಲುಕಿದ್ದಾನೆ. ಇನ್ನೇನು ಹಾರಾಡಲು ರೆಡಿಯಾಗಿದ್ದ ವಿಮಾನದ ಬ್ಲೇಡ್‌ಗೆ ಸಿಲುಕಿ ಬಲಿಯಾಗಿದ್ದಾನೆ. ಸಾವನ್ನಪ್ಪಿದ ವ್ಯಕ್ತಿಯ ಗುರುತು ಇನ್ನೂ ಪತ್ತೆಯಾಗಿಲ್ಲ. ಬುಧವಾರದಂದು ನಡೆದ ಘಟನೆ ಇದಾಗಿದೆ. ಕೆಎಲ್1341 ವಿಮಾನ ಬಿಲ್ಲುಂಡ್‌ಗೆ ಹಾರಲು ತಯಾರಿ ನಡೆಸುವ ವೇಳೆ ದುರ್ಘಟನೆ ಸಂಭವಿಸಿದೆ ಎಂದು ಡಚ್ ಏರ್ಲೈನ್ ತಿಳಿಸಿದೆ. ಈ ದುರ್ಘಟನೆ ಸಂಭವಿಸಿದ ಬಳಿಕ ಪ್ರಯಾಣಿಕರನ್ನು ವಿಮಾನದಿಂದ ಕೆಳಗಿಳಿಸಲಾಗಿದೆ.

### ಕುಪ್ವಾರ ಪೊಲೀಸ್ ಠಾಣೆಯ ಮೇಲೆ ಸೇನಾ ಸಿಬ್ಬಂದಿಯಿಂದ ದಾಳಿ ಪ್ರಕರಣ

**ಶ್ರೀನಗರ:** ಕುಪ್ವಾರ ಜಿಲ್ಲೆಯ ಪೊಲೀಸ್ ಠಾಣೆಯಲ್ಲಿ ಪೊಲೀಸ್ ಸಿಬ್ಬಂದಿ ಮೇಲೆ ಹಲ್ಲೆಗೈದ ಆರೋಪದ ಮೇಲೆ ಮೂವರು ಸೇನಾಧಿಕಾರಿಗಳ ಸಹಿತ 16 ಸೈನಿಕರ ವಿರುದ್ಧ ಜಮ್ಮು ಮತ್ತು ಕಾಶ್ಮೀರ ಪೊಲೀಸರು ಪ್ರಕರಣ ದಾಖಲಿಸಿದ್ದಾರೆ. ಘಟನೆಯಲ್ಲಿ ಠಾಣಾಧಿಕಾರಿ ಸಹಿತ ಐದು ಪೊಲೀಸ್ ಸಿಬ್ಬಂದಿ ಗಾಯಗೊಂಡಿದ್ದಾರೆಂದು ತಿಳಿದು ಬಂದಿದೆ. ಸೈನಿಕರು ಪೊಲೀಸ್ ಠಾಣೆಗೆ ನುಗ್ಗುತ್ತಿರುವ ವೀಡಿಯೋ ಮಂಗಳವಾರ ಸಂಜೆ ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡಿತ್ತು. ಹಲ್ಲೆ ಆರೋಪಗಳನ್ನು ರಕ್ಷಣಾ ವಕ್ತಾರರು ನಿರಾಕರಿಸಿದ್ದಾರೆ ಹಾಗೂ ಇದೊಂದು ಸಣ್ಣ ಭಿನ್ನಾಭಿಪ್ರಾಯದ ಘಟನೆ ಎಂದು ಬಣ್ಣಿಸಿದ್ದಾರೆ. ಆದರೆ ಎಫ್ಐಆರ್‌ನಲ್ಲಿ ಮೂವರು ಲೆಫ್ಟಿನೆಂಟ್ ಕರ್ನಲ್ ಶ್ರೇಣಿಯ ಅಧಿಕಾರಿಗಳ ಸಹಿತ 16 ಸೈನಿಕರ ಹೆಸರುಗಳಿವೆ. ಹಿಂಸೆ, ಕೊಲೆ ಯತ್ನ ಮತ್ತು ಅಪಹರಣ ಆರೋಪವನ್ನು ಅವರ ಮೇಲೆ ಹೊರಿಸಲಾಗಿದೆ.

ಮಂಗಳವಾರ ಪೊಲೀಸರು ಕುಪ್ವಾರ ಜಿಲ್ಲೆಯ ಬಟ್ಪೋರ ಎಂಬಲ್ಲಿ ಟೆರಿಟೋರಿಯಲ್ ಸೇನೆಯ ಸೈನಿಕರೊಬ್ಬರ ಮನೆಯ ಮೇಲೆ ಪ್ರಕರಣವೊಂದರ ತನಿಖೆ ಭಾಗವಾಗಿ ದಾಳಿ ನಡೆಸಿದ್ದರು. ಅದೇ ದಿನ ರಾತ್ರಿ ಸುಮಾರು 9.40ಕ್ಕೆ ಸೈನಿಕರು ಠಾಣೆಗೆ ನುಗ್ಗಿ ಹಲ್ಲೆ ನಡೆಸಿದ್ದಾರೆಂದು ಎಫ್ಐಆರ್‌ನಲ್ಲಿ ಹೇಳಲಾಗಿದೆ. ದೊಡ್ಡ ಸಂಖ್ಯೆಯ ಶಸ್ತ್ರಸಜ್ಜಿತ ಆದರೆ ಸಮವಸ್ತ್ರದಲ್ಲಿರದ 160 ಟೆರಿಟೋರಿಯಲ್ ಸೇನೆಯ ಸಿಬ್ಬಂದಿ ಮೂವರು ಅಧಿಕಾರಿಗಳ ನೇತೃತ್ವದಲ್ಲಿ ಠಾಣೆಗೆ ನುಗ್ಗಿ ಯಾವುದೇ ಪ್ರಚೋದನೆಯಿಲ್ಲದೆ ಪೊಲೀಸರ ಮೇಲೆ ಹಲ್ಲೆ ನಡೆಸಿದ್ದಾರೆಂದು ದೂರಲಾಗಿದೆ.

## ಗ್ಯಾಂಗ್‌ಸ್ಟರ್ ಛೋಟಾ ರಾಜನ್‌ಗೆ ಜೀವಾವಧಿ ಶಿಕ್ಷೆ

**ಮುಂಬೈ:** ಹೊಟೇಲ್ ಉದ್ಯಮಿ ಜಯಾ ಶೆಟ್ಟಿ ಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಗ್ಯಾಂಗ್ ಸ್ಟರ್, ಭೂಗತ ಪಾತಕಿ ಛೋಟಾ ರಾಜನ್ನನ್ನು ಅಪರಾಧಿ ಎಂದು ಮುಂಬೈ ಕೋರ್ಟ್ ಘೋಷಿಸಿದೆ. 2001ರಲ್ಲಿ ನಡೆದ ಜಯಾ ಶೆಟ್ಟಿ ಕೊಲೆ ಪ್ರಕರಣದ ಅಂತಿಮ ತೀರ್ಪು ಇಂದು ಹೊರಬಿದ್ದಿದ್ದು, ರಾಜನ್ನನ್ನು ದೋಷಿ ಎಂದು ಘೋಷಿಸಿ, ಜೀವಾವಧಿ ಶಿಕ್ಷೆ ಘೋಷಿಸಿದೆ.



ಮಹಾರಾಷ್ಟ್ರದ ಸಂಘಟಿತ ಅಪರಾಧ ನಿಯಂತ್ರಣ ಕಾಯಿದೆಕೇಸ್ಗಳ ವಿಚಾರಣೆ ನಡೆಸುವ ಮುಂಬೈ ವಿಶೇಷ ಕೋರ್ಟ್ ನ್ಯಾಯಾಧೀಶ ಎ ಎಂ ಪಾಟೀಲ್ ರಾಜನ್ನನ್ನು ಅಪರಾಧಿ ಎಂದು ಘೋಷಿಸಿದ್ದಾರೆ.

ಮುಂಬೈಯ ಗಾಮ್ದೇವಿಯ ಗೋಲ್ಡನ್ ಕ್ರೌನ್ ಹೊಟೇಲ್ ಮಾಲೀಕರಾಗಿದ್ದ ಜಯಾ ಶೆಟ್ಟಿ ಅವರಿಗೆ ಛೋಟಾ ರಾಜನ್ ಗ್ಯಾಂಗ್‌ನಿಂದ ಹಣಕ್ಕಾಗಿ ಬೇಡಿಕೆ ಇಟ್ಟು ಆಗಾಗ ಕರೆ ಬರುತ್ತಿತ್ತು. ಇದಾದ ಬಳಿಕ ಕಲವೇ ದಿನಗಳಲ್ಲಿ ಅಂದರೆ ಮೇ 4, 2001ರಂದು ಹೊಟೇಲ್ ಒಳಗಡೆಯೇ ಜಯಾ ಶೆಟ್ಟಿ ಅವರನ್ನು ಛೋಟಾ ರಾಜನ್ ಗ್ಯಾಂಗ್‌ನ ಇಬ್ಬರು ದುಷ್ಕರ್ಮಿಗಳು ಗುಂಡಿಕ್ಕಿ ಹತ್ಯೆ ಮಾಡಿದ್ದರು. ಜಯಾ ಅವರಿಗೆ ಬೆದರಿಕೆ ಬರುತ್ತಿದ್ದಂತೆ ಮುಂಬೈ ಪೊಲೀಸರು ಅವರಿಗೆ ಭಾರೀ ಭದ್ರತೆ ಒದಗಿಸಿದ್ದರು. 2000ನೇ ಇಸವಿ ನವೆಂಬರ್ ತಿಂಗಳಿನಿಂದ ಛೋಟಾ ರಾಜನ್ ಬೆದರಿಕೆ ಕರೆಯಿಂದ ಪೊಲೀಸರಿಗೆ ದೂರು ನೀಡಿದ್ದ ಜಯಾ ಶೆಟ್ಟಿ, 2001ರ ಮಾರ್ಚ್ ಅಂತ್ಯದಲ್ಲಿ ಭದ್ರತೆ ಹಿಂತೆಗೆದುಕೊಳ್ಳುವಂತೆ ಪೊಲೀಸರಿಗೆ ಮನವಿ ಮಾಡಿದ್ದರು. ಪೊಲೀಸ್ ಭದ್ರತೆ ಬಳಿಕ ಛೋಟಾ ರಾಜನ್ ದೂರವಾಣಿ ಕರೆ ಮಾಡಿ ಬೆದರಿಸುವ ಪ್ರಯತ್ನ ಮಾಡಿರಲಿಲ್ಲ. ಹೀಗಾಗಿ ಛೋಟಾ ರಾಜನ್ ತಮ್ಮ ತಂಟೆಗೆ ಬರುವುದಿಲ್ಲ ಎಂದು, ಪೊಲೀಸ್ ಭದ್ರತೆ ವಾಪಸ್ ಪಡೆಯಲು ಪೊಲೀಸರಿಗೆ ಮನವಿ ಮಾಡಿದ್ದರು.

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054



# ವೀಡಿಯೋ ಸಾಂಗ್ ಮೂಲಕ ಮಿಂಚಿದ ಬ್ಯಾಕ್ ಬೆಂಚರ್ಸ್

ಬಿ.ಆರ್ ರಾಜಶೇಖರ್ ನಿರ್ದೇಶನದ 'ಬ್ಯಾಕ್ ಬೆಂಚರ್ಸ್' ಚಿತ್ರವೀಗ ಬಿಡುಗಡೆಯ ಹೊಸ್ತಿಲಿನಲ್ಲಿದೆ. ಕೆಲ ದಿನಗಳ ಹಿಂದಷ್ಟೇ ಟೀಸರ್ ಬಿಡುಗಡೆಗೊಂಡಿತ್ತು. ಆ ಮೂಲಕ ಬ್ಯಾಕ್ ಬೆಂಚರ್ಸ್ ಬಗ್ಗೆ ದೊಡ್ಡ ಮಟ್ಟದಲ್ಲೊಂದು ಕ್ರೇಜ್ ಮೂಡಿಕೊಂಡಿದೆ. ಅದರಲ್ಲಿದ್ದ ನವಿರಾದ ಹಾಸ್ಯ, ಕಾಲೇಜು ಲೈಫಿನ ಲವಲವಿಕೆಯ ಕಥಾನಕದ ಮುನ್ಸೂಚನೆಗಳೆಲ್ಲ ಫಲ ಕೊಟ್ಟಿದ್ದವು. ಈವರೆಗೆ ಬಂದಿರುವ ಕಾಲೇಜು ಕೇಂದ್ರಿತ ಕಥೆಗಳಲ್ಲಿ ಈ ಸಿನಿಮಾ ಭಿನ್ನವಾಗಿದೆ ಎಂದು ಚಿತ್ರತಂಡ ಹೇಳಿಕೊಂಡಿದ್ದಿದೆ. ಸದರಿ ಟೀಸರಿನಲ್ಲಿ ಅದಕ್ಕೆ ಸ್ಪಷ್ಟ ಪುರಾವೆಗಳು ಸಿಕ್ಕಿದ್ದವು. ಹಾಗೆ ಬ್ಯಾಕ್ ಬೆಂಚರ್ಸ್ ಕಡೆಗೆ ಆಕರ್ಷಿತರಾಗಿದ್ದ ಪ್ರೇಕ್ಷಕರಿಗೆಲ್ಲ ಈಗ ಮತ್ತೊಂದು ಖುಷಿ ಎದುರಾಗಿದೆ. ಮತ್ತದೇ ಲವಲವಿಕೆ ಹೊದ್ದ 4ಕೆ ವೀಡಿಯೋ ಸಾಂಗ್ ಬಿಡುಗಡೆಗೊಂಡಿದೆ.

ಎಲ್ಲೊ ಎಲ್ಲೊ ಎಲ್ಲೋ ಸಾಗುವಾಗ ನಿಲ್ಲೊ ನಿಲ್ಲೊ ನಿಲ್ಲೋ ಚಿಂತೆ ಏಕೆ ಅಂತ ಶುರುವಾಗೋ ಈ ಹಾಡು ಒಂದಿಡೀ ಚಿತ್ರದ ಆತ್ಮವನ್ನು ಧರಿಸಿಕೊಂಡಂತೆ ಮೂಡಿ ಬಂದಿದೆ. ಸಾಮಾನ್ಯವಾಗಿ ಕಾಲೇಜು ದಿನಮಾನದಲ್ಲಿ ಬದುಕಲ್ಲೆದುರಾಗೋ ಸಮಸ್ಯೆಗಳನ್ನು ಎದುರುಗೊಳ್ಳುವ ರೀತಿಯೇ ಬೇರೆಯದ್ದಿರುತ್ತದೆ. ಎಂಥಾದ್ದೇ ಸಮಸ್ಯೆ ಬಂದು ಎದೆಗೊದ್ದಾಗಲೂ ಪುಟಿದೆದ್ದು ನಿಲ್ಲೋ ಟೀನೇಜಿನ ಹುರುಪಿದೆಯಲ್ಲಾ? ಅದೆಲ್ಲವನ್ನು ಅರೆದು ತಯಾರಿಸಿದಂತಿರೋ ಈ ಹಾಡಿಗೀಗ ಎಲ್ಲೆಡೆಯಿಂದ ವ್ಯಾಪಕ ಮೆಚ್ಚುಗೆಗಳು ಮೂಡಿಕೊಳ್ಳುತ್ತಿವೆ. ಧನಂಜಯ್ ರಂಜನ್ ಮತ್ತು ನಿಶ್ಚಲ್ ದಂಬೆಕೋಡಿ ಸಾಹಿತ್ಯವಿರುವ ಈ ಹಾಡಿಗೆನಕುಲ್ ಅಭಯಂಕರ್ ಸಂಗೀತ ಸಂಯೋಜನೆ ಮಾಡಿದ್ದಾರೆ. ಖುದ್ದು ನಕುಲ್ ಈ ಹಾಡನ್ನು ಹಾಡಿದ್ದಾರೆ.

ಪಿಪಿ ಪ್ರೊಡಕ್ಷನ್ಸ್ ಬ್ಯಾನರಿನಡಿಯಲ್ಲಿ ಈ ಚಿತ್ರ ನಿರ್ಮಾಣಗೊಂಡಿದೆ. ಸಂಪೂರ್ಣವಾಗಿ ಹೊಸಬರ ತಂಡವನ್ನಿಟ್ಟುಕೊಂಡು ರಾಜಶೇಖರ್ ಬ್ಯಾಕ್ ಬೆಂಚರ್ಸ್ ಚಿತ್ರವನ್ನು ರೂಪಿಸಿದ್ದಾರೆ. ಸಿದ್ಧಸೂತ್ರಗಳನ್ನು ಮೀರಿಕೊಂಡು ಹೊಸತೇನನ್ನೋ ಸೃಷ್ಟಿಸುವ ಹಂಬಲವೇ ಈ ಚಿತ್ರವನ್ನು ಭಿನ್ನವಾಗಿಸಿದೆ ಎಂಬುದು ನಿರ್ದೇಶಕರ ಮಾತು. ಇದುವರೆಗೂ ಕನ್ನಡದಲ್ಲಿ ಒಂದಷ್ಟು ಕಾಲೇಜು ಕಥೆಗಳು ದೃಷ್ಯರೂಪ ಧರಿಸಿವೆ. ಅದರಲ್ಲೊಂದಿಷ್ಟು ಗೆಲುವು ಕಂಡಿವೆ. ಆದರೆ, ಬ್ಯಾಕ್ ಬೆಂಚರ್ಸ್ ಅದ್ಯಾವುದರ ನೆರಳೂ ಇಲ್ಲದೆ, ಯಾವ ಕಲ್ಪನೆಗೂ ನಿಲುಕದಂತೆ ಮೂಡಿ ಬಂದಿದೆಯೆಂಬುದು ಚಿತ್ರತಂಡದ ಭರವಸೆ. ಹಾಡುಗಳು ಮತ್ತು ಟೀಸರ್ ನೋಡಿದವರಿಗೆಲ್ಲ ಅದು ನಿಜವೆನ್ನಿಸುವಂತಿದೆ.

ಪಿಪಿ ಪ್ರೊಡಕ್ಷನ್ಸ್ ಅಡಿಯಲ್ಲಿ ಖುದ್ದು ರಾಜಶೇಖರ್ ಅವರೇ ಈ ಚಿತ್ರವನ್ನು ನಿರ್ಮಾಣ ಮಾಡಿದ್ದಾರೆ. ರಂಜನ್, ಜತಿನ್ ಆರ್ಯನ್, ಆಕಾಶ್ ಎಂ.ಪಿ, ಶಶಾಂಕ್ ಸಿಂಹ, ಸುಚೇಂದ್ರ ಪ್ರಸಾದ್, ಅರವಿಂದ್ ಕುಪ್ಳೀಕರ್, ಮಾನ್ಯ ಗೌಡ, ಕುಂಕುಮ್ ಹೆಚ್, ಅನುಷ ಸುರೇಶ್, ವಿಯೋಮಿ ವನಿತಾ, ಮನೋಜ್ ಶೆಟ್ಟಿ, ನಮಿತಾ ಗೌಡ, ವಿಕಾಸ್, ರನ್ನ, ವಿಜಯ್ ಪ್ರಸಾದ್, ಚತುರ್ಥಿ ರಾಜ್, ಗೌರವ್ ಮುಂತಾದವರ ತಾರಾಗಣವಿದೆ. ನಕುಲ್ ಅಭಯಂಕರ್ ಸಂಗೀತ ನಿರ್ದೇಶನ, ಮನೋಹರ್ ಜೋಶಿ ಛಾಯಾಗ್ರಹಣ, ರಂಜನ್ ಮತ್ತು ಅಮರ್ ಗೌಡ ಸಂಕಲನ ಈ ಚಿತ್ರಕ್ಕಿದೆ.

# ಪಡ್ಡೆಗಳ ಎದೆಬಡಿತ ಹೆಚ್ಚಿಸಿದ ನಟಿ ಸಂಜನಾ ಆನಂದ್

ಸಹಜ ಅಭಿನಯ, ಸರಳ ಸೌಂದರ್ಯದಿಂದಲೇ ಸ್ಯಾಂಡಲ್ ವುಡ್ ನ್ಯೂ ಕ್ರಶ್ ಎನಿಸಿಕೊಂಡಿರುವ ಸಂಜನಾ ಆನಂದ್ ಹೊಸ ಫೋಟೋಶೂಟ್ ನಲ್ಲಿ ಭಾಗಿಯಾಗಿದ್ದಾರೆ. ಈ ಫೋಟೋಗಳು ಪಡ್ಡೆಗಳ ನಿದ್ದೆ ಹಾಳು ಮಾಡುವೆ. ಸಖತ್ ಹಾಟ್ ಹಾಟ್ ಆಗಿ ಕಾಣಿಸಿಕೊಂಡಿರುವ ಸಂಜನಾ, ರಸಿಕರ ಎದೆ ಬಡಿತ ಹೆಚ್ಚಿಸಿದ್ದಾರೆ. ಸದ್ಯ ಸಂಜನಾ ಆನಂದ್ ಮುಧೋಳ್ ಹೆಸರಿನ ಸಿನಿಮಾ ಬಳಗ ಸೇರಿಕೊಂಡಿದ್ದಾರೆ. ಕೆಮಿಸ್ಟ್ರಿ ಆಫ್ ಕರಿಯಪ್ಪ ಸಿನಿಮಾ ಮೂಲಕ ಚಿತ್ರರಂಗಕ್ಕೆ ಪರಿಚಯವಾದ ಸಂಜನಾ ಕಡಿಮೆ ಅವಧಿಯಲ್ಲಿ ಸ್ಟಾರ್ ಹೀರೋ ಜೊತೆ ತೆರೆಹಂಚಿಕೊಳ್ಳುವ ಅವಕಾಶಗಿಟ್ಟಿಸಿಕೊಂಡರು. ದುನಿಯಾ ವಿಜಯ್ ಸಾರಥ್ಯದ ಸಲಗ ಮೂಲಕ ಸೆನ್ಸೆಷನ್ ಸೃಷ್ಟಿಸಿದ್ದ ಈ ಬ್ಯೂಟಿ ಟಾಲಿವುಡ್ ಕೂಡ ಪ್ರವೇಶಿಸಿದ್ದಾರೆ. ಕನ್ನಡದ ಜೊತೆಗೆ ತೆಲುಗು ಅಂಗಳದಲ್ಲಿಯೂ ಬ್ಯುಸಿಯಾಗಿರುವ ಸಂಜನಾ ಆನಂದ್ ಈಗ ಕ್ರೇಜಿಸ್ಟಾರ್ ರವಿಚಂದ್ರನ್ ಪುತ್ರ ವಿಕ್ರಮ್ ಜೊತೆ ರೋಮ್ಯಾನ್ಸ್ ಮಾಡಲು ಒಕೆ ಎಂದಿದ್ದಾರೆ. 'ತ್ರಿವಿಕ್ರಮ' ಚಿತ್ರದ ಮೂಲಕ ಸ್ಯಾಂಡಲ್‌ವುಡ್‌ಗೆ ಬಂದ ಕ್ರೇಜಿಸ್ಟಾರ್ ರವಿಚಂದ್ರನ್ ಪುತ್ರ ವಿಕ್ರಮ್ ಈಗ ಎರಡನೇ ಸಿನಿಮಾದಲ್ಲಿ ಬ್ಯುಸಿ ಇದ್ದಾರೆ. ಮುಧೋಳ್ ಮೂಲಕ ಸಖತ್ ಮಾಸ್ ಅವತಾರ ತಾಳಿರುವ ವಿಕ್ಕಿಗೆ ನಾಯಕಿಯಾಗಿ ರಾಯಲ್ ಹುಡುಗಿ ನಟಿಸುತ್ತಿದ್ದಾರೆ.ಈ ಚಿತ್ರ ಸೆಟ್ಟೇರಿದಾಗಿನಿಂದಲೂ ಸಂಜನಾ ನಾಯಕಿ ಎಂಬ ವಿಷ್ಯ ಹರಿದಾಡಿತ್ತು. ಆದ್ರೆ ಚಿತ್ರತಂಡ ಮಾತ್ರ ಗುಟ್ಟುಬಿಟ್ಟುಕೊಟ್ಟಿರಲಿಲ್ಲ. ಸಲಗ ಸುಂದರಿ ಹುಟ್ಟುಹಬ್ಬದ ವಿಶೇ?ವಾಗಿ ಚಿತ್ರತಂಡ ಸಮಾಚಾರವನ್ನು ಅಧಿಕೃತಗೊಳಿಸಿತ್ತು. ವಿಕ್ರಮ್ ಮುಧೋಳ್ ಸಿನಿಮಾದ ನಾಯಕಿಯಾಗಿರುವ ಸಂಜನಾ ಸ್ಪೆ?ಲ್ ರೋಲ್ ಪ್ಲೇ ಮಾಡಿದ್ದಾರೆ. ಇಲ್ಲಿವರೆಗೂ ಅವರು ನಟಿಸಿದ ವಿಭಿನ್ನ ಲುಕ್ ನಲ್ಲಿ ಕಾಣಿಸಿಕೊಳ್ಳಲಿದ್ದಾರೆ. ಅಂದಹಾಗೇ ತಮಿಳು, ತೆಲುಗು ಚಿತ್ರರಂಗದಲ್ಲಿ ಸಹ ನಿರ್ದೇಶಕನಾಗಿ, ಸಿನಿಮಾ ಬರಹಗಾರನಾಗಿ ಗುರುತಿಸಿಕೊಂಡಿರುವ ಕಾರ್ತಿಕ್ ರಾಜನ್ ಈ ಚಿತ್ರಕ್ಕೆ ಆಕ್ಷನ್ ಕಟ್ ಹೇಳಿದ್ದಾರೆ. ಸಂಜನಾ ಆನಂದ್ ಮುಧೋಳ್ ಸಿನಿಮಾ ಜೊತೆಗೆ ದಿನಕರ್ ತೂಗುದೀಪ ನಿರ್ದೇಶನದ ರಾಯಲ್ ಹಾಗೂ ತೆಲುಗಿನ ಫುಲ್ ಬಾಟೆಲ್ ಎಂಬ ಚಿತ್ರಗಳ ಬಿಡುಗಡೆಗೆ ಎದುರು ನೋಡುತ್ತಿದ್ದಾರೆ. ಧನ್ವೀರ್ ಗೌಡ ನಟಿಸುತ್ತಿರುವ ಹಯಗ್ರೀವ್ ಗೂ ನಾಯಕಿಯಾಗಿರುವ ರಾಯಲ್ ಕ್ವೀನ್ ಸದ್ಯ ಸಿಕ್ಕಾಪಟ್ಟೆ ಬ್ಯುಸಿಯಾಗಿದ್ದಾರೆ.



# 'ಕಾಂತಾರ' ಪ್ರೀಕ್ವೆಲ್ ಸಿನಿಮಾಗೆ ಮಾಲಿವುಡ್ ನಟ

ರಿಷಬ್ ಶೆಟ್ಟಿ ನಟಿಸಿ, ನಿರ್ದೇಶನ ಮಾಡುತ್ತಿರುವ 'ಕಾಂತಾರ' ಪ್ರೀಕ್ವೆಲ್ ಟೀಮ್ ನಿಂದ ಮತ್ತೊಂದು ಹೊಸ ಸುದ್ದಿ ಬಂದಿದೆ. ಸದ್ದಿಲ್ಲದೇ ರಿಷಬ್ ಕಲಾವಿದರನ್ನು ಆಯ್ಕೆ ಮಾಡಿಕೊಳ್ಳುತ್ತಿದ್ದು, ಈ ಸಿನಿಮಾದ ಮಹತ್ವದ ಪಾತ್ರವೊಂದನ್ನು ಮಾಲಿವುಡ್ ನಟ ಜಯರಾಮ್ ನಿರ್ವಹಿಸುತ್ತಿದ್ದಾರೆ. ಈ ಹಿಂದೆ ಇವರು ಶಿವರಾಜ್ ಕುಮಾರ್ ನಟನೆಯ ಘೋಸ್ಟ್ ಸಿನಿಮಾದಲ್ಲೂ ನಟಿಸಿದ್ದರು.

ರಿಷಬ್ ಶೆಟ್ಟಿ ಸದ್ಯ 'ಕಾಂತಾರ' ಪ್ರೀಕ್ವೆಲ್ ಚಿತ್ರದ ಕೆಲಸದಲ್ಲಿ ಬ್ಯುಸಿಯಾಗಿದ್ದಾರೆ. ಇದರ ನಡುವೆ ಮೇ.7 ರಂದು ಬೈಂದೂರಿನ ಕೆರಾಡಿಯಲ್ಲಿ ರಿಷಬ್ ಮತದಾನ ಮಾಡಿ, ಈ ವೇಳೆ ಕಾಂತಾರ ಪಾರ್ಟ್ 1 ಬಗ್ಗೆ ರಿಷಬ್ ಮಾಹಿತಿ ನೀಡಿದ್ದರು.

ಮಾಧ್ಯಮಕ್ಕೆ ಪ್ರತಿಕ್ರಿಯೆ ನೀಡಿದ್ದ ರಿಷಬ್, ಜನ ಸಿನಿಮಾವನ್ನು ಚಿತ್ರಮಂದಿರದಲ್ಲಿ ನೋಡಿದ್ರೆ ಒಳ್ಳೆಯದು. ಕಾಂತಾರ ಚಿತ್ರದ ಕುರಿತು ಅಧಿಕೃತವಾಗಿ ಹೊಂಬಾಳೆ ಸಂಸ್ಥೆ ಎಲ್ಲವನ್ನೂ ಘೋಷಣೆ ಮಾಡುತ್ತದೆ. ಈಗಾಗಲೇ 'ಕಾಂತಾರ' ಪ್ರೀಕ್ವೆಲ್ ಚಿತ್ರೀಕರಣ ಆರಂಭವಾಗಿದೆ. ಸಿನಿಮಾದ ಕೆಲಸ ಬಹಳ ಚೆನ್ನಾಗಿ ನಡೆಯುತ್ತಿದೆ ಎಂದು ಮಾಹಿತಿ ಹಂಚಿಕೊಂಡಿದ್ದರು.

'ಕಾಂತಾರ' ಸಕ್ಸಸ್ ನಂತರ ಮೊದಲಿಗಿಂತ ಜವಾಬ್ದಾರಿ ಹೆಚ್ಚಾಗಿದೆ. ನಮ್ಮ ಸಿನಿಮಾಗಾಗಿ ದೊಡ್ಡ ತಂಡ ಕೆಲಸ ಮಾಡುತ್ತಿದೆ ಎಂದಿದ್ದರು. ಹೊಂಬಾಳೆ ಸಂಸ್ಥೆ ಸಿಕ್ಕಿರುವುದು ಫಿಲ್ಮ್ ಮೇಕರ್‌ಗೆ ಒಂದು ಪುಣ್ಯ ಎಂದು ರಿಷಬ್ ಖುಷಿಯಿಂದ ಮಾತನಾಡಿದ್ದರು. ಕಾಂತಾರಗಾಗಿ ಅದ್ಭುತವಾದ ಟೆಕ್ನಿಷಿಯನ್ಸ್‌ಗಳು ಕೆಲಸ ಮಾಡುತ್ತಿದ್ದಾರೆ. ನಿರಂತರವಾಗಿ ಪಾರ್ಟ್ ಬೈ ಪಾರ್ಟ್ ಚಿತ್ರೀಕರಣ ನಡೆಯುತ್ತದೆ ಎಂದು ರಿಷಬ್ ಹೇಳಿದ್ದರು. ಜನ 'ಕಾಂತಾರ' ಚಿತ್ರವನ್ನು ಗೆಲ್ಲಿಸಿದ್ದಾರೆ ಬಾಯಲ್ಲಿ ಏನು ಹೇಳಲ್ಲ. ಕೆಲಸದ ಮೂಲಕ ಮಾಡಿ ತೋರಿಸಬೇಕು ಎಂದು ಅಂದುಕೊಂಡಿದ್ದೇನೆ. ನನಗೆ ಯಾವ ಒತ್ತಡವು ಇಲ್ಲ. ಆಗ ನನಗೆ ಬಹಳ ದೊಡ್ಡ ಚಿತ್ರವಾಗಿತ್ತು. ಸಿನಿಮಾ ಯಾವಾಗಲೂ ಕಲಿಯುವ ಪ್ರೊಸೆಸ್ ಅದನ್ನು ಮಾಡುತ್ತಿದ್ದೇನೆ ಎಂದಿದ್ದರು ರಿಷಬ್. ಈ ವೇಳೆ, ಸಿನಿಮಾಗೋಸ್ಕರ ಒಂದು ವರ್ಷದಿಂದ ಗಡ್ಡ ಕೂದಲು ಬಿಟ್ಟಿರೋದಾಗಿ ತಿಳಿಸಿದ್ದರು. ಇನ್ನೂ 'ಕಾಂತಾರ 1' ಚಿತ್ರೀಕರಣ ಪೂರ್ತಿ ಮುಗಿದ ಮೇಲೆ ಅಭಿಮಾನಿಗಳಿಗೆ, ಮಾಧ್ಯಮದವರಿಗೆ ಚಿತ್ರೀಕರಣ ಸ್ಥಳಕ್ಕೆ ಕರೆಯುತ್ತೇವೆ ಎಂದು ರಿ?ಬ್ ತಿಳಿಸಿದ್ದಾರೆ. ಚಿತ್ರೀಕರಣ ಮುಗಿಯುವವರೆಗೆ ಬಹಳ ಗೌಪ್ಯತೆಯನ್ನು ಕಾಪಾಡಬೇಕಾಗುತ್ತದೆ ಎಂದು ಹೇಳಿದ್ದಾರೆ. ನಮ್ಮ ಸಿನಿಮಾ ಪೂರ್ತಿ ಕರಾವಳಿ ಭಾಗದಲ್ಲಿ ಚಿತ್ರೀಕರಣ ಮಾಡುತ್ತೇವೆ ಎಂದು ರಿಷಬ್‌ಮಾತನಾಡಿದ್ದರು.




17ನೇ ಆವೃತ್ತಿಯ ಐಪಿಎಲ್‌ಗೆ ಅದ್ದೂರಿ ತೆರೆಬಿದ್ದಿದೆ. ಇದೀಗ ಎಲ್ಲರ ಕಣ್ಣು ಜೂನ್ 2ರಿಂದ ಆರಂಭವಾಗಲಿರುವ ಟಿ20 ವಿಶ್ವಕಪ್ ಮೇಲೆ ನೆಟ್ಟಿದೆ. ಈ ಬಾರಿ ಅಮೆರಿಕ ಮತ್ತು ವೆಸ್ಟ್ ಇಂಡೀಸ್‌ನಲ್ಲಿ ಪಂದ್ಯಾವಳಿ ಆಯೋಜನೆಯಾಗುತ್ತಿದೆ. ಆದಾಗ್ಯೂ, ಟಿ20 ವಿಶ್ವಕಪ್ ನಂತರ ಈ ಸ್ವರೂಪದಿಂದ ಈ ಐವರು ದಿಗ್ಗಜ ಆಟಗಾರರು ನಿವೃತ್ತಿ ಘೋಷಿಸುವ ಸಾಧ್ಯತೆಗಳು ಹೆಚ್ಚಿವೆ.

# ಈ ಐವರು ದಿಗ್ಗಜ ಕ್ರಿಕೆಟಿಗರಿಗೆ ಇದು ಕೊನೆಯ ಟಿ20 ವಿಶ್ವಕಪ್

**ರೋಹಿತ್ ಶರ್ಮಾ:** 37 ವರ್ಷದ ರೋಹಿತ್ ಶರ್ಮಾಗೆ ಇದು ಕೊನೆಯ ಟಿ20 ವಿಶ್ವಕಪ್ ಎಂದು ಹೇಳಿದರೆ ತಪ್ಪಾಗಲಾರದು. ಇದಕ್ಕೆ ಅವರ ವಯಸ್ಸು ಪ್ರಮುಖ ಕಾರಣ ಎಂದು ಹೇಳಬಹುದು. ರೋಹಿತ್ ಟಿ20 ಹೊರತುಪಡಿಸಿ ಉಳಿದೆರಡು ಸ್ವರೂಪಗಳತ್ತ ಹೆಚ್ಚು ಗಮನ ಹರಿಸುವ ಸಾಧ್ಯತೆ ಇದೆ. ಶರ್ಮಾ ಭಾರತ ಪರ ಇದುವರೆಗೆ 151 ಟಿ20 ಪಂದ್ಯಗಳಲ್ಲಿ 3974 ರನ್ ಬಾರಿಸಿದ್ದಾರೆ.

**ಶಕೀಬ್ ಅಲ್ ಹಸನ್:** 2006 ರಿಂದ ಬಾಂಗ್ಲಾದೇಶ ಪರ ಕ್ರಿಕೆಟ್ ಆಡುತ್ತಿರುವ ಅನುಭವಿ ಆಲ್ ರೌಂಡರ್ ಶಕೀಬ್ ಅಲ್ ಹಸನ್ ಕೂಡ 37 ನೇ ವರ್ಷಕ್ಕೆ ಕಾಲಿಟ್ಟಿದ್ದಾರೆ. ಹೆಚ್ಚುತ್ತಿರುವ ವಯಸ್ಸಿನ ಕಾರಣ, ಅವರು ಈ ಮಾದರಿಯಿಂದ ನಿವೃತ್ತರಾಗಬಹುದು. ಬಾಂಗ್ಲಾದೇಶ ಪರ ಆಡಿರುವ 122 ಟಿ20 ಪಂದ್ಯಗಳಲ್ಲಿ ಶಕೀಬ್ 2440 ರನ್ ಹಾಗೂ 146 ವಿಕೆಟ್ ಪಡೆದಿದ್ದಾರೆ.

**ಡೇವಿಡ್ ವಾರ್ನರ್:** ಆಸ್ಟ್ರೇಲಿಯಾದ ಲೆಜೆಂಡರಿ ಓಪನರ್ ಡೇವಿಡ್ ವಾರ್ನರ್ ಈಗಾಗಲೇ ಟೆಸ್ಟ್ ಮತ್ತು ಏಕದಿನ ಮಾದರಿಗಳಿಂದ ನಿವೃತ್ತಿಯಾಗಿದ್ದಾರೆ. 37ರ ಹರೆಯದ ವಾರ್ನರ್ ಟಿ20 ವಿಶ್ವಕಪ್ ಬಳಿಕ ಟಿ20ಯಿಂದ ನಿವೃತ್ತಿಯಾಗುವ ಎಲ್ಲ ಸಾಧ್ಯತೆಗಳಿವೆ. ವಾರ್ನರ್ ಇದುವರೆಗೆ ಆಸ್ಟ್ರೇಲಿಯಾ ಪರ 103 ಟಿ20 ಪಂದ್ಯಗಳಲ್ಲಿ 3099 ರನ್ ಗಳಿಸಿದ್ದಾರೆ.



**ವಿರಾಟ್ ಕೊಹ್ಲಿ:** ಭಾರತ ತಂಡದ ಸ್ಟಾರ್ ಬ್ಯಾಟ್ಸ್‌ಮನ್ ವಿರಾಟ್ ಕೊಹ್ಲಿ ಟಿ20 ವಿಶ್ವಕಪ್ ನಂತರ ಕ್ರಿಕೆಟ್‌ನ ಅತ್ಯಂತ ಕಡಿಮೆ ಸ್ವರೂಪದಿಂದ ನಿವೃತ್ತರಾಗಬಹುದು. ಇದಕ್ಕೆ ಕಾರಣ ತಂಡದಲ್ಲಿ ಯುವ ಆಟಗಾರರಿಗೆ ಹೆಚ್ಚಿನ ಆದ್ಯತೆ ನೀಡುವುದು. ಇದುವರೆಗೆ ಭಾರತ ಪರ 117 ಟಿ20 ಪಂದ್ಯಗಳನ್ನಾಡಿರುವ ಕೊಹ್ಲಿ 4037 ರನ್ ಬಾರಿಸಿದ್ದಾರೆ.

**ಏಂಜೆಲೊ ಮ್ಯಾಥ್ಯೂಸ್:** 36 ವರ್ಷದ ಶ್ರೀಲಂಕಾದ ಅನುಭವಿ ಆಲ್‌ರೌಂಡರ್ ಏಂಜೆಲೊ ಮ್ಯಾಥ್ಯೂಸ್ ಕೂಡ ಟಿ20 ವಿಶ್ವಕಪ್ ನಂತರ ನಿವೃತ್ತಿಯ ಬಗ್ಗೆ ಯೋಚಿಸಬಹುದು. ಈಗಾಗಲೇ ಲಂಕಾ ತಂಡದಲ್ಲಿ ಕಡಿಮೆ ಅವಕಾಶಗಳನ್ನು ಪಡೆಯುತ್ತಿರುವ ಮ್ಯಾಥ್ಯೂಸ್‌ಗೆ ಟಿ20 ಮಾದರಿಗೆ ವಿದಾಯ ಹೇಳಲು ಇದು ಸರಿಯಾದ ಸಮಯ. ಶ್ರೀಲಂಕಾ ಪರ 87 ಟಿ20 ಪಂದ್ಯಗಳನ್ನಾಡಿರುವ ಮ್ಯಾಥ್ಯೂಸ್ 1354 ರನ್ ಹಾಗೂ 45 ವಿಕೆಟ್ ಪಡೆದಿದ್ದಾರೆ.

ಸಚಿವ ಮಹದೇವಪ್ಪ ಹೇಳಿಕೆ

# ಸಚಿವ ನಾಗೇಂದ್ರ, ರಾಜೀನಾಮೆ ಅಗತ್ಯವಿಲ್ಲ

**ಬೆಂಗಳೂರು:** ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ 94 ಕೋಟಿ ರೂ ಭ್ರಷ್ಟಾಚಾರ ಪ್ರಕರಣದಲ್ಲಿ ಸಚಿವ ನಾಗೇಂದ್ರ, ರಾಜೀನಾಮೆ ನೀಡುವ ಅವಶ್ಯಕತೆ ಇಲ್ಲ ಎಂದು ಸಚಿವ ಮಹದೇವಪ್ಪ ಹೇಳುವ ಮೂಲಕ ನಾಗೇಂದ್ರ, ಬೆನ್ನಿಗೆ ನಿಂತಿದ್ದಾರೆ.

ಚಂದ್ರಶೇಖರನ್ ಒಬ್ಬ ಒಳ್ಳೆಯ ಅಧಿಕಾರಿ. ಅವರ ಆತ್ಮಹತ್ಯೆಯಿಂದ ತುಂಬ ದು:ಖವಾಗಿದೆ. ಡೆತ್‌ನೋಟ್‌ನಲ್ಲಿ ಕೆಲ ಆರೋಪಗಳನ್ನು ಮಾಡಿದ್ದಾರೆ. ಸರ್ಕಾರ ಕೂಡಲೇ



ಎಚ್ಚೆತ್ತು ತನಿಖೆ ಶುರು ಮಾಡಿದೆ. ಎಲ್ಲಾ ಆಯಾಮಗಳಲ್ಲಿ ತನಿಖೆ ನಡೆಯುತ್ತಿದ್ದು ತನಿಖೆಯ ಬಳಿಕ ಸತ್ಯಾಸತ್ಯ ಹೊರಗಡೆ ಬರಲಿದೆ ಎಂದರು.

ಇಲ್ಲಿ ದಲಿತರು, ದಲಿತೇತರ ಹಣ ಅಂತಲ್ಲ.ಅದು ಸರ್ಕಾರದ ಹಣ.ಅಂತೆ ಕಂತೆಗಳ ಮೇಲೆ ಮಾತನಾಡಲು ಆಗುವುದಿಲ್ಲ. ರಾಜಕೀಯಕರಣಗೊಳಿಸಿದ ತಕ್ಷಣ ಮಾತಾಡಲು ಆಗುವುದಿಲ್ಲ. ಈಶ್ವರಪ್ಪ ಪ್ರಕರಣವೇ ಬೇರೆ, ನಿಗಮದ ಹಣ ವರ್ಗಾವಣೆ ಪ್ರಕರಣವೇ ಬೇರೆ.ಅದಕ್ಕೂ ಇದಕ್ಕೂ ಹೋಲಿಕೆ ಸರಿಯಲ್ಲ, ವಿರೋಧ ಪಕ್ಷ ಆಗಿರುವರಿಂದ ರಾಜೀನಾಮೆ ಕೇಳುತ್ತಾರೆ.ಸತ್ಯಾಸತತೆ ಹೊರಗಡೆ ಬಾರದೇ ಯಾವ ತೀರ್ಮಾನ ಮಾಡಲು ಆಗುವುದಿಲ್ಲ ಎಂದು ಸಚಿವ ನಾಗೇಂದ್ರ, ಬೆನ್ನಿಗೆ ಸಚಿವ ಮಹಾದೇವಪ್ಪ ನಿಂತರು. ತೆಲಂಗಾಣ ಚುನಾವಣೆಯಲ್ಲಿ ಕಾಂಗ್ರೆಸ್ ಹಂಚಿದ್ದ ಹಣ ವಾಲ್ಮೀಕಿ ನಿಗಮದ್ದು ಎಂಬ ಬಿಜೆಪಿ ಆರೋಪಕ್ಕೆ ತಿರುಗೇಟು ಕೊಟ್ಟ ಅವರು, ಅದಕ್ಕೂ ಇದಕ್ಕೂ ಸಂಬಂಧ ಇಲ್ಲ. ವಿರೋಧ ಪಕ್ಷ ಏನು ಬೇಕಾದರೂ ಹೇಳಬಹುದು. ಪ್ರಕರಣ ಬೆಳಕಿಗೆ ಬಂದ ಕೂಡಲೇ ಸರ್ಕಾರ ಸಿಐಡಿ ತನಿಖೆಗೆ ವಹಿಸಿದೆ.ಈಗಾಗಲೇ ಅಧಿಕಾರಿಗಳನ್ನು ಅಮಾನತು ಮಾಡಲಾಗಿದೆ ಎಂದರು.

## ತಲೆದಂಡಕ್ಕೆ ಪುರಾವೆ ಬೇಕಲ್ಲವಾ?





**ಬೆಂಗಳೂರು:** ವಾಲ್ಮೀಕಿ ನಿಗಮದ ಅಧಿಕಾರಿ ಆತ್ಮಹತ್ಯೆ ವಿಚಾರ ಸಚಿವ ನಾಗೇಂದ್ರ ತಲೆದಂಡಕ್ಕೆ ಪುರಾವೆಗಳು ಬೇಕಲ್ಲವಾ?ಡೆತ್ ನೋಟ್‌ನಲ್ಲಿ ಸಚಿವರು ಮೌಖಿಕ ಆದೇಶ ಕೊಟ್ಟಿದ್ದಾರೆ ಅಂತಿದೆ. ಡೆತ್‌ನೋಟ್ ಪರಿಶೀಲನೆ ಆಗಬೇಕು ಎಂದು ಗೃಹ ಸಚಿವ ಜಿ.ಪರಮೇಶ್ವರ್ ಹೇಳಿದರು.

ಬೆಂಗಳೂರಿನಲ್ಲಿ ಮಾತನಾಡಿದ ಅವರು, ನಾನು ಡೆತ್‌ನೋಟ್ ನೋಡಿಲ್ಲ, ಅದನ್ನ ಪರಿಶೀಲನೆ ಮಾಡ್ತಾರೆ.ಡೆತ್‌ನೋಟ್ ಪರಿಶೀಲನೆ ಆಗುವ ವರೆಗೆ ಸ್ಪಷ್ಟವಾಗಿ ಹೇಳಲು ಬರಲ್ಲ. ಕೆಲವೊಂದು ಸಂದರ್ಭಗಳಲ್ಲಿ ಬೇಗ ಡೆತ್‌ನೋಟ್ ಸಿಗುತ್ತೆ. ಕೆಲವು ಬಾರಿ ತಡವಾಗಿ ಸಿಗುತ್ತೆ.ಎಲ್ಲ ಆದ್ಮೇಲೆ ಡೆತ್‌ನೋಟ್ ಸಿಕ್ಕ ಉದಾಹರಣೆಗಳು ಇವೆ. ಡೆತ್‌ನೋಟ್ ಸತ್ಯಾಸತ್ಯತೆ ಪರಿಶೀಲನೆ ಮಾಡಿ ಮುಂದಕ್ಕೆ ಹೋಗುತ್ತೇವೆ ಎಂದು ಸ್ಪಷ್ಟಪಡಿಸಿದರು.

ಈಶ್ವರಪ್ಪ ಪ್ರಕರಣವನ್ನು ಇದಕ್ಕೆ ಹೋಲಿಕೆ ಮಾಡಬೇಡಿ.ಆ ಪ್ರಕರಣದಲ್ಲಿ ಈಶ್ವರಪ್ಪ ಹೆಸರಿತ್ತು.ಇಲ್ಲಿ ಆ ರೀತಿ ಆಗಿಲ್ಲ. ತನಿಖೆ ಆಗುವ ವರೆಗೆ ಕಾಯಬೇಕಲ್ವಾ ಎಂದು ಬಿಜೆಪಿ ನಾಯಕರಿಗೆ ತಿರುಗೇಟು ನೀಡಿದರು.

ವಾಲ್ಮೀಕಿ ಅಭಿವೃದ್ಧಿ ನಿಗಮದ ಅಧಿಕಾರಿ ಆತ್ಮಹತ್ಯೆ ಪ್ರಕರಣದ ತನಿಖೆಗೆ ಆದೇಶವಾಗಿದೆ. ತನಿಖೆ ಬಳಿಕ ಎಲ್ಲಾ ಗೊತ್ತಾಗುತ್ತೆ. ಒಂದು ಅಕೌಂಟ್‌ನಿಂದ ಇನ್ನೊಂದು ಅಕೌಂಟ್‌ಗೆ ಹಣ ವರ್ಗಾವಣೆ ಆಗಿ ಹೋಗಿದೆ.ಅಲ್ಲಿಂದ ನಾಲ್ಕೈದು ಅಕೌಂಟ್‌ಗೆ ಹಣ ಹೋಗಿದೆ.ತನಿಖೆ ಆಗುವ ವರೆಗೂ ಏನೂ ಹೇಳಲು ಆಗಲ್ಲ ಎಂದರು.

ನಿನ್ನೆ 185 ಕೋಟಿ ಅಂತಾ ಹೇಳಿದ್ರೆ, ಇವತ್ತು 97 ಕೋಟಿ ಅಂತಾ ಹೇಳುತ್ತಿದ್ದಾರೆ. ಎಲ್ಲವೂ ತನಿಖೆಯಲ್ಲಿ ಗೊತ್ತಾಗುತ್ತೆ ಎಂದು ತಿಳಿಸಿದರು.

# ವಿಶ್ವದ ನಂ.1 ಮ್ಯಾಗ್ನಸ್ ಕಾರ್ಲ್‌ಸನ್‌ಗೆ ಸೋಲುಣಿಸಿದ ಪ್ರಜ್ಞಾನಂದ!

ಭಾರತದ ಚೆಸ್ ಗ್ರ್ಯಾಂಡ್ ಮಾಸ್ಟರ್ ಖ್ಯಾತಿಯ ಆರ್. ಪ್ರಜ್ಞಾನಂದ, ವಿಶ್ವದ ನಂ.1 ಚೆಸ್ ಮಾಸ್ಟರ್ ನಾರ್ವೆಯ ಮ್ಯಾಗ್ನಸ್ ಕಾರ್ಲ್‌ಸನ್‌ಗೆ ಸೋಲುಣಿಸಿದ್ದಾರೆ.

ಬುಧವಾರ ತಡರಾತ್ರಿ ನಡೆದ ನಾರ್ವೆ ಚೆಸ್ ಟೂರ್ನಿಯ 3ನೇ ಸುತ್ತಿನಲ್ಲಿ ಪ್ರಜ್ಞಾನಂದ ಈ ಸಾಧನೆ ಮಾಡಿದ್ದಾರೆ. ಇದು 6 ಬಾರಿ ವಿಶ್ವ ಚೆಸ್ ಚಾಂಪಿಯನ್ ಕಾರ್ಲ್‌ಸನ್ ವಿರುದ್ಧ ಪ್ರಜ್ಞಾನಂದಗೆ ಒಲಿದ ಮೊದಲ ಗೆಲುವು ಸಹ ಆಗಿದೆ. ಮೂರು ಸುತ್ತಿನ ಬಳಿಕ ಅಂಕಪಟ್ಟಿಯಲ್ಲಿ ಪ್ರಜ್ಞಾನಂದ ಅವರು 5.5 ಪಾಯಿಂಟ್‌ಗಳೊಂದಿಗೆ ಮೊದಲ ಸ್ಥಾನ ಪಡೆದರೆ, ಕಾರ್ಲ್‌ಸನ್ 3 ಪಾಯಿಂಟ್‌ಗಳೊಂದಿಗೆ 5ನೇ ಸ್ಥಾನ ಪಡೆದುಕೊಂಡಿದ್ದಾರೆ.

**ಸೋತು ಗೆದ್ದ ಪ್ರಜ್ಞಾನಂದ:** ಕಳೆದ ವರ್ಷ ಅಝರ್ ಬೈಜಾನ್‌ನ ಬಾಕುವಿನಲ್ಲಿ ನಡೆದಿದ್ದ ಚೆಸ್ ವಿಶ್ವಕಪ್‌ನ ಫೈನಲ್ ಟೈ ಬ್ರೇಕರ್ ಸುತ್ತಿನಲ್ಲಿ ಪ್ರಜ್ಞಾನಂದ ವಿರುದ್ಧವೇ ಗೆಲುವು ಸಾಧಿಸಿ ಮ್ಯಾಗ್ನಸ್ ಕಾಲ್ ರ್ಸನ್ ಗೆಲುವು ಸಾಧಿಸಿ 6ನೇ ಬಾರಿಗೆ ಚಾಂಪಿಯನ್ ಪಟ್ಟಕ್ಕೇರಿದ್ದರು. ಭಾರತೀಯ ಚೆಸ್ ಪಟು ಪ್ರಜ್ಞಾನಂದಗೆ ಅಂದು ಸೋಲಾಗಿ ರನ್ನರ್ ಅಪ್ ಪ್ರಶಸ್ತಿಗೆ ತೃಪ್ತಿಪಟ್ಟುಕೊಂಡಿದ್ದರು. ಇದೀಗ 6 ಬಾರಿ ಚಾಂಪಿಯನ್ ಕಾರ್ಲ್‌ಸನ್ ಅವರಿಗೆ ಪ್ರಜ್ಞಾನಂದ ಸೋಲುಣಿಸಿರುವುದು ವಿಶೇಷ.



ಇನ್ನೂ ಮಹಿಳಾ ವಿಭಾಗದಲ್ಲಿ ಭಾರತದ ಯುವ ಆಟಗಾರ್ತಿ, ಪ್ರಜ್ಞಾನಂದ ಅವರ ಸಹೋದರಿ, ಗ್ರ್ಯಾಂಡ್‌ಮಾಸ್ಟರ್ ಆರ್.ವೈಶಾಲಿ ಕೂಡ ಮುನ್ನಡೆ ಸಾಧಿಸಿದ್ದಾರೆ. ಸ್ವದೇಶದ ಅನುಭವಿ ಆಟಗಾರ್ತಿ ಕೋನೇರು ಹಂಪಿ ಅವರನ್ನು ಸೋಲಿಸಿ ನಾರ್ವೆ ಚೆಸ್ ಟೂರ್ನಿಯ ನಂತರ ಮಹಿಳಾ ವಿಭಾಗದಲ್ಲಿ ಮಂಗಳವಾರ ಅಗ್ರಸ್ಥಾನಕ್ಕೇರಿದ್ದಾರೆ. ಆ ಬಳಿಕ ನಡೆದ ಪಂದ್ಯದಲ್ಲಿ ಮುಜಿಚುಕ್ ಅವರೊಂದಿಗೆ ಡ್ರಾ ಸಾಧಿಸುವಲ್ಲಿ ಯಶಸ್ವಿಯಾದ್ದಾರೆ.

**ಚಾಂಪಿಯನ್ ಸೋಲಿಸಿದ್ದು ಖುಷಿ ಕೊಟ್ಟಿದೆ:** ಗೆಲುವಿನ ಕುರಿತು ಮಾತನಾಡಿರುವ ಪ್ರಜ್ಞಾನಂದ, ಅತ್ಯಂತ ಪ್ರಬಲ ಆಟಗಾರನನ್ನು ಸೋಲಿಸಿದರೆ, ಅದು ಯಾವಾಗಲೂ ವಿಶೇಷವಾಗಿರುತ್ತದೆ. ಏಕೆಂದರೆ ಅವರನ್ನು ಸೋಲಿಸುವುದು ಅಷ್ಟು ಸುಲಭವಲ್ಲ. ಚೆಸ್‌ನಲ್ಲಿ ವಿಶ್ವ ಚಾಂಪಿಯನ್ ವಿರುದ್ಧ ಮೊದಲ ಬಾರಿಗೆ ಗೆದ್ದಿರುವುದು ಖುಷಿ ಕೊಟ್ಟಿದೆ. ಇದೇ ಪ್ರದರ್ಶನವನ್ನು ಮುಂದುವರಿಸುವ ನಂಬಿಕೆ ಇದೆ ಎಂದು ತಿಳಿಸಿದ್ದಾರೆ.

## ಡ್ರಗ್ಸ್ ಪ್ರಕರಣ ನಟಿ ಹೇಮಾಗೆ 2ನೇ ನೋಟಿಸ್

# ಜೂ.1ಕ್ಕೆ ಹಾಜರಾಗಲು ಸೂಚನೆ

**ಬೆಂಗಳೂರು:** ಚಿತ್ರರಂಗದಲ್ಲಿ ರೇವ್ ಪಾರ್ಟಿ ಪ್ರಕರಣ ಭಾರೀ ಚರ್ಚೆಗೆ ಗ್ರಾಸವಾಗುತ್ತಿದೆ. ಬೆಂಗಳೂರಿನ ಎಲೆಕ್ಟ್ರಾನಿಕ್ ಸಿಟಿಯ ಬಳಿಯ ಫಾರ್ಮ್ ಹೌಸ್‌ನಲ್ಲಿ ರೇವ್ ಪಾರ್ಟಿಯಲ್ಲಿ ಸೇರಿದ್ದ ಅನೇಕರನ್ನು ಸಿಸಿಬಿ ವಶಕ್ಕೆ ಪಡೆದುಕೊಂಡಿತ್ತು.ರೇವ್ ಪಾರ್ಟಿಯಲ್ಲಿ ಹೇಮಾ ಕೂಡ ಇದ್ದರು ಎಂದು ಪೊಲೀಸ್ ಕಮಿಷನರ್ ಕೂಡ ಸ್ಪಷ್ಟನೆ ನೀಡಿದ್ದರು. ತನಿಖೆ ಕೂಡ ಬಿರುಸಿನಿಂದ ನಡೆಯುತ್ತಿದೆ. ಈಗಾಗಲೇ ಅವರಿಗೆ 2ನೇ ನೋಟಿಸ್ ನೀಡಲಾಗಿದೆ.ಜೂನ್ 1ಕ್ಕೆ ಹಾಜರಾಗುವಂತೆ ಸೂಚಿಸಲಾಗಿದೆ.

ಈ ನಡುವೆ ನಟಿ ಹೇಮಾ ಪರವಾಗಿ ತೆಲುಗು ಕಲಾವಿದರ ಸಂಘದ ಅಧ್ಯಕ್ಷ ವಿಷ್ಣು ಮಂಚು ನಿಂತಿದ್ದಾರೆ. ಹೇಮಾರನ್ನು ಬೆಂಬಲಿಸಿ ಎಕ್ಸ್‌ನಲ್ಲಿ ವಿಷ್ಣು ಮಂಚು ಪೋಸ್ಟ್‌ವೊಂದು ಶೇರ್ ಮಾಡಿದ್ದಾರೆ.



ಇತ್ತೀಚೆಗೆ ರೇವ್ ಪಾರ್ಟಿಯಲ್ಲಿ ಡ್ರಗ್ಸ್ ಬಳಕೆಯಾಗಿದೆ ಎನ್ನಲಾದ ಪ್ರಕರಣಕ್ಕೆ ಸಂಬಂಧಿಸಿದಂತೆ ಕೆಲ ಮಾಧ್ಯಮಗಳು ನಟಿ ಹೇಮಾ ವಿರುದ್ಧ ಆಧಾರ ರಹಿತ ಆರೋಪಗಳನ್ನು ಮಾಡುತ್ತಿವೆ. ಯಾರೂ ಸಹ ಈಗಲೇ ನಿರ್ಧಾರಕ್ಕೆ ಬಂದು ಸತ್ಯವಲ್ಲದ ವರದಿಗಳನ್ನು ಇತರರಿಗೆ ಹಂಚಿಕೊಳ್ಳುವುದು ಬೇಡ ಎಂದು ಮನವಿ ಮಾಡಿದ್ದಾರೆ.

'ಹೇಮಾ ಮೇಲಿನ ಆರೋಪಗಳು ಸಾಬೀತಾಗುವವರೆಗೂ ಅವರು ನಿರಪರಾಧಿ. ಆಕೆ ಒಬ್ಬ ತಾಯಿ, ಹೆಂಡತಿ ಹಾಗೂ ಮಹಿಳೆ ಅದರ ಬಗ್ಗೆಯೂ ನಾವು ಯೋಚಿಸಬೇಕಿದೆ.ಆಕೆಯ ವ್ಯಕ್ತಿತ್ವದ ಬಗ್ಗೆ ಕೆಲ ಹೇಳಿಕೆಗಳನ್ನು ಪಾಸ್ ಮಾಡುವುದು ಸೂಕ್ತವಲ್ಲ. ಮೂವಿ ಆರ್ಟಿಸ್ಟ್ ಅಸೋಸಿಯೇಷನ್ ಯಾವುದೇ ರೀತಿಯ ಕಾನೂನುಬಾಹಿರ ಚಟುವಟಿಕೆಗಳನ್ನು ವಿರೋಧಿಸುತ್ತದೆ. ಹೇಮಾ ಅವರ ವಿರುದ್ಧ ಪೊಲೀಸರು ಘನವಾದ ಸಾಕ್ಷಿಯನ್ನು ಸಾಭೀತುಪಡಿಸಿದರೆ ಕಲಾವಿದರ ಸಂಘವು ಹೇಮಾ ವಿರುದ್ಧ ಶಿಸ್ತು ಕ್ರಮವನ್ನು ಜರುಗಿಸಲಿದೆ. ಆದರೆ ಅಲ್ಲಿಯವರೆಗೆ ದಯವಿಟ್ಟು ಈ ವಿಷಯದ ಬಗ್ಗೆ ಚರ್ಚೆ ಬೇಡ ಎಂದಿದ್ದಾರೆ. ಈ ಮೂಲಕ ನಟಿ ಹೇಮಾ ಪರವಾಗಿ ವಿಷ್ಣು ಮಂಚು ಬೆಂಬಲಕ್ಕೆ ನಿಂತಿದ್ದಾರೆ.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com